ಸಂಪುಟ: 04 ಸಂಚಿಕೆ: 52 ಪುಟಗಳು: 08 ಸೋಮವಾರ 06 ಮೇ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

**ಮುಂಜಾನೆ ಮಾತು**
ನಮಗಾಗಿ ನಾವು ಏನು ಮಾಡುತ್ತೇವೆ ಎಂಬುದು ನಮ್ಮೊಂದಿಗೆ ಕೊನೆಗೊಳ್ಳುತ್ತದೆ... ಇತರರಿಗೆ ಏನು ಮಾಡುತ್ತೇವೆ ಎಂಬುದು ಶಾಶ್ವತವಾಗಿರುತ್ತದೆ...

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# 4 ದಿನ ಎಸ್‌ಐಟಿ ಕಸ್ಟಡಿಗೆ ಎಚ್‌ಡಿ ರೇವಣ್ಣ!



## ನ್ಯಾಯಾಧೀಶರೆದುರು ನನ್ನದೇನೂ ತಪ್ಪಿಲ್ಲ ಎಂದ ಮಾಜಿ ಸಚಿವ

• **ಉದಯವಾಹಿನಿ, ಬೆಂಗಳೂರು**

ಮಾಜಿ ಸಚಿವ ಎಚ್‌ಡಿ ರೇವಣ್ಣ ಅವರನ್ನು ಎಸ್‌ಐಟಿ ಕಸ್ಟಡಿಗೆ ನೀಡಿ, ಕೋರ್ಟ್ ಆದೇಶಿಸಿದೆ. ಮೇ 8ರವರೆಗೆ ರೇವಣ್ಣ ಅವರನ್ನು ಎಸ್‌ಐಟಿ ವಶಕ್ಕೆ ನೀಡಿ, ಆದೇಶಿಸಲಾಗಿದೆ. ಕೋರಮಂಗಲ ಎನ್‌ಜಿವಿಯಲ್ಲಿರುವ ನ್ಯಾಯಾಧೀಶರ ನಿವಾಸದಲ್ಲಿ ಬಿಗಿ ಪೊಲೀಸ್ ಭದ್ರತೆಯೊಂದಿಗೆ ರೇವಣ್ಣ ಅವರನ್ನು ಹಾಜರುಪಡಿಸಲಾಗಿತ್ತು. 17ನೇ ಎಸಿಎಂಎಂ ಕೋರ್ಟ್ ನ್ಯಾಯಾಧೀಶರ ನ್ಯಾ. ರವೀಂದ್ರಕುಮಾರ್ ಬಿ. ಕಟ್ಟಿಮನಿ ಅವರ ಮುಂದೆ ಎಸ್‌ಐಟಿ ಅಧಿಕಾರಿಗಳು ಹಾಜರುಪಡಿಸಿದರು. ಈ ವೇಳೆ ವಿಚಾರಣೆ ನಡೆಸಿದ ನ್ಯಾಯಾಧೀಶರು, ರೇವಣ್ಣರವರನ್ನು ಎಸ್‌ಐಟಿ ಕಸ್ಟಡಿಗೆ ನೀಡಿ ಆದೇಶಿಸಿದ್ದಾರೆ.

ಕಿಡ್ನಾಪ್ ಪ್ರಕರಣದಲ್ಲಿ ಎಸ್‌ಐಟಿಯಿಂದ ಅರೆಸ್ಟ್ ಆಗಿರುವ ಮಾಜಿ ಸಚಿವ ಎಚ್‌ಡಿ ರೇವಣ್ಣ ಅವರನ್ನು ಎಸ್‌ಐಟಿ ಕಸ್ಟಡಿಗೆ ನೀಡಲಾಗಿದೆ. ಮೇ 8ರವರೆಗೆ ಎಸ್‌ಐಟಿ ಕಸ್ಟಡಿಗೆ ನೀಡಿ 17ನೇ ಎಸಿಎಂಎಂ ಕೋರ್ಟ್ ನ್ಯಾಯಾಧೀಶ ರವೀಂದ್ರಕುಮಾರ್ ಬಿ. ಕಟ್ಟಿಮನಿ ಆದೇಶಿಸಿದ್ದಾರೆ. ಎಚ್‌ಡಿ ರೇವಣ್ಣ ಬಂಧನಕ್ಕೆ ಕಾರಣವಾಗಿದ್ದು ಮಹಿಳೆಯ ಅಪಹರಣದ ಕೇಸ್. ನನ್ನ ತಾಯಿಯನ್ನು ಎಚ್‌ಡಿ ರೇವಣ್ಣ ಅವರ ಸೂಚನೆಯಂತೆ ಸತೀಶ್ ಬಾಬಣ್ಣ ಅಪಹರಿಸಿದ್ದಾರೆ ಎಂದು ಮೈಸೂರಿನ ಕೆಆರ್ ನಗರದ ಮಹಿಳೆಯೊಬ್ಬರ ಪುತ್ರ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಎಸ್‌ಐಟಿ ನೋಟಿಸ್ ನೀಡಿದ್ದರೂ ರೇವಣ್ಣ ತನಿಖೆಗೆ ಹಾಜರಾಗಿರಲಿಲ್ಲ. ಈ ವೇಳೆ ಮಧ್ಯಂತರ ನಿರೀಕ್ಷಣಾ ಜಾಮೀನು ಕೋರಿ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ತಮ್ಮ ವಕೀಲರ ಮೂಲಕ ಅರ್ಜಿ ಸಲ್ಲಿಸಿದ್ದರು. ಆದರೆ ರೇವಣ್ಣ ಪರ ವಕೀಲರು ಹಾಗೂ ಎಸ್‌ಐಟಿ ಎಸ್‌ಪಿಪಿ ವಾದ ಆಲಿಸಿದ ಕೋರ್ಟ್, ರೇವಣ್ಣಗೆ ಮಧ್ಯಂತರ ಜಾಮೀನು ನಿರಾಕರಿಸಿತ್ತು.

ರೇವಣ್ಣಗೆ ಜಾಮೀನು ನಿರಾಕರಿಸಿ ಕೋರ್ಟ್ ಆದೇಶ ನೀಡುತ್ತಿದ್ದಂತೆ ಎಸ್‌ಐಟಿ ಅಧಿಕಾರಿಗಳು ರೇವಣ್ಣ ಬಂಧನಕ್ಕೆ ಧಾವಿಸಿದ್ರು. ಬೆಂಗಳೂರಿನ ಪದ್ಮನಾಭನಗರದಲ್ಲಿರುವ ದೇವೇಗೌಡರ ನಿವಾಸಕ್ಕೆ ಆಗಮಿಸಿ, ರೇವಣ್ಣಗಾಗಿ ಕಾದಿದ್ದರು. ಎಸ್‌ಐಟಿ ಅಧಿಕಾರಿಗಳು ಕಾದು ನಿಂತಿದ್ದರೂ ದೇವೇಗೌಡರ ಮನೆಯಲ್ಲಿ ಬಾಗಿಲು ತೆಗೆದಿರಲಿಲ್ಲ. ಬಳಿಕ ಸಂಜೆ 6.55ರ ಬಳಿಕವೇ ರೇವಣ್ಣ ಬಾಗಿಲು ತೆರೆದು ಹೊರಬಂದು, ಎಸ್‌ಐಟಿಗೆ ಶರಣಾದರು. ಬಳಿಕ ಅವರನ್ನು ಎಸ್‌ಐಟಿ ಅಧಿಕಾರಿಗಳು ಅರೆಸ್ಟ್ ಮಾಡಿದ್ರು.

ನಂತರ ಸಂಜೆ 6.50ರ ಬಳಿಕವೇ ಪೊಲೀಸರಿಗೆ ಎಚ್.ಡಿ. ರೇವಣ್ಣ ಶರಣಾದರು. ಸಂಜೆ 5.17 ರಿಂದ 6.50 ರವರೆಗೆ ರೇವಣ್ಣ ಬಾಗಿಲು ತೆಗೆಯದೇ ಅಧಿಕಾರಿಗಳನ್ನು ಕಾಯಿಸಿದ್ದರ. ಇದರ ಹಿಂದೆಯೂ ಜ್ಯೋತಿಷ್ಯದ ಲೆಕ್ಕಾಚಾರ ಇದೆ ಎನ್ನಲಾಗುತ್ತದೆ.

ಸಂಜೆ 5.17 ರಿಂದ 6.50 ರವರೆಗೆ ಕಾಲ ಲಗ್ನ ಇತ್ತಂತೆ. ಕಾಲ ಲಗ್ನದಲ್ಲಿ ಬಂಧನಕ್ಕೊಳಗಾದರೆ ಮತ್ತಷ್ಟು ಸಂಕಷ್ಟ ಎನ್ನಲಾಗುತ್ತದೆಯಂತೆ. ಹೀಗಾಗಿ 6.50ರ ಬಳಿಕ ಲಾಭ ಲಗ್ನದಲ್ಲಿ ಬಾಗಿಲು ತೆರೆದು ಪೊಲೀಸರ ಮುಂದೆ ರೇವಣ್ಣ ಹಾಜರಾದರು ಎನ್ನಲಾಗುತ್ತದೆ. ಲಾಭ ಲಗ್ನದಲ್ಲಿ ಬಂಧನವಾದ್ರೆ ಸಂಕಷ್ಟದಿಂದ ಪಾರಾಗಬಹುದು ಎಂಬ ಜ್ಯೋತಿಷಿಗಳ ಸಲಹೆ ನೀಡಿದ್ದರಂತೆ. ಹೀಗಾಗಿ ಬಂಧನದ ಸಮಯದಲ್ಲೂ ಜ್ಯೋತಿಷ್ಯ ನೋಡಿ, ಅದರಂತೆ ಎಚ್‌ಡಿ ರೇವಣ್ಣ ನಡೆದುಕೊಂಡಿದ್ದಾರೆ ಎನ್ನಲಾಗಿದೆ.

ಮಹಿಳೆ ಕಿಡ್ನ್ಯಾಪ್ ಪ್ರಕರಣದಲ್ಲಿ ಎಸ್‌ಐಟಿ ಅಧಿಕಾರಿಗಳಿಂದ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರನ್ನು ಬಂಧಿಸಲಾಗಿದೆ. ನಿನ್ನೆ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರನ್ನು ಎಸ್‌ಐಟಿ ಅಧಿಕಾರಿಗಳು ನಿನ್ನೆ ಮಹಿಳೆ ಅಪಹರಣ ಪ್ರಕರಣದಲ್ಲಿ ಬಂಧಿಸಲಾಗಿತ್ತು. ಬಂಧಿಸಿದ ಬಳಿಕ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ ನಂತ್ರ, ಇಂದು ಅವರನ್ನು ವಿಚಾರಣೆಗೆ ಒಳಪಡಿಸಲಾಗಿತ್ತು.

1. ರೇವಣ್ಣ ಎಸ್‌ಐಟಿ ಕಸ್ಟಡಿಗೆ ನೀಡಿದ ಕೋರ್ಟ್
2. ರೇವಣ್ಣ ಮೇಲಿದೆ ಸಂತ್ರಸ್ತೆ ಕಿಡ್ನಾಪ್ ಆರೋಪ
3. ಮಧ್ಯಂತರ ಜಾಮೀನು ಅರ್ಜಿ ತಿರಸ್ಕರಿಸಿದ್ದ ಕೋರ್ಟ್
4. ದೇವೇಗೌಡರ ಮನೆಯಲ್ಲಿ ಎಸ್‌ಐಟಿ ಪರಿಶೀಲನೆ
5. ದೇವೇಗೌಡರ ಮನೆಯಲ್ಲೇ ರೇವಣ್ಣ ಅರೆಸ್ಟ್

### ಎಸ್‌ಐಟಿ ವಿಚಾರಣೆ ವೇಳೆ ಹೆಚ್.ಡಿ ರೇವಣ್ಣ ಹೇಳಿದ್ದೇನು ಗೊತ್ತಾ?


ಎಸ್‌ಐಟಿ ಅಧಿಕಾರಿಗಳು ಕೇಳಿದಂತ ಪ್ರಶ್ನೆಗಳಿಗೆ ಸೂಕ್ತ ರೀತಿಯಲ್ಲಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರು ಉತ್ತರಿಸಿಲ್ಲ ಎನ್ನಲಾಗುತ್ತಿದೆ. ಎಸ್‌ಐಟಿ ಅಧಿಕಾರಿಗಳು ಸಂತ್ರಸ್ತೆಯ ಬಗ್ಗೆ ಕೇಳಿದಂತ ಪ್ರಶ್ನೆಗಳಿಗೆ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರು, ಸಂತ್ರಸ್ತೆಯ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಮ್ಮ ಮನೆಯಲ್ಲಿ ಸಾಕಷ್ಟು ಜನ ಕೆಲಸ ಮಾಡುತ್ತಿದ್ದಾರೆ ಎಂದಿದ್ದಾರೆ ಎನ್ನಲಾಗುತ್ತಿದೆ. ಸಂತ್ರಸ್ತೆಯ ಮಗನ ಹೇಳಿಕೆಯನ್ನು ಹೇಗೆ ನಂಬಲು ಸಾಧ್ಯ? ನಾನೇ ಕರೆದುಕೊಂಡು ಬರಲು ಹೇಳಿದ್ದೇನೆಂದು ಸಾಕ್ಷಿ ಏನಿದೆ ಎಂಬುದಾಗಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರು ಎಸ್‌ಐಟಿ ಅಧಿಕಾರಿಗಳಿಗೆ ಪ್ರಶ್ನಿಸಿರೋದಾಗಿ ಹೇಳಲಾಗುತ್ತಿದೆ. ಇದಲ್ಲದೇ ಸಂತ್ರಸ್ತೆ ಜೊತೆ ನಾನು ಮಾತಾಡಿಲ್ಲ. ನೋಡಿಯೂ ಇಲ್ಲ. ರೇವಣ್ಣ ಎಂಬ ಹೆಸರಿನವರು ನಾನು ಒಬ್ಬನೇ ಇರೋದಾ? ನನ್ನ ಹೆಸರಿನವರು ಬೇರೆಯವರೂ ಇರಬಹುದು ಅಲ್ವ? ನನಗೆ ಏನೂ ಗೊತ್ತಿಲ್ಲ ಎಂಬುದಾಗಿ ಅಪಹರಣ ಪ್ರಕರಣದಲ್ಲಿ ಹೆಚ್.ಡಿ ರೇವಣ್ಣ ಎಸ್‌ಐಟಿ ಅಧಿಕಾರಿಗಳು ಕೇಳಿದಂತ ಪ್ರಶ್ನೆಗಳಿಗೆ ಸರಿಯಾಗಿ ಉತ್ತರಿಸಿಲ್ಲ ಎನ್ನಲಾಗುತ್ತಿದೆ.

### ನನ್ನ ವಿರುದ್ಧ ಷಡ್ಯಂತ್ರ

ನನ್ನ ಬಂಧನ ರಾಜಕೀಯ ಷಡ್ಯಂತ್ರವಾಗಿದೆ. ಇದರ ಹೊರತಾಗಿ ಅಪಹರಣ ಪ್ರಕರಣದಲ್ಲಿ ಬೇರೆ ಏನೂ ಇಲ್ಲ ಎಂಬುದಾಗಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರು ಆಕ್ರೋಶ ಹೊರ ಹಾಕಿದ್ದಾರೆ. ಮಹಿಳೆ ಅಪಹರಣ ಪ್ರಕರಣದಲ್ಲಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರನ್ನು ಬಂಧಿಸಲಾಗಿತ್ತು. ನಿನ್ನೆ ಬಂಧನದ ಬಳಿಕ ಅವರನ್ನು ವೈದ್ಯಕೀಯ ಪರೀಕ್ಷೆಗೂ ಒಳಪಡಿಸಲಾಗಿತ್ತು. ಇಂದು ಮತ್ತೆ ನ್ಯಾಯಾಧೀಶರ ಮುಂದೆ ಹಾಜರುಪಡಿಸೋ ಮುನ್ನ ಅವರನ್ನು ಬೌರಿಂಗ್ ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆಗೆ ಒಳಪಡಿಸೋ ಸಲುವಾಗಿ ಎಸ್‌ಐಟಿ ಅಧಿಕಾರಿಗಳು ಕರೆತಂದಿದ್ದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿ ನನ್ನ ವಿರುದ್ಧ ರಾಜಕೀಯ ಷಡ್ಯಂತ್ರ ನಡೆಸಿದ್ದಾರೆ. ಯಾವುದೇ ಪುರಾವೆಗಳು ಇಲ್ಲ, ದುರುದ್ದೇಶದಿಂದ ಅರೆಸ್ಟ್ ಮಾಡಿದ್ದಾರೆ ಎಂಬುದಾಗಿ ಆಕ್ರೋಶವನ್ನು ಹೊರಹಾಕಿದ್ದಾರೆ ಎಂಬುದಾಗಿ ಹೇಳಿದ್ದಾರೆ ಎನ್ನಲಾಗಿದೆ.

### ಬಂಧನದ ಬಗ್ಗೆ ಶಾಕಿಂಗ್ ರಿಯಾಕ್ಷನ್

ಮಹಿಳೆ ಅಪಹರಣ ಪ್ರಕರಣದಲ್ಲಿ ಶಾಸಕ ಹೆಚ್.ಡಿ ರೇವಣ್ಣ ಬಂಧನವಾಗಿದೆ. ಈ ಬಂಧನದ ಬಗ್ಗೆ ಕಾಂಗ್ರೆಸ್ ಶಾಸಕ ರವಿ ಗಣಿಗ ಅವರು ಶಾಕಿಂಗ್ ಹೇಳಿಕೆ ನೀಡಿದ್ದಾರೆ. ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರ ಬಂಧನದ ಹಿಂದೆ ಬಿಜೆಪಿಯ ಷಡ್ಯಂತ್ರವಿದೆ ಎಂಬುದಾಗಿ ಗಂಭೀರ ಆರೋಪ ಮಾಡಿದ್ದಾರೆ. ಈ ಹಿಂದೆ ಜನಾರ್ಧನರೆಡ್ಡಿಯನ್ನು ನಿಯಂತ್ರಿಸೋ ಹುನ್ನಾರ ನಡೆಸಿದ್ದರು. ಅದರಂತೆ ಸಣ್ಣಪುಟ್ಟ ಪಕ್ಷಗಳನ್ನು ಮುಗಿಸೋದಕ್ಕೆ ಬಿಜೆಪಿ ಪಕ್ಷದವರು ಹೊರಟಿದ್ದಾರೆ ಎಂದರು. ಹಳೇ ಮೈಸೂರು ಭಾಗದಲ್ಲಿ ಭಾರತೀಯ ಜನತಾ ಪಕ್ಷಕ್ಕೆ ನೆಲೆಯಿಲ್ಲ. ಹೀಗಾಗಿ ಜೆಡಿಎಸ್ ಮೂಲಕ ಕಾಂಗ್ರೆಸ್ ಅನ್ನು ಟಾರ್ಗೆಟ್ ಮಾಡಿಕೊಂಡಿದೆ. ಈ ಹಿಂದೆ ಜನಾರ್ಧನರೆಡ್ಡಿ ಮೂಲಕ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿಯವರನ್ನು ಬೈಯ್ಯಿಸಿದ್ದರು. ಈಗ ದೇವರಾಜೇಗೌಡ ಮೂಲಕ ಕಾಂಗ್ರೆಸ್ ಪಕ್ಷದ ವಿರುದ್ಧ ಆರೋಪಿಸಲಾಗುತ್ತಿದೆ ಎಂದು ಕಿಡಿಕಾರಿದರು.



ಕಿಡ್ನ್ಯಾಪ್ ಕೇಸ್‌ನಲ್ಲಿ ಜೆಡಿಎಸ್ ಶಾಸಕ ಹೆಚ್.ಡಿ.ರೇವಣ್ಣ ಬಂಧನವಾಗಿದೆ. ಪ್ರಜ್ವಲ್ ರೇವಣ್ಣ ಪ್ರಕರಣ ಸಂಬಂಧ ಎಸ್‌ಐಟಿ ತನಿಖೆ ನಡೆಸುತ್ತಿದೆ. ಈ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣನನ್ನೂ ಬಂಧಿಸಿ ತನಿಖೆ ನಡೆಸಬೇಕು ಹಲವಾರು ಮಹಿಳೆಯರು ಪ್ರಜ್ವಲ್ ವಿರುದ್ಧ ಮಹಿಳಾ ಆಯೋಗಕ್ಕೂ ದೂರು ನೀಡಿದ್ದಾರೆ. ತಪ್ಪಿತಸ್ಥರ ವಿರುದ್ಧ ಕ್ರಮಿಣ ಕ್ರಮ ಕೈಗೊಳ್ಳಬೇಕು.

**-ಪ್ರಹ್ಲಾದ್ ಜೋಶಿ, ಸಚಿವ**



ಲೋಕಸಭಾ ಚುನಾವಣಾ ಫಲಿತಾಂಶ ಇನ್ನೂ ಪ್ರಕಟವಾಗಿಲ್ಲ. ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಹಾಸನ ಲೋಕಸಭಾ ಕ್ಷೇತ್ರದಿಂದ ಪ್ರಜ್ವಲ್ ರೇವಣ್ಣಗೆ ಟಿಕೆಟ್ ನೀಡಲಾಗಿತ್ತು. ಈಗಾಗಲೇ ಅಲ್ಲಿ ಚುನಾವಣೆ ಮುಗಿದಿದೆ. ಫಲಿತಾಂಶಕ್ಕಾಗಿ ಕಾಯುತ್ತಿದ್ದೇವೆ. ಪ್ರಜ್ವಲ್ ರೇವಣ್ಣ ವಿರುದ್ಧ ಗಂಭೀರ ಪ್ರಕರಣಗಳು ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ಒಂದು ವೇಳೆ ಆಯ್ಕೆಯಾದರೂ ಎನ್ ಡಿಎಯಿಂದ ಪ್ರಜ್ವಲ್‌ನನ್ನು ಉಚ್ಚಾಟನೆ ಮಾಡಲಾಗುವುದು

**-ಆರ್.ಅಶೋಕ್, ವಿಪಕ್ಷ ನಾಯಕ**



ಒಬ್ಬ ಸಂಸದನಾಗಿ ಇಂತಹ ಕೃತ್ಯವೆಸಗಿದ್ದಾನೆ. ಪ್ರಜ್ವಲ್ ರೇವಣ್ಣ ಸೈಕೋ ಇದ್ದಾನೆ. 2000 ವಿಡಿಯೋ, 3000 ವಿಡಿಯೋಗಳನ್ನು ಮಾಡಿದ್ದಾನೆ. ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದೆ. ಈಗಾಗಲೇ ಎಸ್‌ಐಟಿ ರಚಿಸಲಾಗಿದ್ದು, ತನಿಖೆ ಚುರುಕುಗೊಂಡಿದೆ. ಪ್ರಜ್ವಲ್ ಗೆ ನೋಟಿಸ್ ಕೂಡ ನೀಡಲಾಗಿದ್ದು, ವಿಚಾರಣೆಗೆ ಹಾಜರಾಗಲು ಡೆಡ್ ಲೈನ್ ಕೊಡಲಾಗಿದೆ. ಪಾತಾಳದಲ್ಲಿಯೇ ಇದ್ದರೂ ಕೂಡ ಆತನನ್ನು ಕರೆತಂದು ಕಾನೂನು ಕ್ರಮ ಜರುಗಿಸಲಾಗುವುದು

**-ಎಂ.ಬಿ.ಪಾಟೀಲ್, ಸಚಿವ**



ಎಸ್‌ಐಟಿ ಅವರಿಗೆ ತನಿಖೆಗೆ ನಡೆಸಲು ಸಂಪೂರ್ಣ ಸ್ವಾತಂತ್ರ್ಯವನ್ನು ನೀಡಿದ್ದೇವೆ. ಬೇಕಾದ ಎಲ್ಲಾ ಸಹಕಾರವನ್ನು ಸರ್ಕಾರ ನೀಡಲಿದೆ. ಪ್ರಜ್ವಲ್ ಎಲ್ಲೇ ಇದ್ದರೂ ಕರೆ ತರುತ್ತೇವೆ. ಈಗಾಗಲೇ ಬ್ಲೂ ಕಾರ್ನರ್ ನೋಟಿಸ್ ನೀಡಲಾಗಿದೆ. ಎಸ್‌ಐಟಿ ತಂಡ ವಿದೇಶಿ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಲಿದೆ. ಕಾನೂನಿನ ಚೌಕಟ್ಟಿನಲ್ಲೇ ಎಸ್‌ಐಟಿ ಕೆಲಸ ಮಾಡಲಿದೆ. ಒಂದು ಅವರಿಗೆ ಕಾನೂನು ಚೌಕಟ್ಟು ಬಿಟ್ಟು ಕೆಲಸ ಮಾಡಿದರೆ ಎಸ್‌ಐಟಿಗೆ ಕೆಟ್ಟ ಹೆಸರು ಬರಲಿದೆ.

**-ಪರಮೇಶ್ವರ್, ಗೃಹ ಸಚಿವ**

## ಭುಜದ ಮೇಲೆ ಕೈ ಹಾಕಿದ್ದಕ್ಕೆ ಕಾರ್ಯಕರ್ತನಿಗೆ ಕಪಾಳಮೋಕ್ಷ

• **ಉದಯವಾಹಿನಿ, ಹಾವೇರಿ**

ಲೋಕಸಭಾ ಚುನಾವಣೆ ಪ್ರಚಾರದ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕಾಂಗ್ರೆಸ್ ಶಾಸಕರೊಬ್ಬರಿಗೆ ಕಪಾಳಮೋಕ್ಷ ಮಾಡಿದ ಘಟನೆ ಹಾವೇರಿಯಲ್ಲಿ ನಡೆದಿದೆ. ಡಿ.ಕೆ.ಶಿವಕುಮಾರ್ ಆಗಮಿಸುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು 'ಡಿಕೆಶಿ, ಡಿಕೆಶಿ' ಎಂದು ಘೋಷಣೆ ಕೂಗಿದರೆ, ಕಾರ್ಯಕರ್ತರೊಬ್ಬರು ಅವರ ಭುಜದ ಮೇಲೆ ಕೈ ಇಟ್ಟಾಗ ಶಿವಕುಮಾರ್ ಕೋಪಗೊಂಡು ಕಾರ್ಯಕರ್ತನಿಗೆ ಕಪಾಳಮೋಕ್ಷ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಡಿ.ಕೆ. ಶಿವಕುಮಾರ್ ಅವರು ಶನಿವಾರ ಸಂಜೆ ಹಾವೇರಿ ಜಿಲ್ಲೆಯ ಸವಣೂರು ಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿನೋದ ಅಸೂಟಿ ಪರ ಪ್ರಚಾರ ನಡೆಸಿದರು. ಡಿ.ಕೆ.ಶಿವಕುಮಾರ್ ಪ್ರಚಾರಕ್ಕೆ ಆಗಮಿಸುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು 'ಡಿ.ಕೆ.ಶಿವಕುಮಾರ್' ಎಂದು ಘೋಷಣೆ ಕೂಗುತ್ತಿದ್ದರು. ಅವರು ಕಾರಿನಿಂದ ಇಳಿಯುತ್ತಿದ್ದಂತೆ, ಕಾರ್ಯಕರ್ತರೊಬ್ಬರು ಡಿ.ಕೆ.ಶಿವಕುಮಾರ್ ಅವರ ಭುಜದ ಮೇಲೆ ಕೈ ಹಾಕಿದರು. ಹಠಾತ್ ಅನುಚಿತ ವರ್ತನೆಯಿಂದ ಕೋಪಗೊಂಡ ಶಿವಕುಮಾರ್ ಕಾರ್ಮಿಕನಿಗೆ ಕಪಾಳಮೋಕ್ಷ ಮಾಡಿದ್ದಾನೆ. ಕಪಾಳಮೋಕ್ಷಕ್ಕೆ ಒಳಗಾದವರನ್ನು ಪುರಸಭೆ ಸದಸ್ಯ ಅಲ್ಲಾವುದ್ದೀನ್ ಮನಿಯಾರ್ ಎಂದು ಗುರುತಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಘಟನೆಯ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದ್ದಂತೆ,ಬಿಜೆಪಿ ಕಾಂಗ್ರೆಸ್ ಪೆಹ್ಚಾನ್, ಜನತಾ ಔರ್ ವರ್ಕರ್ ಕಾ ಅಪ್ಮಾನ್ ಎಂದು ಹೇಳಿದೆ.

## ಸಂವಿಧಾನಕ್ಕೆ ಅಪಚಾರ ಎಸಗಿದ್ದೇ ಕಾಂಗ್ರೆಸ್: ಸಿ.ಟಿ.ರವಿ

• **ಉದಯವಾಹಿನಿ, ಬೆಂಗಳೂರು**

ಸಂವಿಧಾನಕ್ಕೆ ಅಪಚಾರ ಎಸಗಿದ್ದೇ ಕಾಂಗ್ರೆಸ್ ಎಂದು ಬಿಜೆಪಿ ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯದ ಮಾಜಿ ಸಚಿವ ಸಿ.ಟಿ.ರವಿ ಅವರು ಆರೋಪಿಸಿದರು.

ದಾವಣಗೆರೆಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇವರನ್ನು ನೋಡುವಾಗ ಕೋತಿ ತಾನು ತಿಂದು ಮೇಕೆ ಬಾಯಿಗೆ ಒರೆಸಿತ್ತು ಎಂಬ ಕಥೆ ನೆನಪಾಗುತ್ತದೆ. ತಾನು ಮಾಡಿದ ಅಪಚಾರವನ್ನೆಲ್ಲ ಬಿಜೆಪಿಯ ತಲೆಗೆ ಕಟ್ಟುವ ವಿಫಲ ಯತ್ನ ಕಾಂಗ್ರೆಸ್ಸಿನದು ಎಂದು ತಿಳಿಸಿದರು. ದೇಶವನ್ನು ಆರ್ಥಿಕ ದುಸ್ಥಿತಿಯಿಂದ ಸುಸ್ಥಿತಿಗೆ ತಂದು ರಾಷ್ಟ್ರವನ್ನು ಸಂಕಷ್ಟದಿಂದ ಪಾರು ಮಾಡಿದ ನಾಯಕ, ಪ್ರಧಾನಿ ನರೇಂದ್ರ ಮೋದಿಯವರು ಎಂದು ಅವರು ಹೇಳಿದರು. ಕೋವಿಡ್ ಸಂಕಷ್ಟ, ರಷ್ಯಾ - ಉಕ್ರೇನ್ ಯುದ್ಧದ ಸಂಕಷ್ಟ, ಈ ಎಲ್ಲಾ ಸಂಕಷ್ಟಗಳಿಂದ ಪಾರು ಮಾಡಿ ಭಾರತಕ್ಕೆ ಜಾಗತಿಕ ಗೌರವ ತಂದುಕೊಟ್ಟಿದ್ದಾರೆ. ಭಾರತದ ಒಳಗೆ ಸಾಂಸ್ಕೃತಿಕ ಪುನರುತ್ಥಾನಕ್ಕೆ ಮನ್ನಣೆ ಸಿಗುವಂತೆ ಮಾಡಿದ್ದಾರೆ ಎಂದು ತಿಳಿಸಿದರು.

## ಜೆ.ಪಿ ನಡ್ಡಾ, ವಿಜಯೇಂದ್ರ ವಿರುದ್ಧ ಎಫ್‌ಐಆರ್ ದಾಖಲು

• **ಉದಯವಾಹಿನಿ, ಬೆಂಗಳೂರು**

ಸಿಎಂ ಸಿದ್ಧರಾಮಯ್ಯ ವಿರುದ್ಧ ಅವಹೇಳನಕಾರಿ ವೀಡಿಯೋ ಪೋಸ್ಟ್ ಮಾಡಿದ ಕಾರಣ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ, ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹಾಗೂ ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವಿಯಾ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಈ ಕುರಿತಂತೆ ಕೆಪಿಸಿಸಿ ಮಾಧ್ಯಮ ವಿಭಾಗ ಮುಖ್ಯಸ್ಥರಾದಂತ ರಮೇಶ್ ಬಾಬು ಅವರು ಹೈಗ್ರೌಂಡ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.ದೂರಿನಲ್ಲಿ ಸಿಎಂ ಸಿದ್ಧರಾಮಯ್ಯ, ರಾಹುಲ್ ಗಾಂಧಿ ಬಗ್ಗೆ ಅವಹೇಳನಕಾರಿಯಾದಂತ ವೀಡಿಯೋವನ್ನು ಕರ್ನಾಟಕ ಬಿಜೆಪಿ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ. ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದರು. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವಂತ ವೀಡಿಯೋದಲ್ಲಿ ಬಿಜೆಪಿ ಸಿದ್ಧರಾಮಯ್ಯ ಅವರು ವಿವಿಧ ಅನುದಾನವನ್ನು ಮುಸ್ಲೀಂ ಸಮುದಾಯದವರಿಗೆ ಹಂಚುತ್ತಿದ್ದಾರೆ ಎಂಬುದಾಗಿ ಬಿಂಬಿಸಲಾಗಿದೆ. ಇದು ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘನೆ ಮಾಡಿದಂತೆ ಆಗಿದೆ ಎಂದಿದ್ದರು.

## ಕುಮಾರಸ್ವಾಮಿ, ಅಮಿತ್ ಶಾ ಮಹತ್ವದ ಮೀಟಿಂಗ್

• **ಉದಯವಾಹಿನಿ, ಬೆಂಗಳೂರು**


ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣ ರಾಜಕೀಯ ತಿರುವು ಪಡೆದುಕೊಂಡಿದೆ. ಪ್ರಜ್ವಲ್ ರೇವಣ್ಣ ವಿರುದ್ಧದ ಲೈಂಗಿಕ ಹಗರಣ ಬಿಜೆಪಿ ಮತ್ತು ಜೆಡಿಎಸ್ ನಡುವಿನ ಮೈತ್ರಿಗೆ ಧಕ್ಕೆ ತರಬಹುದು ಎಂಬ ಅನುಮಾನಗಳ ಮಧ್ಯೆ, ಎಚ್.ಡಿ. ಕುಮಾರಸ್ವಾಮಿ ಮತ್ತು ಅಮಿತ್ ಶಾ ನಡುವೆ ಮಹತ್ವದ ಮಾತುಕತೆ ನಡೆದಿದೆ. ನಿನ್ನೆ ತಡರಾತ್ರಿ ನಡೆದ ಈ ಸಭೆಯಲ್ಲಿ ಪ್ರಜ್ವಲ್ ರೇವಣ್ಣ ಪ್ರಕರಣ ಮತ್ತು ಮೈತ್ರಿ ಬಗ್ಗೆ ಚರ್ಚೆಗಳಾಗಿವೆ. ಈ ವೇಳೆ ಜೆಡಿಎಸ್‌ನ ಮಿತ್ರ ಪಕ್ಷವಾಗಿ ಬಿಜೆಪಿ ಗಟ್ಟಿಯಾಗಿ ನಿಲ್ಲುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭರವಸೆ ನೀಡಿದರೆನ್ನಲಾಗಿದೆ. ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಎಚ್ ಡಿ ಕುಮಾರಸ್ವಾಮಿ ಪ್ರಜ್ವಲ್ ಪ್ರಕರಣದಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿ ಏನಾಗುತ್ತೆ ಎನ್ನುವ ಪ್ರಶ್ನೆಗೆ ಉತ್ತರಿಸುತ್ತಾ, ಈಗ ತನಗೆ ಮೈತ್ರಿ ಮುಖ್ಯ ಅಲ್ಲ ಎಂದು ಹೇಳುವ ಮೂಲಕ ಕುತೂಹಲ ಕೆರಳಿಸಿದ್ದರು. ಈ ಹಿನ್ನೆಲೆಯಲ್ಲಿ ಅಮಿತ್ ಶಾ ಮತ್ತು ಎಚ್‌ಡಿಕೆ ಭೇಟಿ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ.

## ಅಂಬೇಡ್ಕರ್ ಅವರನ್ನು ಸೋಲಿಸಿ ಅವಮಾನ ಮಾಡಿದ್ದು ಕಾಂಗ್ರೆಸ್: ಬೊಮ್ಮಾಯಿ

• **ಉದಯವಾಹಿನಿ, ಹಾವೇರಿ**

ಸ್ವಾತಂತ್ರ್ಯ ಹೋರಾಟದಲ್ಲಿ ದಲಿತರ ಪಾತ್ರ ಬಹಳ ದೊಡ್ಡದಿದೆ. ಯಾವಾಗ ದಲಿತರು ಹಿಂದುಳಿದವರು ಸ್ವಾತಂತ್ರ್ಯ ಹೋರಾಟಕ್ಕೆ ಧುಮುಕಿದರೋ ಬ್ರಿಟೀಷರು ತಮಗೆ ಉಳಿಗಾಲವಿಲ್ಲ ಎಂದು ತೀರ್ಮಾನಿಸಿದರು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ಇಂದು ಹಾವೇರಿಯಲ್ಲಿ ಛಲವಾದಿ ಸಮುದಾಯದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಅಂಬೇಡ್ಕರ್ ಅವರಿಗೆ ಕಾಂಗ್ರೆಸ್ ಮೊದಲಿನಿಂದಲೂ ಅವಮಾನ ಮಾಡುತ್ತ ಬಂದಿದೆ. ಸಂವಿಧಾನ ಶಿಲ್ಪಿ ಡಾ. ಬಿ. ಆರ್. ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ



ಸೋಲಿಸಿದರು. ಮಹಾತ್ಮಾ ಗಾಂಧಿಜಿ ಪಕ್ಕ ಅಂಬೇಡ್ಕರ್ ಇರಬಾರದು ಅಂತ ಅವರ ಅಂತ್ಯ ಸಂಸ್ಕಾರಕ್ಕೆ ದೆಹಲಿಯಲ್ಲಿ ಜಾಗ ನೀಡದೇ ಅವಮಾನ ಮಾಡಿದವರು ಕಾಂಗ್ರೆಸ್ ನವರು ಎಂದು ಹೇಳಿದರು. ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ 90 ರ ದಶಕದವರೆಗೂ ಭಾರತ ರತ್ನ ಕೊಟ್ಟಿರಲಿಲ್ಲ. ಇಂದಿರಾಗಾಂಧಿ, ರಾಜೀವ್ ಗಾಂಧಿಗೆ ಭಾರತ ರತ್ನ ಕೊಟ್ಟದ್ದರು. ಆದರೆ, ಅಂಬೇಡ್ಕರ್ ಅವರಿಗೆ ಕೊಟ್ಟಿರಲಿಲ್ಲ. ವಿ.ಪಿ. ಸಿಂಗ್ ಸರ್ಕಾರ ಅಂಬೇಡ್ಕರ್ ಅವರಿಗೆ ಭಾರತ ರತ್ನ ಕೊಟ್ಟಿತು. ಅಂಬೇಡ್ಕರ ಅವರ ಚುನಾವಣೆಗೆ ಬೆಂಬಲ ಕೊಟ್ಟಿದ್ದು, ಅಂದಿನ ಜನಸಂಘ, ಇವರು ಈಗ ಮೀಸಲಾತಿ ರದ್ದಾಗುತ್ತದೆ ಎಂದು ಹೇಳುತ್ತಾರೆ. ಐವತ್ತು ವರ್ಷ ದಲಿತರ ಅಭಿವೃದ್ಧಿ ಮಾಡಬಹುದಿತ್ತು. ನಿಮ್ಮ ಮತಗಳು ಕೈ ತಪ್ಪುತ್ತವೆ ಎನ್ನುವ ಕಾರಣಕ್ಕೆ ಮೀಸಲಾತಿ ರದ್ದಾಗುತ್ತದೆ ಎಂಬ ಆರೋಪ ಮಾಡುತ್ತಾರೆ ಎಂದರು.

**50 ವರ್ಷ ದಲಿತರ ಅಭಿವೃದ್ಧಿ ಮಾಡಬಹುದಿತ್ತು**

## ಈ ಬಾರಿ ಎನ್‌ಡಿಎ ಅಧಿಕಾರಕ್ಕೆ ಬರುವುದಿಲ್ಲ

■ ಈ ಚುನಾವಣೆ 2ನೇ ಸ್ವಾತಂತ್ರ್ಯ ಹೋರಾಟ ■ ಬಿಜೆಪಿ 200 ಸ್ಥಾನ ತಲುಪಿದರೆ ಹೆಚ್ಚು: ಸಿಎಂ

• **ಉದಯವಾಹಿನಿ, ಬೆಳಗಾವಿ**

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ 400 ಸ್ಥಾನಗಳನ್ನು ನೀಡಿದರೆ ಸಂವಿಧಾನವನ್ನು ಬದಲಾವಣೆ ಮಾಡುವುದಾಗಿ ಬಿಜೆಪಿ ಹಾಗೂ ಆರ್ ಎಸ್ ಎಸ್ ಹೇಳುತ್ತಿದ್ದು, ಈ ಚುನಾವಣೆ ಎರಡನೇ ಸ್ವಾತಂತ್ರ್ಯ ಹೋರಾಟವಾಗಿದೆ. ಈ ಹೋರಾಟದಲ್ಲಿ ಕಾಂಗ್ರೆಸ್ ಗೆಲ್ಲಲಿದ್ದು ಬಿಜೆಪಿ 200 ಸ್ಥಾನ ಗೆಲ್ಲುವುದೂ ಕಷ್ಟವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ವ್ಯಕ್ತಪಡಿಸಿದರು.

ಅಂಬೇಡ್ಕರ್ ಸಂವಿಧಾನ ಎಲ್ಲಾರಿಗೂ ಸಮಾನ ಅವಕಾಶ, ಸಮಸಮಾಜ ನೀಡುತ್ತದೆ. ಇದಕ್ಕೆ ವಿರುದ್ಧವಾಗಿ ಬಿಜೆಪಿಯವರು ನಡೆಯುತ್ತಿದ್ದಾರೆ. ಅಂಬೇಡ್ಕರ್ ಅವರು ದೇಶಕ್ಕೆ ಕೇವಲ ರಾಜಕೀಯ ಸ್ವಾತಂತ್ರ್ಯ ಸಾಕಾಗುವುದಿಲ್ಲ, ಎಲ್ಲಾರಿಗೂ ಆರ್ಥಿಕ, ಸಾಮಾಜಿಕ ಸ್ವಾತಂತ್ರ್ಯ ದೊರೆಯುವಂತಾಗಬೇಕು ಎಂದಿದ್ದಾರೆ. ಈ ಶಕ್ತಿಯನ್ನು ದುರ್ಬಲರಿಗೆ ತುಂಬವ ಸಲುವಾಗಿಯೇ ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳನ್ನು ಜಾರಿ ಮಾಡಿದೆ ಎಂದರು. ಬಿಜೆಪಿಯವರು ಮೊದಲು ನಮ್ಮ ಗ್ಯಾರಂಟಿಗಳನ್ನು ಆಡಿಕೊಂಡರು. ಬಳಿಕ ಗ್ಯಾರಂಟಿಗಳನ್ನು ಜಾರಿ ಮಾಡಿದರೆ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎನ್ನುವ ಸುಳ್ಳು ಹರಡಿದರು. ಅಭಿವೃದ್ಧಿ ಕೆಲಸಗಳು ನಿಲ್ಲುತ್ತವೆ ಎಂದರು, ಲೋಕಸಭಾ ಚುನಾವಣೆ ತನಕ ಮಾತ್ರ ನೀಡಿ, ನಂತರ ನಿಲ್ಲಿಸುತ್ತಾರೆ ಎಂಬ ಸುಳ್ಳುಗಳನ್ನು ಸೃಷ್ಟಿಸಿದ್ದಾರೆ. ಬಜೆಟ್ ನಲ್ಲಿ ಗ್ಯಾರಂಟಿಗಳಿಗೆ 52009 ಕೋಟಿ ರೂ.ಗನ್ನು ಇಟ್ಟಿದ್ದೇವೆ. ಅಭಿವೃದ್ಧಿ ಕೆಲಸಗಳಿಗೆ 68 ಸಾವಿರ ಕೋಟಿಗಳನ್ನೂ ಸೇರಿದಂತೆ 2024-25 ರಲ್ಲಿ ಒಟ್ಟು 1.20 ಲಕ್ಷ ಕೋಟಿ ಇಟ್ಟಿದ್ದೇವೆ ಎಂದು ವಿವರಿಸಿದರು. ನಮ್ಮ ಸರ್ಕಾರದ ಬಜೆಟ್ ಗಾತ್ರ 3.71 ಲಕ್ಷ ಕೋಟಿ, ಬೊಮ್ಮಾಯಿಯವರ ಬಜೆಟ್ 23-24 ರಲ್ಲಿ 3.09 ಲಕ್ಷ ಕೋಟಿ. ಬಿಜೆಪಿಯವರು ಸುಳ್ಳು ಆರೋಪಗಳನ್ನು ಮಾಡುತ್ತಿದ್ದು, ಜನರಿಗೆ ಕಾಂಗ್ರೆಸ್ ನ ಮೇಲೆ ವಿಶ್ವಾಸ ಕಡಿಮೆಯಾಗಲಿ ಎಂದು ಹುನ್ನಾರ ಮಾಡುತ್ತಿದ್ದಾರೆ. ಬಿಜೆಪಿಯವರಿಗೆ ಗ್ಯಾರಂಟಿ ಯೋಜನೆಗಳನ್ನು ಕಂಡರೆ ಆಗುವುದಿಲ್ಲ. ಅದನ್ನು ನಿಲ್ಲಿಸಬೇಕೆಂಬುದು ಅವರ ಪಿತೂರಿಯಾಗಿದೆ ಎಂದರು.

ಕಾಂಗ್ರೆಸ್ ಪಕ್ಷ ನೀಡಿರುವ 25 ಗ್ಯಾರಂಟಿಗಳಿಗೆ ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಯವರು ಸಹಿ ಮಾಡಿ ಹಂಚಿದ್ದಾರೆ. ಬಡಕುಟುಂಬದ ಮಹಿಳೆಯರಿಗೆ ವರ್ಷಕ್ಕೆ 1 ಲಕ್ಷ ರೂ. ನೀಡುವ ಮಹಾಲಕ್ಷ್ಮಿ ಯೋಜನೆ, ಯುವನ್ಯಾಯದಡಿ ವರ್ಷಕ್ಕೆ 1 ಲಕ್ಷ ರೂ. ನೀಡುವ ಯೋಜನೆ, ರೈತರ ಬೆಳೆಗೆ ನ್ಯಾಯಯುತ ಬೆಲೆ, ಸಾಲ ಮನ್ನಾ, ಸ್ವಾಮಿನಾಥನ್ ವರದಿ ಜಾರಿ ಬೇಡಿಕೆಗಳನ್ನು ಈಡೇರಿಸುವ 'ರೈತ ನ್ಯಾಯ' ಯೋಜನೆಗಳ ಭರವಸೆ ನೀಡಿದೆ. ಮೋದಿಯವರು ರೈತರ ಸಾಲ ಮನ್ನಾ ಮಾಡಲಿಲ್ಲ. ಸ್ವಾಮಿನಾಥನ್ ವರದಿ ಜಾರಿ ಮಾಡಲಿಲ್ಲ. ಆದರೆ ಅಂಬಾನಿ, ಅದಾನಿಗಳಿಗೆ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದರು. ರೈತರ ಸಾಲ ಮನ್ನಾ ಮಾಡಲು ನೋಟ್ ಪ್ರಿಂಟ್ ಮಾಡುವ ಮಿಷನ್ ಇಲ್ಲ ಎಂದು ಬಿಜೆಪಿಯವರು ಹೇಳುತ್ತಾರೆ. ಸಂಸದ ತೇಜಸ್ವಿ ಸೂರ್ಯ, ರೈತರ ಸಾಲ ಮನ್ನಾ ಮಾಡಿದರೆ ದೇಶಕ್ಕೆ ಒಳಿತಲ್ಲ ಎಂದಿದ್ದಾರೆ. ಬಿಜೆಪಿಯವರಿಗೆ ರೈತರ ಸಾಲ ಮನ್ನಾ ಮಾಡಬಾರದೆಂಬುದು ಅವರ ಹಿಡನ್ ಅಜೆಂಡಾ ಎಂದರು ಸಿಎಂ ಸಿದ್ಧರಾಮಯ್ಯ.



### ಮೋದಿ ಯಾವುದೇ ಸಾಧನೆ ಮಾಡಿಲ್ಲ

ಮೋದಿಯವರು 10 ವರ್ಷಗಳಿಂದ ಯಾವುದೇ ಸಾಧನೆಗಳನ್ನು ಮಾಡಿಲ್ಲ. 2014 ರಲ್ಲಿ ನೀಡಿರುವ ಯಾವುದೇ ಭರವಸೆಗಳನ್ನು ಈಡೇರಿಸಿಲ್ಲ. ಆದರೆ ಮೋದಿಯವರು ದ್ವೇಷದ ಭಾಷಣ ಮಾಡುತ್ತಿದ್ದಾರೆ. ಮತಗಳ ಕ್ರೋಢೀಕರಣ, ಧರ್ಮ ಕ್ರೋಢೀಕರಣ ಕೆಲಸ ಮಾಡುತ್ತಿದ್ದಾರೆ. ಆದ್ದರಿಂದ ರಾಹುಲ್ ಗಾಂಧಿಯವರು ದೇಶದ ಉದ್ದಗಲಕ್ಕೂ ಪಾದ ಯಾತ್ರೆ, ಹಾಗೂ ನ್ಯಾಯ ಯಾತ್ರೆ ಮಾಡಿದರು. ಜನರ ಒಡೆದ ಮನಸ್ಸನ್ನು ಒಗ್ಗೂಡಿಸಲು ಯಾತ್ರೆ ಕೈಗೊಂಡು ಯಶಸ್ವಿಯಾದರು ಎಂದರು.

**ಈ ದಿನದ ದರ** | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,183/Gram(24ct) ₹6,585/Gram(22ct) | ಬೆಳ್ಳಿ: ₹82.60/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಪ್ರವರ್ತಕ ಕರ್ಮವೆನಿಪುದು

ನಿಜಗುಣರ ಪರಮಾನುಭವ ಬೋಧೆಯ ಮಾತು. ಕರ್ಮ ಕ್ರಿಯೆ. ಅದು ಫಲಕ್ಕೆ ಕಾರಣ. ಕಾರ್ಯವಿಲ್ಲದೇ ಫಲ ಅಸಾಧ್ಯ. ತೆಂಗಿನ ಸಸಿ ನೆಡದೇ ತೆಂಗು ಫಲ ಕೊಡದು. ವಾಹನವನ್ನು ಚಲಾಯಿಸಿದರೆ ಸ್ಥಳ ಬಿಡುವುದು. ಹೆಜ್ಜೆ ಹಾಕಿದರೆ ಸ್ಥಳಾಂತರ! ಪರಿವರ್ತನೆ ಬದಲಾವಣೆ ಅಭಿವೃದ್ಧಿ ಫಲಪ್ರಾಪ್ತಿ ಪ್ರವೃತ್ತಿಗೆ ಕಾರಣ ಕರ್ಮ ಪ್ರವರ್ತಕ. ಪ್ರವೃತ್ತಿಯನ್ನುಂಟುಮಾಡುವ ಕರ್ಮ. ಬದಲಾಗಿ ನಿವೃತ್ತಿಯನ್ನುಂಟುಮಾಡುವ ಕರ್ಮ ನಿವರ್ತಕ. ಪ್ರವರ್ತಕ ಕರ್ಮ ಪ್ರಾಪಂಚಿಕ ವ್ಯವಹಾರವನ್ನು ಜೇಡರ ಬಲೆಯಂತೆ ವಿಸ್ತರಿಸಿ, ಜೇಡರ ಹುಳುವನ್ನು ತಾ ಹೆಣೆದ ಬಲೆಯೊಳಗೆ ಸಿಲುಕಿಸುವಂತೆ, ತಾ ವಿಸ್ತರಿಸಿದ ವ್ಯವಹಾರ ತನ್ನನ್ನೇ ಕಟ್ಟಿಹಾಕುವುದು! ಪ್ರವರ್ತಕ ಸುಖ ದುಃಖ ಮಿಶ್ರ ಫಲ ನೀಡುವ, ಸಂಸಾರ ಬಂಧ ಬೀಜ. ನಿವರ್ತಕ ಇದನ್ನು ನಾಶಪಡಿಸಿ ಮೋಕ್ಷಸುಖ ನೀಡುವ ಸಾಧನ. ನಿವರ್ತಕ ಕರ್ಮ ಒಂದೇ. ಪ್ರವರ್ತಕ ಕರ್ಮ, ಅಹಂ ಭ್ರಮೆ ಅಜ್ಞಭ್ರಮೆ ಕರಣಭ್ರಮೆ ಇಂದ್ರಿಯಭ್ರಮೆ ದೇಹಭ್ರಮೆ ವಿಶ್ವಭ್ರಮೆ ತೈಜಸಭ್ರಮೆ ಪ್ರಾಜ್ಞಭ್ರಮೆ ಎಂದು ಎಂಟು ವಿಧ.

## ಭಜನ – ಪ್ರವಚನ – ಸಂಕೀರ್ತನ



• ಉದಯವಾಹಿನಿ, ಬೆಂಗಳೂರು

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಶಾಕಾಂಬರಿನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮೇ 7 ರಿಂದ 10ರ ವರೆಗೆ ಧಾರ್ಮಿಕ/ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಿದ್ದು, ಅವುಗಳ ವಿವರಗಳು ಈ ರೀತಿ ಇವೆ ಭಜನಾ ಕಾರ್ಯಕ್ರಮ: (ಪ್ರತಿದಿನ ಸಂಜೆ 6 ರಿಂದ 7) ಮೇ 7–ಚಿಂತಲವಾಡಿ ಭಜನಾ ಮಂಡಳಿ, ಮೇ 8– ಸುಮಧ್ವ ಭಜನಾ ಮಂಡಳಿ, ಮೇ 9– ಸುಜ್ಞಾನ ಭಜನಾ ಮಂಡಳಿ ಪ್ರವಚನ ಕಾರ್ಯಕ್ರಮ ಶ್ರೀ ವೇಣುಗೋಪಾಲಾಚಾರ್ ಗುಡಿ ಇವರು ಮೇ 7 ರಿಂದ 9ರ ವರೆಗೆ (ಪ್ರತಿದಿನ ಸಂಜೆ 7 ರಿಂದ 8) ನರಸಿಂಹ ಸುಳಾದಿ ವಿಷಯವಾಗಿ ಧಾರ್ಮಿಕ ಪ್ರವಚನ ನೀಡಲಿದ್ದಾರೆ. ಮೇ 10, ಶುಕ್ರವಾರ ಸಂಜೆ 6–30ಕ್ಕೆ. ಹರಿನಾಮ ಸಂಕೀರ್ತನೆ. ಗಾಯನ ಕು. ಸುಶ್ರಾವ್ಯ ಆಚಾರ್ಯ ಪಿಟೀಲು ಶ್ರೀ ಎಸ್. ಶಶಿಧರ್, ಮೃದಂಗ ಶ್ರೀ ಶ್ರೀನಿವಾಸ್ ಅನಂತರಾಮಯ್ಯ. ಈ ಎಲ್ಲಾ ಕಾರ್ಯಕ್ರಮಗಳಲ್ಲೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಟಿ ಟಿ ಡಿ ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ. ಪಿ. ಭುಜಂಗರಾವ್ ಅವರು ವಿನಂತಿಸಿದ್ದಾರೆ.

## ದೇಶದಿಂದ ದೇಶಕ್ಕೆ ಹಾರುತ್ತಿರುವ ಪ್ರಜ್ವಲ್ ಮಂಗಳೂರಿಗೆ, ಅಲ್ಲಿಯೇ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಹಾಸನ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ, ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರು ನೂರಾರು ಮಹಿಳೆಯರ ಜೊತೆ ರಾಸಲೀಲೆ ನಡೆಸಿದ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಎಸ್ ಐಟಿ ತನಿಖೆಯನ್ನ ಚುರುಕುಗೊಳಿಸಿದೆ. ಅಲ್ಲದೇ ಪ್ರಜ್ವಲ್ ರೇವಣ್ಣ ಅವರ ಬಂಧನಕ್ಕೆ ಸದ್ಯ ಎಸ್ಐಟಿ ಲುಕ್ ಔಟ್ ನೋಟಿಸ್ ಜಾರಿಗೊಳಿಸಿದೆ. ಹೌದು, ಎಸ್ ಐಟಿ ಅಧಿಕಾರಿಗಳು ಈಗಾಗಲೇ ಹಲವು ಹಂತಗಳಲ್ಲಿ ತನಿಖೆಯನ್ನ ಚುರುಕುಗೊಳಿಸಿದ್ದು, ಮಾಜಿ ಸಚಿವ ಹಾಗೂ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಪುತ್ರ ಹೆಚ್.ಡಿ. ರೇವಣ್ಣ ಅವರನ್ನ ಬಂಧನದ ಬಳಿಕ ಪ್ರಜ್ವಲ್ ರೇವಣ್ಣ ಅವರ ಬೇಟೆಯೂ ಕೂಡ ಜೋರಾಗಿದ್ದು, ದೇಶದಿಂದ ದೇಶಕ್ಕೆ ಹಾರುತ್ತಿರುವ ಪ್ರಜ್ವಲ್ ರೇವಣ್ಣ ಹೆಡೆಮುರಿ ಕಟ್ಟಲು ಎಸ್ ಐಟಿ ಬಲೆ ಸಿದ್ಧವಾಗಿದೆ. ಪ್ರಜ್ವಲ್ ಬಂಧನಕ್ಕೆ ಸದ್ಯ ಲುಕ್ಔಟ್ ನೋಟಿಸ್ ಜಾರಿ ಮಾಡಲಾಗಿದ್ದು, ಭಾನುವಾರ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪ್ರಜ್ವಲ್ ಆಗಮಿಸುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

ಹಾಸನ ಹಾಲಿ ಸಂಸದರಾದ ಪ್ರಜ್ವಲ್ ರೇವಣ್ಣ ಅವರು ಯಾವುದೇ ಏರ್‌ಪೋರ್ಟ್ ಗೆ ಬಂದರೂ ಅಲ್ಲೇ ಬಂಧನ ಪ್ರಕ್ರಿಯೆ ನಡೆಯಲಿದೆ. ಮಂಗಳೂರು, ಕೊಚ್ಚಿ, ಗೋವಾ, ಬೆಂಗಳೂರು ವಿಮಾನ ನಿಲ್ದಾಣಕ್ಕೆ ಪ್ರಜ್ವಲ್ ಆಗಮಿಸಿದರು ಬಂಧಿಸಿ ಸ್ಥಳೀಯ ಠಾಣೆಗೆ ಪೊಲೀಸರು ಕರೆದೊಯ್ಯಲ್ಲಿದ್ದಾರೆ ಎಂದು ಹೇಳಲಾಗಿದೆ.

## ಪೆಟ್ರೋಲ್ ತುಂಬಿದ್ದ ಟ್ಯಾಂಕರ್ ಪಲ್ಟಿ ಹೆದ್ದಾರಿಯಲ್ಲಿ ತಪ್ಪಿದ ಭಾರೀ ಅನಾಹುತ

• ಉದಯವಾಹಿನಿ, ಬೆಂಗಳೂರು

ಚಾಲಕನ ನಿಯಂತ್ರಣ ತಪ್ಪಿ ಪೆಟ್ರೋಲ್ ತುಂಬಿದ್ದ ಟ್ಯಾಂಕರ್ ಪಲ್ಟಿಯಾದ ಘಟನೆ ಎಲೆಕ್ಟ್ರಾನಿಕ್ ಸಿಟಿಯಲ್ಲಿ ಭಾನುವಾರ ಬೆಳಗ್ಗೆ ನಡೆದಿದೆ. ಮಂಗಳೂರಿನಿಂದ ಅತ್ತಿ ಬೆಲೆಗೆ ಬರುತ್ತಿದ್ದ ಟ್ಯಾಂಕರ್ ಎಲೆಕ್ಟ್ರಾನಿಕ್ ಸಿಟಿ ಟೋಲ್ ಬಳಿ ಹೆದ್ದಾರಿಯಲ್ಲಿದ್ದ ಡಿವೈಡರ್ ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಟ್ಯಾಂಕರ್ ಮಗುಚಿ ಬೀಳುತ್ತಿದ್ದಂತೆ ಭಾರೀ ಪ್ರಮಾಣದಲ್ಲಿ ಪೆಟ್ರೋಲ್ ಸೋರಿಕೆಯಾಗಿದೆ. ವಿಷಯ ತಿಳಿದು ಕೂಡಲೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳ ಕ್ರೇನ್ ಬಳಸಿ ಟ್ಯಾಂಕರ್ ಟ್ಯಾಂಕರ್ ಅನ್ನು ಕ್ರೇನ್ ಮೂಲಕ ಮೇಲೆತ್ತಲಾಗಿದೆ. ಹೊಸೂರು–ಬೆಂಗಳೂರು ಹೆದ್ದಾರಿಯಲ್ಲಿ ಈ ಘಟನೆ ನಡೆದ ಕಾರಣ ಹಲವು ಸಮಯದರೆಗೆ ಫುಲ್ ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಸಂಭವಿಸಿತ್ತು.

## ಪ್ರಜ್ವಲ್ ರೇವಣ್ಣ ಕೂಡ ಸರೆಂಡರ್ ಆಗ್ತಾರೆ: ಶಾಸಕ ಸಿ.ಎಸ್ ಪುಟ್ಟರಾಜು

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ರೇವಣ್ಣ ಅವರು ಜಾಮೀನು ಅರ್ಜಿ ವಜಾ ಆಗಿದ್ದರಿಂದ ಅವರೇ ದೇವೇಗೌಡರ ಆಶೀರ್ವಾದ ಪಡೆದು ಎಸ್ಐಟಿ ಅಧಿಕಾರಿಗಳ ಮುಂದೆ ಹಾಜರಾಗಿದ್ದಾರೆ. ಇನ್ನೂ ಸಂಸದ ಪ್ರಜ್ವಲ್ ರೇವಣ್ಣ ಅವರು ಶರಣಾಗಲಿದ್ದಾರೆ ಎಂದು ಮಾಜಿ ಶಾಸಕ ಸಿ.ಎಸ್ ಪುಟ್ಟರಾಜು ಅವರು ಸುಳಿವು ಕೊಟ್ಟಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿರೋ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಪ್ರಜ್ವಲ್ ರೇವಣ್ಣ ಸರೆಂಡರ್ ಆಗುವ ಕೆಲಸ ಆಗುತ್ತದೆ. ಪ್ರಜ್ವಲ್ ಶರಣಾಗ್ತಾರೆ ಎಂದು ತಿಳಿಸಿದ್ದಾರೆ. ರೇವಣ್ಣ ಅವರ ಬೇಲ್ ವಜಾಗೊಂಡಿದೆ. ಬಳಿಕ ದೇವೇಗೌಡರ ಆಶೀರ್ವಾದ ಪಡೆದು ಅವರೇ ಶರಣಾಗಿದ್ದಾರೆ. ಪ್ರಜ್ವಲ್ ರೇವಣ್ಣ ಅವರದ್ದು ಕಾನೂನು ಪ್ರಕಾರ ನಡೆಯುತ್ತಿದೆ. ಅವರು ಕೂಡ ಶರಣರಾಗುವ ಕೆಲಸ ಆಗಲಿದೆ. ಅವರು ಬರ್ತಾರೆ, ನಾನು ಕುಮಾರಸ್ವಾಮಿ ಜೊತೆ ಮಾತನಾಡಲು ಬಂದಿದ್ದೆ ಎಂದಿದ್ದಾರೆ.

## ಜೂನ್‌ನಿಂದ ಎಪಿಎಲ್ ಪಡಿತರ ಚೀಟಿ ವಿತರಣೆ ಹೊಸ ಕಾರ್ಡ್‌ಗಳಿಗೆ ಅರ್ಜಿ

• ಉದಯವಾಹಿನಿ, ಬೆಂಗಳೂರು

ಕಳೆದ ಒಂದೂವರೆ ವರ್ಷದಿಂದ ಸ್ಥಗಿತವಾಗಿದ್ದ ಎಪಿಎಲ್ ಕಾರ್ಡ್ ವಿತರಣೆಗೆ ಮರುಚಾಲನೆ ನೀಡಲು ಆಹಾರ, ನಾಗರಿಕ ಸರಬರಾಜು ಇಲಾಖೆ ನಿರ್ಧರಿಸಿದೆ. ಜೂನ್ ತಿಂಗಳಲ್ಲಿ ಹೊಸ ಕಾರ್ಡ್‌ಗಳಿಗೆ ಅರ್ಜಿ ಆಹ್ವಾನಿಸಲು ಇಲಾಖೆ ತೀರ್ಮಾನಿಸಿದೆ. ಹೊಸ ಕಾರ್ಡ್‌ಗಾಗಿ ಆನ್‌ಲೈನ್‌ನಲ್ಲೇ ಅರ್ಜಿ ಸಲ್ಲಿಸುವುದು ಕಡ್ಡಾಯ.

ಈ ವೆಬ್ ಪೋರ್ಟಲ್ ಅನ್ನು ಸುಮಾರು ಒಂದೂವರೆ ವರ್ಷದಿಂದಲೂ ಸ್ಥಗಿತಗೊಳಿಸಲಾಗಿತ್ತು. ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟವಾದ ಬಳಿಕ ಜೂನ್ ಮೊದಲ ವಾರದಲ್ಲಿ ವೆಬ್‌ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಕೆಗೆ ಅನುವು ಮಾಡಿಕೊಡಲಾಗುವುದು ಎಂದು ಇಲಾಖೆಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

# ಲೋಕಸಮರದಲ್ಲಿ ಬಿಜೆಪಿ ಗೆಲ್ಲುವ ಸ್ಥಾನಗಳೆಷ್ಟು?

## ಅಂಕಿ ಅಂಶಗಳನ್ನ ಬಿಚ್ಚಿಟ್ಟ ಸಿಎಂ, ಈ ಹೋರಾಟದಲ್ಲಿ ಕಾಂಗ್ರೆಸ್ ಗೆಲ್ಲಲಿದ್ದು ಬಿಜೆಪಿ 200 ಸ್ಥಾನ ಗೆಲ್ಲುವುದೂ ಕಷ್ಟವಿದೆ


• ಉದಯವಾಹಿನಿ, ಬೆಂಗಳೂರು

**ಕೇಂದ್ರ ಸರ್ಕಾರ ಅಕ್ಕಿ ನೀಡಲು ಒಪ್ಪಲಿಲ್ಲ**

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಗೆ 400 ಸ್ಥಾನಗಳನ್ನು ನೀಡಿದರೆ ಸಂವಿಧಾನವನ್ನು ಬದಲಾವಣೆ ಮಾಡುವುದಾಗಿ ಬಿಜೆಪಿ, ಆರ್ ಎಸ್‌ಎಸ್ ಹೇಳುತ್ತಿದ್ದು, ಈ ಚುನಾವಣೆ ಎರಡನೇ ಸ್ವಾತಂತ್ರ್ಯ ಹೋರಾಟವಾಗಿದೆ. ಈ ಹೋರಾಟದಲ್ಲಿ ಕಾಂಗ್ರೆಸ್ ಗೆಲ್ಲಲಿದ್ದು ಬಿಜೆಪಿ 200 ಸ್ಥಾನ ಗೆಲ್ಲುವುದೂ ಕಷ್ಟವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿಯಲ್ಲಿ ಆಯೋಜಿಸಿರುವ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅಂಬೇಡ್ಕರ್ ಸಂವಿಧಾನ ಎಲ್ಲರಿಗೂ ಸಮಾನ ಅವಕಾಶ, ಸಮಸಮಾಜ ನೀಡುತ್ತದೆ. ಇದಕ್ಕೆ ವಿರುದ್ದವಾಗಿ ಬಿಜೆಪಿಯವರು ನಡೆಯುತ್ತಿದ್ದಾರೆ. ಅಂಬೇಡ್ಕರ್ ಅವರು ದೇಶಕ್ಕೆ ಕೇವಲ ರಾಜಕೀಯ ಸ್ವಾತಂತ್ರ್ಯ ಸಾಕಾಗುವುದಿಲ್ಲ. ಎಲ್ಲರಿಗೂ ಆರ್ಥಿಕ, ಸಾಮಾಜಿಕ ಸ್ವಾತಂತ್ರ್ಯ ದೊರೆಯುವಂತಾಗಬೇಕು ಎಂದಿದ್ದಾರೆ. ಈ ಶಕ್ತಿಯನ್ನು ದುರ್ಬಲರಿಗೆ ತುಂಬವ ಸಲುವಾಗಿಯೇ ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳನ್ನು ಜಾರಿ ಮಾಡಿದೆ ಎಂದರು. ರಾಜ್ಯದ ಬಡ ಜನರ ತುತ್ತಿನ ಚೀಲ ತುಂಬಿಸುವ ಅನ್ನಭಾಗ್ಯ ಯೋಜನೆಗಾಗಿ ಅಕ್ಕಿ ಪೂರೈಸಲು ಕೋರಿದಾಗ, ಅಕ್ಕಿದಾಸ್ತಾನಿದ್ದರೂ ಕೇಂದ್ರ ಸರ್ಕಾರ ಅಕ್ಕಿ ನೀಡಲು ಒಪ್ಪಲಿಲ್ಲ. ಆದ್ದರಿಂದ ಕಾಂಗ್ರೆಸ್ ಸರ್ಕಾರ ಅಕ್ಕಿ ಬದಲು 5 ಕೆಜಿಗೆ 34 ರೂ. ನಂತೆ 170 ರೂ.ನಂತೆ ಜುಲೈ ತಿಂಗಳಿನಿಂದ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುತ್ತಿದೆ. ಗೃಹ ಜ್ಯೋತಿಯನ್ನು ಜುಲೈ ತಿಂಗಳಲ್ಲಿ ಜಾರಿ ಮಾಡಲಾಯಿತ.

1.60 ಕೋಟಿ ಫಲಾನುಭವಿಗಳಿಗೆ ಅಂದರೆ ರಾಜ್ಯದ ಸುಮಾರು 92% ಜನರಿಗೆ ಇದರಿಂದ ಲಾಭವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಡಿ 1.21 ಕೋಟಿ ಮನೆ ಯಜಮಾನಿಯರಿಗೆ ತಲಾ 2000 ರೂ.ನಂತೆ ಆಗಸ್ಟ್ ತಿಂಗಳಿನಿಂದ ಜಾರಿ ಮಾಡಲಾಯಿತು. ನಿರುದ್ಯೋಗಿ ಪದವೀಧರರಿಗೆ 2 ವರ್ಷಗಳವರೆಗೆ ತಿಂಗಳಿಗೆ 3000 ರೂ., ಡಿಪ್ಲೊಮಾ ಮಾಡಿದವರಿಗೆ ತಲಾ 2000 ರೂ. ನೀಡುವ ಯುವನಿಧಿ ಯೋಜನೆಯನ್ನು ವಿವೇಕಾನಂದ ಜನ್ಮದಿನಾಚರಣೆಯಂದು ಜಾರಿ ಮಾಡಲಾಯಿತು. ಈ ಅವಧಿಯಲ್ಲಿ ಬೇಡಿಕೆ ಯಿರುವ ತರಬೇತಿಯನ್ನು ಯುವಜನರಿಗೆ ನೀಡಿ, ಅವರಿಗೆ ಉದ್ಯೋಗ ದೊರೆಯಲು ಶಕ್ತಿ ತುಂಬಲಾಗುವುದು. ಹಿಂದೆಯೂ ನಾವು ನೀಡಿದ ಭರವಸೆಗಳನ್ನು ಈಡೇರಿಸಿದ್ದೆವು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ 8 ತಿಂಗಳಲ್ಲಿ 5 ಗ್ಯಾರಂಟಿಗಳನ್ನು ತುಂಬಿ ಜನರಿಗೆ ವಿಶ್ವಾಸ ಬಂದಿದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದಿದ್ದೇವೆ ಎಂದರು.



**ಮೋದಿಯವರು 10 ವರ್ಷಗಳಿಂದ ಯಾವುದೇ ಸಾಧನೆಗಳನ್ನು ಮಾಡಿಲ್ಲ. 2014 ರಲ್ಲಿ ನೀಡಿರುವ ಯಾವುದೇ ಭರವಸೆಗಳನ್ನು ಈಡೇರಿಸಿಲ್ಲ. ಆದರೆ ಮೋದಿಯವರು ದ್ವೇಷದ ಭಾಷಣ ಮಾಡುತ್ತಿದ್ದಾರೆ. ಮತಗಳ ಕ್ರೋಢೀ ಕರಣ, ಧರ್ಮ ಕ್ರೋಢೀಕರಣ ಕೆಲಸ ಮಾಡುತ್ತಿದ್ದಾರೆ. ಆದ್ದರಿಂದ ರಾಹುಲ್ ಗಾಂಧಿಯವರು ದೇಶದ ಉದ್ದಗಲಕ್ಕೂ ಪಾದ ಯಾತ್ರೆ, ನ್ಯಾಯ ಯಾತ್ರೆ ಮಾಡಿದರು. ದೇಶ ವಿಭಜನೆ ಮಾಡಲು ಮೋದಿಯವರು ಮಾಡಿರುವ ಪ್ರಯತ್ನಗಳಿಂದ ಬೇಸತ್ತಿದ್ದ ಜನರ ಒಡೆದ ಮನಸ್ಸನ್ನು ಒಗ್ಗೂಡಿಸಲು ಯಾತ್ರೆ ಕೈಗೊಂಡು ಯಶಸ್ವಿಯಾದರು**

– ಸಿದ್ದರಾಮಯ್ಯ, ಮುಖ್ಯಮಂತ್ರಿ

**1.20 ಲಕ್ಷ ಕೋಟಿ ಇಟ್ಟಿದ್ದೆವೆ**

**ಬಿಜೆಪಿಯವರು ಮೊದಲು ನಮ್ಮ ಗ್ಯಾರಂಟಿಗಳನ್ನು ಆಡಿಕೊಂಡರು. ಬಳಿಕ ಗ್ಯಾರಂಟಿಗಳನ್ನು ಜಾರಿ ಮಾಡಿದರೆ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎನ್ನುವ ಸುಳ್ಳು ಹರಡಿದರು. ಅಭಿವೃದ್ಧಿ ಕೆಲಸಗಳು ನಿಲ್ಲುತ್ತವೆ, ಲೋಕಸಭಾ ಚುನಾವಣೆ ತನಕ ಮಾತ್ರ ನೀಡಿ, ನಂತರ ನಿಲ್ಲಿಸುತ್ತಾರೆ ಎಂಬ ಸುಳ್ಳುಗಳನ್ನು ಸೃಷ್ಟಿಸಿದ್ದಾರೆ. ಬಜೆಟ್ ನಲ್ಲಿ ಗ್ಯಾರಂಟಿಗಳಿಗೆ 52009 ಕೋಟಿ ರೂ. ಗನ್ನು ಇಟ್ಟಿದ್ದೇವೆ. ಅಭಿವೃದ್ಧಿ ಕೆಲಸಗಳಿಗೆ 68 ಸಾವಿರ ಕೋಟಿಗಳನ್ನೂ ಸೇರಿದಂತೆ 2024–25 ರಲ್ಲಿ ಒಟ್ಟು 1.20 ಲಕ್ಷ ಕೋಟಿ ಇಟ್ಟಿದ್ದೆವೆ ಎಂದು ವಿವರಿಸಿದರು.**

## ಎಂಥ ಸ್ಥಿತಿ ಬಂತಪ್ಪ ಎಂದು ಎಸ್ಐಟಿ ಸೆಲ್‌ನಲ್ಲಿ ಗಳಗಳನೆ ಅತ್ತ ಎಚ್.ಡಿ.ರೇವಣ್ಣ

• ಉದಯವಾಹಿನಿ, ಬೆಂಗಳೂರು



ಲೋಕಸಭಾ ಚುನಾವಣಾ ಕಾವಿಗಿಂತ ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಪ್ರಜ್ವಲ್ ರೇವಣ್ಣ ಅವರ ಪೆನ್ ಡ್ರೈನ್ ಪ್ರಕರಣ ರಾಜ್ಯದಲ್ಲಿ ಹೆಚ್ಚು ಚರ್ಚೆಯಲ್ಲಿದೆ. ಇತ್ತ ಲೈಂಗಿಕ ದೌರ್ಜನ್ಯ ಪ್ರಕರಣದ ಸಂತ್ರಸ್ತೆಯನ್ನು ಅಪಹರಿಸಿದ ಪ್ರಕರಣದಲ್ಲಿ ಮೊದಲ ಆರೋಪಿಯಾಗಿರುವ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಪುತ್ರ, ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರನ್ನು ಎಸ್ ಐಟಿ ವಶಕ್ಕೆ ಪಡೆದಿದ್ದಾರೆ.

ಹೌದು, ಮಾಜಿ ಸಚಿವ ಎಚ್ ಡಿ ರೇವಣ್ಣ ಅವರನ್ನ ಶನಿವಾರ ಎಸ್ ಐ ಟಿ ಅಧಿಕಾರಿಗಳು ಬಂಧಿಸಿದ್ದು, ರೇವಣ್ಣ ಅವರನ್ನ ಎಸ್ಐಟಿ ಅಧಿಕಾರಿಗಳು ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆ ಮಾಡಿಸಿದ್ದಾರೆ. ಬಳಿಕ ಎಚ್.ಡಿ.ರೇವಣ್ಣ ಅವರನ್ನು ಅಧಿಕಾರಿಗಳು ಸಿಐಡಿ ಕಚೇರಿಗೆ ಕರೆದುಕೊಂಡು ಹೋಗಿದ್ದು, ಇಡೀ ರಾತ್ರಿ ಎಸ್ಐಟಿ ಸೆಲ್‌ನಲ್ಲಿಯೇ ಮಾಜಿ ಸಚಿವ ಎಚ್ ಡಿ ರೇವಣ್ಣ ಅವರು ಕಳೆಯಲಿದ್ದಾರೆ. ಮಗ ವಿದೇಶಕ್ಕೆ ಪರಾರಿಯಾಗಿದ್ದು, ಎಂಥ ಸ್ಥಿತಿ ಬಂತಪ್ಪ ಎಂದು ಎಸ್ಐಟಿ ಸೆಲ್‌ನಲ್ಲಿ ಎಚ್.ಡಿ.ರೇವಣ್ಣ ಅವರು ಗಳಗಳನೆ ಅತ್ತಿದ್ದಾರೆ ಎಂದು ತಿಳಿದುಬಂದಿದೆ.

ಇನ್ನೂ ಶನಿವಾರ ಬಂಧನಕ್ಕೊಳಗಾದ ಎಚ್.ಡಿ.ರೇವಣ್ಣ ಅವರು ಮಲಗಲು ಹಾಸಿಗೆ ಹಾಗೂ ಬೆಡ್‌ಶೀಟ್ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ತಿಳಿದುಬಂದಿದೆ. ಎಚ್.ಡಿ.ರೇವಣ್ಣ ಅವರನ್ನು ವಿಚಾರಣೆ ಮಾಡಲಿರುವ ಅಧಿಕಾರಿಗಳು, ಬಳಿಕ ವಿಶ್ರಾಂತಿಗೆ ಅವಕಾಶ ನೀಡಲಿದ್ದಾರೆ. ಸೆಲ್‌ನಲ್ಲಿ ರೇವಣ್ಣ ಅವರಿಗೆ ಒಂದು ಸಾಮಾನ್ಯ ಬೆಡ್ ಹಾಗೂ ಕುರ್ಚಿ ನೀಡಲಾಗಿದ್ದು, ಇದೆಲ್ಲವನ್ನೂ ಕಂಡ ಮಾಜಿ ಸಚಿವ ಹೆಚ್ ಡಿ ರೇವಣ್ಣ ಅವರು ಕಣ್ಣೀರು ಹಾಕಿದ್ದಾರೆ.

## ಕೋಮು ದ್ವೇಷಕ್ಕೆ ಪ್ರಚೋದನೆ ನಡ್ಡಾ ವಿರುದ್ಧ ದೂರು

• ಉದಯವಾಹಿನಿ, ಬೆಂಗಳೂರು

ನಿರ್ದಿಷ್ಟ ಅಭ್ಯರ್ಥಿಗೆ ಮತ ಹಾಕದಂತೆ ಎಸ್ಸಿ ಮತ್ತು ಎಸ್ಟಿ ಸಮುದಾಯದ ಸದಸ್ಯರನ್ನು ಬೆದರಿಸುವ ವೀಡಿಯೊವನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡುವ ಮೂಲಕ ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘಿಸಿದ ಆರೋಪದ ಮೇಲೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಮತ್ತು ಇತರ ಹಿರಿಯ ನಾಯಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಭಾನುವಾರ ಚುನಾವಣಾ ಆಯೋಗವನ್ನು ಕೋರಿದೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಅವರ ಸೂಚನೆಯ ಮೇರೆಗೆ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವೀಯ ನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಭಾರತೀಯ ಜನತಾ ಪಕ್ಷದ @bjp4karnataka ಅಧಿಕೃತ ಖಾತೆಯಿಂದ ಮೇ 4 ರಂದು ಸಂಜೆ 5.34 ಕ್ಕೆ ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಅಪ್ಲೋಡ್ ಮಾಡಿದ ವೀಡಿಯೊವನ್ನು ಕಾಂಗ್ರೆಸ್ ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿಗೆ ನೀಡಿದ ದೂರಿನಲ್ಲಿ ಉಲ್ಲೇಖಿಸಿದೆ.ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಲಾದ ಈ ವೀಡಿಯೋದಲ್ಲಿ ರಾಹುಲ್ ಗಾಂಧಿ, ಸಿದ್ದರಾಮಯ್ಯ ಅವರ ಅನಿಮೇಟೆಡ್ ಪಾತ್ರಗಳಿವೆ.



ಕ್ಲಿಪ್ನಲ್ಲಿ, ಎಸ್ಸಿ, ಎಸ್ಟಿ ಮತ್ತು ಒಬಿಸಿ ಸಮುದಾಯವನ್ನು ಗೂಡಿನಲ್ಲಿ ಮೊಟ್ಟೆಗಳು ಎಂದು ಚಿತ್ರಿಸಲಾಗಿದೆ ಮತ್ತು ರಾಹುಲ್ ಗಾಂಧಿ ಮುಸ್ಲಿಂ ಸಮುದಾಯ ಎಂದು ಲೇಬಲ್ ಮಾಡಿದ ದೊಡ್ಡ ಮೊಟ್ಟೆಯನ್ನು ನೆಡುವಂತೆ ಅದು ಸೂಚಿಸಿದೆ.

**ಕಡಿತಗೊಳಿಸಲಾಗುವುದು ಎಂದು ಉಲ್ಲೇಖಿಸಿಲ್ಲ**

**ಮುಸ್ಲಿಂ ಸಮುದಾಯವನ್ನು ಚಿತ್ರಿಸುವರಿಗೆ ಹಣವನ್ನು ನೀಡಲಾಗುತ್ತಿದೆ ಎಂದು ಬಿಂಬಿಸಲಾಗಿದೆ, ನಂತರ ಅದು ಎಸ್ಸಿ, ಎಸ್ಟಿ ಮತ್ತು ಒಬಿಸಿ ಸಮುದಾಯವನ್ನು ಹೊರಹಾಕುತ್ತದೆ ಎಂದು ಅವರು ಹೇಳಿದರು. ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಎಲ್ಲಿಯೂ ಎಸ್ಸಿ, ಎಸ್ಟಿ ಮತ್ತು ಒಬಿಸಿ ಸಮುದಾಯಕ್ಕೆ ಅನುದಾನ ಹಂಚಿಕೆಯನ್ನು ಕಡಿತಗೊಳಿಸಲಾಗುವುದು ಎಂದು ಉಲ್ಲೇಖಿಸಿಲ್ಲ ಎಂದು ಪತ್ರದಲ್ಲಿ ತಿಳಿಸಲಾಗಿದೆ**


## ರೇವಣ್ಣ ಬಂಧನ: ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ

• ಉದಯವಾಹಿನಿ, ಬೆಂಗಳೂರು

ಮಹಿಳೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರನ್ನು ಬಂಧಿಸಲಾಗಿದೆ. ಈ ಸಂಬಂಧ ಕಾಂಗ್ರೆಸ್, ಮಹಿಳೆಯರನ್ನು ಕಾಡಿಸಿ, ಪೀಡಿಸಿ, ಅಪಹರಿಸಿದ್ದರಲ್ಲಿ ಪ್ರಮುಖ ಆರೋಪಿ ಎಂದು ಹೇಳಿದೆ.

**ಕಾಂಗ್ರೆಸ್ ಎಕ್ಸ್‌ನಲ್ಲೇನಿದೆ:** ಮೋದಿಯವರ ಪ್ರಜ್ವಲ ಗ್ಯಾರಂಟಿಯಡಿಯಲ್ಲಿ ಮೊದಲ ಬಂಧನ ಆಗಿದೆ. ಈ ಬಂಧನ ಜನುಮ ಜನುಮದ ಅನುಬಂಧನ ಮಹಿಳಾ ಪೀಡಕರು, ಮಹಿಳಾ ಅಪಹರಣಕಾರರು, ಅತ್ಯಾಚಾರಿಗಳನ್ನು ಕಂಡರೇ ಮೋದಿಗೆ ಎಲ್ಲಿಲ್ಲದ ಪ್ರೀತಿ. ಬಿಜೆಪಿ ಬೆಂಬಲಿತ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಜೊತೆಗೆ ಎನ್‌ಡಿಎ ಮೈತ್ರಿಕೂಟದ ಸ್ಟಾರ್ ಪ್ರಚಾರಕ ರೇವಣ್ಣ ಅವರೂ ಮಹಿಳೆಯರನ್ನು ಕಾಡಿಸಿ, ಪೀಡಿಸಿ, ಅಪಹರಿಸಿದವರಲ್ಲಿ ಪ್ರಮುಖ ಆರೋಪಿ. ಮಹಿಳಾ ಪೀಡಕ ಆರೋಪಿಯ ಕೈಯನ್ನು ಗಟ್ಟಿಯಾಗಿ ಹಿಡಿದಿರುವ ಮೋದಿಯವರು ದೇಶಕ್ಕೆ ಯಾವ ಸಂದೇಶ ಕೊಡಲು ಹೊರಟಿದ್ರು ಎಂದು ಕಾಂಗ್ರೆಸ್ ಪ್ರಶ್ನಿಸಿದೆ.


**ನಮ್ಮ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ**



**ಬಂಧನದ ಬೆನ್ನಲ್ಲೇ ಎಕ್ಸ್ ಮಾಡಿ, ಮಹಿಳೆಯರ ಮಾನ ಪ್ರಾಣ ಘನತೆ ಎತ್ತಿ ಹಿಡಿಯುವಲ್ಲಿ ನಮ್ಮ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ. ಹೆಚ್‌ಡಿ ರೇವಣ್ಣರನ್ನು ಬಂಧಿಸಿದ ಎಸ್‌ಐಟಿ ತಂಡ ಮಹಿಳಾ ಪೀಡನೆಯ ವಿಕೃತ ಪ್ರಕರಣವನ್ನು ನಿಷ್ಪಕ್ಷಪಾತವಾಗಿ ತನಿಖೆ ನಡೆಸಲಿದೆ. ಮಹಿಳೆಯರ ರಕ್ಷಣೆಗೆ ನಮ್ಮ ಸರ್ಕಾರದ ಬದ್ಧತೆ ಅಚಲವಾಗಿರುತ್ತದೆ ಎಂದು ಕಾಂಗ್ರೆಸ್ ತಿಳಿಸಿದೆ.**

## 2019ರಲ್ಲಿ ಸಿದ್ದರಾಮಯ್ಯ ಪ್ರಜ್ವಲ್ ರೇವಣ್ಣರನ್ನು ಪಕ್ಕದಲ್ಲಿ ಕೂರಿಸಿಕೊಂಡು ಪ್ರಚಾರ ಮಾಡಿದ್ದರು: ಆರ್.ಅಶೋಕ್

• ಉದಯವಾಹಿನಿ, ಬೆಂಗಳೂರು



ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಸದ ಪ್ರಜ್ವಲ್ ರೇವಣ್ಣರನ್ನು ಎಸ್‌ಐಟಿ ವಶಪಡಿಸಿಕೊಳ್ಳಲು ಸಿದ್ಧತೆ ಮಾಡಿಕೊಂಡಿದೆ.

ಈ ಮಧ್ಯ ಬೆಂಗಳೂರಿನಲ್ಲಿ ಆರ್ ಅಶೋಕ್ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದು 2019ರ ವಿಧಾನಸಭಾ ಚುನಾವಣೆಯಲ್ಲಿ ಪ್ರಜ್ವಲ್ ರೇವಣ್ಣರನ್ನು ಪಕ್ಕದಲ್ಲಿ ಕೂರಿಸಿಕೊಂಡು ಪ್ರಚಾರ ಮಾಡಿದರು ಎಂದು ಆರೋಪಿಸಿದರು. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣರನ್ನು ಪಕ್ಕದಲ್ಲಿ ಕೂರಿಸಿಕೊಂಡು ಪ್ರಚಾರ ಮಾಡಿದ್ದರು. ಕಡೂರಿನ ಎಪಿಎಂಸಿ ಮೈದಾನದಲ್ಲಿ ಸಿದ್ದರಾಮಯ್ಯ ಪ್ರಚಾರ ಮಾಡಿದ್ದರು. ಪ್ರಜ್ವಲ್ ಯುವಕ ಓಡಾಡ್ತಾರೆ ಕೆಲಸ ಮಾಡುತ್ತಾರೆ ಎಂದು ಹೇಳಿದ್ದರು.

2019ರ ಏಪ್ರಿಲ್ 14ರಂದು ಪ್ರಜ್ವಲ್ ಹಾಡಿ ಹೊಗಳಿ ಟ್ವೀಟ್ ಮಾಡಿದ್ದರು. ಮೈತ್ರಿ ಕೈ ಬಲಪಡಿಸಿ ಎಂದು ಸಿದ್ದರಾಮಯ್ಯ ಅವರು ಟ್ವೀಟ್ ಮಾಡಿದ್ದರು ಎಂದು ಬೆಂಗಳೂರುನಲ್ಲಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹೇಳಿಕೆ ನೀಡಿದರು. ಮಹಿಳೆ ಕಿಡ್ನ್ಯಾಪ್ ಕೇಸ್‌ನಲ್ಲಿ ಎಚ್.ಡಿ. ರೇವಣ್ಣ ಬಂಧನ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಮಾಜಿ ಸಚಿವ ಎಚ್. ಡಿ. ರೇವಣ್ಣ ರನ್ನು ಬಂಧಿಸಿದ್ದು ಸರಿಯಾಗಿದೆ ಎಂದು ಬೆಂಗಳೂರಿನಲ್ಲಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹೇಳಿಕೆ ನೀಡಿದ್ದು, ಪೊಲೀಸರ ಕಾರ್ಯಕ್ಕೆ ನಾನು ಸ್ವಾಗಿಸುತ್ತೇನೆ ಬಂಧಿತ ಎಚ್ಡಿ ರೇವಣ್ಣ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

## ಎಸ್‌ಐಟಿ ತಂಡಕ್ಕೆ ಮಾಹಿತಿ ಇರಬಹುದು

• ಉದಯವಾಹಿನಿ, ಬೆಂಗಳೂರು




ಎಸ್‌ಐಟಿ ಅವರು ಕಾನೂನು ಪ್ರಕಾರ ಕ್ರಮ ಕೈಗೊಳ್ಳುತ್ತಾರೆ. ಅವರು ಏನು ಮಾಡಲಿದ್ದಾರೆ ಎಂದು ನಾನು ಹೇಳಲು ಆಗಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದರು.

ಸದಾಶಿವನಗರ ತಮ್ಮ ನಿವಾಸದಲ್ಲಿಂದು ಮಾತನಾಡಿದ ಅವರು, ಪ್ರಕರಣ ಸಂಬಂಧ ದ್ವೇಷ ರಾಜಕಾರಣ ಮಾಡಲಾಗುತ್ತಿದೆ ಎಂಬ ಹೆಚ್‌ಡಿಕೆ ಆರೋಪಕ್ಕೆ ಪ್ರತಿಕ್ರಿಯಿಸುತ್ತಾ, ಅವರಿಗೆ ಬೇಸರವಾಗಿದೆ. ಹಾಗಾಗಿ ಹಾಗೆ ಹೇಳುತ್ತಾರೆ. ಆದರೆ ಎಸ್‌ಐಟಿ ಕಾನೂನಿನಂತೆ ಕ್ರಮ ಕೈಗೊಂಡಿದೆ. ಎಸ್‌ಐಟಿಯವರು ಒಂದು ವೇಳೆ ಕಾನೂನು ವಿರುದ್ಧವಾಗಿ ಹೋದರೆ ಅವರ ಮೇಲೂ ಆಪಾದನೆ ಬರುತ್ತದೆ. ಹಾಗಾಗಿ ಅವರು ಎಲ್ಲಾ ಎಚ್ಚರಿಕೆ ವಹಿಸುತ್ತಿದ್ದಾರೆ. ಕಾನೂನಿನ ಚೌಕಟ್ಟಿನಲ್ಲೇ ಕೆಲಸ ಮಾಡಬೇಕು ಎಂದು ನಾವೂ ಸೂಚನೆ ನೀಡಿದ್ದೇವೆ ಎಂದರು.ಎಸ್‌ಐಟಿ ಅವರು ಕಾನೂನು ಪ್ರಕಾರ ಕ್ರಮ ಕೈಗೊಳ್ಳುತ್ತಾರೆ. ಅವರು ಏನು ಮಾಡಲಿದ್ದಾರೆ ಎಂದು ನಾನು ಹೇಳಲು ಆಗಲ್ಲ. ಸಿಡಿ ಬಿಡುಗಡೆ ಯಾರು ಮಾಡಿದ್ದಾರೆ ಎಂಬ ಬಗ್ಗೆ ಎಸ್‌ಐಟಿ ಯವರೇ ಪರಿಶೀಲನೆ ನಡೆಸುತ್ತಾರೆ ಎಂದರು.


ಕಾರು ಚಾಲಕ ಕಾರ್ತಿಕ್ ಎಲ್ಲಿದ್ದಾರೆ ಎಂಬುದು ಎಸ್‌ಐಟಿಯವರಿಗೆ ಮಾತ್ರ ಗೊತ್ತಿರುತ್ತೆ ಎಂದು ತಿಳಿಸಿದರು.

## ಎಸ್‌ಸಿ,ಎಸ್‌ಟಿ ಕೋಟಾ ಕೂಡ ಮುಸ್ಲಿಮರಿಗೆ ಬಿಜೆಪಿ ಜಾಹಿರಾತು ವಿರುದ್ಧ ದೂರು

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯ 3ನೇ ಹಂತದ ಮತದಾನಕ್ಕೆ ಕ್ಷಣಗಣನೆ ಆರಂಭವಾಗಿರುವಂತೆಯೇ ಇತ್ತ ಕಾಂಗ್ರೆಸ್ ನ ಓಲೈಕೆ ರಾಜಕಾರಣದ ಕುರಿತು ಬಿಜೆಪಿ ಮಾಡಿದ್ದ ಜಾಹಿರಾತೊಂದು ಕೈ ನಾಯಕರ ಆಕ್ರೋಶಕ್ಕೆ ಕಾರಣವಾಗಿದ್ದು, ಇದೀಗ ಚುನಾವಣಾ ಆಯೋಗಕ್ಕೂ ಇದರ ವಿರುದ್ಧ ದೂರು ನೀಡಲಾಗಿದೆ.

ಹೌದು.. ಮೀಸಲಾತಿ ವಿಚಾರದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯದವರಲ್ಲಿ ಭೀತಿ ಹುಟ್ಟಿಸುವಂತ ಜಾಹಿರಾತು ವಿಡಿಯೊ ಪೋಸ್ಟ್ ಮಾಡಲಾಗಿದೆ ಎಂದು ಆರೋಪಿಸಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಐಟಿ ಮುಖ್ಯಸ್ಥ ಅಮಿತ್ ಮಾಳವಿಯಾ ಮತ್ತು ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ದೂರು ಕಾಂಗ್ರೆಸ್ ದಾಖಲಿಸಿದೆ. ಕೆಪಿಸಿಸಿ ಮಾಧ್ಯಮ, ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ಅವರು ಸಲ್ಲಿಸಿದ ದೂರಿನಲ್ಲಿ, ಕರ್ನಾಟಕ ಬಿಜೆಪಿಯ ಅಧಿಕೃತ ಸಾಮಾಜಿಕ ಜಾಲತಾಣದ ಖಾತೆಗಳಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರ ಅನಿಮೇಟೆಡ್ ಪಾತ್ರಗಳನ್ನು ಚಿತ್ರಿಸುವ ವಿಡಿಯೊ ಇರುವುದನ್ನು ಉಲ್ಲೇಖಿಸಲಾಗಿದೆ.




ಇಂತಹ ವಿಡಿಯೊಗಳು ಸಮುದಾಯಗಳ ನಡುವೆ ದ್ವೇಷ ಹುಟ್ಟು ಹಾಕುವ ಸಾಧ್ಯತೆ ಇದೆ. 14 ಕ್ಷೇತ್ರಗಳಲ್ಲಿ ನಡೆಯುತ್ತಿರುವ ಮತದಾನದ ಸಂದರ್ಭದಲ್ಲಿ ಇದು ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

**ಈ ವಿಡಿಯೊದಲ್ಲಿ ಮುಸ್ಲಿಂ ಸಮುದಾಯದವರಿಗೆ ಹೆಚ್ಚಿನ ಹಣವನ್ನು ನೀಡುವಂತೆ ಮತ್ತು ಮುಸ್ಲಿಂ ಸಮುದಾಯವು ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಸಮುದಾಯವನ್ನು ಹೊರ ಹಾಕುವಂತೆ ಬಿಂಬಿಸಲಾಗಿದೆ ಎಂದು ರಮೇಶ್ ಬಾಬು ಆರೋಪಿಸಿದ್ದು, ಇದು ಮಾದರಿ ನೀತಿ ಸಂಹಿತೆಯ ಉಲ್ಲಂಘನೆ ಮಾತ್ರವಲ್ಲ 1989ರ ಎಸ್‌ಸಿ, ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯಡಿ ಅಪರಾಧವೂ ಹೌದು ಎಂದು ಹೇಳಿದ್ದಾರೆ.**

# ಜನರಲ್ಲಿ ಎಚ್‌ಎಸ್‌ಆರ್‌ಪಿ ಪ್ಲೇಟ್ ಅಳವಡಿಕೆ ಬಗ್ಗೆ ನಿರಾಸಕ್ತಿ

• ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಹಾಕಿಸಲು ಕೊನೆ ದಿನ ಹತ್ತಿರ ಬಂದರೂ ಜನರಿಗಿಲ್ಲ ಆಸಕ್ತಿ

• ಉದಯವಾಹಿನಿ, ಬೆಂಗಳೂರು




**35.5 ಲಕ್ಷ ವಾಹನಗಳು ಮಾತ್ರ**

ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ ಪ್ಲೇಟ್ (ಎಚ್‌ಎಸ್‌ಆರ್‌ಪಿ) ಅಳವಡಿಕೆಗೆ ಗಡುವು ಸಮೀಪಿಸುತ್ತಿದ್ದರೂ, 2 ಕೋಟಿ ವಾಹನಗಳಲ್ಲಿ ಇಲ್ಲಿಯವರೆಗೆ ಕೇವಲ 35.5 ಲಕ್ಷ ವಾಹನಗಳು ಮಾತ್ರ ನಂಬರ್ ಪ್ಲೇಟ್‌ಗಳನ್ನು ಅಳವಡಿಸಿವೆ. ಇದು ಜನರಲ್ಲಿ ಎಚ್‌ಎಸ್‌ಆರ್‌ಪಿ ಪ್ಲೇಟ್ ಅಳವಡಿಕೆ ಬಗ್ಗೆ ಜನರಿ ಗಿರುವ ನಿರಾಸಕ್ತಿಯನ್ನು ಎತ್ತಿ ತೋರಿಸಿದೆ. ಕಳೆದ ವರ್ಷ ಆಗಸ್ಟ್‌ನಲ್ಲಿ ಹೊರಡಿಸಲಾದ ಸರ್ಕಾರದ ಅಧಿಸೂಚನೆಯ ಪ್ರಕಾರ, ಏಪ್ರಿಲ್ 1, 2019ರ ಮೊದಲು ಕರ್ನಾಟಕದಲ್ಲಿ ನೋಂದಾಯಿಸಲಾದ ಸರಿಸುಮಾರು ಎರಡು ಕೋಟಿ ವಾಹನಗಳಿಗೆ ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸುವುದನ್ನು ರಾಜ್ಯ ಸರ್ಕಾರ ಕಡಾಯಗೊಳಿಸಿದೆ.

ಆರಂಭದಲ್ಲಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸಲು ನವೆಂಬರ್ 17, 2023 ಆಗಿತ್ತು, ವಾಹನ ಮಾಲೀಕರಿಂದ ಕಳಪೆ ಪ್ರತಿಕ್ರಿಯೆಯಿಂದಾಗಿ ಈ ವರ್ಷ ಫೆಬ್ರವರಿ 17 ರವರೆಗೆ ಗಡುವನ್ನು ವಿಸ್ತರಿಸಲಾಯಿತು. ಆಗಲು ವಾಹನ ಮಾಲೀಕರಿಂದ ಉತ್ತಮ ಪ್ರತಿಕ್ರಿಯೆ ಬರದ ಕಾರಣ ಈ ವರ್ಷದ ಫೆಬ್ರವರಿಯಲ್ಲಿ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಗಡುವಿನ ಮೇಲೆ ಮತ್ತೊಂದು ಮೂರು ತಿಂಗಳ ವಿಸ್ತರಣೆಯನ್ನು ಘೋಷಿಸಿ, ಮೇ 31 ಕ್ಕೆ ಹೊಸ ಗಡುವು ನೀಡಿದ್ದಾರೆ.

ಏಕೆಂದರೆ ವಾಹನ ಮಾಲೀಕರಿಗೆ ನೀಡಲಾದ ಗಡುವಿನಲ್ಲಿ ಸುಮಾರು 18 ಲಕ್ಷ ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಮಾತ್ರ ಹಾಕಿಸಲಾಗಿತ್ತು.

**ಸದ್ಯಕ್ಕೆ ವಾಹನ ಮಾಲೀಕರು ತಮ್ಮ ವಾಹನಗಳಿಗೆ ಎಚ್‌ಎಸ್‌ಆರ್‌ಪಿ ಅಳವಡಿಸಲು ಮೇ 31ರೊಳಗೆ ನೋಂದಣಿ ಮಾಡದಿದ್ದರೆ ಅಂತಹವರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಸಾರಿಗೆ ಇಲಾಖೆ ಖಚಿತ ಪಡಿಸಿದೆ. ಮೊದಲ ಬಾರಿಗೆ ಸಿಕ್ಕಿಬಿದ್ದರೆ 500 ರೂಪಾಯಿ ದಂಡ ವಿಧಿಸಲಾಗುತ್ತಿದ್ದು, ಎಚ್‌ಎಸ್‌ಆರ್‌ಪಿ ಇಲ್ಲದೆ ಮತ್ತೊಮ್ಮೆ ಸಿಕ್ಕಿಬಿದ್ದರೆ 1000 ರೂಪಾಯಿಗೆ ಏರಿಕೆಯಾಗಲಿದೆ**

–ಸಿ.ಮಲ್ಲಿಕಾರ್ಜುನ, ಆಯುಕ್ತ

**ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸದ ಮಾಲೀಕರಿಗೆ ದಂಡ ವಿಧಿಸುವುದರ ಜೊತೆಗೆ ಯಾವ ಕ್ರಮ ತೆಗೆದುಕೊಳ್ಳಬೇಕು ಎಂಬುದನ್ನು ನಾವು ಪರಿಶೀಲಿಸಬೇಕಾಗಿದೆ. ಸರ್ಕಾರದ ನಿರ್ದೇಶನದ ಆಧಾರದ ಮೇಲೆ ಇದನ್ನು ಜಾರಿ ಮಾಡಲು ಸಾರಿಗೆ ಇಲಾಖೆಯು ವಿಶೇಷ ಡ್ರೈವ್‌ಗಳನ್ನು ಸಹ ನಡೆಸಲಿದೆ ಎಂದು ಮಾಹಿತಿ ನೀಡಿದ್ದಾರೆ.**

ಹೀಗಾಗಿ ವಾಹನ ಮಾಲೀಕರಿಗೆ ಮತ್ತೊಂದು ಅವಕಾಶ ನೀಡಲು ಅಧಿಕಾರಿಗಳಿಗೆ ವಿಸ್ತರಣೆ ಮಾಡುವಂತೆ ಸೂಚಿಸಲಾಯಿತು. ಆದರೆ, ಮೇ ವೇಳೆಗೆ, 2 ಕೋಟಿ ವಾಹನಗಳಲ್ಲಿ ಕೇವಲ 35.5 ಲಕ್ಷ ಜನರು ಮಾತ್ರ, ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸಿಕೊಂಡಿದ್ದಾರೆ.

ಈ ತಿಂಗಳಲ್ಲಿಯೂ ಕೂಡ ಲಕ್ಷಾಂತರ ಮಂದಿ ನೊಂದಣಿ ಮಾಡಿಸಬೇಕಾದ ಕಾರಣ ಎಚ್‌ಎಸ್‌ಆರ್‌ಪಿ ಗಡುವು ವಿಸ್ತರಣೆಯಾಗಲಿದೆ ಎನ್ನಲಾಗುತ್ತಿದೆ. ಆದರೆ, ಸಾರಿಗೆ ಇಲಾಖೆ ಈ ಬಗ್ಗೆ ಇನ್ನು ಮಾಹಿತಿ ನೀಡಿದ್ದ. ವಿಸ್ತರಣೆಯ ಸಾಧ್ಯತೆಯನ್ನು ನಿರಾಕರಿಸುವುದಿಲ್ಲ. ಮುಂದಿನ ನಿರ್ಧಾರಗಳ ಬಗ್ಗೆ ಮೇ ತಿಂಗಳ ಕೊನೆಯ ವಾರದೊಳಗೆ ಸರ್ಕಾರದೊಂದಿಗೆ ಸಭೆ ನಡೆಸಲಾಗುವುದು ಎಂದು ಸಾರಿಗೆ ಹೆಚ್ಚುವರಿ ಆಯುಕ್ತ (ಜಾರಿ) ಸಿ. ಮಲ್ಲಿಕಾರ್ಜುನ ತಿಳಿಸಿದ್ದಾರೆ. ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವ ಡಿಸಲು, ನೋಂದಾಯಿಸಲು, https://transport.karnataka.gov.in/, www.siam.inಗೆ ಭೇಟಿ ನೀಡಿ ಮತ್ತು 'Book HSRP' ಆಯ್ಕೆ ಮಾಡಬೇಕು. ಜೋಡಣೆಗಾಗಿ ಸ್ಲಾಟ್ ಅನ್ನು ಬುಕ್ ಮಾಡಲು ನಿಮ್ಮ ವಿವರಗಳನ್ನು ಭರ್ತಿ ಮಾಡಿ ಮತ್ತು ಆನ್‌ಲೈನ್‌ನಲ್ಲಿ ಹಣ ಪಾವತಿ ಮಾಡಿ ನಿಮ್ಮ ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಪಡೆಯಬಹುದು.

# ವಿಷಪೂರಿತ ಬರ್ತ್ ಡೇ ಕೇಕ್ ಮಾರಾಟ: ಮಕ್ಕಳ ಅಸ್ವಸ್ಥತೆ

## ವಿಷ ಪೂರಿತ ಬರ್ತ್‌ಡೇ ಕೇಕ್ ಮಾರಾಟ ಮಾಡಿ ಮಕ್ಕಳ ಅಸ್ವಸ್ಥತೆಗೆ ಕಾರಣವಾಗಿರುವ ಕೇಕ್ ಪಾಯಿಂಟ್ ಬೇಕರಿ ಮಾಲೀಕರ ವಿರುದ್ಧ ದೂರು

• ಉದಯವಾಹಿನಿ ಬಾಗೇಪಲ್ಲಿ

• ಬಿ. ಎಸ್. ಅಬ್ದುಲ್ ಅಜೀಜ್ ವಸೀಮ್

ಬೂಜು ಹಿಡಿದು ಫಂಗಸ್‌ಗೆ ಗುರಿಯಾಗಿರುವ ವಿಷ ಪೂರಿತ ಬರ್ತ್ಡೇ ಕೇಕ್ ಮಾರಾಟ ಮಾಡಿ ಮಕ್ಕಳ ಅಸ್ವಸ್ಥತೆಗೆ ಕಾರಣವಾಗಿರುವ ಕೇಕ್ ಪಾಯಿಂಟ್ ಬೇಕರಿ ಮಾಲೀಕರ ವಿರುದ್ಧ ತಾಲ್ಲೂಕು ಆರೋಗ್ಯ ಅಧಿಕಾರಿಗಳಿಗೆ ದೂರು ಕೊಟ್ಟು ಕಾನೂನು ಕ್ರಮ ಜರುಗಿಸುವಂತೆ ಒತ್ತಾಯಿಸಿರುವ ಘಟನೆ ಬಾಗೇಪಲ್ಲಿ ಪಟ್ಟಣದಲ್ಲಿ ನಡೆದಿದೆ.



ಕ್ರಮ ಜರುಗಿಸುವಂತೆ ಒತ್ತಾಯ

ಉದಯವಾಹಿನಿ ಚಿತ್ರ

ಬಾಗೇಪಲ್ಲಿ ಪಟ್ಟಣದ ಗೂಳೂರು ಸರ್ಕಲ್‌ನಲ್ಲಿರುವ ಕೇಕ್ ಪಾಯಿಂಟ್ ಬೇಕರಿ ಮಾಲೀಕರು ಬೂಜು ಹಿಡಿದು ಫಂಗಸ್‌ಗೆ ಗುರಿಯಾಗಿರುವ ಅವಧಿ ಮುಗಿದ ವಿಷಪೂರಿತ ಕೇಕ್‌ಗಳನ್ನು ಗ್ರಾಹಕರಿಗೆ ಮಾರಾಟ ಮಾಡಿ ಸಾರ್ವಜನಿಕರ ಆಕ್ರೋಶಕ್ಕೆ ಗುರಿಯಾಗಿದ್ದು, ಸಾರ್ವಜನಿಕರ ಮನವಿಯಂತೆ ಪುರಸಭೆ ಸದಸ್ಯ ಗಡ್ಡಂ ರಮೇಶ್ ಕೇಕ್ ಪಾಯಿಂಟ್ ಬೇಕರಿ ಮಾಲೀಕರ ವಿರುದ್ಧ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದು, ದೂರು ಸ್ವೀಕರಿಸಿರುವ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಸಿ.ಎನ್.ಸತ್ಯನಾರಾಯಣರೆಡ್ಡಿ ಪೊಲೀಸ್ ಬಂದೋಬಸ್ತ್ ಒಂದಿಗೆ ಧೀಡಿರ್ ಬೇಕರಿಗೆ ಬೇಟಿ ನೀಡಿ ಸ್ವಚ್ಚತೆ ಹಾಗೂ ತಿಂಡಿ ತಿನಿಸುಗಳಿಗೆ ಬಳಕೆ ಮಾಡುವ ಸಾಮಾಗ್ರಿಗಳ ಗುಣಮಟ್ಟ, ತೈಯಾರಿಸುವ ವಿಧಾನದ ಬಗ್ಗೆ ಪರಿಶೀಲಿಸಿ ಬೇಕರಿಯಲ್ಲಿ ಸ್ವಚ್ಚತೆ ಇಲ್ಲದ ಕಾರಣ ನೋಟಿಸ್ ನೀಡಿ, ಮಕ್ಕಳ ಅನಾರೋಗ್ಯಕ್ಕೆ ಕಾರಣವಾಗಿರುವ ಅವಧಿ ಮುಗಿದ ವಿಷಪೂರಿತ ಕೇಕ್‌ನ್ನು ಗುಣಮಟ್ಟದ ಖಾತ್ರಿಯ ಪರೀಕ್ಷೆಗಾಗಿ ಬೆಂಗಳೂರಿನ ಐಡಿಎಫ್‌ಎಟಿ ಎಂಬ ಖಾಸಗಿ ಪರೀಕ್ಷಾ ಕೇಂದ್ರಕ್ಕೆ ಕಳುಹಿಸಿರುತ್ತಾರೆ. ಪರೀಕ್ಷಾ ವರದಿ ಬಂದ ನಂತರ ಬೇಕರಿ ಮಾಲೀಕರ ವಿರುದ್ಧ ಕಾನೂನು ಕ್ರಮಕ್ಕೆ ಮುಂದಾಗಲಿದ್ದಾರೆ.

**ಘಟನೆ ವಿವರ:** ಬಾಗೇಪಲ್ಲಿ ತಾಲ್ಲೂಕಿನ ವಲಯ ಅರಣ್ಯ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಯೊಬ್ಬರ ಮಗುವಿನ ಬರ್ತ್ಡೇ ನಿಮಿತ್ತ ಬಾಗೇಪಲ್ಲಿಯ ಕೇಕ್ ಪಾಯಿಂಟ್ ಬೇಕರಿಯಲ್ಲಿ ಶುಕ್ರವಾರ ಕೇಕ್ ಖರೀಧಿಸಿ ಬರ್ತ್ಡೇ ಆಚರಿಸಿಕೊಂಡು ಕತ್ತರಿಸಿದ ಕೇಕ್‌ನ್ನು ಕಾರ್ಯಕ್ರಮಕ್ಕೆ ಆಗಮಿಸಿದ್ದ ಮಕ್ಕಳಿಗೆ ಹಂಚಿರುತ್ತಾರೆ.

ಕೇಕ್ ಸೇವಿಸಿ ಕೆಲವೇ ಕ್ಷಣಗಳಲ್ಲಿ ಕೆಲ ಮಕ್ಕಳ ಆರೋಗ್ಯದಲ್ಲಿ ಏರುಪೇರು ಕಂಡು ಬಂದು ಅಸ್ವಸ್ಥತೆಗೆ ಗುರಿಯಾದ ಮಕ್ಕಳನ್ನು ಬಾಗೇಪಲ್ಲಿಯ ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ವಿಷಪೂರಿತ ಆಹಾರ ಸೇವನೆಯೇ ಮಕ್ಕಳ ಅಸ್ವಸ್ಥತೆಗೆ ಕಾರಣ ಎಂದು ಚಿಕಿತ್ಸೆ ಕೊಟ್ಟ ವೈಧ್ಯರು ತಿಳಿಸುತ್ತಿದ್ದಂತೆ ಮಕ್ಕಳಿಗೆ ಹಂಚಿದ ಕೇಕ್‌ನ್ನು ತಕ್ಷಣವೇ ವಾಪಸ್ಸು ಪಡೆದು ಪರಿಶೀಲಿಸಿದಾಗ ಕೇಕ್ ಸಂಪೂರ್ಣ ಬೂಜು ಮಯವಾಗಿರುವ ಫಂಗಸ್‌ನಿಂದ ಕೂಡಿರುವುದು ಕಂಡು ಬಂದಿರುತ್ತದೆ. ತಕ್ಷಣ ಬೇಕರಿಗೆ ತೆರಳಿ ಕೆಟ್ಟುಹೋಗಿರುವ ಕೇಕ್‌ನ್ನು ತೋರಿಸಿ ಸಾರ್ವಜನಿಕವಾಗಿ ಮಕ್ಕಳ ಪಾಲಕರು ಬೇಕರಿ ಮಾಲೀಕರನ್ನು ತರಾಟೆಗೆ ತೆಗೆದುಕೊಂಡಿರುತ್ತಾರೆ.

> ವಿವಾಧಕ್ಕೆ ಕಾರಣವಾಗಿರುವ ಕೇಕ್ ಪಾಯಿಂಟ್ ಬೇಕರಿ 10 ವಾರ್ಡ್ನಲ್ಲಿದ್ದು, ವಾರ್ಡ್ ಸಂಚಾರದಲ್ಲಿದ್ದ ಸಮಯದಲ್ಲಿ ಬೇಕರಿಯಲ್ಲಿ ಗಲಾಟೆ ನಡೆಯುತ್ತಿದ್ದು ಬೂಜು ಹಿಡಿದಿರುವ ಕೇಕ್ ಮಾರಾಟ ಮಾಡಿರುವ ಬಗ್ಗೆ ನಾಗರೀಕರು ದೂರು ನೀಡಿದಾಗ ಕೇಕ್ ಸೇರಿದಂತೆ ಬೇಕರಿಯಲ್ಲಿರುವ ತಿಂಡಿ, ತಿನಿಸುಗಳ ಗುಣಮಟ್ಟವನ್ನು ಪರಿಶೀಲಿಸುವಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಬೇಕರಿ ಮಾಲೀಕರ ವಿರುದ್ಧ ದೂರು ಸಲ್ಲಿಸಿದ್ದೇನೆ.
>
> – ಗಡ್ಡಂ ರಮೇಶ್, ಪುರಸಭೆ ಸದಸ್ಯರು


> ಬಾಗೇಪಲ್ಲಿಯ ಗೂಳೂರು ವೃತ್ತದಲ್ಲಿರುವ ಕೇಕ್ ಪಾಯಿಂಟ್ ಬೇಕರಿನಲ್ಲಿ ಬೂಜುನಿಂದ ಕೂಡಿರುವ ಕೇಕ್ ಮಾರಾಟ ಮಾಡಿರುವ ಬಗ್ಗೆ ಪುರಸಭೆ ಸದಸ್ಯ ಗಡ್ಡಂ ರಮೇಶ್ ದೂರು ಸಲ್ಲಿಸಿದ್ದು, ದೂರಿನನ್ವಯ ಬೇಕರಿಗೆ ಬೇಟಿ ನೀಡಿ ಪರಿಶೀಲಿಸಿ ಬೂಜುನಿಂದ ಫಂಗಸ್ ಮಯವಾಗಿರುವ ಕೇಕ್‌ನ್ನು ಸಂಗ್ರಹಿಸಿ ಲ್ಯಾಬ್‌ಗೆ ಕಳುಹಿಸಿ, ಮಾಲೀಕರಿಗೆ ಘಟನೆಗೆ ಕಾರಣ ಕೇಳಿ ಬೇಕರಿ ಮಾಲೀಕರಿಗೆ ನೋಟಿಸ್ ನೀಡಿದ್ದೇವೆ. ಲ್ಯಾಬ್‌ನ ವರದಿ ಬಂದ ನಂತರ ಮುಂದಿನ ಕ್ರಮ ಜರುಗಿಸುತ್ತೇವೆ
>
> – ಡಾ.ಸಿಎನ್.ಸತ್ಯನಾರಾಯಣರೆಡ್ಡಿ, ಟಿಹೆಚ್‌ಓ

## ಸೇವಂತಿಗೆ ಹೂವಿನ ತೋಟಕ್ಕೆ ದುಷ್ಕರ್ಮಿಗಳಿಂದ ಬೆಂಕಿ

• ಉದಯವಾಹಿನಿ, ಶಿಡ್ಲಘಟ್ಟ

ದುಷ್ಕರ್ಮಿಗಳ ದುಷ್ಕೃತ್ಯದಿಂದ ಸೇವಂತಿಗೆ ಹೂವಿನತೋಟಕ್ಕೆ ಬೆಂಕಿ ಬಿದ್ದು, ಬೆಳೆ ಹಾನಿಯಾಗಿದ್ದು ಇದರಿಂದ ರೈತನಿಗೆ ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ.

ತಾಲ್ಲೂಕಿನ ಕನ್ನಪ್ಪನಹಳ್ಳಿ ಗ್ರಾಮದ ರೈತ ವೆಂಕಟೇಶಪ್ಪ ಎಂಬುವವರು ಒಂದು ಎಕರೆ ಜಮೀನಿನಲ್ಲಿ ಬೆಳೆದಿದ್ದ ಸೇವಂತಿಗೆ ಹೂವಿನ ಗಿಡಗಳಿಗೆ ಬೆಂಕಿ ಬಿದ್ದು ಸುಟ್ಟು ಕರಕಲಾಗಿದೆ. ಮಾರುಕಟ್ಟೆಯಲ್ಲಿ ಸೇವಂತಿಗೆ ಹೂವಿಗೆ ಪ್ರತಿ ಕೆಜಿಗೆ 300-350 ರೂ ಬೆಲೆ ಇದ್ದು, ರೈತ ವೆಂಕಟೇಶಪ್ಪ ಒಂದು ತಿಂಗಳ ಹಿಂದೆ ಸಸಿ ತಂದು ನೆಟ್ಟು ಪೋಷಿಸಿದ್ದರು, ಆದರೆ ಬೆಳೆ ಬೆಳೆದು ಫಸಲು ಬರುವ ಮೊದಲೇ ಬೆಂಕಿಗೆ ಸಂಪೂರ್ಣ ನಾಶವಾಗಿದೆ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ. ಇದರಿಂದ ರೈತ ಕಂಗಲಾಗಿದ್ದಾನೆ. ಪಕ್ಕದ ಜಮೀನಿನವರು ನೀಲಗಿರಿ ಸೊಪ್ಪಿಗೆ ಬೆಂಕಿ ಹಚ್ಚಿರುವುದರಿಂದ ಬೆಂಕಿಯ ಶಾಖ ಹೂವಿನ ಬೆಳೆಗೂ ತಗುಲಿ ಬೆಳೆ ಸುಟ್ಟು ಹಾನಿಯಾಗಿದೆ ಎಂದು ರೈತ ವೆಂಕಟೇಶಪ್ಪ ಅವರು ಆರೋಪಿಸಿದ್ದಾರೆ.



ಉದಯವಾಹಿನಿ ಚಿತ್ರ

ರೈತರು ಬೆಳೆಗಳಿಗೆ ನೀರಿಲ್ಲದೆ ಪರದಾಡುತ್ತಿರುವುದು ಒಂದು ಕಡೆಯಾದರೆ, ಬಿರು ಬೇಸಿಗೆಯಲ್ಲಿ ಬರುವ ಅಷ್ಟಿಷ್ಟು ನೀರಿನಲ್ಲಿ ರೈತ ಕಷ್ಟ ಪಟ್ಟು ಬೆಳೆ ಬೆಳೆದಿದ್ದ ಚಾಮಂತಿ ಹೋವಿನ ಗಿಡ ಸುಟ್ಟು ನಾಶಾವಾಗಿರುವುದು ದುರದೃಷ್ಟಕರ ವಿಷಯವಾಗಿದೆ, ಆದರೆ ಇದು ದುಷ್ಕರ್ಮಿಗಳ ಕೃತ್ಯದಿಂದ ನಡೆದಿದೆ ಎಂದು ರೈತ ಆಕ್ರೋಶ ವ್ಯಕ್ತಪಡಿಸಿದರು. ಬೇಸಿಗೆಯಲ್ಲಿ ಬೆಳೆ ಬೆಳಯುವುದೇ ಕಷ್ಟಕವಾಗಿದೆ. ಇಂತಹ ಸಮಯದಲ್ಲಿ ನಮಗೆ ಸೂಕ್ತ ಪರಿಹಾರ ಕಲ್ಪಿಸಿಕೊಡಬೇಕೆಂದು ರೈತ ಒತ್ತಾಯಿಸಿದ್ದಾರೆ. ದಿಬ್ಬೂರಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಬೆಳೆ ಹಾನಿಗೆ ಸೂಕ್ತ ಪರಿಹಾರ ಸಿಗಬೇಕಾಗಿದೆ.

## ನೀರಿಗಾಗಿ ಸುಡು ಬಿಸಿಲಿನಲ್ಲಿ ಪುರಸಭೆ ಕಚೇರಿ ಆವರಣದಲ್ಲಿ ಪ್ರತಿಭಟನೆ

• ಉದಯವಾಹಿನಿ, ಬಾಗೇಪಲ್ಲಿ



ಉದಯವಾಹಿನಿ ಚಿತ್ರ

ಆರು ತಿಂಗಳಿನಿಂದ ಕುಡಿಯುವುದಕ್ಕೆ ನೀರಿಲ್ಲ ಎಂದು ಅಧಿಕಾರಿಗಳನ್ನು ಬೇಡಿಕೊಂಡರೂ ಹನಿ ನೀರು ಸರಬರಾಜು ಮಾಡದೆ ಉಳ್ಳವರ ಮನೆಗಳಿಗೆ ಮಾತ್ರ ಪುರಸಭೆ ಟ್ಯಾಂಕರ್ ನಿಂದ ನೀರು ಪೂರೈಸಿ ಕೂಲಿ ಮಾಡಿಕೊಂಡು ಜೀವನ ನಡೆಸುತ್ತಿರುವ ಬಡವರಿಗೆ ಅನ್ಯಾಯ ಮಾಡುತ್ತಿದ್ದೀರಾ ಸರ್ಕಾರಿ ಅಧಿಕಾರಿಗಳಾಗಿ ನಿಮಗೆ ನಾಚಿಕೆ ಆಗುವುದಿಲ್ಲವೇ ಎಂದು ಬಾಗೇಪಲ್ಲಿ ಪಟ್ಟಣದ ಒಂದನೇ ವಾರ್ಡ್ನ ನಾಗರೀಕರು ಪುರಸಭೆ ಮುಖ್ಯಾಧಿಕಾರಿ, ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡು ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ ಅಧಿಕಾರಿಗಳ, ಜನಪ್ರತಿನಿಧಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಪ್ರಸಂಗ ನಡೆಯಿತು.

**ಆರು ತಿಂಗಳಿನಿಂದ ನೀರಿಗೆ ಹಾಹಕಾರ**

ಬಾಗೇಪಲ್ಲಿ ಪಟ್ಟಣದ 1ನೇ ವಾರ್ಡ್‌ಗೆ ಕಳೆದ ಆರು ತಿಂಗಳಿನಿಂದ ನೀರಿಗೆ ಹಾಹಕಾರ ಉಂಟಾಗಿದ್ದು, ಪುರಸಭೆ ಅಧಿಕಾರಿಗಳ ಹಾಗೂ ಜನಪ್ರತಿನಿದಿಗಳ ಗಮನಕ್ಕೂ ತಂದರೂ ನಾಗರೀಕರ ಸಮಸ್ಯೆಗೆ ಕವಡೆ ಕಾಸಿನ ಬೆಲೆಯೂ ನೀಡದೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸದ ಹಿನ್ನಲೆಯಲ್ಲಿ ವಾರ್ಡ್‌ನ ನೂರಾರು ಮಹಿಳೆಯರು ಪುರಸಭೆ ಕಚೇರಿ ಆವರಣದಲ್ಲಿ ಜಮಾಯಿಸಿ ಜನಪ್ರತಿನಿಧಿಗಳ, ಅಧಿಕಾರಗಳ ವಿರುದ್ಧ ದಿಕ್ಕಾರಗಳು ಕೂಗಿ ಸುಡು ಬಿಸಿಲನ್ನು ಲೆಕ್ಕಿಸದೆ ಪ್ರತಿಭಟನೆ ನಡೆಸಿ ನೀರು ಸರಬರಾಜುಗೆ ಪಟ್ಟು ಹಿಡಿದ ಮಹಿಳೆಯರು ಅಧಿಕಾರಿಗಳಿಗೆ ಛೀಮಾರಿ ಹಾಕಿದರು.

**ಎರಡನೇ ಪ್ರತಿಭಟನೆ**

ಪಟ್ಟಣದ 1ನೇ ವಾರ್ಡ್ನ ನಾಗರೀಕರು ಒಂದು ತಿಂಗಳ ಅವಧಿಯಲ್ಲಿ ಪುರಸಭೆ ಕಚೇರಿ ಅವರಣದಲ್ಲಿ ಕುಡಿಯುವ ನೀರಿಗಾಗಿ ಎರಡನೇ ಬಾರಿ ಪ್ರತಿಭಟನೆ ನಡೆಸಿದ್ದು, ಸಮಸ್ಯೆಗೆ ಪರಿಹಾರ ಸಿಗದ ಕಾರಣ ಸಬೂಬು ಹೇಳಲು ಬಂದ ಪುರಸಭೆ ಅಧಿಕಾರಿಗಳ ಹಾಗೂ ನಾಗರೀಕರ ನಡುವೆ ಮಾತಿನ ಜಟಾಪಟಿ ನಡೆಯಿತು. ಮುಖ್ಯಾಧಿಕಾರಿ ಮಧ್ಯಪ್ರವೇಶಿಸಿ ಈ ತಕ್ಷಣವೇ ಸಮಸ್ಯೆಗೆ ಪರಿಹಾರ ಕಲ್ಪಿಸುವ ಭರವಸೆ ನೀಡಿದ ನಂತರ ಪ್ರತಿಭಟನಾಕಾರರು ಶಾಂತಗೊಂಡರು.

## ಮಳೆ ಕೊರತೆ ಫಸಲು ಕುಸಿತ, ರಾಗಿ ಮಾರಾಟಕ್ಕೆ ರೈತರ ನಿರಾಸಕ್ತಿ

• ಉದಯವಾಹಿನಿ, ಗುಡಿಬಂಡೆ

ತಾಲ್ಲೂಕಿನಲ್ಲಿ ಮಳೆ ಕೊರತೆಯಿಂದ ರಾಗಿ ಫಸಲು ಕುಸಿದಿದ್ದು, ಬೆಂಬಲ ಬೆಲೆ ಯೋಜನೆಯಡಿ ತೆರೆದಿರುವ ರಾಗಿ ಖರೀದಿಗೆ ಕೇಂದ್ರದಲ್ಲಿ ರಾಗಿ ಮಾರಾಟಕ್ಕೆ ರೈತರು ನಿರಾಸಕ್ತಿ ತೋರುತ್ತಿದ್ದಾರೆ. ಕಳೆದ ಸಾಲಿಗೆ ಹೋಲಿಸಿಕೊಂಡರೆ ಈ ಬಾರಿ ಶೇ 40 ರಷ್ಟು ರೈತರು ಮಾತ್ರ ರಾಗಿ ಮಾರಾಟಕ್ಕೆ ಹೆಸರು ನೋಂದಾಯಿಸಿಕೊಂಡಿದ್ದು, ಅದರಲ್ಲಿ ಕೆಲವು ರೈತರು ಮಾತ್ರ ರಾಗಿ ಮಾರಾಟ ಮಾಡುತ್ತಿದ್ದಾರೆ. ರಾಗಿ ಕೇಂದ್ರಕ್ಕೆ ಬರುವ ರೈತರ ಸಂಖ್ಯೆ ವಿರಳವಾಗಿದ್ದು, ರಾಗಿ ಖರೀದಿಗೆ ಜೂನ್ ವರೆಗೂ ಅವಕಾಶ ನೀಡಲಾಗಿದೆ.

ಕಳೆದ ಬಾರಿ 1,764 ರೈತರು ನೋಂದಾಯಿಸಿಕೊಂಡಿದ್ದರು. ಈ ಬಾರಿ 674 ರೈತರು ಮಾತ್ರ ನೋಂದಾಯಿಸಿಕೊಂಡಿದ್ದಾರೆ. ರಾಗಿ ಖರೀದಿ ಕೇಂದ್ರ ಆರಂಭವಾಗಿ 20 ದಿನ ಕಳೆದಿದೆ. ಆದರೂ 149 ರೈತರು ಮಾತ್ರ ಖರೀದಿ ಕೇಂದ್ರದಲ್ಲಿ 2,835 ಕಿಟ್ಟಾಂಲ್ ರಾಗಿ ಮಾರಟ ಮಾಡಿದ್ದಾರೆ. ಹದ ಮಳೆ ಬಿದ್ದರೆ ಸಾಮಾನ್ಯವಾಗಿ ಒಂದು ಎಕರೆಯಲ್ಲಿ ಐದಾರು ಕಿಂಟ್ವಾಲ್ ರಾಗಿ ಬೆಳೆಯಬಹುದು. ಆದರೆ ಮಳೆ ಕುಂಠಿತದಿಂದ ಈ ಬಾರಿ ಒಂದು ಎಕರೆಯಲ್ಲಿ ಒಂದು-ಎರಡು ಕಿಂಟ್ವಾಲ್ ರಾಗಿ ಮಾತ್ರ ಫಸಲು ಬಂದಿದೆ.



ಉದಯವಾಹಿನಿ ಚಿತ್ರ

ಇದರ ನಡುವೆ ರಾಗಿ ಖರೀದಿ ನೋಂದಣಿ ಮತ್ತು ಖರೀದಿಯನ್ನು ತಡವಾಗಿ ಆರಂಭಿಸಲಾಯಿತು. ಇದರಿಂದ ರೈತರು ತಮ್ಮ ಹಣದ ಅವಶ್ಯಕತೆ ಪೂರೈಸಲು ಹೊರಗಿನ ಮಾರುಕಟ್ಟೆಗಳಲ್ಲಿ ಕಿಂಟ್ವಾಲ್‌ಗೆ 3 ಸಾವಿರದಂತೆ ರಾಗಿ ಮಾರಾಟ ಮಾಡಿದ್ದಾರೆ. ಇದರಿಂದ ಖರೀದಿ ಕೇಂದ್ರಕ್ಕೆ ರಾಗಿ ಆವಕ ಕಳೆದ ಬಾರಿಗಿಂತ ಶೇ 60 ರಷ್ಟು ಇಳಿಮುಖವಾಗಿದೆ.

**ಕಳೆದ ಸಾಲಿನಲ್ಲಿ ಸರ್ಕಾರ ಕಿಂಟ್ವಾಲ್ ರಾಗಿಗೆ 3,578 ನಿಗದಿ ಮಾಡಲಾಗಿತ್ತು. ಅದರಂತೆ ತಾಲ್ಲೂಕಿನಲ್ಲಿ 1,764 ರೈತರು ನೋಂದಾಯಿಸಿಕೊಂಡಿದ್ದರು. 28 ಸಾವಿರ ಕಿಟ್ಟಾಂಲ್ ರಾಗಿ ಮಾರಟ ಮಾಡಲಾಗಿತ್ತು. ಈ ಬಾರಿ 3,846 ಬೆಂಬಲ ಬೆಲೆ ನಿಗದಿ ಮಾಡಲಾಗಿದೆ. 674 ರೈತರು 14,953 ಕಿಂಟ್ವಾಲ್ ರಾಗಿ ಮಾರಾಟಕ್ಕೆ ನೋಂದಾಯಿಸಿಕೊಂಡಿದ್ದರು. ಆದರೆ ಖರೀದಿ ಕೇಂದ್ರ ಆರಂಭವಾಗಿ 20 ದಿನ ಕಳೆದರೂ 149 ರೈತರು ಮಾತ್ರ 2,835 ಕಿಂಟ್ವಾಲ್ ರಾಗಿ ಮಾರಾಟ ಮಾಡಿದ್ದಾರೆ.**

## ಗ್ರಾಹಕರ ಸಂಖ್ಯೆ ಇಳಿಮುಖ, ಬಿಸಿಲಿಗೆ ಬಸವಳಿದ ವ್ಯಾಪಾರಿಗಳು



ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ಈ ಸಲದಷ್ಟು ಬಿಸಿಲ ಬೇಗೆಯನ್ನು ಇತ್ತೀಚಿನ ವರ್ಷಗಳಲ್ಲೇ ನೋಡಿರಲಿಲ್ಲ. ನೆರಳಿನ ಕೋಣೆಯಲ್ಲಿ ಕೆಲಸ ಮಾಡುವವರಿಗೆ ಸೆಕೆಯ ಚಿಂತೆಯಾದರೆ, ಬೀದಿ ವ್ಯಾಪಾರದಲ್ಲೇ ಬದುಕು ಕಟ್ಟಿಕೊಂಡಿರುವ ನಾವು ಈ ಬಿರು ಬಿಸಿಲಲ್ಲೇ ಬೇಯದೆ ವಿಧಿ ಇಲ್ಲ. ನಾವಷ್ಟೇ ಅಲ್ಲ, ನಮ್ಮ ತರಕಾರಿಯೂ ಬೆಂದು ಬಾಡಿ ಹೋಗದಂತೆ ನೋಡಿಕೊಳ್ಳುವುದೇ ದೊಡ್ಡ ಚಾಲೆಂಜು ನೋಡಿ...'

ನಗರದ ಕೆಂಗಲ್ ಹನುಮಂತಯ್ಯ ವೃತ್ತದ ಬಳಿಯ ಅರ್ಕಾವತಿ ಸೇತುವೆ ರಸ್ತೆ ಬದಿ, ಪ್ಲಾಸ್ಟಿಕ್ ಸೂರು ಮತ್ತು ಛತ್ರಿಯ ಆಶ್ರಯದಲ್ಲಿ ತರಕಾರಿ ಸೇರಿದಂತೆ ಇತರ ವ್ಯಾಪಾರ ಮಾಡುವ ಬೀದಿ ವ್ಯಾಪಾರಿಗಳು, ತಮ್ಮ ಬಿಸಿಲ ಬದುಕಿನ ಬಂಡಿಯ ಕುರಿತು ಆಡಿದ ಮಾತುಗಳಿವು.

ಈ ಬಿಸಿಲು ನಮ್ಮ ವ್ಯಾಪಾರಕ್ಕೆ ಹೊಡೆತ ಕೊಟ್ಟಿದೆ. ಬಿಸಿಲಿನ ಕಾರಣಕ್ಕೆ ಜನ ಮಾರುಕಟ್ಟೆಗೆ ಬರುವುದನ್ನು ಕಡಿಮೆ ಮಾಡಿದ್ದಾರೆ. ಅದರಲ್ಲೂ ಬೀದಿ ವ್ಯಾಪಾರಿಗಳಲ್ಲಿ ಖರೀದಿ ಮಾಡುವವರು ಇಳಿಮುಖವಾಗಿದ್ದಾರೆ. ಯಾವಾಗ ಈ ಬಿಸಿಲು ಹೋಗಿ ಮಳೆರಾಯ ಕೃಪೆ ತೋರುತ್ತಾನೊ ಎಂದು ಕಾಯುತ್ತಿದ್ದೇವೆ. ಇಲ್ಲದಿದ್ದರೆ, ವ್ಯಾಪಾರವಿಲ್ಲದೆ ಬದುಕು ಮತ್ತಷ್ಟು ಕಷ್ಟಕರವಾಗುವುದರಲ್ಲಿ ಎರಡು ಮಾತಿಲ್ಲ' ಎಂದು ತಮ್ಮ ಪರಿಸ್ಥಿತಿ ಬಿಚ್ಚಿಟ್ಟರು.

**ಐಜೂರು ವೃತ್ತ, ಮಾಗಡಿ ರಸ್ತೆ, ಹಳೆ ಬಸ್ ನಿಲ್ದಾಣದ ವೃತ್ತ, ಮುಖ್ಯ ರಸ್ತೆ, ಕೋರ್ಟ್ ರಸ್ತೆಯ ಆಸುಪಾಸುಗಳಲ್ಲಿ ಬೀದಿ ವ್ಯಾಪಾರ ಮಾಡುತ್ತಾ ವ್ಯಾಪಾರಿಗಳು ಬದುಕು ಕಟ್ಟಿಕೊಂಡಿದ್ದಾರೆ. ಬಿಸಿಲು, ಗಾಳಿ, ಮಳೆ ಏನೇ ಬಂದರೂ ವ್ಯಾಪಾರ ಬಿಡುವಂತಿಲ್ಲ. ಬಿಟ್ಟರೆ, ವ್ಯಾಪಾರಿಗಳಿಗೆ ಆ ದಿನದ ದುಡಿಮೆ ಖೋತಾ.**

## ಬರಗಾಲದಲ್ಲಿ ಕೈ ಹಿಡಿದ ನೀರಾವರಿ ಯೋಜನೆ

• ಉದಯವಾಹಿನಿ, ಬಂಗಾರಪೇಟೆ

ಕೋಲಾರ, ಬಂಗಾರಪೇಟೆ ಮಾಲೂರು ಪಟ್ಟಣ, ಸುತ್ತಮುತ್ತಲಿನ 45 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ಒದಗಿಸುತ್ತಿದೆ ಯರಗೋಳ್ ಜಲಾಶಯ. ಬಂಗಾರಪೇಟೆ ತಾಲ್ಲೂಕಿನ ಯರಗೋಳ್ ಗ್ರಾಮದ ಬಳಿ ವ್ಯರ್ಥವಾಗಿ ತಮಿಳುನಾಡಿಗೆ ಹರಿದು ಹೋಗುತ್ತಿದ್ದ ನೀರಿಗೆ ಅಡ್ಡಲಾಗಿ ನಿರ್ಮಿಸಿರುವ ಡ್ಯಾಂ ಮೂರು ತಾಲ್ಲೂಕಿನ ಜನರ ಕುಡಿಯುವ ನೀರಿನ ಬವಣೆ ತೀರಿಸುತ್ತಿದೆ. ಹಾಗಾಗಿ ಈ ಕೋಲಾರ, ಬಂಗಾರಪೇಟೆ ಮಾಲೂರು ತಾಲ್ಲೂಕಿನಲ್ಲಿ ಬರಗಾಲದಲ್ಲೂ ನೀರಿನ ಅಭಾವ ಕಾಡಲಿಲ್ಲ.

**ಜಲಾಶಯ ಹಿನ್ನೆಲೆ:** 2006ರಲ್ಲಿ ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಯೋಜನೆಗೆ ಶಂಕುಸ್ಥಾಪನೆ ಮಾಡಲಾಗಿತ್ತು. 300 ಎಕರೆ ಪ್ರದೇಶದಲ್ಲಿ ಯೋಜನೆ ಕಮಗಾರಿಗೆ ಚಾಲನೆ ನೀಡಲಾಯಿತು. ಆದರೆ ಕಾಮಗಾರಿ 2006 ರಿಂದ 2013ರವೆರೆಗೆ ಸ್ಥಗಿತಗೊಂಡಿತು. 2013ರಲ್ಲಿ ಜಿಲ್ಲೆಯ ಶಾಸಕರ ಒತ್ತಾಯದ ಮೇರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮರು ಅನುಮೋದನೆ ನೀಡಿ ಶುದ್ಧೀಕರಣ ಘಟಕಕ್ಕೆ ಹಣ ಬಿಡುಗಡೆ ಮಾಡಿದರು. ಸದ್ಯ 17 ವರ್ಷಗಳ ನಂತರ ಯೋಜನೆ ಪೂರ್ಣಗೊಂಡು ಈಚೆಗೆ ಸಿಎಂ ಸಿದ್ದರಾಮಯ್ಯ ಉದ್ಘಾಟನೆ ಮಾಡಿದರು. ಇದು ಕೋಲಾರ ಜಿಲ್ಲೆಗೆ ಮಾಡಿರುವ ಶುದ್ಧ ಕುಡಿಯುವ ನೀರಿನ ಘಟಕ ಇದಾಗಿದೆ. ಈ ಯೋಜನೆ 315 ಕೋಟಿ ವೆಚ್ಚದಲ್ಲಿ ಮುಕ್ತಾಯಗೊಂಡಿದೆ.

**ಬಂಗಾರಪೇಟೆ ತಾಲ್ಲೂಕಿನಲ್ಲಿ ತೀವ್ರ ಬರಗಾಲವಿದ್ದರೂ ಸಹ ಎಲ್ಲಾ ವಾರ್ಡ್‌ಗಳಿಗೆ ಈ ಜಲಾಶಯ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಮಾಡುತ್ತಿದೆ. ಕಳೆದ ಇಪ್ಪತ್ತು ವರ್ಷಗಳಿಂದ ಅನುಭವಿಸಿದ ಬರ ಪರಿಸ್ಥಿತಿ, ನೀರಿನ ತತ್ವಾರ ಈ ಯೋಜನೆ ದೂರ ಮಾಡಿದೆ. ಜನ ಜಾನುವಾರುಗಳಿಗೆ ಪ್ರಾಣಿ ಪಕ್ಷಗಳಿಗೆ ಆಸರೆಯಾಗಿದೆ.**

## ಪದವೀಧರೆಯ ಕೃಷಿ ಯಶೋಗಾಥೆ, ವಾರ್ಷಿಕ 20-25 ಲಕ್ಷವರೆಗೂ ವಹಿವಾಟು

• ಉದಯವಾಹಿನಿ, ಚಿಂತಾಮಣಿ

ಶಿಕ್ಷಕಿಯಾಗಬೇಕೆಂಬುದು ಅವರ ಕನಸಾಗಿತ್ತು. ಮದುವೆಯಾದ ಬಳಿಕ ಆ ಕನಸು ಕೈಗೂಡಲಿಲ್ಲ. ಆದರೆ ಯಾವುದಾದರೂ ಕ್ಷೇತ್ರದಲ್ಲಿ ಸಾಧನೆ ಮಾಡಬೇಕೆಂಬ ಛಲ ಅವರನ್ನು ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳವಂತೆ ಮಾಡಿತು.ತಾನು ಪದವೀಧಾರೆಯಾದರೂ ತೋಟಕ್ಕೆ ಇಳಿದು ವ್ಯವಸಾಯ ಆರಂಭಿಸಿದರು.

ಆಧುನಿಕ ತಂತ್ರಜ್ಞಾನ ವೈವಿದ್ಯಮಯ ಬೆಳೆ ಬೆಳೆಯುವ ಮೂಲಕ ವಾರ್ಷಿಕವಾಗಿ 20-25 ಲಕ್ಷದ ವರೆಗೂ ವಹಿವಾಟು ನಡೆಸುತ್ತಿದ್ದಾರೆ. ಇದು ಚಿಂತಾಮಣಿ ತಾಲ್ಲೂಕಿನ ಮೂಡ್ಲಚಿಂತಲಹಳ್ಳಯ ಪ್ರಗತಿಪರ ರೈತ ಮಹಿಳೆ ಶಿಲ್ಪಾ ಲೋಕೇಶ್ ಅವರ ಕೃಷಿ ಯಶೋಗಾಥೆ.ಇಲ್ಲಿನ ಲೋಕೇಶ್ ಅವನ್ನು ಮದುವೆಯಾದ ಬಳಿಕ ಕಳೆದ 15 ವರ್ಷಗಳಿಂದ ವ್ಯವಸಾಯ ಮಾಡುತ್ತಿದ್ದಾರೆ. ಪತಿ ಲೋಕೇಶ್ ಸರ್ಕಾರಿ ಕಾಲೇಜುವೊಂದರ ಪ್ರಯೋಗಾಲಯದ ಅಧೀಕ್ಷಕರಾಗಿದ್ದು, ಅವರೂ ಕೃಷಿಗೆ ಸಾಥ್ ನೀಡುತ್ತಿದ್ದಾರೆ. ಈ ದಂಪತಿ ತರಕಾರಿ ಬೆಳೆ ಬೆಳೆಯುವುದರಲ್ಲಿ ನಿಸ್ಸೀಮರು. ಅವರ 10 ಎಕರೆ ಜಮೀನಿನಲ್ಲಿ ವರ್ಷಪೂರ್ತಿ ತರಕಾರಿ ಬೆಳೆಗಳದ್ದೇ ಕಾರುಬಾರು.



ಉದಯವಾಹಿನಿ ಚಿತ್ರ

ಆಯಾ ಋತುಮಾನಕ್ಕೆ ತಕ್ಕಂತೆ ಆರು ತಿಂಗಳಿಗೊಂದರಂತೆ ವರ್ಷಕ್ಕೆ ಎರಡು ವೈವಿದ್ಯಮಯ ತರಕಾರಿ ಬೆಳೆಯುತ್ತಾರೆ. ಸಾಮಾನ್ಯವಾಗಿ ಮಾರ್ಚ್ ಯಿಂದ ಆಗಸ್ಟ್ ವರೆಗೂ ಟೊಮೆಟೊ, ಕ್ಯಾರೆಟ್, ಬೀಟ್ರೂಟ್ ಮತ್ತು ದೊಣ್ಣೆ ಮೆಣಸಿನ ಕಾಯಿ ಬೆಳೆಯುತ್ತಾರೆ. ಆಗಸ್ಟ್, ಡಿಸೆಂಬರ್ ವರೆಗೆ ಸೌತೆಕಾಯಿ, ಆಲೂಗಡ್ಡೆ, ಬೀನ್ಸ್ ನಂತಹ ಬೆಳೆ ಬೆಳೆಯುತ್ತಾರೆ.

> ಸಾಮಾನ್ಯವಾಗಿ ತರಕಾರಿ ಬೆಳೆಗಳಿಗೆ ರೋಗರುಜಿನಗಳು ಹೆಚ್ಚು, ಬೆಲೆ ಕುಸಿತದಿಂದ ಚೇತರಿಸಿಕೊಳ್ಳುವುದೇ ಕಷ್ಟ ಎಂದು ಕೆಲ ರೈತರು ಕೃಷಿಯಿಂದ ವಿಮುಖರಾಗುತ್ತಾರೆ. ಆದರೆ ಶಿಲ್ಪಾಲೋಕೇಶ್ ತರಕಾರಿ ಬೆಳೆಗಳಿಂದಲೇ ಹೆಚ್ಚು ಲಾಭ ಗಳಿಸುತ್ತಿದ್ದಾರೆ. ಸಮಗ್ರ ಕೃಷಿ ಯೋಜನೆ ರೂಪಿಸಿಕೊಳ್ಳಬೇಕು. ಯಾವುದೋ ಒಂದು ಬೆಳೆಗೆ ಬೆಲೆ ಬಂದಿದೆ ಎಂದು ಎಲ್ಲವನ್ನು ತ್ಯಜಿಸಿ ಒಂದೇ ಬೆಳೆಗೆ ಮಾರುಹೋಗಬಾರದು
>
> -ಶಿಲ್ಪಾಲೋಕೇಶ್

# ಕಬಿನಿ ಹಿನ್ನೀರಿನಲ್ಲಿ ಪಳೆಯುಳಿಕೆ ಪತ್ತೆ: ಜನ ಭಯಪಡುತ್ತಿರುವುದೇಕೆ?

## ಮೂರು ಬಾರಿ ಕಬಿನಿ ಜಲಾಶಯದ ನೀರಿನ ಮಟ್ಟ ಪಾತಾಳಕ್ಕೆ ಕುಸಿದಿದ್ದು, ಜಲಾಶಯದಲ್ಲಿ ಹುದುಗಿ ಹೋದ ಪಳೆಯುಳಿಕೆ ಕಾಣುವಂತಾಗಿದೆ

• ಉದಯವಾಹಿನಿ, ಮೈಸೂರು

ಕಳೆದೊಂದು ದಶಕದಲ್ಲಿ ಮೂರು ಬಾರಿ ಕಬಿನಿ ಜಲಾಶಯದ ನೀರಿನ ಮಟ್ಟ ಪಾತಾಳಕ್ಕೆ ಕುಸಿದಿದ್ದು, ಜಲಾಶಯದಲ್ಲಿ ಹುದುಗಿ ಹೋದ ಪಳೆಯುಳಿಕೆ ಹೊರಪ್ರಪಂಚಕ್ಕೆ ಕಾಣುವಂತಾಗಿದೆ. ಇದು ಈ ಬಾರಿಯ ಬರದ ಭೀಕರತೆಯನ್ನು ಎತ್ತಿ ತೋರಿಸುತ್ತಿದ್ದು, ಪರಿಸ್ಥಿತಿ ಹೀಗೆಯೇ ಮುಂದುವರೆದರೆ ಹೇಗಪ್ಪಾ ಎಂಬ ಭಯ ಜನವಲಯದಲ್ಲಿ ಶುರುವಾಗಿದೆ.

ಸಾಮಾನ್ಯವಾಗಿ ಮಳೆಗಾಲ ಆರಂಭವಾಗುತ್ತಿದ್ದಂತೆಯೇ ಬಹುಬೇಗ ಭರ್ತಿಯಾಗುತ್ತಿದ್ದ ಕಬಿನಿ ಜಲಾಶಯದಲ್ಲಿ ಬೇಸಿಗೆಯಲ್ಲಿಯೂ ನೀರು ತುಂಬಿರುತ್ತಿತ್ತು. ಆದರೆ ಈ ಬಾರಿ ಬರದ ಭೀಕರತೆಯಿಂದ ಜಲಾಶಯದಲ್ಲಿ ನೀರಿನ ಪ್ರಮಾಣ ದಿನದಿಂದ ದಿನಕ್ಕೆ ಕುಸಿತ ಕಾಣುತ್ತಿದ್ದು, 60 ಅಡಿಗೆ ತಲುಪಿದೆ. ಹೀಗಾಗಿ ಕಬಿನಿ ನೀರನ್ನು ನಂಬಿದವರು ಬಾಯಿ ಬಾಯಿ ಬಡಿದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ.

ಇದುವರೆಗೆ ಭರ್ತಿಯಾಗಿದ್ದ ಜಲಾಶಯವನ್ನು ನೋಡಲು ಬರುತ್ತಿದ್ದ ಪ್ರವಾಸಿಗರು ಖಾಲಿಯಾದ ಜಲಾಶಯವನ್ನು ವೀಕ್ಷಿಸಲು ಮುಂದಾಗುತ್ತಿದ್ದಾರೆ. ಕಾರಣ ನೀರಿನ ಪ್ರಮಾಣ ಕಡಿಮೆಯಾಗಿರುವುದರಿಂದ ಹಿನ್ನೀರಿನಲ್ಲಿ ಮುಳುಗಡೆಯಾಗಿದ್ದ ದೇಗುಲ ಸೇರಿದಂತೆ ಇನ್ನಿತರ ಪಳೆಯುಳಿಕೆಗಳು ಕಾಣಸಿಗುತ್ತಿದ್ದು, ಇವುಗಳತ್ತ ಅಚ್ಚರಿಯ ನೋಟ ಬೀರುತ್ತಿದ್ದಾರೆ. ಅಷ್ಟೇ ಅಲ್ಲದೆ ಬರಿದಾದ ಜಲಾಶಯದ ಹಿನ್ನೀರಿನ ದೃಶ್ಯ ಎಲ್ಲೋ ಒಂದು ಕಡೆ ಮನಸ್ಸಿಗೆ ನೋವುಂಟು ಮಾಡುತ್ತಿದೆ. ಆತಂಕವನ್ನು ಹುಟ್ಟು ಹಾಕುತ್ತಿದೆ.



ಉದಯವಾಹಿನಿ ಚಿತ್ರ

ಕಳೆದ ಆರು ವರ್ಷಗಳಿಂದ ಉತ್ತಮ ಮಳೆಯಾಗುತ್ತಿದ್ದುದರಿಂದ ಜಲಾಶಯ ಭರ್ತಿಯಾಗಿ ಹೆಚ್ಚುವರಿ ನೀರನ್ನು ಹರಿಯಲು ಬಿಟ್ಟಿದ್ದರಿಂದ ಪ್ರವಾಹ ಸೃಷ್ಠಿಯಾಗಿ ಜನಜೀವನ ಅಸ್ತವ್ಯಸ್ತವಾಗಿತ್ತು. ಆದರೂ ಅದರ ನಡುವೆ ಜಲಾಶಯದಿಂದ ನದಿಗೆ ಹರಿಯುವ ನೀರನ್ನು ನೋಡಲು ಜನ ಮುಗಿಬೀಳುತ್ತಿದ್ದರು. ಆದರೆ ಕಳೆದ ವರ್ಷ ಮುಂಗಾರು ಕೈಕೊಟ್ಟ ಕಾರಣ ಈ ಬಾರಿ ಜಲಾಶಯ ನೀರಿಲ್ಲದೆ ಬೋರಲಾಗಿದೆ.

ಇಂತಹದೊಂದು ಪರಿಸ್ಥಿತಿ ಕಳೆದೊಂದು ದಶಕದಲ್ಲಿ ಮೂರು ಬಾರಿ ನಿರ್ಮಾಣವಾಗಿದೆ. 2013ರಲ್ಲಿ ವರುಣ ಅವಕೃಪೆ ತೋರಿದ್ದ ವೇಳೆ ಕಬಿನಿ ಜಲಾಶಯದ ನೀರು ಖಾಲಿಯಾಗಿತ್ತು. ನೀ ರು ಖಾಲಿಯಾಗುತ್ತಿದ್ದಂತೆಯೇ ಜಲಾಶಯದ ಒಡಲಾಳದಲ್ಲಿದ್ದ ಹುದುಗಿ ಹೋಗಿದ್ದ ಮಾಂಕಾಳಮ್ಮ ಮತ್ತು ಭವಾನಿಶಂಕರ ದೇವಾಲಯಗಳು ಪ್ರತ್ಯಕ್ಷವಾಗಿದ್ದವು. ಇದಾದ ಬಳಿಕ 2016ರಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದಾಗ ಇಂತಹದ್ದೇ ದೃಶ್ಯಗಳು ಗೋಚರಿಸಿದ್ದವು. ಇದೀಗ ಮತ್ತೆ 2024ರಲ್ಲಿ ಕಬಿನಿ ಜಲಾಶಯದಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದು, ನೀರಿನಲ್ಲಿ ಮುಳುಗಡೆಯಾಗಿದ್ದ ಪಳೆಯುಳಿಕೆಗಳು ಹೊರಬರಲಾರಂಭಿಸಿದ್ದು, ಜಲಾಶಯದೊಳಗೆ ಹುದುಗಿ ಹೋದ ಗ್ರಾಮವೊಂದರ ಕಥೆಯನ್ನು ತೆರೆದಿಡುತ್ತಿದೆ. ಅಷ್ಟೇ ಅಲ್ಲದೆ ಇತಿಹಾಸ ಸೇರಿದ ಊರನ್ನು ಮತ್ತೆ ನೆನಪಿಸುತ್ತಿದೆ. ನೀರಿನಲ್ಲಿ ಮುಳುಗಿ ಹೋದ ದೇವಾಲಯದ ಪೈಕಿ ಮಾಂಕಾಳಮ್ಮ ದೇಗುಲವು ಒಂದಾಗಿದ್ದು, ಇದು ವೈಷ್ಣವ ದೇವತೆಯಾಗಿದ್ದು, ಕೇರಳದಿಂದ ಬಂದು ಕಿತ್ತೂರಿನಲ್ಲಿ ನೆಲೆಸಿದಳು ಎಂದು ಹೇಳಲಾಗುತ್ತಿದೆ.

ಪರಿವಾರ ನಾಯಕರ ಆರಾಧ್ಯ ದೇವತೆಯಾಗಿರುವ ಮಾಂಕಾಳಮ್ಮನಿಗೆ ನಿರ್ಮಿಸಿದ ದೇಗುಲವು ಸಪ್ತಮಾತ್ರಿಕೆಯರಾದ ಅಕ್ಕ ತಂಗಿಯರ ದೇವಾಲಯವಾಗಿದೆ. ಈ ದೇವಾಲಯದಲ್ಲಿ ಗಣಪತಿ, ಭೈರವ ದೇವರಿದ್ದು, ಈ ದೇವಾಲಯದ ಏಳು ಗದ್ದುಗೆಗಳನ್ನು ಏಳು ಹೆಡೆಯ ಸರ್ಪಾಕೃತಿಯಲ್ಲಿ ನಿರ್ಮಿಸಲಾಗಿತ್ತು. ದೇಗುಲ ನೀರಿನಲ್ಲಿ ಮುಳುಗಿದ್ದರಿಂದ ಈ ದೇವಾಲಯದ ಪುನರ್ ನಿರ್ಮಾಣ ಅಣೆಕಟ್ಟೆಯ ಹತ್ತಿರದಲ್ಲಿರುವ ಬಸಾಪುರದಲ್ಲಿ ಮಾಡಲಾಗಿದೆ.

> ಕಿತ್ತೂರು ಗ್ರಾಮದ ಇತಿಹಾಸವನ್ನು ತಿರುವಿ ಹಾಕಿದರೆ ಆ ಕಾಲದಲ್ಲಿ ಕಿತ್ತೂರು ವೈಭವದಿಂದ ಕೂಡಿದ ಸಂಪದ್ಭರಿತ ಗ್ರಾಮವಾಗಿತ್ತಂತೆ. ಇಲ್ಲಿನ ಸಾಮಂತರು ಹತ್ತೂರು ಕೊಟ್ಟರೂ ಕಿತ್ತೂರು ಕೊಡುವುದಿಲ್ಲ ಎನ್ನುವಷ್ಟರ ಮಟ್ಟಿಗೆ ಶ್ರೀಮಂತ ಗ್ರಾಮವಾಗಿರುವಂತೆ ನೋಡಿಕೊಂಡಿದ್ದರಂತೆ. ಕಿತ್ತೂರು ಕ್ರಮೇಣ ಮೈಸೂರಿನ ಯದುವಂಶಸ್ಥರ ಆಳ್ವಿಕೆಗೆ ಒಳಪಟ್ಟಿತ್ತು. ಜಲಾಶಯ ನಿರ್ಮಾಣವಾದ ಬಳಿಕ ಎಲ್ಲವೂ ನೀರಲ್ಲಿ ಮುಳುಗಿ ಹೋಯಿತು.

**ಅಲ್ಲಿಯೇ ಉಳಿದು ಹೋಗಿದೆ**

**ನೀರಿನಲ್ಲಿ ಮುಳುಗಡೆಯಾಗಿರುವ ದೇವಾಲಯ ಇರುವ ಸ್ಥಳ ಮೊದಲು ಕೀರ್ತಿಪುರ ಎಂದು ಹೆಸರುವಾಸಿಯಾಗಿತ್ತು. ರಾಜರ ಆಳ್ವಿಕೆಯಲ್ಲಿ ಇಲ್ಲಿ ದೇವಾಲಯ ನಿರ್ಮಾಣ ಮಾಡಲಾಗಿದ್ದು, ಈ ದೇವಾಲಯದಲ್ಲಿ ಈಶ್ವರಲಿಂಗ, ಬಸವ, ಶೃಂಗಿ ನಾಗದೇವತೆಗನ್ನು ಪ್ರತಿಷ್ಠಾಪಿಸಲಾಗಿತ್ತು. ಜಲಾಶಯ ನಿರ್ಮಾಣವಾದ ಬಳಿಕ ಇದೆಲ್ಲವು ಮುಳುಗಡೆಯಾಗಿತ್ತು. ಈ ದೇವಸ್ಥಾನದಲ್ಲಿರುವ ಮೂರ್ತಿಗಳು ಭಿನ್ನವಾಗಿರುವುದರಿಂದ ಪೂಜೆಗೆ ಅರ್ಹವಲ್ಲ. ಆದ್ದರಿಂದ ಈ ದೇವಸ್ಥಾನವನ್ನು ಅಣೆಕಟ್ಟೆಯಿಂದ ತೆರವುಗೊಳಿಸಿಲ್ಲ ಹೀಗಾಗಿ ಅಲ್ಲಿಯೇ ಉಳಿದು ಹೋಗಿದೆ.**

## ಮಿನಿ ನ್ಯೂಸ್

### ವೈಜ್ಞಾನಿಕ ಸಾಕ್ಷ್ಯಾಧಾರಗಳಿಂದ ಆರೋಪಿಗಳು ಪೊಲೀಸರ ಬಲೆಗೆ

• ಉದಯವಾಹಿನಿ, ಮಡಿಕೇರಿ

ವೈಜ್ಞಾನಿಕ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಎರಡು ವರ್ಷಗಳ ಹಿಂದೆ ಡಕಾಯಿತಿ ನಡೆಸಿದ್ದ ಐವರು ಆರೋಪಿಗಳನ್ನು ಮಡಿಕೇರಿ ಉಪವಿಭಾಗದ ಪೊಲೀಸರು ಬಂಧಿಸಿದ್ದಾರೆ. ಚನ್ನಂಗಿ ನಿವಾಸಿ ಎಂ.ಕೆ. ಲವಕುಮಾರ್ (51), ಅಬ್ಬೂರು ನಿವಾಸಿಗಳಾದ ಎಚ್.ಸಿ.ವಿನೋದ್ (45), ಪ್ರವೀಣ್‌ಕುಮಾರ್ (46), ವಿರಾಜಪೇಟೆಯ ಅಯ್ಯಪ್ಪ ಬೆಟ್ಟ ನಿವಾಸಿ ಪಿ.ಎಸ್.ಅನೀಶ್ (33) ಹಾಗೂ ಭದ್ರಗೋಳ ನಿವಾಸಿ ಕೆ.ಈ.ರಫೀಕ್ (45) ಬಂಧಿತರು.

ಇವರಿಂದ 7.9 ಗ್ರಾಂ ತೂಕದ ಚಿನ್ನದ ಸರ, 60 ಸಾವಿರ ನಗದು, ಕೃತ್ಯಕ್ಕೆ ಬಳಸಿದ ಕಾರು, ಡಕಾಯಿತಿ ಮಾಡಿದ ಹಣದಲ್ಲಿ ಖರೀದಿಸಿದ್ದ ಕಾರನ್ನು ವಶಪಡಿಸಿಕೊಂಡಿದ್ದಾರೆ. ಗೂಡ್ಲೂರು ಗ್ರಾಮದ ಚೆನ್ನಂಗಿ ನಿವಾಸಿ ಕೆ.ಕೆ.ತಂಗಪ್ಪನ್ ಅವರ ಮನೆಗೆ 2022ರ ಜೂನ್ 8ರಂದು ರಾತ್ರಿ 8.30ರ ಸಮಯದಲ್ಲಿ ಈ ಆರೋಪಿಗಳು ಮುಸುಕುಧಾರಿಗಳಾಗಿ ನುಗ್ಗಿ ತಂಗಪ್ಪನ್ ಹಾಗೂ ಅವರ ಪತ್ನಿಯ ಮೇಲೆ ಹಲ್ಲೆ ನಡೆಸಿ, 2 ಲಕ್ಷ ನಗದು, 8 ಗ್ರಾಂ ತೂಕದ ಚಿನ್ನದ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದರು. ಸಾಕಷ್ಟು ಹುಡುಕಾಟ ನಡೆಸಿದರೂ, ಆರೋಪಿಗಳ ಸುಳಿವು ಪತ್ತೆಯಾಗಿರಲಿಲ್ಲ. ಈಚೆಗೆ ಪ್ರಕರಣವೊಂದರಲ್ಲಿ ಬಂಧಿತನಾಗಿದ್ದ ಅನೀಶ್ ಬೆರಳಚ್ಚು ಡಕಾಯಿತಿ ನಡೆದ ಸ್ಥಳದಲ್ಲಿ ಪತ್ತೆಯಾದ ಬೆರಳಚ್ಚಿಗೆ ಹೋಲಿಕೆಯಾಯಿತು. ನಂತರ, ಅನೀಶ್‌ನನ್ನು ವಿಚಾರಣೆ ನಡೆಸಿದಾಗ ಆತ ಉಳಿದ ಆರೋಪಿಗಳ ಕುರಿತು ಮಾಹಿತಿ ನೀಡಿದ' ಎಂದು ಪೊಲೀಸರು ತಿಳಿಸಿದ್ದಾರೆ.

### ಮಳೆ: ಸೆಸ್‌ಗೆ 72 ಲಕ್ಷ ಹಾನಿ, ಸಮರೋಪಾದಿಯಲ್ಲಿ ದುರಸ್ತಿ ಕಾರ್ಯ

• ಉದಯವಾಹಿನಿ, ಮೈಸೂರು

ಜಿಲ್ಲೆಯಾದ್ಯಂತ ಶುಕ್ರವಾರ ಸಂಜೆ ಬಿರುಗಾಳಿ ಸಹಿತ ಅಬ್ಬರಿಸಿದ ಮಳೆಗೆ ಬರೋಬ್ಬರಿ 409 ಕಂಬಗಳು ಧರೆಗೆ ಉರುಳಿದ್ದು, ಸೆಸ್ಕ್ ಸಿಬ್ಬಂದಿ ಸಮರೋಪಾದಿಯಲ್ಲಿ ದುರಸ್ತಿ ಕಾರ್ಯ ಕೈಗೊಂಡಿದ್ದಾರೆ. ರಾತ್ರಿ ಮೈಸೂರು ನಗರ ಸೇರಿದಂತೆ ಬಹುತೇಕ ಕಡೆಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು, ಜನ ಕತ್ತಲೆಯಲ್ಲಿ ಕಾಲ ಕಳೆಯುವಂತೆ ಆಗಿತ್ತು.ಕೆಲವೆಡೆ ಅಂತೂ ಶನಿವಾರ ಮಧ್ಯಾಹ್ನದವರೆಗೂ ವಿದ್ಯುತ್ ಸಂಪರ್ಕ ಸಾಧ್ಯವಾಗಿರಲಿಲ್ಲ.

ಮೈಸೂರು ನಗರದ ರೇಷ್ಮೆ ಕಾರ್ಖಾನೆ ಮುಂಭಾಗ ಮುಖ್ಯರಸ್ತೆಯಲ್ಲೇ ಹತ್ತಕ್ಕೂ ಹೆಚ್ಚು ಕಂಬಗಳು ತಂತಿ ಸಮೇತ ನೆಲಕ್ಕೆ ಬಿದ್ದಿದ್ದು, ಬಸ್ ಸೇರಿದಂತೆ ಹಲವು ವಾಹನಗಳು ಜಖಂಗೊಂಡಿದ್ದವು. ಶುಕ್ರವಾರ ರಾತ್ರಿಯಿಂದಲೇ ಸೆಸ್ಕ್ ಸಿಬ್ಬಂದಿ ಇತರೆ ಇಲಾಖೆಗಳ ಜೊತೆಗೂಡಿ ದುರಸ್ತಿ ಕಾರ್ಯ ಆರಂಭಿಸಿದ್ದರು. ಶನಿವಾರ ಮುಂಜಾನೆ ಅಲ್ಲಿ ಹೊಸ ಕಂಬಗಳನ್ನು ನೆಟ್ಟು, ತಂತಿಗಳನ್ನು ಎಳೆಯುವ ಕಾರ್ಯ ಭರದಿಂದ ಸಾಗಿತ್ತು. ಮೈಸೂರು ನಗರವೂ ಸೇರಿದಂತೆ ಇತರೆಡೆಗಳಲ್ಲಿಯೂ ವಿದ್ಯುತ್ ತಂತಿ ಮಾರ್ಗ ಹಾಗೂ ಹಾನಿಗೊಳಗಾದ ಕಂಬಗಳ ದುರಸ್ತಿ ಕಾರ್ಯವು ನಡೆದಿತ್ತು.

### ನಂಜಾವಧೂತ ಸ್ವಾಮೀಜಿ ತೆರವಿಗೆ ಒತ್ತಾಯ

• ಉದಯವಾಹಿನಿ, ತುಮಕೂರು

ಹೈಕೋರ್ಟ್ ತೀರ್ಪಿನ ಅನುಸಾರ ಶಿರಾ ತಾಲ್ಲೂಕು ಪಟ್ಟನಾಯಕನಹಳ್ಳಿ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ದೇವಸ್ಥಾನದ ಜವಾಬ್ದಾರಿಯಿಂದ ನಂಜಾವಧೂತ ಸ್ವಾಮೀಜಿಯನ್ನು ತೆರವುಗೊಳಿಸಬೇಕು ಎಂದು ವಕೀಲ ಟಿ.ಎಸ್.ರವಿ ಇಲ್ಲಿ ಶನಿವಾರ ಒತ್ತಾಯಿಸಿದರು. 03-08-1989ರ ವಿಲ್ಲನ್ನು ಆಧರಿಸಿ ನನಗೆ ಪ್ರೊಬೇಟ್ ನೀಡುವಂತೆ ಕೋರಿ ಸ್ವಾಮೀಜಿ, ಹೈಕೋರ್ಟ್ ಮೊರೆ ಹೋಗಿದ್ದರು. ಕಳೆದ ಮಾರ್ಚ್ 21ರಂದು ಪ್ರೊಬೇಟ್ ನಿರಾಕರಿಸಿ ಹೈಕೋರ್ಟ್ ಆದೇಶಿಸಿದೆ. ಈ ಆದೇಶದ ಪ್ರಕಾರ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ದೇವಸ್ಥಾನದ ಮೇಲೆ ಸ್ವಾಮೀಜಿಗೆ ಯಾವುದೇ ಹಕ್ಕು ಇರುವುದಿಲ್ಲ' ಎಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

**ಹಿನ್ನೆಲೆ:** ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ದೇವಸ್ಥಾನವನ್ನು ಕುರುಬ ಸಮಾಜದ ಸೋಮೇಲಿಂಗಪ್ಪ, ಚೌಡಪ್ಪ, ಮರಿಯಣ್ಣ ಎಂಬುವರು 1886ರಲ್ಲಿ ನಿರ್ಮಿಸಿರುವುದು ಗೆಜೆಟ್‌ನಲ್ಲಿ ದಾಖಲಾಗಿದೆ. ಈ ದೇವಸ್ಥಾನದ ಅಭಿವೃದ್ಧಿಗಾಗಿ ತಮಗೆ ಸೇರಿದ 250 ಎಕರೆ ಜಮೀನನ್ನು ದೇವರ ಹೆಸರಿನಲ್ಲಿರಿಸಲು ಉದ್ದೇಶಿಸಿದ್ದರು. ದೇಗುಲದ ವಿಧಿವಿಧಾನಗಳನ್ನು ನೋಡಿಕೊಳ್ಳಲು ಸ್ವಾಮಿ ಅರ್ಥದಲ್ಲಿ ನೇಮಕ ಮಾಡಿಕೊಂಡು ಬರಲಾಗಿದ್ದು, ಈವರೆಗೂ ಆರು ಮಂದಿ ನೇಮಕ ಮಾಡಲಾಗಿದೆ. ಕೊನೆಯದಾಗಿ ನೇಮಕಗೊಂಡ ಗುರುಕುಮಾರ ಅವಧೂತ ಸ್ವಾಮಿ ಈ ಜಮೀನು ಕಬಳಿಸಲು ಯತ್ನಿಸಿದ್ದರು ಎಂದು ಆರೋಪಿಸಿದರು.

### ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಸಿದ್ದ ಹುಲಿ ಕೊನೆಗೂ ಸೆರೆ

• ಉದಯವಾಹಿನಿ, ಮೈಸೂರು

ಮೈಸೂರು ಜಿಲ್ಲೆಯ ಎಚ್ ಡಿ ಕೋಟೆ ಭಾಗದಲ್ಲಿ ಸಾರ್ವಜನಿಕವಾಗಿ ಕಾಣಿಸಿಕೊಂಡು ಸ್ಥಳೀಯರಲ್ಲಿ ಆತಂಕ ಸೃಷ್ಟಿ ಮಾಡಿದ್ದ ಹುಲಿಯನ್ನು ಕರ್ನಾಟಕ ಅರಣ್ಯ ಇಲಾಖೆ ಅಧಿಕಾರಿಗಳು ಹಿಡಿಯುವಲ್ಲಿ ಕೊನೆಗೂ ಸಫಲರಾಗಿದ್ದಾರೆ. ಹೌದು.. ಎಚ್.ಡಿ.ಕೋಟೆ ತಾಲ್ಲೂಕಿನ ಮಳಲಿ ಗ್ರಾಮದ ಕಬಿನಿ ಹಿನ್ನೀರಿನ ಸಮೀಪದ ಡಿಸ್ಕವರಿ ವಿಲೇಜ್ ರೆಸಾರ್ಟ್ ಪಕ್ಕ ಎಂಟು ವರ್ಷದ ಗಂಡು ಹುಲಿಯನ್ನು ಶನಿವಾರ ಸೆರೆ ಹಿಡಿಯಲಾಗಿದೆ.

ಹುಲಿಯು ಜನ ವಸತಿ ಪ್ರದೇಶದಲ್ಲಿ ಮಧ್ಯಾಹ್ನದಿಂದಲೇ ಕಾಣಿಸಿಕೊಂಡಿದ್ದರಿಂದ, ಮುಂಜಾಗ್ರತಾ ಕ್ರಮವಾಗಿ ಅರಣ್ಯಾಧಿಕಾರಿಗಳು ಅರವಳಿಕೆ ಚುಚ್ಚುಮದ್ದು ನೀಡಿ ಸೆರೆ ಹಿಡಿದರು. 'ಹುಲಿಯು ಸಫಾರಿ ವಲಯದಲ್ಲೂ ಕಾಣಿಸಿಕೊಳ್ಳುತ್ತಿತ್ತು' ಎಂದು ಡಿಸಿಎಫ್ ಹರ್ಷಕುಮಾರ್ ಚಿಕ್ಕನರಗುಂದ ತಿಳಿಸಿದ್ದಾರೆ.

### ಚನ್ನಪಟ್ಟಣ ಕ್ರಾಫ್ಟ್ ಪಾರ್ಕ್‌ಗೆ ಫ್ರಾನ್ಸ್ ವಿದ್ಯಾರ್ಥಿಗಳ ತಂಡ ಭೇಟಿ

• ಉದಯವಾಹಿನಿ, ಚನ್ನಪಟ್ಟಣ

ಫ್ರಾನ್ಸ್ ದೇಶದ ಲಿಸಾ ಸ್ಕೂಲ್ ಆಫ್ ಡಿಸೈನಿಂಗ್ ವಿದ್ಯಾರ್ಥಿಗಳು ಚನ್ನಪಟ್ಟಣ ಕ್ರಾಫ್ಟ್ ಪಾರ್ಕ್‌ಗೆ ಭೇಟಿ ನೀಡಿ ಬೊಂಬೆ ತಯಾರಿಕಾ ಸಾಂಪ್ರದಾಯಿಕ ಕಲೆ ಬಗ್ಗೆ ತಿಳಿದುಕೊಂಡರು. ಕರ್ನಾಟಕ ಪ್ರವಾಸದ ಭಾಗವಾಗಿ ಭೇಟಿ ನೀಡಿದ್ದರು.ಬೊಂಬೆ ತಯಾರಿಕಾ ಕುಶಲಕರ್ಮಿಗಳೊಂದಿಗೆ ಸಂವಾದ ನಡೆಸಿದರು. ಬೊಂಬೆಗಳಿಗೆ ಬಳಸುವ ಮರ, ಬೊಂಬೆ ಮಾಡುವ ಮೊದಲು ಮಾಡಿಕೊಳ್ಳುವ ತಯಾರಿಕೆ, ಬೊಂಬೆಗಳಿಗೆ ಬಣ್ಣ ಹಾಕುವ ವಿಧಾನ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಮಾಹಿತಿ ಪಡೆದರು.

ಅಂತರಾಳದಿಂದ..
EDITORIAL

# ಹಾಸನ ಲೈಂಗಿಕ ದೌರ್ಜನ್ಯ ಪ್ರಕರಣ, ನಿಷ್ಪಕ್ಷಪಾತ ತನಿಖೆಯಾಗಲಿ

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೊಗಳು, ಲೈಂಗಿಕ ದೌರ್ಜನ್ಯ, ಸಂತ್ರಸ್ತೆಯ ಅಪಹರಣ ಪ್ರಕರಣದಲ್ಲಿ ಮಾಜಿ ಸಚಿವ, ಜೆಡಿಎಸ್ ನಾಯಕ ಎಚ್.ಡಿ.ರೇವಣ್ಣ ಅವರನ್ನು ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಸಂತ್ರಸ್ತೆಯ ಅಪಹರಣ ಪ್ರಕರಣದಲ್ಲಿ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಎಚ್.ಡಿ.ರೇವಣ್ಣ ಅವರಿಗೆ ಮಧ್ಯಂತರ ನಿರೀಕ್ಷಣಾ ಜಾಮೀನು ನಿರಾಕರಿಸುತ್ತಲೇ ಎಸ್‌ಐಟಿ ಅಧಿಕಾರಿಗಳು ರೇವಣ್ಣ ಅವರನ್ನು ವಶಕ್ಕೆ ಪಡೆದರು. ಕರ್ನಾಟಕ ಸೇರಿ ದೇಶಾದ್ಯಂತ ಸುದ್ದಿಯಾಗಿರುವ ಪೆನ್‌ಡ್ರೈವ್ ಕೇಸ್‌ನಲ್ಲಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಪುತ್ರ ಎಸ್‌ಐಟಿ ವಶಕ್ಕೆ ಸೇರಿದ್ದು, ಪ್ರಕರಣಕ್ಕೆ ಮಹತ್ವದ ತಿರುವೊಂದು ಸಿಕ್ಕಿದೆ. ಲೈಂಗಿಕ ದೌರ್ಜನ್ಯ ಪ್ರಕರಣದ ಸಂತ್ರಸ್ತೆಯನ್ನು ಅಪಹರಣ ಮಾಡಿದ ಕೇಸ್‌ನಲ್ಲಿ ಮೊದಲ ಆರೋಪಿಯಾಗಿರುವ ರೇವಣ್ಣ ಅವರನ್ನು ಬಂಧಿಸಿದ 24 ಗಂಟೆಯೊಳಗೆ ನ್ಯಾಯಾಲಯಕ್ಕೆ ಹಾಜರುಪಡಿಸಬೇಕಿದೆ. ಮಾಜಿ ಪ್ರಧಾನಿ ದೇವೇಗೌಡರ ನಿವಾಸದಲ್ಲೇ ಅವರು ಸೆರೆಸಿಕ್ಕಿದ್ದಾರೆ. ಇಲ್ಲಿಗೆ ಪ್ರಕರಣ ಕುತೂಹಲಕಾರಿ ಘಟ್ಟ ಮುಟ್ಟಿದೆ.

> ಬಂಧಿತ ರೇವಣ್ಣ ಅವರ ಪುತ್ರ, ಹಾಸನ ಸಂಸದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಎರಡನೇ ಆರೋಪಿಯಾಗಿದ್ದಾರೆ. ಇವರು ಇನ್ನೂ ಎಸ್‌ಐಟಿಗೆ ಸಿಕ್ಕಿಲ್ಲ. ಪ್ರಜ್ವಲ್ ಅವರ ಸುಳಿವು ಪತ್ತೆ ಹಚ್ಚಲು ಇಂಟರ್‌ಪೋಲ್‌ನಿಂದ ಬ್ಲೂ ಕಾರ್ನರ್ ನೋಟಿಸ್ ಪಡೆಯಲು ಎಸ್‌ಐಟಿ ಪ್ರಯತ್ನಿಸುತ್ತಿದೆ. ಪ್ರಭಾವಿಗಳೇ ಭಾಗಿಯಾಗಿರುವ ಆರೋಪವಿರುವ ಪ್ರಕರಣದ ಕುರಿತು ನಿಷ್ಪಕ್ಷಪಾತವಾದ ತನಿಖೆಯಾದರೆ ಮಾತ್ರ ಸಂತ್ರಸ್ತರಿಗೆ ಕನಿಷ್ಠ ನ್ಯಾಯ ಒದಗಿಸಲು ಸಾಧ್ಯವಾಗಲಿದೆ.

ರೇವಣ್ಣ ಅವರ ಪುತ್ರ, ಹಾಸನ ಸಂಸದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಎರಡನೇ ಆರೋಪಿಯಾಗಿದ್ದಾರೆ. ಇವರು ಇನ್ನೂ ಎಸ್‌ಐಟಿಗೆ ಸಿಕ್ಕಿಲ್ಲ. ಪ್ರಜ್ವಲ್ ಅವರ ಸುಳಿವು ಪತ್ತೆ ಹಚ್ಚಲು ಇಂಟರ್‌ಪೋಲ್‌ನಿಂದ ಬ್ಲೂ ಕಾರ್ನರ್ ನೋಟಿಸ್ ಪಡೆಯಲು ಎಸ್‌ಐಟಿ ಪ್ರಯತ್ನಿಸುತ್ತಿದೆ. ಅವರು ಎಲ್ಲಿದ್ದಾರೆ ಎಂಬ ಸುಳಿವು ಸಿಕ್ಕಿದ್ದರೆ ಅವರ ಬಂಧನ ಪ್ರಕ್ರಿಯೆ ಸುಲಭವಾಗಲಿದೆ. ''ಕಾನೂನು ಪ್ರಕಾರ ಯಾವ ಪ್ರಕ್ರಿಯೆ ಅನುಸರಿಸಬೇಕೋ, ಅದೆಲ್ಲವನ್ನೂ ಅನುಸರಿಸಲಾಗುತ್ತದೆ. ಕಾನೂನು ಪ್ರಕಾರ ರೇವಣ್ಣ ಪ್ರಕ್ರಿಯೆ ನಡೆದುಕೊಳ್ಳುತ್ತಾರೆ. ಪ್ರಜ್ವಲ್ ರೇವಣ್ಣ ಕೂಡ ಆಗಮಿಸಲಿದ್ದಾರೆ. ಅವರು ಪೊಲೀಸರಿಗೆ ಶರಣಾಗಲಿದ್ದಾರೆ'' ಎಂಬುದಾಗಿ ಜೆಡಿಎಸ್ ನಾಯಕ, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಮಾಹಿತಿ ನೀಡಿದ್ದಾರೆ. ಆದರೆ ಪ್ರಜ್ವಲ್ ಯಾವಾಗ ಭಾರತಕ್ಕೆ ವಾಪಸಾಗಲಿದ್ದಾರೆ ಎಂಬುದರ ಕುರಿತು ಅವರು ಮಾಹಿತಿ ನೀಡಿಲ್ಲ. ಪ್ರಕರಣ ಗಂಭೀರ ಸ್ವರೂಪದ್ದಾಗಿರುವುದರಿಂದ, ಸಂತ್ರಸ್ತರು ಹಲವು ಮಂದಿ ಇರುವುದರಿಂದ, ಎಸ್‌ಐಟಿ ಚುರುಕಾಗಿ ತನಿಖೆ ನಡೆಸುತ್ತಿದೆ. ಇನ್ನು, ಆಡಳಿತ ಪಕ್ಷ ಕಾಂಗ್ರೆಸ್‌ಗೆ ಜೆಡಿಎಸ್ ಅನ್ನು ಹಣಿಯಲು ಸಿಕ್ಕಿರುವ ಸುವರ್ಣಾವಕಾಶವೂ ಇದಾಗಿರುವುದರಿಂದ, ಗೃಹ ಇಲಾಖೆಯೂ ಬಹಳ ಚುರುಕಾಗಿಯೇ ಇದರಲ್ಲಿ ತೊಡಗಿಕೊಂಡಿದೆ. ಪೊಲೀಸರ ಚುರುಕುತನಕ್ಕೆ ಕಾನೂನು ಪ್ರಕಾರ ನಡೆದುಕೊಳ್ಳಬೇಕು ಎಂಬ ನ್ಯಾಯನಿಷ್ಪಕ್ಷಪಾತತೆ ಕಾರಣವೋ, ಅಥವಾ ಮೇಲಿನವರ ಒತ್ತಡವೋ ಎಂದು ಕೇಳಿದರೆ ಸರಿಯಾದ ಉತ್ತರ ಸಿಗಲಾರದು. ಪ್ರಭಾವಿಗಳು ಅಪರಾಧ ನಡೆಸಿದಾಗ ಅವರನ್ನು ಹೆಡೆಮುರಿ ಕಟ್ಟುವಲ್ಲಿ ಪೊಲೀಸರು ಇಷ್ಟೊಂದು ಚುರುಕಾಗಿ ಕಾರ್ಯಪ್ರವೃತ್ತರಾಗುವುದನ್ನು ಹಿಂದೆ ಎಂದೂ ಈ ರಾಜ್ಯ ಕಂಡಿರಲಿಲ್ಲ. ಅಷ್ಟರ ಮಟ್ಟಿಗೆ ಪೊಲೀಸ್ ಇಲಾಖೆಯನ್ನು ಚುರುಕಾಗಿಸಿದ ಈ ಪ್ರಕರಣ ವಿಶೇಷವೇ ಸರಿ. ಕಾನೂನಿನ ಕೈಗಳಿಂದ ಯಾರೂ ತಪ್ಪಿಸಿಕೊಳ್ಳುವಂತಿಲ್ಲ. ನ್ಯಾಯದ ಮುಂದೆ ಎಲ್ಲರೂ ಒಂದೇ. ಇವೆರಡೂ ಸುಂದರವಾದ ಹೇಳಿಕೆಗಳು. ಆದರೆ ವಾಸ್ತವದಲ್ಲಿ ಇವು ಎಷ್ಟು ಸತ್ಯವಾಗಿವೆ ಎಂಬುದನು ಪರಿಶೀಲಿಸಬೇಕು. ರೇವಣ್ಣ ಹಾಗೂ ಪ್ರಜ್ವಲ್ ಇಬ್ಬರೂ ಪ್ರಭಾವಿಗಳು. ಕೇಂದ್ರದಲ್ಲಿ ಆಡಳಿತದಲ್ಲಿರುವ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿರುವ ಜೆಡಿಎಸ್‌ನ ಪ್ರಮುಖ ನಾಯಕರು. ಸಂತ್ರಸ್ತೆ, ದೂರುದಾರರು ಗಟ್ಟಿಯಾಗಿ ನಿಂತು, ಪೊಲೀಸರು ಸಾಕ್ಷ್ಯಗಳನ್ನು ಕರಾರುವಕ್ಕಾಗಿ ಕಲೆಹಾಕಿ ಕೋರ್ಟ್‌ನಲ್ಲಿ ಮಂಡಿಸಿ, ವಿಚಾರಣೆ ಪಾರದರ್ಶಕವಾಗಿ ನಡೆದರೆ ಆರೋಪಿಗಳಿಗೆ ಶಿಕ್ಷೆಯಾಗಬಹುದು. ಇನ್ನು ಮುಂದಿನ ಕೆಲಸ ಪೊಲೀಸರಿಗೂ ಕೋರ್ಟಿಗೂ ಬಿಟ್ಟದ್ದು. ಈ ಹಿಂದಿನ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಎಷ್ಟು ಸಾಬೀತಾಗಿದೆ, ಎಷ್ಟರಲ್ಲಿ ಶಿಕ್ಷೆಯಾಗಿದೆ ಎಂಬ ಅಂಕಿಅಂಶಗಳನ್ನು ತೆಗೆದು ನೋಡಿದರೆ ನಿರಾಶೆಯಾಗುತ್ತದೆ. ಈ ಪ್ರಕರಣವೂ ಆ ಸಾಲಿಗೆ ಸೇರದಿರಲಿ. ''ಅಪರಾಧ ನಡೆದಿದ್ದರೆ ಕಾನೂನು ಪ್ರಕಾರ ಶಿಕ್ಷೆಯಾಗಲಿ'' ಎಂದು ಜೆಡಿಎಸ್ ನಾಯಕ ಕುಮಾರಸ್ವಾಮಿ ಅವರೂ ಹೇಳಿದ್ದಾರೆ; ಬಿಜೆಪಿ ನಾಯಕರೂ ಹೇಳಿದ್ದಾರೆ. ಪ್ರಕರಣದ ಗಂಭೀರತೆ ಅವರನ್ನು ಅಲುಗಾಡಿಸಿರುವುದು ಅವರ ವರ್ತನೆಯಲ್ಲಿ ಗೋಚರಿಸುತ್ತಿದೆ. ಪ್ರಜ್ವಲ್ ಹಾಗೂ ರೇವಣ್ಣ ಅವರನ್ನು ಸಮರ್ಥಿಸಿಕೊಳ್ಳಲು ಯಾರೂ ಮುಂದಾಗಿಲ್ಲ, ಅದು ಸಾಧ್ಯವೂ ಇಲ್ಲ. ಆದರೆ ಈ ಚುನಾವಣೆಯ ಸಂದರ್ಭದಲ್ಲಿ ಉಂಟಾದ ಮೈತ್ರಿ ಏನಾಗಲಿದೆ? ಈ ಪ್ರಕರಣದಿಂದ ಜೆಡಿಎಸ್‌ಗಂತೂ ಲಾಭವಿಲ್ಲ. ಬಿಜೆಪಿಗೂ ಇದ್ದಂತಿಲ್ಲ. ರಾಜ್ಯದಲ್ಲಿ ಎರಡನೇ ಹಂತದ ಲೋಕಸಭೆ ಚುನಾವಣೆ ಇದೇ 7ರಂದು ನಡೆಯಲಿದೆ. ಈ ಘಟ್ಟದಲ್ಲೇ ಪ್ರಜ್ವಲ್- ರೇವಣ್ಣ ಪ್ರಕರಣ ಸೃಷ್ಟಿಸಿರುವ ಕೋಲಾಹಲ, ಪಕ್ಷದ ಕಾರ್ಯಕರ್ತರನ್ನು ಹತಾಶೆಗೊಳಿಸಿಲ್ಲ ಅಥವಾ ಮತದಾರರನ್ನು ಜೆಡಿಎಸ್‌ನಿಂದ ವಿಮುಖಗೊಳಿಸಿಲ್ಲ ಎಂದು ಹೇಳುವುದು ಹೇಗೆ ಇದು ರಾಜ್ಯದ ಚುನಾವಣೆ ಮೇಲೆ ಹೇಗೆ ಪ್ರಭಾವ ಬೀಳುವುದೋ, ಫಲಿತಾಂಶ ಬಂದ ನಂತರವೇ ತಿಳಿಯಬೇಕು. ಆಗ ಬಿಜೆಪಿ- ಜೆಡಿಎಸ್ ಮೈತ್ರಿಯ ಕತೆಯೂ ನಿರ್ಧಾರವಾಗಬಹುದು. ಕರ್ನಾಟಕದ ಏಕೈಕ ಪ್ರಬಲ ಪ್ರಾದೇಶಿಕ ಪಕ್ಷವೆನಿಸಿದ್ದ ಜೆಡಿಎಸ್‌ಗೆ ಇದರಿಂದ ಏನಾಗಲಿದೆ ಅದು ಫೀನಿಕ್ಸ್‌ನಂತೆ ಧೂಳಿನಿಂದ ಮೇಲೆದ್ದು ಬರಲಿದೆಯೋ ಅಥವಾ ಸರ್ವನಾಶವಾಗಲಿದೆಯೋ ಹೀಗೆ ಹಲವು ಪ್ರಶ್ನೆಗಳು ಮೂಡುತ್ತವೆ. ಸದ್ಯಕ್ಕಂತೂ ಒಬ್ಬ ಆರೋಪಿಯ ಸೆರೆಯಾಗಿದೆ. ಇನ್ನೊಬ್ಬ ಆರೋಪಿಯ ಬಂಧನವಾಗಬೇಕಿದೆ. ನಿಷ್ಪಕ್ಷಪಾತವಾದ ತನಿಖೆ ನಡೆದು ಸತ್ಯ ಹೊರಬೀಳಲಿ. ನೂರಾರು ಸಂತ್ರಸ್ತೆಯರ ನಿಟ್ಟುಸಿರಿಗೆ ಕಾರಣವಾದವರು ಶಿಕ್ಷೆಗೆ ಒಳಗಾಗಲಿ. ಹಾಗೆಯೇ, ಮುಖ ಬ್ಲರ್ ಕೂಡ ಮಾಡದೆ ಸಂತ್ರಸ್ತ ಮಹಿಳೆಯರ ಸಾರ್ವಜನಿಕ ಅವಮಾನಕ್ಕೆ ಕಾರಣವಾದವರಿಗೆ ಕೂಡ ಶಿಕ್ಷೆಯಾಗಲಿ.



# ಮಹಾಭಾರತ
## ವಿರಾಟ ಪರ್ವ

• ಹಿಂದಿನ ಸಂಚಿಕೆಯಿಂದ


ಪಾಂಡವಸೈನ್ಯವು ಕೌರವರನ್ನು ಹಿಂದಕ್ಕೊತ್ತಿ ಮುನ್ನುಗ್ಗತೊಡಗಿತು. ರಾಧೇಯನ ರಥವು ರಣರಂಗದಲ್ಲಿ ವಾಯುವೇಗದಿಂದ ಸಂಚರಿಸುತ್ತಿರುವುದನ್ನೂ, ನರ್ತಿಸುತ್ತಿರುವಂತೆ ಕಾಣುವಷ್ಟು ಕೈಚಳಕದಿಂದ ಅವನು ಎಲ್ಲರೊಡನೆ ಹೋರುತ್ತಿರುವುದನ್ನೂ ಕಂಡು ಕೃಷ್ಣನು, ರಾಧೇಯನು ಯುದ್ಧಮಾಡುವುದನ್ನು ನೋಡುವುದೇ ಒಂದು ಚೆಂದ. ಅವನು ಬಾಣಗಳನ್ನು ಸೆಳೆಸೆಳೆದು ಬಿಡುವ ವೈಖರಿಯನ್ನು ನೋಡು. ಅವನ ವಿಶಾಲವೂ ಸುಂದರವೂ ಆದ ಎದೆಯನ್ನು ನೋಡು. ಯುದ್ಧರಂಗದಲ್ಲಿ ಸತ್ತಿರುವ ಸೈನಿಕರನ್ನು ನೋಡು: ಪ್ರತಿಯೊಬ್ಬರಿಗೂ ರಾಧೇಯನ ಹೆಸರುಳ್ಳ ಬಾಣ ಚುಚ್ಚಿಕೊಂಡಿರುವುದನ್ನು. ನೀನು ಅವನೊಡನೆ ಯುದ್ಧಮಾಡುವ ಕಾಲ ಬಂದೊದಗಿದೆ. ಬೇಗ ಬಾ ಹೋಗೋಣ. ಸಾಧ್ಯವಾದಷ್ಟು ಬೇಗ ನಾವು ಅವನನ್ನು ಸಂಧಿಸೋಣ ಎಂದನು.

ರಾಧೇಯ ಯುಧಿಷ್ಠಿರರು ಮತ್ತೊಮ್ಮೆ ದ್ವಂದ್ವದಲ್ಲಿ ತೊಡಗಿಕೊಂಡರು. ರಾಧೇಯನು ಅವನನ್ನು ಗಾಯಗೊಳಿಸಿ ಸೋಲಿಸಲು, ಯುಧಿಷ್ಠಿರನಿಗೆ ಎದ್ದು ನಿಲ್ಲುವುದೇ ಕಷ್ಟವಾಯಿತು. ರಾಧೇಯನ ಬಾಣಗಳಿಂದಾದ ನೋವನ್ನು ತಾಳಲಾರದೆ ಅವನು ತನ್ನ ಡೇರೆಗೆ ಹೋಗಿ ಮಲಗಿಕೊಂಡನು. ರಾಧೇಯನ ಮಾತುಗಳಿಂದಲೂ ನೊಂದಿದ್ದ ಅವನು ತುಂಬ ಖಿನ್ನನಾಗಿದ್ದನು. ಯುದ್ಧವೇ ಬೇಕಿರದಿದ್ದ ಅವನಿಗೆ, ನಡೆಯುತ್ತಿರುವ ಘಟನೆಗಳಿಂದ ಬೇಜಾರು ಹೆಚ್ಚಾಗುತ್ತಿದ್ದಿತು. ಈಗ ಯುದ್ಧದಲ್ಲಿ ಸಿಕ್ಕಿಕೊಂಡಾದ ಮೇಲೆ, ಈ ಕೊನೆಯಿಲ್ಲದ ಯಾತನೆ ಇನ್ನೂ ಎಷ್ಟು ಕಾಲ ಅರ್ಜುನ ಇನ್ನೂ ಹೆಚ್ಚಿನ ವೀರಾವೇಶದಿಂದ ಹೋರಾಡಲೊಲ್ಲನೇಕೆ ಏಕಾಂಗಿಯಾಗಿ ಶತ್ರುಗಳನ್ನು ಕೊಲ್ಲುತ್ತೇನೆ ಎಂದವನಲ್ಲವೆ ಅವನು ಅಂಥದೇನನ್ನು ಮಾಡಿದ್ದಾನೆ ಅವನಜ್ಜನಂತೆ ಸಾಮಾನ್ಯ ಸೈನಿಕರನ್ನು ಕೊಚ್ಚುತ್ತಿದ್ದಾನೆ. ಮುಖ್ಯವಾಗಿ ಅಪಾಯಕಾರಿಯಾದ ರಾಧೇಯನನ್ನು ಇನ್ನೂ ಎದುರಿಸಿಯೇ ಇಲ್ಲ; ಅವನು ತನ್ನ ಪ್ರತಿಜ್ಞೆಯನ್ನು ಮರೆತೇಬಿಟ್ಟಿರುವಂತೆ ತೋರುತ್ತದೆ.

ತನಗೆ ರಾಧೇಯನು ನೀನು ಕ್ಷತ್ರಿಯನಾಗಿರುವುದರಿಂದಕ್ಕಿಂತ ಬ್ರಾಹ್ಮಣನಾಗಿರುವುದಕ್ಕೇ ಯೋಗ್ಯ ಎಂದನಲ್ಲವೆ! ಈ ಮಾತನ್ನು ಅರ್ಜುನನಿಗೆ ಹೇಳಿದರೇ ಚೆನ್ನಾಗಿರುತ್ತದೆ. ಯುದ್ಧಮಾಡುವುದಕ್ಕೆ ಇಷ್ಟವೇ ಇಲ್ಲವೇನೋ ಎನ್ನುವಷ್ಟು ಮೃದುವಾಗಿ ಹೋರುತ್ತಾನೆ. ಭೀಮ ನಕುಲ ಸಹದೇವರುಗಳು ಮಾತ್ರ ಹೃತ್ಪೂರ್ವಕವಾಗಿ ಯುದ್ಧಮಾಡುತ್ತಿದ್ದಾರೆ. ಆದರೆ ಎರಡೂ ಕಡೆಯ ಸೈನ್ಯಗಳು ದಿನೇ ದಿನೇ ಸೋಲುತ್ತಿವೆಯೇ ಹೊರತು ಮುಖ್ಯರಾದವರು ಸಾಯುತ್ತಿಲ್ಲ. ತಾನು ಪ್ರತಿಜ್ಞೆ ಪೂರೈಸಿಕೊಳ್ಳುವುದಿರಲಿ, ಧೃಷ್ಟದ್ಯುಮ್ನ ಪ್ರತಿಜ್ಞೆಯನ್ನು ಪೂರೈಸಿಕೊಂಡದ್ದಕ್ಕೂ ಅರ್ಜುನ ಕೆಂಡ ಕಾರಿದ. ಹೀಗೆ ಯೋಚನೆಗಳು ಯುಧಿಷ್ಠಿರನ ಮನಸ್ಸಿನಲ್ಲಿ ಓಡುತ್ತಿದ್ದವು. ರಣಘೋರನಾಗಿ ಪರಿಣಮಿಸಿದ್ದ ರಾಧೇಯ ನಿದ್ದೆಡೆಗೆ ಅರ್ಜುನ ಹೋಗತೊಡಗಿದ. ಅಲ್ಲಿ ಅವನು ಯುಧಿಷ್ಠಿರನನ್ನು ಕಾಣಲಿಲ್ಲ. ಗಾಯಗೊಂಡು ತನ್ನ ಡೇರೆಗೆ ಹೋದನೆಂದು ಭೀಮನಿಂದ ತಿಳಿದ ಕೂಡಲೆ, ಶತ್ರುನಿಗ್ರಹವನ್ನು ಅವನಿಗೆ ವಹಿಸಿ ಅಣ್ಣನನ್ನು ನೋಡಲು ಅವನ ಡೇರೆಗೆ ಕೃಷ್ಣನೊಡನೆ ಬಂದ. ಖಿನ್ನನಾಗಿ ಮಲಗಿದ್ದ ಯುಧಿಷ್ಠಿರನು ಕೃಷ್ಣಾರ್ಜುನರು ಬಂದದ್ದನ್ನು ನೋಡಿ ಮೇಲೆದ್ದು ಸ್ವಾಗತಿಸಿದ.

ಮುಂದುವರಿಯುವುದು...

# ವಯೋವೃದ್ಧರಿಗೆ ಕೃತಕ ಹಲ್ಲಿನ ಬಗ್ಗೆ ಮಾಹಿತಿ



ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ


• ಉದಯವಾಹಿನಿ ವಿಶೇಷ

**ಕಾಲವದು ಕಳೆಯುವುದು ಯಾರಿರಲು ಕಾಯದಲೆ ಸಾಲವನ್ನು ಮಾಡದಿರು ಒಳಿತಿರದದು ಮಾಲೆಯನು ಮಾಡುತಲಿ ಸಾಗುತಿರೆ ಜೀವನವು ಪಾಲಕನು ನೀನಾಗಿ ಲಕ್ಷ್ಮಿ ದೇವಿ....**

ಸಮಯ ಎಂಬುದು ನಿಂತ ನೀರಿನಂತೆ ಅಲ್ಲ. ಅದು ಹರಿಯುವ ನೀರಿನಂತೆ ಸಾಗುತ್ತಿರುತ್ತದೆ. ವಯಸ್ಸು ಅಷ್ಟೇ ಕಾಲ ಕಳೆದಂತೆ ವಯಸ್ಸಾಗುವುದು ಸಹಜ. ಹಾಗೆಯೇ ಭಾವನೆಗಳನ್ನು ಮಾಲೆಯ ರೀತಿ ಮಾಡುತ್ತಾ ಸಾಗುತ್ತಿರಬೇಕು. ಹಾಗೆ ನಾವು ಸಾಲವನ್ನು ಮಾಡಿದರೆ ಅದು ಒಳಿತಲ್ಲ. ನಮ್ಮ ಪಾಲಕರು ನಮ್ಮನ್ನು ಸಾಕುತ್ತಾರೆ. ಅಂಥವರು ವಯಸ್ಸಾದ ಸಮಯದಲ್ಲಿ ಬಹಳಷ್ಟು ಆರೋಗ್ಯದ ಸಮಸ್ಯೆಯನ್ನು ಎದುರಿಸುತ್ತಾರೆ. ಅದರಲ್ಲಿ ದಂತಪಂಕ್ತಿಯ ಸಮಸ್ಯೆಗಳು ಒಂದು.

ನಾನು ಹೀಗೆ ಸಂದರ್ಶನಕೆಂದೆ ಹಾಸನದ ದಂತ ವೈದ್ಯಕೀಯ ಕಾಲೇಜಿಗೆ ಹೋಗಿದ್ದೆ. ಅಲ್ಲಿ ಕೃತಕ ಹಲ್ಲಿನ ಜೋಡಣೆಯ ಕಾರ್ಯವನ್ನು ಮಾಡುತ್ತಿದ್ದರು. ದಂತ ಪಂಕ್ತಿಗಳು ಸ್ವಾಭಾವಿಕ ಹಲ್ಲುಗಳಲ್ಲ ಬದಲಾಗಿ ಮನುಷ್ಯನಿಂದ ಮಾಡಲ್ಪಟ್ಟ ಕೃತಕ ಹಲ್ಲುಗಳು. ಅಲ್ಲಿ ಒಬ್ಬ ವೃದ್ಧರಿಗೆ ಕೃತಕ ಹಲ್ಲಿನ್ನು ಮಾಡಲು ಅಳತೆಯ ಕಾರ್ಯ ನಡೆಯುತ್ತಿತ್ತು. ಶ್ರೀ ಡಾ. ಸೋಯಬ್ ಖಾನ್ ಎಂಬುವವರು ಹಾಗೂ ಡಾ. ನಿವೇದಿತ ಹೆಗಡೆಯವರು ಅಲ್ಲಿ ಕಾರ್ಯವನ್ನು ನಿರ್ವಹಿಸುತ್ತಿದ್ದರು.

ಡಾ. ಸೋಯಬ್ ಖಾನ್ ರವರು ಬಹಳ ಕಷ್ಟಪಟ್ಟು ಒಬ್ಬ ವೃದ್ಧರಿಗೆ ಕೃತಕ ಹಲ್ಲಿನ ಜೋಡಣೆಗೆ ಅಳತೆಯನ್ನು ಪಡೆಯುತ್ತಿದ್ದರು . ಆ ವೃದ್ಧರಿಗೆ ಕಿವಿ ಕೇಳಿಸದು.



ಉದಯವಾಹಿನಿ ಚಿತ್ರ

ಅವರು ಯಾವ ರೀತಿಯಾಗಿ ಕಷ್ಟಪಟ್ಟು ಸಂಭಾಷಣೆ ಮಾಡುತ್ತಿದ್ದರೆಂದರೆ ಅಲ್ಲಿ ನೆರೆದಿದ್ದ ಇತರರೆಲ್ಲರೂ ನಗುತಿದ್ದರು. ಆ ನಗುವನ್ನು ಗಮನಿಸದೇ ಅವರು ನಕ್ಕು ಅವರಿಗೆ ಕಿವಿ ಕೇಳಿಸದು ಆದ್ದರಿಂದ ನಾನು ಏರು ಧ್ವನಿಯಲ್ಲಿ ಮಾತನಾಡುತ್ತಿದ್ದೇನೆ ಎಂದು ಹೇಳುತ್ತಿದ್ದರು. ನಾನು ಅದನ್ನೆಲ್ಲ ಗಮನಿಸುತ್ತಿದ್ದೆ. ನಾನು ಅವರಲ್ಲಿ ಕೆಲವು ಪ್ರಶ್ನೆಗಳನ್ನು ಕೇಳಿದೆ ಡಾ.ಸೋಯಬ್ ರವರು ಆರಾಮವಾಗಿಯೇ ನನ್ನ ಪ್ರಶ್ನೆಗಳಿಗೆ ಉತ್ತರಿಸಿದರು. ಅಲ್ಲಿ ಇದ್ದ ನಿವೇದಿತಾ ಮೇಡಂ ರವರಿಗೆ ಕೇಳಿದೆ ಇದರ ಬಗ್ಗೆ ಸ್ವಲ್ಪ ಮಾಹಿತಿಯನ್ನು ನೀಡಿದರೆ ವಯೋ ವೃದ್ಧರಿಗೆ ಸಹಕಾರವಾಗುತ್ತದೆ ಎಂದು ಕೇಳಿದೆ. ಅವರು ನಗುಮುಖದಿಂದಲೇ ಆಯ್ತು ಮೇಡಂ ತೆಗೆದುಕೊಳ್ಳಿ ಎಂದರು. ಬಹಳಷ್ಟು ಮಾಹಿತಿಯನ್ನು ನೀಡಿದರು. ಕೃತಕ ದಂತ ಪಂಕ್ತಿ ಗಳನ್ನು ಅಳವಡಿಸಿಕೊಂಡಾಗ ಯಾವ ಯಾವ ನಿಯಮಗಳನ್ನು ಅನುಸರಿಸಬೇಕೆಂಬುದನ್ನು ತಿಳಿಸಿದರು. ನಾನು ಅವರೊಂದಿಗೆ ಸ್ವಲ್ಪ ಹೊತ್ತು ಚರ್ಚೆಯನ್ನು ಮಾಡಿದ ನಂತರ ಒಂದು ಸಮಾಲೋಚನೆಯ ರೀತಿಯಲ್ಲಿ ವಿಚಾರಗಳನ್ನು ತಿಳಿದುಕೊಂಡೆ ನಮ್ಮ ದೇಹದ ಪ್ರತಿಯೊಂದು ಪುಟ್ಟ ಪುಟ್ಟ ಅಂಗಾಂಗಗಳು ಸಹ ಬಹಳ ಮುಖ್ಯವಾದ ಪಾತ್ರವನ್ನು ವಹಿಸುತ್ತವೆ. ಅದನ್ನು ಅರಿತುಕೊಂಡು ಕೆಲಸದ ಒತ್ತಡಗಳಲ್ಲಿ ಮರೆಯದಂತೆ ನಮ್ಮ ಆರೋಗ್ಯವನ್ನು ಗಮನ ವಹಿಸುವುದು ಮುಖ್ಯವಾಗಿದೆ. ನನಗೆ ಅಲ್ಲಿ ಹಲವಾರು ಮಾಹಿತಿಗಳನ್ನು ನೀಡಿದ್ದನ್ನು ಸಂದರ್ಶನ ರೀತಿಯಲ್ಲೂ ಪಡೆದೆ. ಕೃತಕ ಹಲ್ಲುಗಳ ಜೋಡಣೆ ಮಾಡಿಸಿಕೊಳ್ಳುವವರು ಅನುಸರಿಸಬೇಕಾದಂತಹ ಹಲವು ವಿಚಾರಗಳನ್ನು ಈ ಕೆಳಕಂಡಂತೆ ವಿವರಿಸಿದ್ದೇನೆ.

- **ಮೊದಲನೆಯ ದಿನದಂತ ಪಟ್ಟಿಗಳನ್ನು 24 ಗಂಟೆಗಳವರೆಗೆ ಧರಿಸಬೇಕು**
- **ಮೊದಲನೆಯ ದಿನದ ನಂತರ ಮಲಗುವಾಗ ದಂತ ಪಂಕ್ತಿಗಳನ್ನು ಧರಿಸಬಾರದು ಹಾಗೂ ಮಲಗುವ ಮುನ್ನ ಸಾಬೂನಿನಿಂದ ಸ್ವಚ್ಛಗೊಳಿಸಿ ಶುದ್ಧ ನೀರಿನಲ್ಲಿ ಇಡಬೇಕು**
- **ಹೊರಗೆ ತೆಗೆದಿಡಬೇಕಾದ ಸಂದರ್ಭದಲ್ಲಿ ಅದನ್ನು ನೀರಿನಲ್ಲಿ ಇಡಬೇಕು. ಇಲ್ಲವಾದಲ್ಲಿ ಅದು ಕುಗ್ಗುವ ಸಾಧ್ಯತೆ ಇದೆ**
- **ದಂತಪಂಕಿಗಳನ್ನು ಸಾಬೂನಿನಲ್ಲಿ ತೊಳೆಯುವ ಸಮಯದಲ್ಲಿ ಅವು ಕೆಳಗೆ ಬೀಳದಂತೆ ಜಾಗ್ರತೆ ವಹಿಸಬೇಕು**
- **ಕೆಲವು ದಿನಗಳವರೆಗೆ ಮಾತನಾಡಲು ತೊಂದರೆಯಾಗಬಹುದು. ದಯವಿಟ್ಟು ಅಭ್ಯಾಸ ಆಗುವವರೆಗೆ ಜೋರಾಗಿ ಮಾತನಾಡಿ ಹಾಗೂ ದಿನಪತ್ರಿಕೆಗಳನ್ನು ಜೋರಾಗಿ ಓದಿ ಅಭ್ಯಾಸ ಮಾಡಿಕೊಳ್ಳಿ.**
- **ಹೊಸದಾಗಿ ದಂತಪಂತಿಗಳನ್ನು ಧರಿಸುವವರು ಎರಡು ಮೂರು ದಿನಗಳವರೆಗೆ ತಿನ್ನುವಾಗ ಅವುಗಳನ್ನು ಹೊರತೆಗೆಯಬೇಕು.**
- **ಗಟ್ಟಿ ಪದಾರ್ಥಗಳನ್ನು ಅಥವಾ ಗಟ್ಟಿಯಾದ ಹಣ್ಣುಗಳನ್ನು ತಿನ್ನುವಾಗ ಸಣ್ಣ ಸಣ್ಣ ಚೂರುಗಳನ್ನು ಮಾಡಿ ದವಡೆಯ ಎರಡು ಬದಿಯಲ್ಲಿ ತಿನ್ನಬೇಕು.**
- **ತಿಂಡಿ ಅಥವಾ ಊಟ ನಂತರ ನೀರಿನಲ್ಲಿ ಶುದ್ಧಗೊಳಿಸಿ ಧರಿಸಬೇಕು.**
- **ನೀರು ಕುಡಿಯುವಾಗ ಲೋಟವನ್ನು ತುಟಿಗಳಿಗೆ ತಾಗುವಂತೆ ಇಟ್ಟು ಕುಡಿಯಿರಿ**
- **ಕೆಮ್ಮುವಾಗ ಕೈಯನ್ನು ಬಾಯಿಯ ಮುಂದೆ ಇಟ್ಟು ಕೆಮ್ಮುವುದರಿಂದ ದಂತ ಪಂಕ್ತಿಗಳು ಹೊರಗೆ ಬೀಳುವುದನ್ನು ತಡೆಯಬಹುದು.**
- **ಆಕಸ್ಮಿಕವಾದ ದಂತಪಂತಿಗಳು ಕೆಳಗೆ ಬಿದ್ದುಮುರಿದರೆ ಅದನ್ನು ನುರಿತ ದಂತ ವೈದ್ಯರ ಬಳಿ ಸರಿಪಡಿಸಿಕೊಳ್ಳಬೇಕು.**
- **ದಂತ ಪಂಕ್ತಿಗಳನ್ನು ಪ್ರತಿ ಮೂರು ನಾಲ್ಕು ವರ್ಷಗಳಿಗೊಮ್ಮೆ ವೈದ್ಯರ ಸಲಹೆ ಎಂದು ಬದಲಾಯಿಸುತ್ತಿರಬೇಕು.**

ಈ ಮೇಲ್ಕಂಡ ಎಲ್ಲಾ ಮಾಹಿತಿಗಳನ್ನು ಕೃತಕ ಹಲ್ಲುಗಳನ್ನು ಅಳವಡಿಸಿಕೊಂಡವರು ಪಾಲಿಸುವುದು ಮುಖ್ಯ. ಒಂದು ಸಂದರ್ಶನವು ಹಲವು ಮಾಹಿತಿಗಳನ್ನು ತಿಳಿಯುವಂತೆ ಮಾಡಿತು. ನಾನು ಕೇಳಿದ ಪ್ರಶ್ನೆಗಳಿಗೆ ಸ್ಪಂದಿಸುತ್ತಾ ಸಹಕರಿಸಿದ ಡಾ. ಸೋಯಬ್ ರವರಿಗೆ ಮತ್ತು ಡಾ.ನಿವೇದಿತಾ ಮೇಡಂ ರವರಿಗೂ ಧನ್ಯವಾದಗಳು. ಹಲ್ಲು ಮನುಷ್ಯರಿಗೆ ಮುಖ್ಯವಾಗಿ ಬೇಕಾದದ್ದು ನಗು ಮುಖದಲ್ಲಿ ಹಲ್ಲಿನ ಮಹತ್ವ ಮುಖ್ಯವಾಗಿದೆ. ಇಂತಹ ಹಲ್ಲುಗಳ ಸಂರಕ್ಷಣೆಯನ್ನು ಕಡೆಗಣಿಸದೆ ಪ್ರತಿಯೊಬ್ಬರು ಗಮನಹರಿಸಿ ತಮ್ಮ ತಮ್ಮ ಹಲ್ಲುಗಳನ್ನು ಆರೋಗ್ಯಕರವಾಗಿ ಇಟ್ಟುಕೊಳ್ಳೋಣ. ಸಮಸ್ಯೆ ಕಂಡ ತಕ್ಷಣದಲ್ಲಿ ದಂತ ವೈದ್ಯರನ್ನು ಭೇಟಿ ಮಾಡೋಣ ಎನ್ನುತ್ತಾ, ಸಮಸ್ಯೆಯನ್ನು ಬಗೆಹರಿಸಿಕೊಳ್ಳೋಣ.

## ಸಮುದ್ರ ಮಂಥನ

• ಗುಜ್ಜರ್

• ಉದಯವಾಹಿನಿ ವಿಶೇಷ



ಉದಯವಾಹಿನಿ ಚಿತ್ರ

ಅಲೆಗಳೇ
ಸಮುದ್ರದ
ಆಲೆಗಳೇ
ಕಡಲ ಅಲೆಗಳೇ
ನಿಮಗಿಲ್ಲಿ ಯಾರಿಲ್ಲ
ಸುಮ್ಮನೆ ಅಬ್ಬರಿಸಿ
ಭೋರ್ಗರೆವ ನೀವು
ಯಾರಿಗಾಗಿ ದಡ ಬಂದು
ಹೋಗುವಿರಿ
ಸಮುದ್ರವೇ
ಓ.....ಸಮುದ್ರವೇ...
ಅದೆಷ್ಟು ಸಂಭ್ರಮ
ನಿಮಗೆ , ನಿಮ್ಮ
ಬರುವಿಕೆಯ ಸದ್ದು
ವರ್ಷವಿಡೀ ಕೇಳುವುದು
ನಿಮ್ಮ ನೋಡುವ
ತವಕದೀ ನಾವಿರುವೆವು
ಸಮುದ್ರವೇ
ಓ.....ಸಮುದ್ರವೇ...
ಆ ಸೊಬಗು
ಆ ನವಿರು
ಚುಂಬಿಸಿ ಕಾಲಡಿಯ
ಸೆಳೆದು ನಿನ ಮಡಿಲಲಿ
ನಲಿದಾಡುವ ಮನಸಿಗೆ
ಮುದ ನೀಡಿ
ಮೈ ಯೆಲ್ಲ ಉಪ್ಪು ಮಾಡಿ
ಜಗದ ಹೊಲಸೆಲ್ಲ
ನಿನ್ನಡಿ ಇಳಿಸುವ
ಸಮುದ್ರವೇ
ಓ.....ಸಮುದ್ರವೇ...
ಸತ್ತವರ ಪಿಂಡದ
ಪ್ರೋಕ್ಷಣೆಯ ಸೇವಿಸಿ
ಪುಣ್ಯ ಗಿಟ್ಟಿಸುವೆ
ಮಾಟ ಮಂತ್ರದ
ಕೊಲೆ ಸುಲಿಗೆಯ
ದುರುಳತನಕೆ
ಮೂಕ ಸಾಕ್ಷಿಯಾಗುವ
ಸಮುದ್ರವೇ
ಓ.....ಸಮುದ್ರವೇ...
ಮುತ್ತು ರತ್ನಗಳ
ಜಲ ಜೀವರಾಶಿಯ
ಸಂಕುಲಕೆ ಜೀವ
ಬಳುವಳಿ ನೀಡಿ
ಸಾವಿರಾರು ಜನರ
ಬದುಕಿನ ಜೀವನಾಡಿಯಾದ
ಸಮುದ್ರವೇ
ಓ.....ಸಮುದ್ರವೇ...
ಅದೊಮ್ಮೆ ಆವಿಯಾಗಿ
ಆಕಾಶವ ಸೇರಿ
ಸಿಹಿ ನೀರಾಗಿ ಭೂ
ಒಡಲ ಬಸಿರಾಗಿಸಿ
ಹರಿವ ನದಿ ಝರಿಗಳಿಗೆ
ಉಸಿರಾಗಿ , ಮರಳಿ
ತನ್ನೊಡಲ ಸೇರಿಸಿ
ಕಾದಿದ್ದು ಸುನಾಮಿಯಾಗಿ
ಬಾಯಿ ಮುಕ್ಕಳಿಸಿ
ಜೀವನ ಮುರಾಪಟ್ಟು ಮಾಡುವ
ಸಮುದ್ರವೇ ಓ.....ಸಮುದ್ರವೇ...

# ಸಂತ್ರಸ್ತರಿಗೆ ಕರ್ನಾಟಕ ಸರ್ಕಾರದಿಂದ ಆರ್ಥಿಕ ನೆರವು

• ಉದಯವಾಹಿನಿ, ಬೆಂಗಳೂರು

ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರಿಂದ ಲೈಂಗಿಕ ದೌರ್ಜನ್ಯಕ್ಕೊಳಗಾದವರಿಗೆ ಕಾಂಗ್ರೆಸ್ ಸರ್ಕಾರ ಆರ್ಥಿಕ ನೆರವು ನೀಡಲಿದೆ ಎಂದು ರಾಷ್ಟ್ರೀಯ ಪಕ್ಷ ಭಾನುವಾರ ತಿಳಿಸಿದೆ. ಬೆಳಗಾವಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಇದನ್ನು ಪ್ರಕಟಿಸಿದರು.

ಆರೋಪಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ ಎಂದ ಅವರು, ಕಳೆದ 75 ವರ್ಷಗಳಲ್ಲಿ ಎಂದೂ ನಡೆಯದ ವಿಶಿಷ್ಟ ಪ್ರಕರಣ ಇದಾಗಿದ್ದು, ನೂರಾರು ಅತ್ಯಾಚಾರ ಸಂತ್ರಸ್ತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆರ್ಥಿಕ ನೆರವು ಘೋಷಿಸಿದ್ದಾರೆ ಎಂದು ಸುರ್ಜೆವಾಲ ತಿಳಿಸಿದರು.




ಉದಯವಾಹಿನಿ ಚಿತ್ರ

ಪ್ರಜ್ವಲ್ ಬಗ್ಗೆ ಮಾಹಿತಿ ಇದ್ದರೂ ಬಿಜೆಪಿ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡಿದ್ದು ಏಕೆ ಆರೋಪಿ ವಿದೇಶಕ್ಕೆ ಹೋಗುವುದನ್ನು ವಿದೇಶಾಂಗ ಸಚಿವಾಲಯ ಏಕೆ ತಡೆಯಲಿಲ್ಲ ಎಂದು ಅವರು ಪ್ರಶ್ನಿಸಿದರು. ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್‌ನ್ನು ಪ್ರಧಾನಿ ಏಕೆ ರದ್ದುಗೊಳಿಸಲಿಲ್ಲ ಅವರನ್ನು ದೇಶಕ್ಕೆ ಕರೆತರಲು ಇಂಟರ್‌ಪೋಲ್ ಮೂಲಕ ಬ್ಲೂ ಕಾರ್ನರ್ ನೋಟಿಸ್ ಏಕೆ ನೀಡಲಿಲ್ಲ ಎಂದು ಸುರ್ಜೇವಾಲ ಕಿಡಿಕಾರಿದರು.

> **ಅತ್ಯಾಚಾರ ಮತ್ತು ಕಿರು ಕುಳಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ನೂರಾರು ಸ್ಪಷ್ಟ ವೀಡಿಯೊಗಳು ಬಹಿರಂಗಗೊಂಡ ನಂತರ ಪ್ರಜ್ವಲ್ ರೇವಣ್ಣ ತನಿಖೆಗೆ ಬೇಕಾಗಿದ್ದಾರೆ. ಮಾಸ್ ರೆಪಿಸ್ಟ್ ಪ್ರಜ್ವಲ್ ರೇವಣ್ಣ ಅವರನ್ನು ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ರಕ್ಷಿಸುತ್ತಿದ್ದಾರೆ**
> -ಸಿದ್ದರಾಮಯ್ಯ, ಸಿಎಂ
> -ಡಿ.ಕೆ. ಶಿವಕುಮಾರ್, ಡಿಸಿಎಂ

# ಅಂತರ್ಜಲ ಮಟ್ಟ ಹೆಚ್ಚಿಸಲು ಕ್ರಮ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ನೀರಿಗೆ ಭಾರೀ ಹಾಹಾಕಾರ ಉಂಟಾಗಿದ್ದು, ಅಂತರ್ಜಲ ಹೆಚ್ಚಿಸಿ, ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಾಕಷ್ಟು ಕಡೆಗಳಲ್ಲಿ ಮಳೆ ನೀರು ಕೊಯ್ಲು ಅಳವಡಿಕೆ ಮಾಡಿ, ಮೈಲಿಗಲ್ಲು ಸಾಧಿಸಿದೆ.

ಬೆಂಗಳೂರು ಸೇರಿದಂತೆ ರಾಜ್ಯದಾದ್ಯಂತ ಪೂರ್ವ ಮುಂಗಾರು ಮಳೆ ಸಕ್ರಿಯವಾಗಿದೆ. ಮುಂಗಾರು ಮಳೆ ಆರಂಭವಾಗಲು ತಿಂಗಳು ಬಾಕಿ ಇರುವಾಗಲೇ ಜಲಮಂಡಳಿಯು ನಗರಾದ್ಯಂತ ಒಟ್ಟು 986 ಮಳೆ ನೀರು ಇಂಗು ಗುಂಡಿಗಳನ್ನು ನಿರ್ಮಿಸುವ ಮೂಲಕ ಮಾದರಿ ಆಗಿದೆ.

ಹೊಂಡ ಒಂದನ್ನು ಪರಿಶೀಲಿಸಿದ ನಂತರ ಅಧಿಕಾರಿಗಳನ್ನು ಜಲಮಂಡಳಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಅವರು, ಬೆಂಗಳೂರು ನಗರದಲ್ಲಿ ನೀರು ಪೂರೈಕೆ ಕೊರತೆಗೆ ಕಾವೇರಿ ನದಿಯಲ್ಲಿ ನೀರು ಇಲ್ಲದಿರುವುದು ಕಾರಣವಲ್ಲ. ಇದಕ್ಕೆ ಕಾರಣ ನಗರದಲ್ಲಿ ಅಂತರ್ಜಲ ಬತ್ತಿ ಹೋಗಿರುವುದಾಗಿದೆ. ಮಳೆ ನೀರು ಕೊಯ್ಲು ಅಳವಡಿಸಿಕೊಂಡಿರುವ ಹಲವಾರು ಕಟ್ಟಡಗಳಲ್ಲಿ ಮಳೆ ನೀರಿನ ಇಂಗುಗುಂಡಿಗಳನ್ನು ರಚಿಸದೇ ಇರುವ ಕಾರಣ ಅಂತರ್ಜಲ ಮರುಪೂರಣ ಸರಿಯಾಗಿ ಆಗುತ್ತಿಲ್ಲ. ಮರುಪೂರಣ ಆಗದೇ ಇರುವ ಕಾರಣ ದಿನೇ ದಿನೇ ಅಂತರ್ಜಲ ಮಟ್ಟ ಕುಸಿಯುತ್ತಲೇ ಇದೆ. ಹೀಗಾಗಿ, ಇಂಗುಗುಂಡಿಗಳನ್ನು ನಿರ್ಮಿಸಲಾಗುತ್ತಿದ್ದು, ಇದನ್ನು ವಲಯವಾರು ಮಲ್ವಿಚಾರಣೆ ಮಾಡಲಾಗುತ್ತಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

ಪ್ರತಿ ವಲಯದಲ್ಲಿ 250 ಇಂಗುಗುಂಡಿಗಳ ನಿರ್ಮಿಸುವ ಗುರಿ ಹೊಂದಲಾಗಿದೆ. ಈಗಾಗಲೇ ಅಧಿಕಾರಿಗಳು ಶೇಕಡಾ 98.6 ರಷ್ಟು ದಕ್ಷತೆಯನ್ನು ತೋರಿಸಿದ್ದಾರೆ. ಇಂಗುಗುಂಡಿಗಳ ನಿರ್ಮಿಸುವಂತೆ ಜನರಿಗೆ ಹೇಳುವುದಕ್ಕೂ ಮುನ್ನ ಮೊದಲು ಮಂಡಳಿ ಅದನ್ನು ಅನುಸರಿಸಲು ಮುಂದಾದೆ. ನಾವು ಅನುಸರಿಸಿದ ಕ್ರಮವನ್ನು ಜನರಿಗೂ ತಿಳಿಸುತ್ತೇವೆಂದು ತಿಳಿಸಿದರು.

# 3ನೇ ಹಂತದ ಯೋಜನೆ ನಿರ್ಮಾಣಕ್ಕೆ ಸಜ್ಜು

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ತನ್ನ ಜಾಲ ವಿಸ್ತರಣೆಗೆ ಮುಂದಾಗಿರುವ ನಮ್ಮ ಮೆಟ್ರೋ ಮೂರನೇ ಹಂತ ಯೋಜನೆಯನ್ನು ಆರಂಭಿಸಲಿದೆ. ಈ ಸಂಬಂಧ ತಾಂತ್ರಿಕ ಕಾರ್ಯವನ್ನು ಆರಂಭಿಸಲು ಸಜ್ಜಾಗಿದೆ. ಎರಡು ಹೊಸ ಎಲಿವೇಟೆಡ್ ಕಾಮಗಾರಿ ಒಳಗೊಳ್ಳುವ ಈ ನಮ್ಮ ಮೆಟ್ರೋ-3ನೇ ಹಂತದ ಯೋಜನೆ ಪ್ರಾರಂಭಿಸಲು ಎಲ್ಲ ತಯಾರಿ ನಡೆಸಿದೆ.

ಮೆಟ್ರೋ ಮೂಲಸೌಕರ್ಯದ ಸ್ಥಿರತೆ ಹಾಗೂ ಪರಿಣಾಮಕಾರಿ ಅನುಷ್ಠಾನದ ಖಚಿತತೆಗಾಗಿ ಮುಂಬರುವ ಹಂತಕ್ಕೆ ಜಿಯೋಟೆಕ್ನಿಕಲ್ ತನಿಖೆಯ ಪ್ರಾರಂಭಿಲಿದೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಸದ್ಯ ಬೆಂಗಳೂರಿನಲ್ಲಿ 73 ಕಿಲೋ ಮೀಟರ್ ಜಾಲ ಹೊಂದಿರುವ ನಮ್ಮ ಮೆಟ್ರೋ-3ನೇ ಹಂತದ ವಿಸ್ತರಣೆಯು ಎರಡು ಹೊಸ ಎಲಿವೇಟೆಡ್ ಲೈನ್‌ಗಳನ್ನು ಒಳಗೊಂಡಿದೆ. ಈ ಎಲಿವೇಟೆಡ್‌ಗಳು ಸುವ್ಯವಸ್ಥೆ ಸಂಪರ್ಕ ಸಾಧಿಸಲು ಸಾಧ್ಯವಾಗುತ್ತದೆ ಎಂದು ನಮ್ಮ ಮೆಟ್ರೋ ಹೇಳಿದೆ.


ಯೋಜನೆಲ್ಲಿ ಮೊದಲ ಲೈನ್ ಬರೋಬ್ಬರಿ 32.5 ಕಿಮೀ ಉದ್ದವಿದೆ. ನಾಲ್ಕನೇ ಹಂತ ಜೆ.ಪಿ.ನಗರ-ಕೆಂಪಾಪುರದಿಂದ ಹೊರ ವರ್ತುಲ ರಸ್ತೆಯ ಪಶ್ಚಿಮ ಭಾಗದವರೆಗೆ ಈ ಲೈನ್ ಸಂಪರ್ಕಿಸುತ್ತದೆ. ಎರಡನೇ ಮಾರ್ಗವು 12.5 ಕಿಲೋಮೀಟರ್ ಉದ್ದವಿದ್ದು, ಇದು ಮಾಗಡಿ ರಸ್ತೆಯಲ್ಲಿ ಹೊಸಹಳ್ಳಿ-ಕಡಬಗೆರೆವರೆಗೆ ನಿರ್ಮಾಣಗೊಳ್ಳಲಿದೆ. ಈ ಯೋಜನೆ ಆರಂಭಕ್ಕಾಗಿ ಬಿಎಂಆರ್‌ಸಿಎಲ್ ಅಧಿಕಾರಿಗಳು ಅಂದಾಜು 6 ಕೋಟಿ ಮೌಲ್ಯದ ಜಿಯೋಟೆಕ್ನಿಕಲ್ ಸರ್ವೇ ಮುಂದಿನ ವಾರದಿಂದ ನಡೆಸಲಿದ್ದಾರೆ. ಈ ಸಮಗ್ರ ಮೌಲ್ಯಮಾಪನವು ಉದ್ದೇಶಿತ ಮಾರ್ಗಗಳ ನಿರ್ಮಿಸುವಲ್ಲಿ ಯಾವುದೇ ಅಡತಡೆ ಆಗದಂತೆ ನೋಡಿಕೊಳ್ಳಲಿದೆ. ವಿನ್ಯಾಸದ ಕುರಿತು ನಿರ್ಧರಿಸಲು ಇದು ಸಹಕಾರಿಯಾಗಲಿದೆ ಎಂದು ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ರೈತರಿಗೆ ಪ್ರೋತ್ಸಾಹ ಧನ ನೀಡದಿರುವುದು ದುರಂತ

• ಉದಯವಾಹಿನಿ, ಕೃಷ್ಣರಾಜಪುರ

ರಾಜ್ಯ ಸರ್ಕಾರ ಹಾಲಿನ ಪ್ರೋತ್ಸಾಹ ಧನ ಶೀಘ್ರವಾಗಿ ಬಿಡುಗಡೆ ಮಾಡುಬೇಕೆಂದು ರಾಜ್ಯದ ಮುಖ್ಯ ಮಂತ್ರಿಗಳಿಗೆ ಮನವಿ ಮಾಡಲಾಗುವುದು ಎಂದು ರತ್ನ ಭಾರತ ರೈತ ಸಮಾಜದ ರಾಜ್ಯಾಧ್ಯಕ್ಷ ಎಲ್. ಲಕ್ಷ್ಮಣ್ ತಿಳಿಸಿದರು. ರೈತ ಸಮಾಜದ ಕೇಂದ್ರ ಕಛೇರಿಯಲ್ಲಿ ನೂತನ ಪದಾಧಿಕಾರಿಗಳ ಆಯ್ಕೆ, ಆದೇಶ ಪತ್ರಗಳನ್ನು ವಿತರಿಸಿ ಮಾತನಾಡಿದ ಅವರು, ಮಳೆಯಿಲ್ಲದೆ ಬೆಳೆಯಿಲ್ಲದೆ ರಾಜ್ಯದ ರೈತರು ಕಂಗಾಲಾಗಿದ್ದಾರೆ, ಇಂತಹ ಬರಗಾಲದ ಪರಿಸ್ಥಿತಿಯಲ್ಲೂ ರೈತರಿಗೆ ಪ್ರೋತ್ಸಾಹ ಧನ ನೀಡದಿರುವುದು ದುರಂತ ಎಂದರು.

ನಂದಿನ ಹಾಲಿನ ಬೆಲೆ ಹೆಚ್ಚಾಗಿದ್ದಾರು ಸಹ ಪ್ರೋತ್ಸಾಹ ಧನ ಬಾಕಿ ಇಟ್ಟು ರೈತರನ್ನು ಸಂಕಷ್ಟಗಳನ್ನು ಎದುರಿಸುವಂತೆ ಮಾಡಿದೆ, ನೀತಿ ಸಂಹಿತೆ ಮುಗಿದ ಕೊಡಲೇ ಪ್ರೋತ್ಸಾಹ ಧನ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಒತ್ತಾಯಿಸಿಲಾಗುವುದು ಎಂದು ನುಡಿದರು . ರತ್ನ ಭಾರತ ರೈತ ಸಮಾಜದ ಕೋಲಾರ ಜಿಲ್ಲಾಧ್ಯಕ್ಷ ನಂದೀಶ್ ಗೌಡ ಸೇರಿದಂತೆ ನಾಗರಾಜು, ಇಕ್ಬಾಲ್ ಅಹಮದ್ ಖಾನ್, ಸುಧಾ ಕರ್, ಶಿವಕುಮಾರ್ ಸೇರಿದಂತೆ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

# ನಗರದ ಕೊಳಗೇರಿ ಪ್ರದೇಶಗಳಲ್ಲಿ ನೀರಿಗೆ ಹಾಹಾಕಾರ

## • ವಾರಕ್ಕೆ 2 ಗಂಟೆ ಮಾತ್ರ ನೀರು ಪೂರೈಕೆ, ಆದರೂ ಸಮಸ್ಯೆ ಇಲ್ಲ ಎನ್ನುತ್ತಿದೆ ಬಿಡ್ಲ್ಯೂಎಸ್‌ಎಸ್‌ಬಿ

• ಉದಯವಾಹಿನಿ, ಬೆಂಗಳೂರು

ಈ ಹಿಂದೆ ಪ್ರತಿದಿನ 24 ಗಂಟೆಗಳ ಕಾಲ ನಿರಂತರ ನೀರು ಪೂರೈಕೆಯಾಗುತ್ತಿದ್ದ ಡಿ.ಜೆ.ಹಳ್ಳಿ ಮತ್ತು ಚಿಕ್ಕ ಬಾಣಸವಾಡಿಯ ಕೊಳಗೇರಿ ಪ್ರದೇಶಗಳಲ್ಲಿ ಇದೀಗ ವಾರಕ್ಕೆ 2 ಗಂಟೆಗಳ ಕಾಲ ಮಾತ್ರ ನೀರು ಸಿಗುತ್ತಿದ್ದು, ಇಲ್ಲಿನ ನಿವಾಸಿಗಳು ಸಂಕಷ್ಟದಲ್ಲಿ ದಿನ ಕಳೆಯುತ್ತಿದ್ದಾರೆ.

ಈ ಪ್ರದೇಶದಲ್ಲಿ ಸಾಕಷ್ಟು ಮಂದಿ ವಲಸೆ ಕಾರ್ಮಿಕರು ನೆಲೆಯೂರಿದ್ದಾರೆ. ನೀರು ಸಮಸ್ಯೆಯಿಂದಾಗಿ ತಾವು ದುಡಿದ ಬಹುತೇಕ ಹಣವನ್ನು ನೀರು ಖರೀದಿಗೆ ಖರ್ಚು ಮಾಡುತ್ತಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಯಾವುದಾದರೂ ನಾಯಕರು ನಮ್ಮ ಬಳಿಕೆ ಬಂದು ನಮ್ಮ ನೀರಿನ ಸಮಸ್ಯೆ ಬಗ್ಗೆ ಗಮನ ಹರಿಸುತ್ತಾರೆಂಬ ನಿರೀಕ್ಷೆಯಲ್ಲಿದ್ದೆವು. ಆದರೆ, ನಮ್ಮ ಮತದಾನದ ಹಕ್ಕು ಬೇರೆಡೆ ಇರುವುದರಿಂದ ಇಲ್ಲಿ ನಮ್ಮನ್ನು ಆದ್ಯತೆಯ ನಾಗರೀಕರೆಂದು ಪರಿಗಣಿಸಲಾಗುತ್ತಿಲ್ಲ ಎಂದು ಪಶ್ಚಿಮ ಬಂಗಾಳದ ವಲಸೆ ಕಾರ್ಮಿಕರೊಬ್ಬರು ಹೇಳಿದ್ದಾರೆ.

ಕೆಲವು ಮಕ್ಕಳು ಇಲ್ಲಿನ ಶಾಲೆಗಳಿಗೆ ಹೋಗುತ್ತಿದ್ದರು, ಆದರೆ ನಮ್ಮ ದೈನಂದಿನ ಕೆಲಸಗಳಲ್ಲಿ ನಮಗೆ ಸಹಾಯ ಮಾಡಲು ನೀರನ್ನು ತರುವ ಕೆಲಸ ಮಾಡುತ್ತಿದ್ದಾರೆ. ಗುಣಮಟ್ಟವನ್ನು ಲೆಕ್ಕಿಸದೆ ಕಡಿಮೆ ದರದಲ್ಲಿ ನೀರು ಮಾರಾಟ ಮಾಡುವವರಿಂದ ನಾವು ನೀರು ಖರೀದಿ ಮಾಡುತ್ತಿದ್ದೇವೆಂದು ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

ಆಟೋ ವಾಶ್ ಬಿಸಿನೆಸ್ ನಿಂದ ಯಾವುದ ಆದಾಯ ಬರುತ್ತಿಲ್ಲ. ಇದರಿಂದಾಗಿ ನನ್ನ ಮಕ್ಕಳ ಶಿಕ್ಷಣ ವೆಚ್ಚವನ್ನು ಭರಿಸಲು ನನಗೆ ಸಾಧ್ಯವಾಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಡಿಜೆ ಹಳ್ಳಿಯಲ್ಲಿ ಸುಮಾರು40-50 ಮಂದಿ ವಲಸೆ ಕಾರ್ಮಿಕರು ವಾಸವಿದ್ದು, ಇಲ್ಲಿ ವಾರಕ್ಕೆ ಎರಡು ಗಂಟೆ ಮಾತ್ರ ನೀರು ಪೂರೈಸುತ್ತಿದ್ದಾರೆ. ಒಂದು ಗಂಟೆ ಕುಡಿಯುವ ನೀರು ಪೂರೈಕೆ ಮಾಡಿದರೆ, ಮತ್ತೊಂದು ಗಂಟೆ ಪ್ರತ್ಯೇಕ ದಿನಗಳಲ್ಲಿ ಶುದ್ಧೀಕರಿಸಿದ ನೀರನ್ನು ನೀಡುತ್ತಿದ್ದಾರೆ. ನಾವು ನೆಲೆಸಿರುವ ಪ್ರದೇಶ ಅತ್ಯಂತ ಕಿರಿದಾಗಿದ್ದು, ಟ್ಯಾಂಕರ್‌ಗಳು ಒಳಗೆ ಬರಲು ಸಾಧ್ಯವಾಗುತ್ತಿಲ್ಲ. ಹೆಚ್ಚಿನ ಹಣ ನೀರು ಖರೀದಿ ಮಾಡಲೂ ಸಾಧ್ಯವಾಗುತ್ತಿಲ್ಲ ಎಂದು ರೇಷ್ಮಾ ಎಂಬುವವರು ಹೇಳಿದ್ದಾರೆ.

> **ನಮ್ಮ ಮನೆಗೆ ನಿತ್ಯ 20 ಬಿಂದಿಗೆ ನೀರು ಬೇಕು. ಇದಕ್ಕಾಗಿ ಸಾಕಷ್ಟು ಹಣ ವ್ಯಯಿಸುತ್ತಿದ್ದೇನೆ. ಸಮೀಪದ ಸಾರ್ವಜನಿಕ ಬೋರ್‌ವೆಲ್ ಕೂಡ ಬತ್ತಿ ಹೋಗಿದೆ. ನಮಗೆ ಪರ್ಯಾಯ ವ್ಯವಸ್ಥೆ ಇಲ್ಲದ ಕಾರಣ ನೀರಿನ ಗುಣಮಟ್ಟವನ್ನು ಕಳಪೆಯಾಗಿ ಸಿಕ್ಕರೂ ಅದನ್ನು ಬಳಕೆ ಮಾಡುತ್ತಿದ್ದೇವೆಂದು**
> – ರಮೇಶ, ಚಿಕ್ಕ ಬಾಣಸವಾಡಿ ನಿವಾಸಿ

### ದಿನನಿತ್ಯದ ಕೆಲಸಗಳಿಗೆ ತೊಂದರೆ

**ಇಲ್ಲಿ ನೆಲೆಸಿರುವ ಬಹುತೇಕ ಮಂದಿ ಮಾಂಸದ ಅಂಗಡಿ, ಪೀಠೋಪಕರಣ ಅಂಗಡಿ, ಬಣ್ಣ ಹೊಡೆಯುವ ಕೂಲಿ ಕಾರ್ಮಿಕರ ಕೆಲಸ ಮಾಡುತ್ತಿದ್ದು, ವಲಸೆ ಕಾರ್ಮಿಕರು ದೈನಂದಿನ ಆದಾಯವನ್ನು ಅವಲಂಬಿಸಿ ಬದುಕುತ್ತಿದ್ದಾರೆ. ನೀರು ಸೂಕ್ತವಾಗಿ ಪೂರೈಕೆಯಾಗದ ಕಾರಣ ನಮ್ಮ ದಿನನಿತ್ಯದ ಕೆಲಸಗಳಿಗೆ ತೊಂದರೆ ಯಾಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದಾರೆ.**

ಈ ಸಮಸ್ಯೆ.ನ್ನು ಬಿಡ್ಲ್ಯೂಎಸ್‌ಎಸ್‌ಬಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಅವರ ಗಮನಕ್ಕೆ ತರಲಾಯಿತು. ಆದರೆ, ಅವರು, ನಗರದಲ್ಲಿ ನೀರಿನ ಸಮಸ್ಯೆಯಿಲ್ಲ ಎಂದು ನಿರಾಕರಿಸಿದ್ದಾರೆ. ಕೊಳಗೇರಿ ಪ್ರದೇಶದಿಂದ ಯಾವುದೇ ದೂರುಗಳು ಬಂದಿಲ್ಲ. ನೀರಿನ ಕೊರತೆ ಇರುವ ಪ್ರದೇಶಗಳ ಗುರುತಿಸಲು ತಪಾಸಣೆ ಹಾಗೂ ಆಗಾಗ್ಗೆ ಸಭೆಗಳನ್ನು ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಪ್ರೀತಿಪಾತ್ರರೊಡನೆ ಸಹಿತಿಂಡಿ ಮತ್ತು ಮಿಠಾಯಿ ಹಂಚಿಕೊಳ್ಳುವ ಸಾಧ್ಯತೆಯಿದೆ. ನೀವು ಕಷ್ಟಕರವೆಂದು ತೋರುವ ಸಮಸ್ಯೆಗಳನ್ನು ಪರಿಹರಿಸಲು ನಿಮಗಿರುವ ಸಂಪರ್ಕಗಳನ್ನು ಬಳಸಬೇಕಾಗುತ್ತದೆ.

**ವೃಷಭ** ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ.

**ಮಿಥುನ** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರುವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ.

**ಕರ್ಕಾಟಕ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು -ಏಕೆ ಏನನ್ನಾದರೂ ಮಾಡಬಾರದು ಇದು ನಿಮ್ಮ ಗಳಿಕೆಯ ಶಕ್ತಿಯನ್ನು ಸುಧಾರಿಸುತ್ತದೆ.

**ಸಿಂಹ** ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ ಅದರ ಬದಲಿಗೆ ನೀವು ಶಾಂತರಾಗಿರಬೇಕು ಮತ್ತು ನಿಮ್ಮ ಪ್ರೇಮಿಗೆ ನಿಮ್ಮ ನಿಜವಾದ ಪ್ರೀತಿಯನ್ನು ವಿವರಿಸಬೇಕು.

**ಕನ್ಯಾ** ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು ಮತ್ತು ನಿಮ್ಮ ಸ್ನೇಹಿತರಿಂದ ಸಾಲವನ್ನು ಕೇಳಬಹುದು.

**ತುಲಾ** ನಿಮ್ಮ ಕೋಪ ಕಡ್ಡಿಯನ್ನು ಗುಡ್ಡ ಮಾಡಬಹುದು-ಇದು ನಿಮ್ಮ ಕುಟುಂಬದ ಸದಸ್ಯರ ಅಸಮಾಧಾನಕ್ಕೆ ಕಾರಣವಾಗುತ್ತದೆ. ಕೋಪವನ್ನು ನಿಯಂತ್ರಣದಲ್ಲಿಡುವುದನ್ನು ಕಲಿತ ಆ ಮಹಾನ್ ಆತ್ಮಗಳೇ ಅದೃಷ್ಟಶಾಲಿಗಳು.

**ವೃಶ್ಚಿಕ** ಸಹ ಕಾರ್ಮಿಕರು ಮತ್ತು ಕೈಕೆಳಗೆ ಕೆಲಸ ಮಾಡುವವರು ಚಿಂತೆ ಹಾಗೂ ಒತ್ತಡದ ಕ್ಷಣಗಳನ್ನು ತರುತ್ತಾರೆ. ಇಂದು ಖಾಲಿ ಸಮಯವೂ ಕೆಲವು ಅನುಪಯುಕ್ತ ಕೆಲಸಗಳಲ್ಲಿ ಹಾಳಾಗಬಹುದು.

**ಧನಸ್ಸು** ಬಯಸದೆ ಇರುವ ಯಾವುದೇ ಅತಿಥಿ ಇಂದು ನಿಮ್ಮ ಮನೆಗೆ ಬರಬಹುದು, ಅವರು ಬರುವುದರಿಂದಾಗಿ ನೀವು ಬರುವ ತಿಂಗಳಿಗೆ ಮುಂದೂಡಲಾಯಿಸಿರುವ ಮನೆಯ ಆ ವಸ್ತುಗಳ ಮೇಲು ಖರ್ಚು ಮಾಡಬಹುದು.

**ಮಕರ** ಈ ರಾಶಿಚಕ್ರದ ಜನರು ಇಂದು ನಿಮ್ಮ ಬಿಡುವಿನ ವೇಳೆಯಲ್ಲಿ ಆಧ್ಯಾತ್ಮಿಕ ಪುಸ್ತಕಗಳ ಅಧ್ಯಯನ ಮಾಡಬೇಕು. ಇದನ್ನು ಮಾಡಿ ನೀವು ನಿಮ್ಮ ಅನೇಕ ಸಮಸ್ಯೆಗಳನ್ನು ಪರಿಹರಿಸಬಹುದು.

**ಕುಂಭ** ನಿಮ್ಮ ದೊಡ್ಡ ಆಸ್ತಿಯೆಂದರೆ ನಿಮ್ಮ ಹಾಸ್ಯಪ್ರಜ್ಞೆ ಇದನ್ನು ನಿಮ್ಮ ಅನಾರೋಗ್ಯ ಗುಣಪಡಿಸಲು ಬಳಸಲು ಪ್ರಯತ್ನಿಸಿ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ.

**ಮೀನ** ಧಾರ್ಮಿಕ ಭಾವನೆಗಳನ್ನು ಉದ್ಭವಿಸಿ ಒಬ್ಬ ಪವಿತ್ರ ವ್ಯಕ್ತಿಯಿಂದ ದೈವಿಕ ಜ್ಞಾನವನ್ನು ಪಡೆಯಲು ನೀವು ಒಂದು ಧಾರ್ಮಿಕ ಸ್ಥಳಕ್ಕೆ ಭೇಟಿ ನೀಡುವಂತೆ ಮಾಡುತ್ತವೆ. ಹಣ ನಿಮಗೆ ಅಗತ್ಯವಾಗಿದೆ.

## ದಕ್ಷಿಣ ಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

### ● ಅನಗತ್ಯ ಬಳಕೆಗೆ ಕಡಿವಾಣ: ದಕ್ಷಿಣ ಕನ್ನಡದಲ್ಲಿ ನೀರಿನ ಸಂರಕ್ಷಣೆಗೆ ಜಿಲ್ಲಾಧಿಕಾರಿಗಳ ಖಡಕ್ ಎಚ್ಚರಿಕೆ

• ಉದಯವಾಹಿನಿ ಮಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಸೂಕ್ತ ಕ್ರಮ ವಹಿಸಲು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಸ್ಥಳೀಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಲಾಲ್‌ಬಾಗ್‌ನಲ್ಲಿರುವ ಮಂಗಳೂರು ಮಹಾನಗರಪಾಲಿಕೆಯ ಮಂಗಳಾ ಸಭಾಂಗಣದಲ್ಲಿ ನಡೆದ ದಕ್ಷಿಣ ಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೀರಿನ ಅನಗತ್ಯ ಬಳಕೆಗೆ ಕಡಿವಾಣ ಹಾಕುವುದು ಅನಿವಾರ್ಯವಾಗಿದೆ.

ಹಾಗಾಗಿ ನೀರನ್ನು ಯಾರೂ ಅನಗತ್ಯವಾಗಿ ಪೋಲು ಮಾಡುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಮತ್ತು ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು.

ಮಳೆಯ ಕೊರತೆ, ತಾಪಮಾನ ಹೆಚ್ಚಳದಿಂದಾಗಿ ನೀರಿನ ಸಮಸ್ಯೆ ಪ್ರಾರಂಭವಾಗುತ್ತಿದೆ. ಸಾರ್ವಜನಿಕರು ಅನಗತ್ಯವಾಗಿ ನೀರು ಪೋಲು ಮಾಡದೇ ಸದ್ಬಳಕೆ ಮಾಡಬೇಕು. ನೀರಿನ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಈಗಾಗಲೇ ನೀರಿನ ಸಮಸ್ಯೆ ಪರಿಹರಿಸಲು ಕಂಟ್ರೋಲ್ ರೂಮ್‌ಗಳನ್ನು ತೆರೆಯಲಾಗಿದೆ. ನೀರಿನ ರೇಷನಿಂಗ್ ಮಾಡಲು ಸೂಕ್ತ ವೇಳಾಪಟ್ಟಿಯನ್ನು ತಯಾರಿಸಿ ಸಮರ್ಪಕವಾಗಿ ಎಲ್ಲಾ ಕಡೆ ನೀರು ಪೂರೈಕೆಯಾಗುವಂತೆ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ಮಹಾನಗರ ಪಾಲಿಕೆಯ ಆಯುಕ್ತರಿಗೆ ಸೂಚಿಸಿದರು.

> ಪ್ರವಾಹ ಸಂಭವಿಸುವಂತಹ ಪ್ರದೇಶದಲ್ಲಿ ಜನರನ್ನು ಒಂದು ಕಡೆಯಿಂದ ಇನ್ನೊಂದು ಕಡೆಗೆ ಸಾಗಿಸಲು ಬೇಕಾದಂತಹ ಬೋಟ್ ವ್ಯವಸ್ಥೆ ಹಾಗೂ ನಿರಾಶ್ರಿತರು ಉಳಿದುಕೊಳ್ಳುವಂತಹ ಶಿಬಿರಗಳಲ್ಲಿ ಯಾವುದೇ ರೀತಿಯ ಮೂಲಭೂತ ಸೌಲಭ್ಯಗಳ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದರು. -ಜಿಲ್ಲಾಧಿಕಾರಿ


ಉದಯವಾಹಿನಿ ಚಿತ್ರ

**ನೀರಿನ ಅನಗತ್ಯ ಬಳಕೆಗೆ ಕಡಿವಾಣ**

ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್ ಹಾಗೂ ಕಾರ್ಯನಿರ್ವಹಕ ಅಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಕಂಟ್ರೋಲ್ ರೂಮ್ ಸ್ಥಾಪಿಸಿ ನೀರಿನ ಸಮಸ್ಯೆಗಳ ಬಗ್ಗೆ ಕ್ರಮಕೈಗೊಳ್ಳಬೇಕು. ಡ್ಯಾಮ್‌ಗಳನ್ನು ಹೊರತುಪಡಿಸಿ ನೀರಿನ ಪರ್ಯಾಯ ಮೂಲಗಳನ್ನು ಖುದ್ದಾಗಿ ಭೇಟಿ ನೀಡಿ ಅದರ ಬಗ್ಗೆ ಪಟ್ಟಿ ತಯಾರಿಸಬೇಕು ಎಂದರು. ನೀರಿನ ಸಮಸ್ಯೆ ಎದುರಾಗಿರುವ ಸೋಮೇಶ್ವರ ಹಾಗೂ ಕೋಟೆಕಾರು ಪ್ರದೇಶಗಳಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಆಗುತ್ತಿದೆ. ಆ ಬಗ್ಗೆಯೂ ಗಮನ ಹರಿಸಬೇಕು. ಮಳೆಗಾಲದವರೆಗೆ ಯಾವುದೇ ರೀತಿಯ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮವಹಿಸಬೇಕು ಎಂದರು. ಸಭೆಯಲ್ಲಿ ಮಹಾನಗರ ಪಾಲಿಕೆಯ ಆಯುಕ್ತ ಆನಂದ್ ಸಿ.ಎಲ್, ಪೊಲೀಸ್ ವರಿಷ್ಠಾಧಿಕಾರಿ ರಿಷ್ಯಂತ್ ಸಿಬಿ, ಪುತ್ತೂರು ಉಪ ವಿಭಾಗಾಧಿಕಾರಿ ಜುಬಿನ್ ಮೋಹಾಪಾತ್ರ ಉಪಸ್ಥಿತರಿದ್ದರು.

#### ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ ತಯಾರಿ

ಅಗ್ನಿಶಾಮಕ ದಳ, ಅರಣ್ಯ ಇಲಾಖೆ, ಮೆಸ್ಕಾಂ, ಆರೋಗ್ಯ ಇಲಾಖೆಗಳೂ ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ ತಯಾರಾಗಿರಬೇಕು. ಮಳೆಗಾಲ ಆಗಮಿಸುವ ಮೊದಲೇ ಯಾವೆಲ್ಲಾ ಪ್ರದೇಶಗಳಲ್ಲಿ ಭೂಕುಸಿತ, ಪ್ರವಾಹ ಹಾಗೂ ಸಂಪರ್ಕಕ್ಕೆ ಸಿಗದೆ ಇರುವ ಪ್ರದೇಶಗಳ ಬಗ್ಗೆ ಮಾಹಿತಿ ಕಲೆ ಹಾಕಬೇಕು ಹಾಗೂ ಯಾವುದೇ ರೀತಿಯ ಹಾನಿ ಉಂಟಾಗದಂತೆ ಎಲ್ಲಾ ರೀತಿಯ ರಕ್ಷಣಾ ವ್ಯವಸ್ಥೆಗಳನ್ನು ಮಾಡಿಕೊಂಡಿರಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

> ರಸ್ತೆ ಕಡಿತಗೊಂಡು ಸಂಪರ್ಕಕ್ಕೆ ಸಿಗದ ಪ್ರದೇಶದಲ್ಲಿ ಗರ್ಭಿಣಿಯರು ಮತ್ತು ವಯಸ್ಸಾದವರ ಪಟ್ಟಿಯನ್ನು ಸಿದ್ಧಪಡಿಸಲು ಅಧಿಕಾರಿಗಳಿಗೆ ತಿಳಿಸಿದ ಡಿಸಿ ಅರ್ಹರಿಗೆ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವ ವ್ಯವಸ್ಥೆ ಮಾಡಬೇಕು. ನೆಟ್‌ವರ್ಕಗಳು ಸಿಗದಂತಹ ಪ್ರದೇಶದಲ್ಲಿ ಜನರಿಂದ ಮಾಹಿತಿ ಪಡೆಯಲು ಮತ್ತು ಅವರಿಗೆ ಸೂಕ್ತ ಮಾಹಿತಿಯನ್ನು ನೀಡಲು ಪರ್ಯಾಯ ವ್ಯವಸ್ಥೆಗೆ ಕ್ರಮವಹಿಸಲು ಅಧಿಕಾರಿಗಳಿಗೆ ಡಿಸಿ ಸೂಚಿಸಿದರು. -ಡಿಸಿ


## ಸಂವಿಧಾನ ವಿರೋಧಿ ಪಕ್ಷಗಳನ್ನು ಧಿಕ್ಕರಿಸುವಂತೆ ಕರೆ

• ಉದಯವಾಹಿನಿ, ಸಿರುಗುಪ್ಪ

ನಗರದ ತುಂಗಭದ್ರ ರಿಕ್ರಿಯೇಷನ್ ಕ್ಲಬ್‌ನ ಸಭಾಂಗಣದಲ್ಲಿ ರವಿವಾರದಂದು ವಿವಿಧ ದಲಿತಪರ ಸಂಘಟನೆಗಳಾದ ದಲಿತ ಸಂಘರ್ಷ ಸಮಿತಿಯ ಡಿ.ಜಿ.ಸಾಗರ ಬಣ, ಎನ್.ಮೂರ್ತಿ ಬಣ, ಅಂಬೇಡ್ಕರ್‌ವಾದ, ಭೀಮವಾದ ಇನ್ನಿತರ ಸಂಘಟನೆಗಳಿಂದ ಪತ್ರಿಕಾಗೋಷ್ಠಿ ನಡೆಸಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್ ಸಂಘದ ತಾಲ್ಲೂಕಾಧ್ಯಕ್ಷ ಕೊಡ್ಲೆ ಮಲ್ಲಿಕಾರ್ಜುನ ಮಾತನಾಡಿ ದೇಶದಲ್ಲಿ ನೂತನ ಆಡಳಿತದ ಅಲೆಯ ಅಗತ್ಯವಿದೆಂದು ಹಿಂದೆಲ್ಲಾ ನರೇಂದ್ರ ಮೋದಿಯವರ ಗೆಲುವಿಗಾಗಿ ಅನೇಕ ದಲಿತಪರ ಸಂಘಟನೆಗಳು ಶ್ರಮಿಸಿವೆ.

ಆದರೆ ಆ ಪಕ್ಷದಲ್ಲಿನ ಕೆಲವರು ಸಂವಿಧಾನ ವಿರೋಧಿ ಮಾತುಗಳಾಡುತ್ತಿದ್ದು ನಮ್ಮೆಲ್ಲರಿಗೆ ಬೇಸರವನ್ನು ತರಿಸಿದೆ. ಆದ್ದರಿಂದ ನಮ್ಮ ಸಂಘಟನೆಗಳ ಹಿರಿಯರು ಈ ಸಲದ ಲೋಕಸಭೆ ಚುನಾವಣೆಯಲ್ಲಿ ಇಂತಹ


ಉದಯವಾಹಿನಿ ಚಿತ್ರ

ಸಂವಿಧಾನ ವಿರೋಧಿ, ಕೋಮುವಾದಿ ಪಕ್ಷಗಳನ್ನು ದಿಕ್ಕರಿಸುವಂತೆ ಆದೇಶ ನೀಡಿದ್ದರಿಂದ ನಾವೆಲ್ಲಾ ಸಂವಿಧಾನ ಉಳಿವಿಗಾಗಿ ಯೋಚಿಸಿ ಮತದಾನ ಮಾಡಬೇಕಿದೆ.

ಆದ್ದರಿಂದ ಎಲ್ಲಾ ದಲಿತಪರ ಸಂಘಟನೆಗಳ ಅಭಿಪ್ರಾಯವನ್ನು ಪಡೆಯಲು ಈ ಪತ್ರಿಕಾಗೋಷ್ಠಿ ನಡೆಸಲಾಯಿತೆಂದು ತಿಳಿಸಿದರು.

ಇದೇ ವೇಳೆ ವಿವಿಧ ಸಂಘಟನೆಗಳ ಪದಾಧಿಕಾರಿಗಳಾದ ವಿ.ಗಾಳೆಪ್ಪ, ಜಂಬಣ್ಣ, ದರಗಪ್ಪ, ಬಿ.ರಾಮಯ್ಯ, ನಾಗಲಿಂಗ, ನಂದೀಶ, ಎಸ್.ಮಂಜು, ಎಸ್.ರವಿ ಇನ್ನಿತರರಿದ್ದರು.

## ಮತದಾನ ಪೂರ್ವಸಿದ್ಧತೆಯ ಸುದ್ದಿಗೋಷ್ಠಿ ನಡೆಸಿದ ಎಆರ್‌ಓ

• ಉದಯವಾಹಿನಿ, ಸಿರುಗುಪ್ಪ

ನಗರದ ತಾಲ್ಲೂಕು ಕಛೇರಿ ಸಭಾಂಗಣದಲ್ಲಿ ಮತದಾನ ಪೂರ್ವ ಸಿದ್ಧತೆ ಕುರಿತು ಸಹಾಯಕ ಚುನಾವಣಾಧಿಕಾರಿ ಡಾ.ತಿರುಮಲೇಶ ಅವರು ರವಿವಾರದಂದು ಸುದ್ದಿಗೋಷ್ಠಿ ನಡೆಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ ಮೇ.7ರಂದು ನಡೆಯುವ ಮತಗಟ್ಟೆಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳಾದ ವಿದ್ಯುತ್, ರ‍್ಯಾಂಪ್, ಶೌಚಾಲಯ, ಕುಡಿಯುವ ನೀರು ವ್ಯವಸ್ಥೆಯನ್ನು ಸೆಕ್ಟರ್ ಅಧಿಕಾರಿಗಳ ಮೂಲಕ ಹಾಗೂ ಸ್ಥಳೀಯ ಅಧಿಕಾರಿಗಳ ಮೂಲಕ ವ್ಯವಸ್ಥೆ ಮಾಡಿರುವ ಬಗ್ಗೆ ಮಾಹಿತಿ ಪಡೆಯಲಾಗಿದೆ.

ಸಿರುಗುಪ್ಪ ವಿದಾನಸಭಾ ಕ್ಷೇತ್ರಕ್ಕೆ ನೇಮಕವಾಗಿರುವ ಜನರಲ್ ವೀಕ್ಷಣಾಧಿಕಾರಿಗಳು ಬಂದು ಚೆಕ್ ಪೋಸ್ಟ್ ವ್ಯಾಪ್ತಿಯಲ್ಲಿ ಪರಿಶೀಲನೆ ನಡೆಸಿರುತ್ತಾರೆ. ನಮ್ಮಲ್ಲಿ ಮನೆ ಮತದಾನಕ್ಕಾಗಿ 20 ಜನ ಅರ್ಜಿ ಸಲ್ಲಿಸಿದ್ದು, ಆ 20 ಮತದಾರರ ಮನೆಗೆ ತೆರಳಿ ಮತವನ್ನು ಸಂಗ್ರಹಿಸಿ ಅವುಗಳನ್ನು ಭದ್ರತಾ ಕೊಠಡಿಯಲ್ಲಿ ಇರಿಸಲಾಗಿದೆ.


ಉದಯವಾಹಿನಿ ಚಿತ್ರ

**ಚೆಕ್ ಪೋಸ್ಟ್ ವ್ಯಾಪ್ತಿಯಲ್ಲಿ ಪರಿಶೀಲನೆ**

ತಾಲ್ಲೂಕಿನಲ್ಲಿ 32 ಸೂಕ್ಷ್ಮ, 12 ಅತಿಸೂಕ್ಷ್ಮ ಮತಗಟ್ಟೆಗಳಿವೆ. ಚುನಾವಣೆಯ ಮತದಾನ ಕಾರ್ಯದಲ್ಲಿ ಪೋಲೀಸ್ ಹೊರತುಪಡಿಸಿ 1051 ಸಿಬ್ಬಂದಿಗಳು ಕಾರ್ಯ ನಿರ್ವಹಿಸಲಿದ್ದಾರೆ. ಮತದಾರರು ಯಾವುದೇ ಆಮಿಷಗೊಳಗಾಗಬಾರದು.

228 ಮತಗಟ್ಟೆಗಳಿಗೆ ಮತಯಂತ್ರಗಳನ್ನು ಸಿಬ್ಬಂದಿಗಳು ಹಾಗೂ ಪೋಲೀಸ್ ಬಿಗಿಭದ್ರತೆಯಲ್ಲಿ ಬಸ್‌ಗಳು, ಮಿನಿಬಸ್‌ಗಳು, ಜೀಪ್‌ಗಳ ಮೂಲಕ ತಲುಪಿಸಲಾಗುವುದು. ಮತದಾನದ ದಿನದ ಬೆಳಿಗ್ಗೆ ಚುನಾವಣೆಗೆ 20 ಅಭ್ಯರ್ಥಿಗಳು ಸ್ಪರ್ಧಿಸಿರುವುದರಿಂದ ತಲಾ 3ರಂತೆ 60 ಅಣಕು ಮತಗಳನ್ನು ಏಜೆಂಟ್‌ಗಳಿಂದ ಹಾಕಿಸಿ ಪ್ರದರ್ಶನ ಮಾಡಲಾಗುತ್ತದೆ.

ಸಂಜೆ ಮತದಾನ ಕೊನೆಗೊಂಡ ನಂತರ ಎಲ್ಲಾ ಇವಿಎಂ ಯಂತ್ರಗಳನ್ನು ಪೋಲೀಸ್ ಬಿಗಿಭದ್ರತೆಯಲ್ಲಿ ಕೊಪ್ಪಳದ ಗವಿಸಿದ್ದೇಶ್ವರ ಕಾಲೇಜಿನಲ್ಲಿನ ಭದ್ರತಾ ಕೊಠಡಿಯ ಅಧಿಕಾರಿಗಳ ಸುಪರ್ದಿಗೆ ವಹಿಸಲಾಗುವುದೆಂದು ತಿಳಿಸಿದರು. ಇದೇ ವೇಳೆ ತಹಶೀಲ್ದಾರ್ ಶಂಷಾಲಂ ಇದ್ದರು.

## ಅಭಿವೃದ್ಧಿ ಬಿಟ್ಟು ಸುಳ್ಳು ಹೇಳಿ ಮತಯಾಚನೆ: ಸಿದ್ದರಾಮಯ್ಯ ಕಿಡಿ

• ಉದಯವಾಹಿನಿ, ದಾವಣಗೆರೆ

ಪ್ರಧಾನಿ ನರೇಂದ್ರ ಮೋದಿ ಅವರು 10 ವರ್ಷಗಳಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಮುಂದಿಟ್ಟು ಮತ ಯಾಚಿಸುವುದನ್ನು ಬಿಟ್ಟು ಸುಳ್ಳುಗಳನ್ನು ಹೇಳಿ 3ನೇ ಬಾರಿಗೆ ಪ್ರಧಾನಿ ಆಗಲು ಹೊರಟಿದ್ದಾರೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಲೇವಡಿ ಮಾಡಿದರು.

ಇಲ್ಲಿನ ಹೈಸ್ಕೂಲ್ ಮೈದಾನದಲ್ಲಿ ಶನಿವಾರ ಆಯೋಜಿಸಿದ್ದ ಕಾಂಗ್ರೆಸ್ ಅಭ್ಯರ್ಥಿಪರ ಆಯೋಜಿಸಿದ್ದ ಪ್ರಜಾಧ್ವನಿ-2 ಸಮಾವೇಶವನ್ನು ಉದ್ದೇಶಿಸಿ ಅವರು ಮಾತನಾಡಿದರು.

10 ವರ್ಷಗಳ ಅವಧಿಯಲ್ಲಿ ರೈತರು, ಹಿಂದುಳಿದವರು, ಬಡವರು, ದಲಿತರು ಹಾಗೂ ಅಲ್ಪಸಂಖ್ಯಾತರಿಗೆ ಏನು ಸಹಾಯ ಮಾಡಿದ್ದಾರೆ ಎಂಬುದನ್ನು ಜನರ ಮುಂದೆ ಇಟ್ಟು


ಉದಯವಾಹಿನಿ ಚಿತ್ರ

**10 ವರ್ಷಗಳಾದರೂ 15ಲಕ್ಷ ಹಣ ಹಾಕಿಲ್ಲ**

ಮತ ಕೇಳಬೇಕು. ದೇಶ ಹಾಗೂ ಕರ್ನಾಟಕ ರಾಜ್ಯವನ್ನು ಯಾವ ರೀತಿ ಅಭಿವೃದ್ಧಿ ಮಾಡಿದ್ದಾರೆ. ಕೊಟ್ಟ ಭರವಸೆಗಳನ್ನು ಈಡೇರಿಸಿದ್ದಾರಾ? ಈಡೇರಿಸಿದ್ದರೆ ಅದನ್ನು ಘೋಷಿಸಬೇಕು' ಎಂದು ಸವಾಲು ಹಾಕಿದರು. ಕಾಂಗ್ರೆಸ್ ನಾಯಕರು ಭ್ರಷ್ಟಾಚಾರ ಮಾಡಿ ಹಣವನ್ನು ವಿದೇಶದಲ್ಲಿ ಇಟ್ಟಿದ್ದು, ಅಧಿಕಾರಕ್ಕೆ ಬಂದ ನೂರು ದಿನಗಳಲ್ಲಿ ಆ ಹಣವನ್ನು ತಂದು ಪ್ರತಿಯೊಬ್ಬರ ಖಾತೆಗಳಿಗೆ 15 ಲಕ್ಷ ಹಣ ಜಮಾ ಮಾಡುವುದಾಗಿ ಭರವಸೆ ನೀಡಿದ್ದರು.

ಆದರೆ 10 ವರ್ಷಗಳಾದರೂ 15 ಹಾಕಿಲ್ಲ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ಭರವಸೆ ನೀಡಿದ್ದರು.

> ಈ ವೇಳೆಗಾಗಲೇ 20 ಕೋಟಿ ಉದ್ಯೋಗ ಸೃಷ್ಟಿಯಾಗಬೇಕಿತ್ತು. ಉದ್ಯೋಗ ಕೇಳಲು ಹೋದರೆ ಪಕೋಡಾ ಮಾರಿ ಎಂದು ಹೇಳಿದ್ದಾರೆ. ಈ ದೇಶದ ಯುವಕ-ಯುವತಿಯರು ಪ್ರಧಾನಿ ನರೇಂದ್ರ ಮೋದಿ ಅವರ ಮಾತಿಗೆ ಮರುಳಾಗಿ 'ಮೋದಿ ಮೋದಿ ಎನ್ನುತ್ತಿದ್ದಾರೆ. ಯುವಕರಿಗೆ ಮೋದಿ ಭ್ರಮೆ ಹುಟ್ಟಿಸಿ ದ್ರೋಹ ಮಾಡಿದರು -ಸಿಎಂ ಸಿದ್ದರಾಮಯ್ಯ

## ರಾಜ್ಯದಲ್ಲಿ 'ಲವ್ ಜಿಹಾದ್' ಹೆಚ್ಚುತ್ತಿದ್ದು ಎಸ್‌ಐಟಿ ರಚಿಸಿ: ಸರ್ಕಾರಕ್ಕೆ ಸಿಟಿ ರವಿ ಆಗ್ರಹ

• ಉದಯವಾಹಿನಿ, ಹುಬ್ಬಳ್ಳಿ

ರಾಜ್ಯದಲ್ಲಿ ಲವ್ ಜಿಹಾದ್ ಪ್ರಕರಣಗಳು ಹೆಚ್ಚುತ್ತಿದ್ದು, ಸರ್ಕಾರ ಎಸ್‌ಐಟಿ ತನಿಖೆ ನಡೆಸಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು, ಕರ್ನಾಟಕ ಕೇರಳದ ಹಾದಿಯಲ್ಲಿ ಸಾಗುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಹುಬ್ಬಳ್ಳಿಯಲ್ಲಿ ಅಪ್ರಾಪ್ತೆಯನ್ನು ಮುಸ್ಲಿಂ ಯುವಕ ಗರ್ಭಿಣಿಯನ್ನಾಗಿಸಿರುವ ಹೇಯ ಕೃತ್ಯ ವರದಿಯಾಗಿದೆ. ಕಾಂಗ್ರೆಸ್ ಸರ್ಕಾರ ಇದೆ ಎಂಬ ಧೈರ್ಯ, ಜಿಹಾದಿ ಮನಸ್ಥಿತಿಯ ಕ್ರಿಮಿನಲ್‌ಗಳನ್ನು ಉತ್ತೇಜಿಸುತ್ತಿದೆ' ಎಂಬ ಆತಂಕ ಶಾಂತಿಪ್ರಿಯ ಕರುನಾಡ ಜನತೆಯನ್ನು ಕಾಡುತ್ತಿದೆ. ರಾಜ್ಯದಲ್ಲಿ ಹಿಂದೂ ಹೆಣ್ಣುಮಕ್ಕಳಿಗೆ ರಕ್ಷಣೆಯಿಲ್ಲದಂತಾಗಿದೆ. ಕಣ್ಣೆದುರೇ ಮೂಲಭೂತವಾದಿ ಪುಂಡರು ಅಟ್ಟಹಾಸ ಮೆರೆಯುತ್ತಲೇ ಇದ್ದರೂ ಓಲೈಕೆ ರಾಜಕಾರಣಕ್ಕೆ ಜೋತುಬಿದ್ದಿರುವ ಕಾಂಗ್ರೆಸ್ ಸರ್ಕಾರ ಉದ್ದೇಶ ಪೂರ್ವಕ ನಿಷ್ಕ್ರೀಯತೆ ತೋರುತ್ತಿದೆ, ರಾಕ್ಷಸೀ ಪ್ರವೃತ್ತಿ ಮೆರೆಯುತ್ತಿರುವವರ ವಿರುದ್ಧ ಮೆದು ಧೋರಣೆ ಅನುಸರಿಸುತ್ತಿದೆ. ಇದರಿಂದ ಹೆಣ್ಣುಮಕ್ಕಳ ಮೇಲೆ ನಿರಂತರ ಕ್ರೌರ್ಯ ಸರಣೀ ರೂಪದಲ್ಲಿ ಎಗ್ಗಿಲ್ಲದೇ ಸಾಗಿದೆ. ಹೆಣ್ಣು ಹೆತ್ತವರ ಆಕ್ರಂದನ ಅರಣ್ಯರೋಧನವಾಗಿದೆ, ಧೃತರಾಷ್ಟ್ರ ನಡವಳಿಕೆಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಧರ್ಮಯುದ್ಧದಲ್ಲಿ(ಲೋಕಸಮರ) ಜನ ಪಾಠ ಕಲಿಸಬೇಕಿದೆ ಎಂದು ಹೇಳಿದ್ದಾರೆ.



## ಸರ್ಕಾರದಿಂದ ಸಂತ್ರಸ್ತೆಯರಿಗೆ ಆರ್ಥಿಕ ನೆರವು

• ಉದಯವಾಹಿನಿ ಬೆಳಗಾವಿ

ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರಿಂದ ಲೈಂಗಿಕ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ರಾಜ್ಯ ಸರ್ಕಾರ ಆರ್ಥಿಕ ನೆರವು ನೀಡಲಿದೆ ಎಂದು ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರೋಪಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ ಎಂದರು.

ಕಳೆದ 75 ವರ್ಷಗಳಲ್ಲಿ ಎಂದೂ ಕಂಡರಿಯದ ಪ್ರಕರಣ ಇದಾಗಿದ್ದು, ನೂರಾರು ಸಂಖ್ಯೆಯಲ್ಲಿರುವ ಅತ್ಯಾಚಾರ ಸಂತ್ರಸ್ತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆರ್ಥಿಕ ನೆರವು ಘೋಷಿಸಿದ್ದಾರೆ' ಎಂದು ತಿಳಿಸಿದರು. ಈ ವೇಳೆ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹಸಚಿವ ಅಮಿತ್ ಶಾ ವಿರುದ್ಧ ವಾಗ್ದಾಳಿ ನಡೆಸಿದ ಸುರ್ಜೇವಾಲಾ, 'ಪ್ರಜ್ವಲ್ ಕೃತ್ಯಗಳ ಬಗ್ಗೆ ಮಾಹಿತಿ ಇದ್ದರೂ ಜೆಡಿಎಸ್ ಜೊತೆ ಬಿಜೆಪಿ ಮೈತ್ರಿ ಮಾಡಿಕೊಂಡಿದ್ದು ಏಕೆ' ಎಂದು ಪ್ರಶ್ನಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ಅನ್ನು ಏಕೆ ರದ್ದುಗೊಳಿಸಲಿಲ್ಲ? ಅವರನ್ನು ಮರಳಿ ಕರೆತರಲು ಇಂಟರ್‌ಪೋಲ್ ಮೂಲಕ ಬ್ಲೂ ಕಾರ್ನರ್ ನೋಟಿಸ್ ನೀಡಲಿಲ್ಲ ಯಾಕೆ? ಎಂದು ಕೇಳಿದರು.

ಇದೇ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಜ್ವಲ್ ರೇವಣ್ಣ ಪತ್ತೆಗೆ ಸಿಬಿಐ ಮೂಲಕ ಬ್ಲೂ ಕಾಲರ್ ನೋಟಿಸ್ ಹೊರಡಿಸಲು ಮುಂದಾಗಿರುವುದಾಗಿ ತಿಳಿಸಿದರು.

**ಆರೋಪಿಗಳ ವಿರುದ್ಧ ಸೂಕ್ತ ಕ್ರಮ**



## ಬಿಜೆಪಿ ಕಾರ್ಯಕರ್ತರ ಮೇಲೆ ಹಲ್ಲೆ

• ಉದಯವಾಹಿನಿ, ಕೊಪ್ಪಳ

ನಾವು ಕಾಂಗ್ರೆಸ್‌ಗೆ ಮತ ಹಾಕುವುದಿಲ್ಲ ಬಿಜೆಪಿಗೆ ಮತ ಹಾಕುತ್ತೇವೆ ಎಂದಿದ್ದಕ್ಕೆ ಕಾಂಗ್ರೆಸ್ ಕಾರ್ಯಕರ್ತರ ಮೇಲೆ ಹಲ್ಲೆ ಆರೋಪ ಕೇಳಿಬಂದಿದೆ. ಕೊಪ್ಪಳ ತಾಲ್ಲೂಕಿನ ಯಲಮಗೇರಿ ಗ್ರಾಮದಲ್ಲಿ ಕಳೆದ ರಾತ್ರಿ ಘಟನೆ ನಡೆದಿದೆ.

ನಿನ್ನೆ ರಾತ್ರಿ ಗ್ರಾಮದಲ್ಲಿ ಕಾಂಗ್ರೆಸ್ ಪರವಾಗಿ ಕಾರ್ಯಕರ್ತರು ಪ್ರಚಾರ ಮಾಡುತ್ತಿದ್ದರು.


ಉದಯವಾಹಿನಿ ಚಿತ್ರ

ದ್ಯಾಮಣ್ಣ ಮನೆಗೆ ಬಂದ ಕಾರ್ಯಕರ್ತರು ಕಾಂಗ್ರೆಸ್‌ಗೆ ಓಟ ಹಾಕುವಂತೆ ಮನವಿ ಮಾಡಿದ್ದಾರೆ. ಈ ವೇಳೆ ದ್ಯಾಮಣ್ಣ ನಾನು ಕಾಂಗ್ರೆಸ್‌ಗೆ ಮತ ಹಾಕಲ್ಲ. ನಾವು ಬಿಜೆಪಿಗೆ ಮತ ಹಾಕುತ್ತೇವೆ ಅಂತ ಹೇಳಿದ್ದಾರೆ. ಇದೇ ಕಾರಣಕ್ಕೆ ಜಗಳ ಮಾಡಲಾಗಿದ್ದು, ಗವಿಸಿದ್ದಪ್ಪ, ಗಂಗಣ್ಣ, ನೀಲಪ್ಪ, ಬಸವರಾಜ್ ಸೇರಿದಂತೆ ಎಂಟಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರಿಂದ ದ್ಯಾಮಣ್ಣ ಮತ್ತು ಅವರ ಕುಟುಂಬದವರ ಮೇಲೆ ಹಲ್ಲೆ ಮಾಡಲಾಗಿದೆ. ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಮೊಸಳೆ ತುಂಬಿದ್ದ ನಾಲೆಗೆ ಮಗು ಎಸೆದ ತಾಯಿ

• ಉದಯವಾಹಿನಿ, ಕಾರವಾರ

ಗಂಡನ ಮೇಲಿದ್ದ ಕೋಪಕ್ಕೆ ಆರು ವರ್ಷದ ಮಗುವನ್ನು ಮೊಸಳೆ ತುಂಬಿದ್ದ ನಾಲೆಗೆ ತಾಯಿಯೇ ಎಸೆದ ಘಟನೆ ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ತಾಲ್ಲೂಕಿನ ಹಾಲಮಡ್ಡಿಯಲ್ಲಿ ವರದಿಯಾಗಿದೆ.

ರವಿಕುಮಾರ ಹಾಗೂ ಸಾವಿತ್ರಿ ದಂಪತಿಗಳ 6 ವರ್ಷದ ಮಗು ವಿನೋದ್ ಮೊಸಳೆಗೆ ಆಹಾರವಾಗಿದ್ದಾನೆ.

ಗಂಡ-ಹೆಂಡತಿ ಜಗಳ ಮಾಡುತ್ತಿರುವಾಗ ಕೋಪದ ಭರದಲ್ಲಿ ತಾಯಿ ಸಾವಿತ್ರಿ ಮಗುವನ್ನು ಮನೆಯ ಹಿಂದಿರುವ ಕಾಗದ ಕಾರ್ಖಾನೆಯಿಂದ ಬರುವ ರಾಸಾಯನಿಕ ನೀರಿನ ನಾಲೆಗೆ ಎಸೆದಿದ್ದಾಳೆ.

ಮಗುವನ್ನು ನಾಲೆಗೆ ಎಸೆದ ವಿಷಯ ಅಕ್ಕಪಕ್ಕದ ಜನರಿಗೆ ತಿಳಿಯುತ್ತಿದ್ದಂತೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಮಾಹಿತಿ ಸಿಕ್ಕ ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿದ ದಾಂಡೇಲಿ ಗ್ರಾಮಿಣ ಠಾಣೆಯ ಪಿ.ಎಸ್ ಐ ಕೃಷ್ಣೇಗೌಡ ಅರಿಕೆರಿ,ಪಿ ಎಸ್ ಐ ಜಗದೀಶ ಹಾಗೂ ಸಿಬ್ಬಂದಿಗಳು ಮತ್ತು ಜೋಯಿಡಾದ ಅಗ್ನಿಶಾಮಕ ದಳದವರು ಹಾಗೂ ಸ್ಥಳಿಯರು ಮಗುವಿನ ಶೋಧ ಕಾರ್ಯಾಚರಣೆ ನಡೆಸಿದ್ದಾರೆ.


ಉದಯವಾಹಿನಿ ಚಿತ್ರ

ಭಾನುವಾರ ಮುಂಜಾನೆ ಮುಂದುವರೆದ ಶೋಧ ಕಾರ್ಯಾ ಚರಣೆಯಲ್ಲಿ ನಾಲೆಗೆ ಎಸೆಯಲಾಗಿದ್ದ ಮಗುವನ್ನು ಮೊಸಳೆಯೊಂದು ಬಾಯಿಯಲ್ಲಿ ಹಿಡಿದು ನದಿಯಲ್ಲಿ ಓಡಾಡುತ್ತಿರುವುದು ಕಂಡು ಬಂದಿದೆ.

ಸ್ಥಳೀಯ ಮುಳುಗು ತಜ್ಞರು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿಗಳು ಹಾಗೂ ಪೊಲೀಸ್ ಸಿಬ್ಬಂದಿಗಳು ಮೊಸಳೆ ಬಾಯಿಯಿಂದ ಮಗುವಿನ ಮೃತದೇಹವನ್ನು ಹೊರ ತಂದಿದ್ದಾರೆ.

## ಚಿತ್ರದುರ್ಗ ಒಳಾಂಗಣ ಈಜುಕೊಳ ಮೇ 06 ರಿಂದ ಪುನರಾರಂಭ

• ಉದಯವಾಹಿನಿ ಚಿತ್ರದುರ್ಗ



ಚಿತ್ರದುರ್ಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ನಡೆಸಲಾಗುತ್ತಿರುವ ಈಜುಕೊಳವನ್ನು ದುರಸ್ಥಿಗೊಳಿಸಿ ಇದೇ ಮೇ.06 ರಿಂದ ಪುನರ್ ಆರಂಭಿಸಲಾಗುತ್ತದೆ. ಅಂದು ಮಧ್ಯಾಹ್ನ 3 ರಿಂದ 6 ರವರೆಗೆ ಬ್ಯಾಚಸ್‌ಗಳು ಇರುತ್ತವೆ.

ಇನ್ನುಳಿದಂತೆ ಪ್ರತಿದಿನ ಪುರುಷರಿಗೆ ಮತ್ತು ಮಕ್ಕಳಿಗೆ ಬೆಳಿಗ್ಗೆ 6 ರಿಂದ 7 ರವರೆಗೆ ಮತ್ತು 7 ರಿಂದ 8 ರವರೆಗೆ ಹಾಗೂ ಮಧ್ಯಾಹ್ನ 3 ರಿಂದ 4 ರವರೆಗೆ ಮತ್ತು ಮಧ್ಯಾಹ್ನ 4 ರಿಂದ 5 ರವರೆಗೆ ಬ್ಯಾಚಸ್‌ಗಳು ಇರುತ್ತವೆ. ಮಹಿಳೆಯರಿಗೆ ಮತ್ತು ಬಾಲಕಿಯರಿಗೆ ಸಂಜೆ 5 ರಿಂದ 6 ರವರೆಗೆ ಬ್ಯಾಚಸ್‌ಗಳು ಇರುತ್ತವೆ. ಹೆಚ್ಚಿನ ಮಾಹಿತಿಗಾಗಿ ಹಾಗೂ ಶುಲ್ಕದ ವಿವರದ ಬಗ್ಗೆ ಮಾಹಿತಿಯನ್ನು ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ ಎಂದು ಚಿತ್ರದುರ್ಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೆಕ್ಕಪತ್ರ ದಾಖಲೆ ಸಲ್ಲಿಸಲು ಸೂಚನೆ

• ಉದಯವಾಹಿನಿ ಚಿತ್ರದುರ್ಗ

ಸಹಕಾರ ಸಂಘಗಳ ನಿಬಂಧಕರ ಸುತ್ತೋಲೆ 2023ರ ಆಗಸ್ಟ್ 30ರ ರೀತ್ಯಾ ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾದ ಪ್ರತಿಯೊಂದು ಸಂಘ, ಸಂಸ್ಥೆಯು ಕಲಂ 13ರಂತೆ ಸಂಬಂಧಿಸಿದ ದಾಖಲಾತಿಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸಿ ಸ್ವೀಕೃತಿ ಪತ್ರ ಪಡೆಯಬೇಕಾಗಿರುತ್ತದೆ. ಆದರೆ ಅನೇಕ ಸಂಘ-ಸಂಸ್ಥೆಗಳು ಐದು ವರ್ಷಗಳಿಗೂ ಮೇಲ್ಪಟ್ಟು ದಾಖಲಾತಿಗಳನ್ನು ಸಲ್ಲಿಸಿ ಸ್ವೀಕೃತಿ ಪತ್ರ ಪಡೆಯಲು ಬಾಕಿ ಇದ್ದು, ಈ ಸಂಘ-ಸಂಸ್ಥೆಗಳ ಸದಸ್ಯರ ಹಿತದೃಷ್ಠಿಯಿಂದ ಮತ್ತೊಂದು ಬಾರಿ ಅವಕಾಶ ನೀಡಿ ಪ್ರತಿ ವರ್ಷಕ್ಕೆ ಹೆಚ್ಚುವರಿ ರೂ.3000/-ಗಳ ದಂಡ ವಿಧಿಸಿ 2024ರ ಜೂನ್ 30ರ ವರೆಗೆ ಸ್ವೀಕೃತಿ ಪಡೆಯಲು ಅವಕಾಶ ನೀಡಲಾಗಿದೆ ಎಂದು ಸಹಕಾರ ಸಂಘಗಳ ಉಪ ನಿಬಂಧಕರು ತಿಳಿಸಿದ್ದಾರೆ.

## ಕಾಡಾನೆ ತುಳಿದು ವ್ಯಕ್ತಿ ಸಾವು

• ಉದಯವಾಹಿನಿ ಆಲ್ದೂರು



ಕಾಡಾನೆ ದಾಳಿಗೆ ಜಿಲ್ಲೆಯಲ್ಲಿ ಮತ್ತೊಬ್ಬರು ಬಲಿಯಾಗಿದ್ದು, ಕಂಚಿನಕಲ್ ದುರ್ಗ ಸಮೀಪದ ಕೆಸವಿನಹಕ್ಲು ಎಸ್ಟೇಟ್‌ನಲ್ಲಿ ವ್ಯಕ್ತಿ ಮೃತಪಟ್ಟಿದ್ದಾರೆ. ಎಸ್ಟೇಟ್‌ನಲ್ಲಿ ಮೇಸ್ತ್ರಿ ಕೆಲಸ ಮಾಡುತ್ತಿದ್ದ ಆನಂದ ಪೂಜಾರಿ(56) ಅವರು ಭಾನುವಾರ ಬೆಳಿಗ್ಗೆ ಮನೆಯಿಂದ ಕೆಲಸಕ್ಕೆ ಹೋಗುವಾಗ ಆನೆ ದಾಳಿ ನಡೆಸಿದೆ. ಮಂಗಳೂರಿನ ಆನಂದ ಪೂಜಾರಿ ಅವರು, 35 ವರ್ಷಗಳಿಂದ ಇದೇ ತೋಟದಲ್ಲಿ ಕೆಲಸ ಮಾಡುತ್ತಿದ್ದರು. ಪತ್ನಿ ಮತ್ತು ಮೂವರು ಮಕ್ಕಳಿದ್ದಾರೆ. ಒಂದು ವರ್ಷದ ಅವಧಿಯಲ್ಲಿ ಕಾಡಾನೆ ದಾಳಿಗೆ ಮೂವರು ಬಲಿಯಾಗಿದ್ದಾರೆ. ಆನೆಗಳನ್ನು ಹಿಡಿದು ಸ್ಥಳಾಂತರ ಮಾಡಬೇಕು ಎಂದು ಸ್ಥಳೀಯರು ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

## ಕಾಲು ಜಾರಿ ಕೆರೆಗೆ ಬಿದ್ದು ಬಾಲಕ ಸಾವು

• ಉದಯವಾಹಿನಿ ಕವಿತಾಳ



ಕುರಿ ಮೇಯಿಸಲು ಹೋಗಿದ್ದ ಬಾಲಕ ಕುರಿಗಳಿಗೆ ನೀರು ಕುಡಿಸಲು ಹೋಗಿ ಕಾಲು ಜಾರಿ ಕೆರೆಗೆ ಬಿದ್ದು ಸಾವನ್ನಪ್ಪಿದ ಘಟನೆ ಮಸ್ಕಿ ತಾಲ್ಲೂಕಿನ ಬಸಾಪುರ ಗ್ರಾಮದಲ್ಲಿ ಭಾನುವಾರ ನಡೆದಿದೆ. ಗ್ರಾಮದ ಆನಂದ ಶಿವಪ್ಪ (9) ಮೃತ ಬಾಲಕ, ಕುರಿ ಮೇಯಿಸಲು ತೆರಳಿದ್ದ ಆನಂದ ಗ್ರಾಮದ ಕನಕಪ್ಪ ಅವರ ಜಮೀನಿನಲ್ಲಿನ ಕೆರೆಯಲ್ಲಿ ಕುರಿಗಳಿಗೆ ನೀರು ಕುಡಿಸಲು ಹೋಗಿ ಕಾಲು ಜಾರಿ ಕೆರೆಗೆ ಬಿದ್ದಿದ್ದಾನೆ. ರಸ್ತೆಯಲ್ಲಿ ತೆರಳುತ್ತಿದ್ದ ಯುವಕರು ಗಮನಿಸಿ ಕೆರೆಗೆ ಇಳಿದು ಬಾಲಕನಿಗಾಗಿ ಹುಡುಕಾಟ ನಡೆಸಿದ್ದಾರೆ ಸ್ವಲ್ಪ ಸಮಯದ ನಂತರ ಬಾಲಕನ ಮೃತ ದೇಹ ಸಿಕ್ಕಿದೆ. ಸ್ಥಳಕ್ಕೆ ಲಿಂಗಸುಗೂರಿನಿಂದ ಅಗ್ನಿ ಶಾಮಕ ಸಿಬ್ಬಂದಿ ಬರುವ ವೇಳಗೆ ಗ್ರಾಮಸ್ಥರು ಮೃತ ದೇಹವನ್ನು ಹೊರ ತೆಗೆದ್ದಿದ್ದರು.

## ಮತದಾರರ ಆರೋಗ್ಯ ಕಾಳಜಿಗೆ ಮತಗಟ್ಟೆಯಲ್ಲಿ ಮೆಡಿಸಿನ್ ಕಿಟ್

### ಬೇಸಿಗೆಯ ಬಿಸಿಲಿನ ಝಳ, ಶಾಖದ ಅಲೆಯ ನಡುವೆಯೇ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ಮೇ 7ರಂದು ಮತದಾನ

• ಉದಯವಾಹಿನಿ ಧಾರವಾಡ

ಬೇಸಿಗೆಯ ಬಿಸಿಲಿನ ಝಳ, ಶಾಖದ ಅಲೆಯ ನಡುವೆಯೇ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ಮೇ 7ರ ಮಂಗಳವಾರ ಮತದಾನ ನಡೆಯಲಿದೆ. ಚುನಾವಣಾ ಆಯೋಗ ಮತದಾನಕ್ಕೆ ತಯಾರಿ ಮಾಡಿಕೊಂಡಿದ್ದು, ಬಿಸಿಲಿನ ಕಾರಣಕ್ಕೆ ಮತದಾನದ ಪ್ರಮಾಣ ಕಡಿಮೆಯಾಗದಂತೆಯೂ ಕಾಳಜಿ ಕೈಗೊಂಡಿದೆ.

ಮೇ 7ರ ಮಂಗಳವಾರ ಮತದಾನ ನಡೆಯಲಿರುವ ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರ ಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಎಲ್ಲಾ 14 ಲೋಕಸಭಾ ಕ್ಷೇತ್ರಗಳಲ್ಲಿ ಬಿಸಿಲಿನ ಝಳ ಹೆಚ್ಚಾಗಿಯೇ ಇದೆ. ಧಾರವಾಡ ಲೋಕ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಳ್ಳುವ ಸಿಬ್ಬಂದಿ ಮತ್ತು ಮತದಾನಕ್ಕಾಗಿ ಬರುವ ಮತದಾರರ ಆರೋಗ್ಯ ಕಾಳಜಿಗೆ ಮೆಡಿಸಿನ್ ಕಿಟ್‌ಗಳನ್ನು ವಿತರಣೆ ಮಾಡಲಾಗುತ್ತಿದೆ.

**ತುರ್ತು ವೈದ್ಯಕೀಯ ಚಿಕಿತ್ಸೆ**

**ಜಿಲ್ಲಾಧಿಕಾರಿಗಳ ಮಾಹಿತಿ:** ಮತಗಟ್ಟೆ ಸಿಬ್ಬಂದಿ, ಮತಗಟ್ಟೆಗೆ ಬರುವ ಮತದಾರರ ಆರೋಗ್ಯ ಕಾಳಜಿಗೆ ಮೆಡಿಸಿನ್ ಕಿಟ್ ವಿತರಣೆ ಮಾಡುವ ಕುರಿತು ಚುನಾವಣಾಧಿಕಾರಿ ದಿವ್ಯ ಪ್ರಭು ಮಾಹಿತಿ ನೀಡಿದ್ದಾರೆ.

ಮೇ 7ರ ಮತದಾನ ನಡೆಯುವ ದಿನದಂದು ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ 1,652 ಮತದಾನ ಕೇಂದ್ರಗಳಿಗೆ 1,268 ವೈದ್ಯಕೀಯ ತಂಡಗಳನ್ನು ನಿಯೋಜಿಸಿ, 1,850 ಪ್ರಥಮ ಚಿಕಿತ್ಸಾ ಕಿಟ್‌ಗಳನ್ನು ಅವಶ್ಯಕ ಔಷಧಿಗಳೊಂದಿಗೆ ಸಿದ್ಧಗೊಳಿಸಿ, ಪೂರೈಸಲಾಗಿದೆ ಎಂದು ಹೇಳಿದ್ದಾರೆ.

ಚುನಾವಣಾ ಕರ್ತವ್ಯನಿರತ ಸಿಬ್ಬಂದಿ ಹಾಗೂ ಮತದಾರರ ಆರೋಗ್ಯ ಕಾಳಜಿ, ಅಗತ್ಯವೆನಿಸಿದರೆ ಪ್ರಾಥಮಿಕ ಚಿಕಿತ್ಸೆ ನೀಡಲು ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಶಶಿ ಪಾಟೀಲ ನೇತೃತ್ವದಲ್ಲಿ ಅಗತ್ಯ ಸಿದ್ದತೆ, ಆರೋಗ್ಯ ಸಿಬ್ಬಂದಿಗಳ ನೇಮಕ ಮತ್ತು ಆಂಬ್ಯುಲೆನ್ಸ್ ಗಳನ್ನು ನಿಯೋಜನೆ ಮಾಡಲಾಗಿದೆ. ಪ್ರತಿ ಮತಗಟ್ಟೆಗಳ ವೈದ್ಯಕೀಯ ಮೇಲ್ವಿಚಾರಣೆಗಾಗಿ 55 ಸೆಕ್ಟರಲ್ ಅಧಿಕಾರಿಗಳನ್ನು, 10 ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ.


ಉದಯವಾಹಿನಿ ಚಿತ್ರ

ಮತದಾನದ ದಿನ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕೇಂದ್ರ ಸ್ಥಾನವಾಗಿ ಇಟ್ಟುಕೊಂಡು ಒಟ್ಟು 29 ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಲಾಗಿದೆ. ಮಾಸ್ಟರಿಂಗ್ ಮತ್ತು ಡಿಮಾಸ್ಟರಿಂಗ್ ದಿನದಂದು 8 ಕೇಂದ್ರಗಳಿಗೆ ವೈದ್ಯಕೀಯ ತಂಡಗಳೊಂದಿಗೆ ಆಂಬ್ಯುಲೆನ್ಸ್ ನಿಯೋಜಿಸಲಾಗಿದೆ.

ಅಧಿಕಾರಿಗಳಿಗೆ ತರಬೇತಿ: ಬಿಸಿಗಾಳಿಯಿಂದ ಉಂಟಾಗುವ ಅನಾರೋಗ್ಯ ನಿಯಂತ್ರಣಕ್ಕಾಗಿ ಮುಂಜಾಗೃತೆಯನ್ನು ವಹಿಸುವ ಕುರಿತು ಚುನಾವಣಾ ಕಾರ್ಯನಿರ್ವಹಿಸುವ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಯವರಿಗೆ ತರಬೇತಿ ನೀಡಲಾಗಿದೆ. ಮತದಾನ ಕೇಂದ್ರಗಳಿಗೆ ಸಾಕಷ್ಟು ಪ್ರಮಾಣದಲ್ಲಿ ಓಆರೆಸ್ ಪ್ಯಾಕೇಟ್‌ಗಳನ್ನು ನೀಡಲಾಗಿದೆ.

> ಮತದಾನ ಕೇಂದ್ರಕ್ಕೂ ಬಿಸಿಗಾಳಿ, ಬಿಸಿಲಿನಿಂದ ರಕ್ಷಿಸಿಕೊಳ್ಳಲು ಕೈಕೊಳ್ಳಬೇಕಾದ ಕ್ರಮಗಳ ಕುರಿತು ಹಾಗೂ ವಹಿಸಿಕೊಳ್ಳಬೇಕಾದ ಮುಂಜಾಗೃತಾ ಕ್ರಮಗಳ ಕುರಿತು ಕರಪತ್ರಗಳನ್ನು ವಿತರಿಸಲಾಗಿದೆ ಮತ್ತು ಸ್ವಿಪ್ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸಲು ಆರೋಗ್ಯ ಇಲಾಖೆಯ ಸಿಬ್ಬಂದಿಯವರಿಗೆ ಸೂಚಿಸಲಾಗಿದೆ.

#### ಔಷಧಿಗಳ ದಾಸ್ತಾನು

ಉಷ್ಣತೆಯಿಂದ ಸಂಭವಿಸುವ ಕಾಯಿಲೆಗಳಿಗೆ ಅಗತ್ಯವಿರುವ ಔಷಧಿಗಳ ದಾಸ್ತಾನುಗಳನ್ನು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಮತ್ತು ತಾಲ್ಲೂಕಾ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಇಡಲಾಗಿದೆ. ವಿಶೇಷ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆ ಧಾರವಾಡದಲ್ಲಿ 5, ಸಾರ್ವಜನಿಕ ಆಸ್ಪತ್ರೆಗಳಲ್ಲಿ ತಲಾ 2 ಹಾಸಿಗೆಗಳನ್ನು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಲಾ 1 ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ.

# ಬಲಪಂಥೀಯ ಸಂಘಟನೆಯ ನಾಯಕರನ್ನು ಕೊಲೆ ಮಾಡಲು ಸಂಚು

## • ನೂಪುರ್ ಶರ್ಮಾ ಸೇರಿದಂತೆ ಹಲವು ಹಿಂದೂ ನಾಯಕರ ಹತ್ಯೆಗೆ ಸಂಚು: ಸೂರತ್‌ನಲ್ಲಿ ಮೌಲ್ವಿ ಬಂಧನ

**ಸೂರತ್:** ಬಿಜೆಪಿ ನಾಯಕರು ಹಾಗೂ ಬಲಪಂಥೀಯ ಸಂಘಟನೆಯ ನಾಯಕರನ್ನು ಕೊಲೆ ಮಾಡಲು ಸಂಚು ರೂಪಿಸಿದ್ದ ಆರೋಪದಲ್ಲಿ ಗುಜರಾತ್‌ನ ಸೂರತ್‌ನಲ್ಲಿ ಶುಕ್ರವಾರ 27 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ.


ಮೌಲ್ವಿ ಸೋಹೆಲ್ ಅಬೂಬಕರ್ ತಿಮೋಲ್ ಎಂಬಾತ ಬಂಧಿತ ಆರೋಪಿ. ಹಿಂದಿ ಟಿವಿ ನ್ಯೂಸ್ ಚಾನೆಲ್‌ನ ಮುಖ್ಯ ಸಂಪಾದಕ, ತೆಲಂಗಾಣ ಬಿಜೆಪಿ ಶಾಸಕ ರಾಜಾ ಸಿಂಗ್ ಮತ್ತು ಬಿಜೆಪಿಯ ಮಾಜಿ ವಕ್ತಾರೆ ನೂಪುರ್ ಶರ್ಮಾ ಅವರಿಗೆ ಪಾಕಿಸ್ತಾನ ಮತ್ತು ನೇಪಾಳದಲ್ಲಿನ ದುಷ್ಕರ್ಮಿಗಳ ಜತೆಗೂಡಿ ಬೆದರಿಕೆ ಹಾಕಿದ್ದ ಎಂದು ಸೂರತ್‌ನ ಹಿರಿಯ ಪೊಲೀಸ್ ಅಧಿಕಾರಿ ಅನುಪಮ್ ಸಿಂಗ್ ಗೆಹ್ಲೋಟ್ ತಿಳಿಸಿದ್ದಾರೆ.

ಅಬೂಬಕರ್ ತಿಮೋಲ್ ನೂಲಿನ ಕಾರ್ಖಾನೆಯೊಂದರಲ್ಲಿ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದು, ಮುಸ್ಲಿಂ ಮಕ್ಕಳಿಗೆ ಇಸ್ಲಾಂ ಕುರಿತು ಖಾಸಗಿಯಾಗಿ ಟ್ಯೂಷನ್ ಕೂಡ ನಡೆಸುತ್ತಿದ್ದಾನೆ ಎಂದು ಅವರು ಹೇಳಿದ್ದಾರೆ.

ವಾಟ್ಸಾಪ್ ಗ್ರೂಪ್ ಒಂದರಲ್ಲಿ ಜನರನ್ನು ಜತೆಗೂಡಿಸುತ್ತಿರುವ ವ್ಯಕ್ತಿಯೊಬ್ಬ, ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುವ ಹಾಗೂ ಚುನಾವಣೆ ಸಂದರ್ಭದಲ್ಲಿ ಕೋಮು ಹಿಂಸಾಚಾರದ ಕಿಡಿ ಹೊತ್ತಿಸುವಂತಹ ಅಂಶಗಳನ್ನು ಪೋಸ್ಟ್ ಮಾಡುತ್ತಿದ್ದಾನೆ ಎಂಬ ಬಗ್ಗೆ ಪೊಲೀಸರಿಗೆ ಮಾಹಿತಿ ಬಂದಿತ್ತು. ಈ ಸಣ್ಣ ಮಾಹಿತಿ ಆಧಾರದಲ್ಲಿ ಪೊಲೀಸರು ತನಿಖೆ ಆರಂಭಿಸಿದ್ದರು.

- ಗುಜರಾತ್‌ನ ಸೂರತ್‌ನಲ್ಲಿ ಮೌಲ್ವಿ ಸೋಹೆಲ್ ಅಬೂಬಕರ್ ತಿಮೋಲ್ ಬಂಧನ
- ಪಾಕಿಸ್ತಾನ ಮತ್ತು ನೇಪಾಳದಲ್ಲಿನ ದುಷ್ಕರ್ಮಿಗಳ ಜತೆಗೂಡಿ ನಾಯಕರ ಹತ್ಯೆಗೆ ಸಂಚು
- ವಿದೇಶಿಗರ ಜತೆ ಮೊಬೈಲ್ ಫೋನ್ ಚಾಟ್ ಮೂಲಕ ಸಂಪರ್ಕದಲ್ಲಿದ್ದ ಆರೋಪಿ

ಪ್ರಸ್ತುತ ನಡೆಯುತ್ತಿರುವ ಸಾರ್ವತ್ರಿಕ ಚುನಾವಣೆ ವೇಳೆ ಕೋಮು ಸೌಹಾರ್ದತೆ ಕದಡಲು ತಿಮೋಲ್ ಬಯಸಿದ್ದ ಎನ್ನುವುದು ಚಾಟ್ ದಾಖಲೆಗಳಿಂದ ಬೆಳಕಿಗೆ ಬಂದಿದೆ. ಆತ ಇನ್ನೂ ಅನೇಕ ವ್ಯಕ್ತಿಗಳನ್ನು ಟಾರ್ಗೆಟ್ ಮಾಡಿದ್ದನೇ ಎಂಬುದನ್ನು ತಿಳಿದುಕೊಳ್ಳಲು ಸೂರತ್ ಪೊಲೀಸರು ಇತರೆ ಸಂಸ್ಥೆಗಳ ಸಹಾಯ ಪಡೆದುಕೊಳ್ಳುತ್ತಿದ್ದಾರೆ ಎಂದು ಗೆಹ್ಲೋಟ್ ಹೇಳಿದ್ದಾರೆ.



**ಚಾಟ್ ದಾಖಲೆಗಳಿಂದ ಬೆಳಕಿಗೆ**

ಪಾಕಿಸ್ತಾನ ಮತ್ತು ನೇಪಾಳಕ್ಕೆ ಸೇರಿದ ಫೋನ್ ನಂಬರ್‌ಗಳನ್ನು ಹೊಂದಿರುವ ಡಾಗರ್ ಮತ್ತು ಶೆಹನಾಜ್ ಎಂಬ ಇಬ್ಬರ ಜತೆ ತಿಮೋಲ್ ಸಂಪರ್ಕದಲ್ಲಿ ಇದ್ದಿದ್ದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ. ಚಾಟ್ ಆಪ್‌ನಲ್ಲಿ ತಿಮೋಲ್, ಹಿಂದೂಯಿಸಂ ವಿರುದ್ಧದ ಭಾಷಣಗಳನ್ನು ಬರೆದಿದ್ದ. 2019ರಲ್ಲಿ ನಡೆದ ಉತ್ತರ ಪ್ರದೇಶ ಮೂಲದ ಹಿಂದೂ ಸಮಾಜ ಪಾರ್ಟಿ ಅಧ್ಯಕ್ಷ ಕಮಲೇಶ್ ತಿವಾರಿ ಹತ್ಯೆಯ ರೀತಿಯಲ್ಲಿ ರಾಣಾರನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿದ್ದ. ರಾಣಾ ಅವರ ಫೋಟೋವನ್ನು ಗ್ರೂಪ್‌ನಲ್ಲಿ ಹಾಕಿ 1 ಕೋಟಿ ರೂ ಆಫರ್ ನೀಡಿದ್ದ.

### ಮೊಬೈಲ್ ಚಾಟ್‌ಗಳಿಂದ ಬಯಲಾದ ಸಂಗತಿ

**ಪಾಕಿಸ್ತಾನ ಮತ್ತು ನೇಪಾಳದ ವ್ಯಕ್ತಿಗಳ ಜತೆ ಸಂಚು ನಡೆಸುತ್ತಿದ್ದ ತಿಮೋಲ್, ತನ್ನ ಮೊದಲ ಟಾರ್ಗೆಟ್ ಆಗಿರುವ ಹಿಂದೂ ಸನಾತನ ಸಂಘದ ರಾಷ್ಟ್ರೀಯ ಅಧ್ಯಕ್ಷ ಉಪದೇಶ್ ರಾಣಾ ಅವರನ್ನು ಕೊಲ್ಲಲು ಪಾಕಿಸ್ತಾನ ಮತ್ತು ನೇಪಾಳದ ಕೆಲವು ವ್ಯಕ್ತಿಗಳಿಗೆ 1 ಕೋಟಿ ರೂ ಸುಪಾರಿ ಮತ್ತು ಪಾಕಿಸ್ತಾನದಿಂದ ಆಯುಧ ಖರೀದಿಸುವ ಕುರಿತು ಮಾತುಕತೆ ನಡೆಸಿರುವುದು ಆತನ ಮೊಬೈಲ್ ಫೋನ್ ಚಾಟ್‌ನಿಂದ ಬೆಳಕಿಗೆ ಬಂದಿದೆ ಎಂದು ಗೆಹ್ಲೋಟ್ ಹೇಳಿದ್ದಾರೆ. ಆತನ ಬಂಧನದ ಬಳಿಕ ಆತನ ಮೊಬೈಲ್ ಫೋನ್‌ಗಳಲ್ಲಿ ಅನೇಕ ಆಕ್ಷೇಪಾರ್ಹ ವಿಷಯಗಳು ಇರುವುದು ಪತ್ತೆಯಾಗಿದೆ. ಇದರಲ್ಲಿ ಉಪದೇಶ್ ರಾಣಾ ಅವರ ಹತ್ಯೆಗೆ 1 ಕೋಟಿ ರೂ ಮೊತ್ತದ ಆಫರ್ ನೀಡುವುದು ಸಹ ಸೇರಿದೆ. ಇದಕ್ಕಾಗಿ ಆತ ಪಾಕಿಸ್ತಾನ ಮತ್ತು ನೇಪಾಳದ ವ್ಯಕ್ತಿಗಳು/ ಫೋನ್ ಸಂಖ್ಯೆಗಳ ಜತೆ ನಿರಂತರವಾಗಿ ಸಂಪರ್ಕದಲ್ಲಿದ್ದ ಎಂದು ತಿಳಿಸಿದ್ದಾರೆ.**

### ಕಮಲೇಶ್ ತಿವಾರಿ ರೀತಿ ರಾಣಾ ಕೊಲೆ

**ಸುಮಾರು ಒಂದೂವರೆ ವರ್ಷದ ಹಿಂದೆ ಪಾಕಿಸ್ತಾನ ಮತ್ತು ನೇಪಾಳ ಮೊಬೈಲ್ ಸಂಖ್ಯೆಯುಳ್ಳ ಇಬ್ಬರು ವ್ಯಕ್ತಿಗಳು ಆರೋಪಿಯನ್ನು ಸಾಮಾಜಿಕ ಜಾಲತಾಣದಲ್ಲಿ ಸಂಪರ್ಕಿಸಿದ್ದರು. ಭಾರತದಲ್ಲಿನ ಹಿಂದೂ ಸಂಘಟನೆಗಳು ಅವಮಾನಿಸಿದ್ದು, ಅವರನ್ನು ಮುಗಿಸಿ ಹಾಕಿಬಿಡಬೇಕು ಎಂದು ಆರೋಪಿಯನ್ನು ಪ್ರಚೋದಿಸಿದ್ದರು.**

---

# ಗುಜರಾತ್‌ನಲ್ಲಿ ಒಬ್ಬ ಮುಸ್ಲಿಂ ವ್ಯಕ್ತಿಗೂ ಟಿಕೆಟ್ ನೀಡದ ಕಾಂಗ್ರೆಸ್

**ಅಹಮದಾಬಾದ್:** ಗುಜರಾತ್‌ನಲ್ಲಿ 35 ಮುಸ್ಲಿಂ ಅಭ್ಯರ್ಥಿಗಳು ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ ಆದರೆ ಕಾಂಗ್ರೆಸ್ ಈ ಬಾರಿ ತನ್ನ ಸಂಪ್ರದಾಯವನ್ನು ಮುರಿದು ರಾಜ್ಯದಲ್ಲಿ ಒಬ್ಬ ಮುಸ್ಲಿಂ ಸಮುದಾಯದ ವ್ಯಕ್ತಿಯನ್ನು ಕಣಕ್ಕಿಳಿಸದಿರುವುದು ವಿಶೇಷವಾಗಿದೆ.

ಸಾಂಪ್ರದಾಯಿಕವಾಗಿ ಮುಸ್ಲಿಂ ಅಭ್ಯರ್ಥಿಯನ್ನು ಕಣಕ್ಕಿಳಿಸುತ್ತಿದ್ದ ಭರೂಚ್ ಲೋಕಸಭಾ ಕ್ಷೇತ್ರವು ಈ ಬಾರಿ ಆಮ್ ಆದಿ ಪಕ್ಷ (ಎಎಪಿ) ಪಾಲಾಗಿದೆ ಎಂದು ಕಾಂಗ್ರೆಸ್ ವಾದಿಸಿದೆ.

ರಾಷ್ಟ್ರೀಯ ಪಕ್ಷಗಳ ಪೈಕಿ ಬಹುಜನ ಸಮಾಜ ಪಕ್ಷ (ಬಿಎಸ್‌ಪಿ) ಮಾತ್ರ ಮೇ 7 ರಂದು ರಾಜ್ಯದಲ್ಲಿ ನಡೆಯಲಿರುವ ಚುನಾವಣೆಗೆ ಗಾಂಧಿನಗರದಿಂದ ಮುಸ್ಲಿಂ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ.2019 ರ ಲೋಕಸಭೆ ಚುನಾವಣೆಯಲ್ಲಿ ಪಂಚಮಹಲ್‌ನಿಂದ ಬಿಎಸ್‌ಪಿ ಮುಸ್ಲಿಂ ಅಭ್ಯರ್ಥಿಯನ್ನು ಕಣಕ್ಕಿಳಿಸಿತ್ತು.

ಚುನಾವಣಾ ಆಯೋಗದ ಅಂಕಿಅಂಶಗಳ ಪ್ರಕಾರ, 2019 ರಲ್ಲಿ ಸಮುದಾಯದಿಂದ 43 ನಾಮನಿರ್ದೇಶಿತರಿಗೆ ಹೋಲಿಸಿದರೆ ಈ ಬಾರಿ, ಗುಜರಾತ್‌ನ 26 ಸ್ಥಾನಗಳ ಪೈಕಿ 25 ರಲ್ಲಿ ನಡೆಯಲಿರುವ ಲೋಕಸಭೆ ಚುನಾವಣೆಗೆ 35 ಮುಸ್ಲಿಂ ಅಭ್ಯರ್ಥಿಗಳು ಕಣದಲ್ಲಿದ್ದಾರೆ.



ಸಮುದಾಯದ ಬಹುತೇಕ ಅಭ್ಯರ್ಥಿಗಳು ಸ್ವತಂತ್ರವಾಗಿ ಸ್ಪರ್ಧಿಸುತ್ತಿದ್ದಾರೆ ಅಥವಾ ಕಡಿಮೆ ಹೆಸರಾದ ಪಕ್ಷಗಳಿಂದ ಕಣಕ್ಕಿಳಿದಿದ್ದಾರೆ. ಮುಸ್ಲಿಂ ಅಭ್ಯರ್ಥಿಗೆ ಬೇರೆ ಯಾವುದೇ ಸ್ಥಾನದಿಂದ ಸ್ಪರ್ಧಿಸಲು ಅವಕಾಶವಿಲ್ಲ. ಅಹಮದಾಬಾದ್ ಪಶ್ಚಿಮ ಮತ್ತು ಕಚ್ ಸಾಕಷ್ಟು ಮುಸ್ಲಿಂ ಜನಸಂಖ್ಯೆಯನ್ನು ಹೊಂದಿರುವ ಎರಡು ಸ್ಥಾನಗಳು ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಮೀಸಲಾಗಿದೆ ಎಂದು ಪಠಾಣ್ ಹೇಳಿದರು. ಭರೂಚ್ ಹೊರತುಪಡಿಸಿ, ಕಾಂಗ್ರೆಸ್ ಈ ಹಿಂದೆ ನವಸಾರಿ ಮತ್ತು ಅಹಮದಾಬಾದ್‌ನಿಂದ ಮುಸ್ಲಿಂ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ (ಅದನ್ನು ಅಹಮದಾಬಾದ್ ಪೂರ್ವ ಮತ್ತು ಪಶ್ಚಿಮ ಸ್ಥಾನಗಳಾಗಿ ವಿಂಗಡಿಸಲಾಗಿಲ್ಲ).

> **ರಾಜ್ಯದಲ್ಲಿ ಲೋಕಸಭೆ ಚುನಾವಣೆಯಲ್ಲಿ ಪಕ್ಷವು ಸಾಂಪ್ರದಾಯಿಕವಾಗಿ ಮುಸ್ಲಿಂ ಸಮುದಾಯದಿಂದ ಕನಿಷ್ಠ ಒಬ್ಬ ಅಭ್ಯರ್ಥಿಯನ್ನು, ವಿಶೇಷವಾಗಿ ಭರೂಚ್‌ನಿಂದ ಕಣಕ್ಕಿಳಿಸುತ್ತಿದೆ. ಈ ಬಾರಿ ಸ್ಥಾನ ಎಎಪಿಗೆ ಹೋಗಿದ್ದರಿಂದ ಅದು ಸಾಧ್ಯವಾಗಲಿಲ್ಲ ಎಂದಿದ್ದಾರೆ. ಗುಜರಾತ್‌ನ ಒಂದು ಸ್ಥಾನದಿಂದ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಕಾಂಗ್ರೆಸ್ ಮುಂದಾಗಿತ್ತು, ಆದರೆ ಸಮುದಾಯದ ಸದಸ್ಯರು ಗೆಲುವಿನ ಕಡಿಮೆ ಅವಕಾಶವನ್ನು ನೀಡಿ ನಿರಾಕರಿಸಿದರು -ವಜೀರಖಾನ್ ಪಠಾಣ್**

# ಟ್ರ್ಯಾಕ್ಟರ್ ಹರಿಸಿ ಪೊಲೀಸ್ ಪೇದೆಯನ್ನು ಕೊಂದ ಅಕ್ರಮ ಮರಳು ಮಾಫಿಯಾ

**ಭೂಪಾಲ್:** ಅಕ್ರಮ ಮರಳು ಸಾಗಾಣಿಕೆ ಮಾಫಿಯಾಗೆ ಪೊಲೀಸ್ ಪೇದೆಯೊಬ್ಬರು ಬಲಿಯಾಗಿರುವ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ. ಮಧ್ಯಪ್ರದೇಶದಲ್ಲಿ ಅಕ್ರಮವಾಗಿ ಮರಳು ಸಾಗಿಸುತ್ತಿದ್ದ ಟ್ರ್ಯಾಕ್ಟರ್ ಅನ್ನು ತಡೆಯಲು ಬಂದ ಪೊಲೀಸ್ ಪೇದೆ ಮೇಲೆ ಹರಿಸಿ ಕೊಲೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮರಳು ಮಾಫಿಯಾಗೆ ಬಲಿಯಾಗಿರುವ ವ್ಯಕ್ತಿಯನ್ನು ಶೆಹ್ಡೋಲ್‌ನ ಸಹಾಯಕ ಸಬ್ ಇನ್ಸ್‌ಪೆಕ್ಟರ್ ಮಹೇಂದ್ರ ಬಗ್ರಿ ಎಂದು ಗುರುತಿಸಲಾಗಿದೆ. ಬಗ್ರಿ ಅವರು ಇಬ್ಬರು ಕಾನ್‌ಸ್ಟೆಬಲ್‌ಗಳಾದ ಪ್ರಸಾದ್ ಕಾನೋಜಿ ಮತ್ತು ಸಂಜಯ್ ದುಬೆ ಅವರೊಂದಿಗೆ ಅಕ್ರಮ ಗಣಿಗಾರಿಕೆಯನ್ನು ಪರಿಶೀಲಿಸಲು ಸ್ಥಳಕ್ಕೆ ಹೋಗಿದ್ದರು. ಈ ಸಂದರ್ಭದಲ್ಲಿ ವೇಗವಾಗಿ ಬಂದ ಮರಳು ಸಾಗಿಸುತ್ತಿದ್ದ ಟ್ರ್ಯಾಕ್ಟರ್ ಅನ್ನು ಬಗ್ರಿ ಮೇಲೆ ಹರಿಸಲಾಯಿತು ಹೀಗಾಗಿ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ. ಅವರ ಜತೆಯಲ್ಲಿದ್ದ ಕಾನೋಜಿ ಮತ್ತು ದುಬೆ ಅವರು ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.



ಚಾಲಕ ಮತ್ತು ಟ್ರಕ್ ಮಾಲೀಕನ ಮಗನನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ, ಟ್ರ್ಯಾಕ್ಟರ್ ಮಾಲೀಕರು ಪರಾರಿಯಾಗಿದ್ದಾರೆ. ಟ್ರಾಕ್ಟರ್ ಚಾಲಕನನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ. ವಿಚಾರಣೆಯಲ್ಲಿ ಟ್ರ್ಯಾಕ್ಟರ್ ಮಾಲೀಕನ ಮಗನೂ ಇದರಲ್ಲಿ ಶಾಮೀಲಾಗಿರುವುದು ಬೆಳಕಿಗೆ ಬಂದಿದೆ. ಆತನನ್ನೂ ಬಂಧಿಸಲಾಗಿದೆ ಎಂದು ಹೆಚ್ಚುವರಿ ಮಹಾನಿರ್ದೇಶಕ ಡಿಸಿ ಸಾಗರ್ ತಿಳಿಸಿದ್ದಾರೆ. ಟ್ರಕ್‌ನ ಮಾಲೀಕ ಸುರೇಂದ್ರ ಸಿಂಗ್‌ಗೆ ಮಾಹಿತಿ ನೀಡುವವರಿಗೆ 30,000 ಬಹುಮಾನ ನೀಡುವುದಾಗಿ ಪೊಲೀಸರು ಘೋಷಿಸಿದ್ದಾರೆ.


---

# ಬಂಧಿತರಾದ ನಿಜ್ಜರ್ ಹತ್ಯೆ ಆರೋಪಿಗಳ ಬಗ್ಗೆ ಮಾಹಿತಿಗಾಗಿ ಕಾಯುತ್ತಿದ್ದೇವೆ: ಜೈಶಂಕರ್

**ಭುವನೇಶ್ವರ:** ಕಳೆದ ವರ್ಷ ಖಲಿಸ್ತಾನಿ ಭಯೋತ್ಪಾದಕನನ್ನು ಹತ್ಯೆಗೈದ ಆರೋಪದಲ್ಲಿ ಬಂಧಿಸಿರುವ ಮೂವರು ಭಾರತೀಯರ ಮಾಹಿತಿಯನ್ನು ಕೆನಡಾದ ಪೊಲೀಸರು ಹಂಚಿಕೊಳ್ಳುವುದನ್ನು ಭಾರತ ಕಾಯುತ್ತಿದೆ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ.

ಹರ್ದೀಪ್ ಸಿಂಗ್ ನಿಜ್ಜಾರ್ ಹತ್ಯೆಗೆ ಸಂಬಂಧಿಸಿದಂತೆ ಕೆನಡಾದ ಪೊಲೀಸರು ಮೂವರ ಮೇಲೆ ಆರೋಪ ಹೊರಿಸಿದ್ದಾರೆ ಮತ್ತು ಶಂಕಿತರು ಭಾರತ ಸರ್ಕಾರದೊಂದಿಗೆ ಸಂಪರ್ಕ ಹೊಂದಿದ್ದಾರೆಯೇ ಎಂದು ತನಿಖೆ ನಡೆಸುತ್ತಿದ್ದಾರೆ ಎಂದು ಹೇಳಿದರು.

ಜೈಶಂಕರ್ ಅವರು ಬಂಧನದ ಸುದ್ದಿಯನ್ನು ನೋಡಿರುವುದಾಗಿ ಹೇಳಿದರು ಮತ್ತು ಶಂಕಿತರು ಸ್ಪಷ್ಟವಾಗಿ ಕೆಲವು ರೀತಿಯ ಗ್ಯಾಂಗ್ ಹಿನ್ನೆಲೆಯ ಭಾರತೀಯರು. ಈ ಬಗ್ಗೆ ಕೆನಡಾ ಪೊಲೀಸರು ನಮಗೆ ತಿಳಿಸಲು ನಾವು ಕಾಯಬೇಕಾಗಿದೆ ಎಂದು ಹೇಳಿದರು. ಆದರೆ, ನಾನು ಹೇಳಿದಂತೆ, ನಾವು ಅವರಿಗೆ ಹೇಳುತ್ತಿರುವ ನಮ ಕಾಳಜಿಯೆಂದರೆ, ಅವರು ಭಾರತದಿಂದ ನಿರ್ದಿಷ್ಟವಾಗಿ ಪಂಜಾಬ್‌ನಿಂದ ಕೆನಡಾದಲ್ಲಿ ಕಾರ್ಯನಿರ್ವಹಿಸಲು ಸಂಘಟಿತ ಅಪರಾಧಗಳನ್ನು ಅನುಮತಿಸಿದ್ದಾರೆ ಎಂಬುದು ನಿಮಗೆ ತಿಳಿದಿದೆ ಎಂದು ಜೈಶಂಕರ್ ಹೇಳಿದರು.



**ಕೆನಡಾದ ಆಂತರಿಕ ಸಮಸ್ಯೆ**


ಬಂಧಿತ ಮೂವರು ಭಾರತೀಯರ ಬಗ್ಗೆ ಕೆನಡಾದ ಅಧಿಕಾರಿಗಳಿಂದ ನಿಯಮಿತವಾಗಿ ನವೀಕರಣಗಳನ್ನು ಪಡೆಯುವ ಭರವಸೆ ಇದೆ ಎಂದು ಕೆನಡಾದಲ್ಲಿರುವ ಭಾರತದ ಹೈಕಮಿಷನರ್ ಸಂಜಯ್ ವರ್ಮಾ ಹೇಳಿದ್ದಾರೆ.

ಸಂಬಂಧಿತ ಕೆನಡಾದ ಕಾನೂನು ಜಾರಿ ಸಂಸ್ಥೆಗಳು ನಡೆಸಿದ ತನಿಖೆಗಳ ಪರಿಣಾಮವಾಗಿ ಬಂಧನಗಳನ್ನು ಮಾಡಲಾಗಿದೆ ಎಂದು ನಾನು ಅರ್ಥಮಾಡಿಕೊಂಡಿದ್ದೇನೆ. ಈ ಸಮಸ್ಯೆಯು ಕೆನಡಾದ ಆಂತರಿಕವಾಗಿದೆ ಮತ್ತು ಆದ್ದರಿಂದ ಈ ವಿಷಯದಲ್ಲಿ ನಾವು ಯಾವುದೇ ಪ್ರತಿಕ್ರಿಯೆಗಳನ್ನು ನೀಡುವುದಿಲ್ಲ ಎಂದು ವರ್ಮಾ ಹೇಳಿದ್ದಾರೆ.

# ಶಿಕ್ಷಕರಿಂದ ಬೆತ್ತದ ಏಟು ತಿಂದಿದ್ದನ್ನು ನೆನಪಿಸಿಕೊಂಡ ಸಿಜೆಐ ಚಂದ್ರಚೂಡ್

**ನವದೆಹಲಿ:** ಶಾಲೆಯಲ್ಲಿ ಸಣ್ಣ ತಪ್ಪಿಗೆ ಶಿಕ್ಷಕರಿಂದ ಬೆತ್ತದ ರುಚಿ ನೋಡಿದ್ದನ್ನು ಭಾರತದ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಸ್ಮರಿಸಿಕೊಂಡಿದ್ದಾರೆ. ಕಠ್ಮಂಡುವಿನಲ್ಲಿ ನೇಪಾಳದ ಸುಪ್ರೀಂ ಕೋರ್ಟ್ ಆಯೋಜಿಸಿದ್ದ ಬಾಲಾಪರಾಧಿ ನ್ಯಾಯ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮಾತನಾಡುವಾಗ ಭಾರತದ ಮುಖ್ಯ ನ್ಯಾಯಮೂರ್ತಿಗಳು ತಾವು ಮಾಡಿದ ಸಣ್ಣ ತಪ್ಪಿಗೆ ಶಾಲೆಯಲ್ಲಿ ಬೆತ್ತದಿಂದ ಹಲ್ಲೆ ನಡೆಸಿದ್ದನ್ನು ಸ್ಮರಿಸಿಕೊಂಡು ಮಕ್ಕಳನ್ನು ನೀವು ಹೇಗೆ ನಡೆಸಿಕೊಳ್ಳುತ್ತೀರಿ ಎಂಬುದು ಅವರ ಜೀವನದುದ್ದಕ್ಕೂ ಅವರ ಮನಸ್ಸಿನ ಮೇಲೆ ಆಳವಾದ ಪ್ರಭಾವ ಬೀರುತ್ತದೆ ಎಂದಿದ್ದಾರೆ.

ಶಾಲೆಯಲ್ಲಿ ಆ ದಿನವನ್ನು ನಾನು ಎಂದಿಗೂ ಮರೆಯುವುದಿಲ್ಲ. ನನ್ನ ಕೈಗಳನ್ನು ಬೆತ್ತದಿಂದ ಹೊಡೆದಾಗ ನಾನು ಬಾಲಾಪರಾಧಿಯಾಗಿರಲಿಲ್ಲ. ನಾನು ಕ್ರಾಫ್ಟ್ ಕಲಿಯುತ್ತೆ ಎಂದು ಅವರು ಹೇಳಿಕೊಂಡಿದ್ದಾರೆ. ಆಗ 5 ನೇ ತರಗತಿಯಲ್ಲಿದ್ದ ಮುಖ್ಯ ನ್ಯಾಯಾಧೀಶರು, ಜನರು ಮಕ್ಕಳನ್ನು ನಡೆಸಿಕೊಳ್ಳುವ ರೀತಿ ಅವರ ಮನಸ್ಸಿನ ಮೇಲೆ ಶಾಶ್ವತವಾದ ಪ್ರಭಾವವನ್ನು ಬೀರುತ್ತದೆ ಎಂದು ಹೇಳಿದರು. ಶಿಕ್ಷಕರು ಹೊಡೆದ ದೈಹಿಕ ಗಾಯವು ವಾಸಿಯಾಗಿದೆ, ಆದರೆ ಮನಸ್ಸು ಮತ್ತು ಆತದ ಮೇಲೆ ಶಾಶ್ವತವಾದ ಮುದ್ರೆಯನ್ನು ಬಿಟ್ಟಿದೆ. ನಾನು ನನ್ನ ಕೆಲಸವನ್ನು ಮಾಡುವಾಗ ಅದು ಇನ್ನೂ ನನ್ನೊಂದಿಗೆ ಇರುತ್ತದೆ. ಮಕ್ಕಳ ಮೇಲೆ ಇಂತಹ ವಿಡಂಬನೆಯ ಪ್ರಭಾವವು ತುಂಬಾ ಆಳವಾಗಿದೆ ಎಂದು ಸಿಜೆಐ ಹೇಳಿದರು.



ಬಾಲಾಪರಾಧಿಗಳ ನ್ಯಾಯವನ್ನು ಚರ್ಚಿಸುವಾಗ, ಕಾನೂನು ವಿವಾದಗಳಲ್ಲಿ ಸಿಲುಕಿರುವ ಮಕ್ಕಳ ದುರ್ಬಲತೆಗಳು ಮತ್ತು ಅನನ್ಯ ಅಗತ್ಯಗಳನ್ನು ನಾವು ಗುರುತಿಸಬೇಕು ಮತ್ತು ನಮ ನ್ಯಾಯ ವ್ಯವಸ್ಥೆಗಳು ಸಹಾನುಭೂತಿ, ಪುನರ್ವಸತಿ ಮತ್ತು ಸಮಾಜದಲ್ಲಿ ಮರುಸೇರ್ಪಡೆಗೊಳ್ಳುವ ಅವಕಾಶಗಳೊಂದಿಗೆ ಪ್ರತಿಕ್ರಿಯಿಸುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸಿಜೆಐ ಚಂದ್ರಚೂಡ್ ಹೇಳಿದರು.

ಹದಿಹರೆಯದ ಬಹುಮುಖಿ ಸ್ವರೂಪ ಮತ್ತು ಸಮಾಜದ ವಿವಿಧ ಆಯಾಮಗಳೊಂದಿಗೆ ಅದರ ಪರಸ್ಪರ ಸಂಬಂಧವನ್ನು ಅರ್ಥಮಾಡಿಕೊಳ್ಳುವುದು ಮುಖ್ಯವಾಗಿದೆ ಎಂದರು. ಸೆಮಿನಾರ್‌ನಲ್ಲಿ ಸಿಜೆಐ ಅಪ್ರಾಪ್ತ ಅತ್ಯಾಚಾರ ಸಂತ್ರಸ್ತೆಯ ಗರ್ಭಪಾತಕ್ಕೆ ಒತ್ತಾಯಿಸಿ ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಲಾದ ಅರ್ಜಿಯನ್ನು ಸಹ ಪ್ರಸ್ತಾಪಿಸಿದರು.

ಅನೇಕ ಮಕ್ಕಳು ಗ್ಯಾಂಗ್‌ಗಳಿಂದ ಅಪರಾಧ ಚಟುವಟಿಕೆಗಳಿಗೆ ತಳ್ಳಲ್ಪಟ್ಟಿರುವುದರಿಂದ ಸಾಮಾಜಿಕ ವಾಸ್ತವತೆಗಳನ್ನು ಸಹ ಪರಿಗಣಿಸಬೇಕು ಎಂದು ಸಿಜೆಐ ಹೇಳಿದರು, ವಿಕಲಾಂಗ ಹದಿಹರೆಯದವರು ಸಹ ದುರ್ಬಲರಾಗಿದ್ದಾರೆ ಭಾರತದಲ್ಲಿ ಕ್ರಿಮಿನಲ್ ಸಿಂಡಿಕೇಟ್‌ಗಳಿಂದ ದೃಷ್ಟಿಹೀನ ಮಕ್ಕಳನ್ನು ಭಿಕ್ಷಾಟನೆಗೆ ಹೇಗೆ ಬಳಸಿಕೊಳ್ಳಲಾಗುತ್ತದೆ ಎಂಬುದನ್ನು ನೋಡಬಹುದು ಎಂದಿದ್ದಾರೆ.

> **ಭಾರತದ ಬಾಲಾಪರಾಧಿ ನ್ಯಾಯ ವ್ಯವಸ್ಥೆ ಎದುರಿಸುತ್ತಿರುವ ಸವಾಲುಗಳ ಬಗ್ಗೆಯೂ ಅವರು ಮಾತನಾಡಿದರು. ಪ್ರಮುಖ ಸವಾಲು ಎಂದರೆ ಅಸಮರ್ಪಕ ಮೂಲಸೌಕರ್ಯ ಮತ್ತು ಸಂಪನೂಲಗಳು, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ, ಇದು ಕಿಕ್ಕಿರಿದ ಮತ್ತು ಗುಣಮಟ್ಟವಿಲ್ಲದ ಬಾಲಾಪರಾಧಿ ಬಂಧನ ಕೇಂದ್ರಗಳಿಗೆ ಕಾರಣವಾಗಿದೆ, ಇದರಿಂದಾಗಿ ಬಾಲಾಪರಾಧಿಗಳಿಗೆ ಸರಿಯಾದ ಬೆಂಬಲವನ್ನು ಒದಗಿಸುವುದು ಮತ್ತು ಪುನರ್ವಸತಿ ಒದಗಿಸುವ ಪ್ರಯತ್ನಗಳಿಗೆ ಅಡ್ಡಿಯಾಗಬಹುದು -ಸಿಜೆಐ ಚಂದ್ರಚೂಡ್**

---

# ಪಾಕಿಸ್ತಾನಕ್ಕೂ ಕಾಲಿಟ್ಟ ಯೋಗ: ತರಗತಿ ಆರಂಭ

**ಇಸ್ಲಾಮಾಬಾದ್:** ಭಾರತ ಮೂಲದ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಅಭ್ಯಾಸ 'ಯೋಗ' ನೆರೆಯ ಪಾಕಿಸ್ತಾನಕ್ಕೂ ಅಧಿಕೃತವಾಗಿ ಕಾಲಿಟ್ಟಿದ್ದು, ಇಸ್ಲಾಮಾಬಾದ್ ಮಹಾನಗರ ಪಾಲಿಕೆಯಿಂದ ತರಗತಿ ಆರಂಭಿಸಲಾಗಿದೆ.

ಪಾಕಿಸ್ತಾನ ರಾಜಧಾನಿ ಇಸ್ಲಾಮಾಬಾದ್ ಉಸ್ತುವಾರಿ ಹೊಣೆ ಹೊತ್ತಿರುವ ರಾಜಧಾನಿ ಅಭಿವೃದ್ಧಿ ಮಂಡಳಿಯು ತನ್ನ ಅಧಿಕೃತ ಫೇಸ್‌ಬುಕ್ ಪೇಜ್‌ನಲ್ಲಿ, 'ಇಸ್ಲಾಮಾಬಾದ್ ಮಹಾನಗರ ಪಾಲಿಕೆಯು ಎಫ್9 ಪಾರ್ಕ್‌ನಲ್ಲಿ ಉಚಿತ ಯೋಗ ತರಗತಿ ಆರಂಭಿಸಿದ್ದು, ಹಲವರು ಈಗಾಗಲೇ ತರಗತಿಗೆ ಸೇರ್ಪಡೆಯಾಗಿದ್ದಾರೆ ಎಂದು ಸಿಡಿಎ ತಿಳಿಸಿದೆ. ಜೊತೆಗೆ ಜನರು ಯೋಗಾಭ್ಯಾಸ ಮಾಡುತ್ತಿರುವ ಚಿತ್ರವನ್ನು ಹಂಚಿಕೊಂಡಿದೆ.

**ಪಾಕಿಸ್ತಾನಕ್ಕೂ ಕಾಲಿಟ್ಟ ಯೋಗ:** ಅಂದಹಾಗೆ ವಿಶ್ವಸಂಸ್ಥೆಯು 2014 ಡಿಸೆಂಬರ್ 11ರಂದು ಭಾರತ ಮೂಲದ ಯೋಗಕ್ಕೆ ಜಾಗತಿಕ ಮನ್ನಣೆ ನೀಡಿ ಜೂನ್ 21 ಅನ್ನು 'ಅಂತಾರಾಷ್ಟ್ರೀಯ ಯೋಗ ದಿನ'ವೆಂದು ಘೋಷಿಸಿತ್ತು. ಈ ಕುರಿತ ಮಹತ್ವದ ಪ್ರಸ್ತಾವಕ್ಕೆ 175 ರಾಷ್ಟ್ರಗಳು ಅಂದು ಸಹಿ ಹಾಕಿದ್ದವು. ಪಾಕಿಸ್ತಾನದಲ್ಲಿ ಯೋಗವು ಔಪಚಾರಿಕವಾಗಿ ಮಾತ್ರ ಬಳಕೆಯಲ್ಲಿತ್ತು. ಸದ್ಯ ಯೋಗಾಭ್ಯಾಸಕ್ಕೆ ಅಧಿಕೃತ ಮಾನ್ಯತೆ ಸಿಕ್ಕಂತಾಗಿದೆ. ಉಚಿತ ಯೋಗ ತರಬೇತಿ ನೀಡುವ ಕ್ರಮವನ್ನು ಹಲವು ಶ್ಲಾಘಿಸಿದ್ದಾರೆ.



# ಹಾಲಿಗೆ ಆಲ್ಕೋಹಾಲ್ ಬೆರೆಸಿದ ಅಜ್ಜಿ: ಕೋಮಾಗೆ 4 ತಿಂಗಳ ಮೊಮ್ಮಗು

**ಇಟಲಿ:** ಇಟಲಿಯಲ್ಲಿ ಆಘಾತಕಾರಿ ಘಟನೆಯೊಂದು ಬೆಳಕಿಗೆ ಬಂದಿದೆ. ವೃದ್ಧೆ ಮಾಡಿದ ಒಂದು ತಪ್ಪು ನಾಲ್ಕು ತಿಂಗಳ ಮಗುವಿನ ಜೀವಕ್ಕೆ ಕಂಟಕವಾಗಿದೆ. ಮೊಮ್ಮಗು ಕುಡಿಯುವ ಹಾಲಿಗೆ ಅಜ್ಜಿ ತಪ್ಪಾಗಿ ಆಲ್ಕೋಹಾಲ್ ಬೆರೆಸಿದ್ದು, ಅರ್ಧ ಹಾಲು ಕುಡಿದ ಮಗು ಅಳಲು ಆರಂಭಿಸಿದೆ. ಮಗುವಿನ ಆರೋಗ್ಯದಲ್ಲಿ ಏರುಪೇರಾಗಿದ್ದು, ಅನುಮಾನಗೊಂಡು ಉಳಿದ ಹಾಲಿನ ವಾಸನೆ ನೋಡಿದಾಗ ವೃದ್ಧೆಗೆ ಹಾಲಿನಲ್ಲಿ ಆಲ್ಕೋಹಾಲ್ ಮಿಶ್ರಣವಾಗಿರುವುದು ತಿಳಿದುಬಂದಿದೆ. ಇದರಿಂದ ಆಘಾತಕೊಳಗಾದ ವೃದ್ಧೆ ಕೂಡಲೇ ಮಗುವನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಘಟನೆಯಿಂದ ಕೋಮಾ ಸ್ಥಿತಿಗೆ ತಲುಪಿದ್ದ ಮಗು ನಂತರ ಚೇತರಿಸಿಕೊಂಡಿದ್ದು, ಸದ್ಯ ಮಗು ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದೆ. ಮಗುವಿಗೆ ಯಾವುದೇ ಅಪಾಯವಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ. ಮಗುವಿನ ಸ್ಥಿತಿಯನ್ನು ಸಂಪೂರ್ಣವಾಗಿ ಪರಿಶೀಲಿಸಿದ ನಂತರ ಮಗುವಿನ ಅಜ್ಜಿ ವಿರುದ್ಧ ಪ್ರಕರಣ ದಾಖಲಿಸುವ ಬಗ್ಗೆ ನಿರ್ಧರಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.



ಇದೇ ವೇಳೆ ಕಳೆದ ವರ್ಷ ಬ್ರಿಟನ್‌ನಲ್ಲಿ ನಡೆದ ಮತ್ತೊಂದು ಘಟನೆಯಲ್ಲಿ ಇಬ್ಬರು ಯುವತಿಯರು ತಮಾಷೆಯಾಗಿ 18 ತಿಂಗಳ ಮಗುವಿನ ಬಾಯಿಗೆ ಮದ್ಯದ ಬಾಟಲಿ ಇಟ್ಟು ವಿಡಿಯೋ ರೆಕಾರ್ಡ್ ಮಾಡಿದ್ದರು. ವಿಡಿಯೋ ವೈರಲ್ ಆಗುತ್ತಿದ್ದಂತೆ ವಿಷಯ ಕೋರ್ಟ್ ಮೆಟ್ಟಿಲೇರಿತ್ತು. ಆದರೆ, ಇಬ್ಬರೂ ತಮಾಷೆಗಾಗಿ ಮಾಡಿದ್ದನ್ನು ಒಪ್ಪಿಕೊಂಡಿದ್ದರಿಂದ ಮತ್ತು ಮಗು ಆರೋಗ್ಯವಾಗಿದ್ದರಿಂದ ನ್ಯಾಯಾಲಯ ಜೈಲು ಶಿಕ್ಷೆಗೆ ಬದಲಾಗಿ ಸ್ವಲ್ಪ ದಂಡ ವಿಧಿಸಿತ್ತು.

---

# ಸೀರೆಯುಟ್ಟ ನಾರಿಯರಿಂದ ಕಂಗೊಳಿಸಿದ ನ್ಯೂಯಾರ್ಕ್

## ಭಾರತೀಯ-ಅಮೆರಿಕನ್ ಸಮುದಾಯದ ನೂರಾರು ಮಹಿಳೆಯರಿಂದ ಸೀರೆಯುಟ್ಟು ಸಾಂಸ್ಕೃತಿಕ ವೈವಿಧ್ಯತೆ ಪ್ರದರ್ಶನ

**ನ್ಯೂಯಾರ್ಕ್:** ಸೀರೆ ಸೀರೆ ಎಲ್ಲೆಲ್ಲೂ ಹಾರೈತೆ ಎಂಬ ಹಾಡಿನಂತೆ ಇಲ್ಲಿನ ಐಕಾನಿಕ್ ಟೈಮ್ಸ್ ಸ್ಕ್ವೇರ್‌ನಲ್ಲಿ ಸೀರೆಯುಟ್ಟ ನೂರಾರು ನಾರಿಯರು ನೋಡುಗರ ಗಮನ ಸೆಳೆದರು. ಟೈಮ್ಸ್ ಸ್ಕ್ವೇರ್‌ನ ಹದಯಭಾಗದಲ್ಲಿ ಏರ್ಪಡಿಸಲಾಗಿದ್ದ ಸ್ಯಾರಿ ಗೋಸ್ ಗ್ಲೋಬಲ್ ಕಾರ್ಯಕ್ರಮದಲ್ಲಿ ಭಾರತೀಯ-ಅಮೆರಿಕನ್ ಸಮುದಾಯ ಮತ್ತು ಇತರ ರಾಷ್ಟ್ರಗಳ ನೂರಾರು ಮಹಿಳೆಯರು ಸೀರೆಯುಟ್ಟು ಕಾಲಾತೀತ ಸೊಬಗು, ಪರಂಪರೆ ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ಪ್ರದರ್ಶಿಸಿದರು.

ಉಮಾ ಅವರ ಸಹಭಾಗಿತ್ವದಲ್ಲಿ ಬ್ರಿಟಿಷ್ ವುಮೆನ್ ಇನ್ ಸೀರೆಗಳು ಆಯೋಜಿಸಿದ್ದ ಈ ಕಾರ್ಯಕ್ರಮವು ಸಂಗೀತ, ನತ್ಯ ಮತ್ತು ರೋಮಾಂಚಕ ಸೀರೆ ವಾಕಥಾನ್ ಮೂಲಕ ಸೀರೆಯ ಕಾಲಾತೀತ ಸೊಬಗನ್ನು ಪ್ರದರ್ಶಿಸಿತು. ಜಾಗತಿಕ ಕಾರ್ಯಕ್ರಮಗಳ ಮೂಲಕ ಭಾರತದಲ್ಲಿ ಕೈಮಗ್ಗ ಕುಶಲಕರ್ಮಿಗಳನ್ನು ಬೆಂಬಲಿಸುವ ಸಂದರ್ಭದಲ್ಲಿ ಸೀರೆಯ ಬಗ್ಗೆ ಜಾಗೃತಿ ಮೂಡಿಸಲು ಬ್ರಿಟಿಷ್ ವುಮೆನ್ ಇನ್ ಸೀರೆಗಳು ಸಮರ್ಪಿಸಲಾಗಿದೆ.



**ಸ್ಯಾರಿ ಗೋಸ್ ಗ್ಲೋಬಲ್**

ಒಂದು ಸಂಸ್ಥೆಯಾಗಿ, ನ್ಯೂಯಾರ್ಕ್ ನಗರದಲ್ಲಿ ಪ್ರಧಾನ ಕಛೇರಿಯನ್ನು ಹೊಂದಿರುವ ಜಾಗತಿಕ ಉಪಸ್ಥಿತಿಯೊಂದಿಗೆ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಪನೂಲಗಳ ಮೂಲಕ ಹಿಂದುಳಿದ ಹುಡುಗಿಯರು, ಯುವಕರು ಮತ್ತು ಮಹಿಳೆಯರನ್ನು ಸಬಲೀಕರಣಗೊಳಿಸುವಲ್ಲಿ ಉಮಾ ಗಮನಹರಿಸಿದ್ದಾರೆ.

ಲಂಡನ್‌ನ ಟ್ರಾಫಲ್ಗರ್ ಸ್ಕ್ವೇರ್‌ನಲ್ಲಿ ನಡೆದ ರಾಯಲ್ ಆಸ್ಕಾಟ್ ಲೇಡೀಸ್ ಡೇ ಮತ್ತು ಐತಿಹಾಸಿಕ ಸ್ಯಾರಿ ವಾಕಥಾನ್‌ನಂತಹ ಜಾಗತಿಕ ಕಾರ್ಯಕ್ರಮಗಳ ಯಶಸ್ಸಿನ ಮೇಲೆ ನಿರ್ಮಿಸುವ ಸಾರಿ ಗೋಸ್ ಗ್ಲೋಬಲ್ ಕಾರ್ಯಕ್ರಮವು ಸಾಂಸ್ಕೃತಿಕ ವೈವಿಧ್ಯತೆಯ ಆಚರಣೆ ಮಾತ್ರವಲ್ಲ. ಸಾಂಪ್ರದಾಯಿಕ ಕರಕುಶಲತೆಯನ್ನು ಸಂರಕ್ಷಿಸುವ ಗ್ರಾಮೀಣ ಭಾರತದ ಕುಶಲಕರ್ಮಿಗಳನ್ನು ಬೆಂಬಲಿಸುವ ವೇದಿಕೆಯಾಗಿ ಪರಿಣಮಿಸಿತ್ತು.

ಉಮಾ ಗ್ಲೋಬಲ್‌ನ ಅಧ್ಯಕ್ಷೆ ಡಾ. ರೀಟಾ ಕಾಕತಿ-ಶಾ ಮತ್ತು ಸೀರೆಗಳಲ್ಲಿ ಬ್ರಿಟಿಷ್ ಮಹಿಳೆಯರ ಅಧ್ಯಕ್ಷೆ ಡಾ. ದೀಪ್ತಿ ಜೈನ್ ಸೀರೆಯ ಮಹತ್ವವನ್ನು ಏಕತೆ ಮತ್ತು ವಿಶ್ವಾದ್ಯಂತ ಮಹಿಳೆಯರ ಸಬಲೀಕರಣದ ಸಂಕೇತವಾಗಿ ಎತ್ತಿ ತೋರಿಸಿದರು. ವತ್ತಿಯಲ್ಲಿ ಜೆರಿಯಾಟ್ರಿಶಿಯನ್ ಆಗಿರುವ ಜೈನ್ ಅವರು ಸೀರೆಯ ಮೇಲಿನ ತಮ ಒಲವು ಮತ್ತು ಜಾಗತಿಕವಾಗಿ ಈ ಉಡುಪಿನ ಬಗ್ಗೆ ಜಾಗತಿ ಮೂಡಿಸುವ ಬದ್ಧತೆಯನ್ನು ಹಂಚಿಕೊಂಡರು.

ಕಾಕತಿ-ಶಾಹ್ ಒಬ್ಬ ವೈದ್ಯ, ಉದ್ಯಮಿ ಮತ್ತು ಲೋಕೋಪಕಾರಿಯಾಗಿ ಮಾರ್ಪಟ್ಟಿದ್ದಾರೆ, ನ್ಯೂಯಾರ್ಕ್ ನಗರ ಮತ್ತು ಅದರಾಚೆಗೆ ಹಿಂದುಳಿದ ಹುಡುಗಿಯರು, ಯುವಕರು ಮತ್ತು ಮಹಿಳೆಯರನ್ನು ಸಬಲೀಕರಣಗೊಳಿಸಲು ಉಮಾ ಅವರ ಸಮರ್ಪಣೆಯನ್ನು ಒತ್ತಿಹೇಳಿದರು.

ಈ ಸಂದರ್ಭದಲ್ಲಿ ನ್ಯೂಯಾರ್ಕ್ ನಗರದ ಅಂತರಾಷ್ಟ್ರೀಯ ವ್ಯವಹಾರಗಳ ಡೆಪ್ಯುಟಿ ಕಮಿಷನರ್ ದಿಲೀಪ್ ಚೌಹಾಣ್ ಅವರು ಕಾಕತಿ-ಶಾ ಮತ್ತು ಜೈನ್ ಅವರನ್ನು ನ್ಯೂಯಾರ್ಕ್ ಸಿಟಿ ಮೇಯರ್ ಎರಿಕ್ ಆಡಮ್ಸ್ ಅವರ ಪರವಾಗಿ ಘೋಷಣೆಯೊಂದಿಗೆ ಗೌರವಿಸಿದರು.

### ಸಂಸ್ಕೃತಿ ಮತ್ತು ಪರಂಪರೆಯ ಕಥೆ

**ಇದರಲ್ಲಿ ಭಾರತೀಯ ಸಮುದಾಯದಿಂದ 500 ಕ್ಕೂ ಹೆಚ್ಚು ಮಹಿಳೆಯರು ಸೇರಿದಂತೆ ಬಾಂಗ್ಲಾದೇಶ, ನೇಪಾಳ, ಯುಕೆ, ಯುಎಸ್‌ಎ, ಯುಎಇ, ಉಗಾಂಡಾ, ಟ್ರಿನಿಡಾಡ್ ಮತ್ತು ಗಯಾನಾದ ಮಹಿಳೆಯರು ಸೀರೆಯುಟ್ಟು ಕಂಗೊಳಿಸುತ್ತಿದ್ದರು. ಖಾದಿ ಸೇರಿದಂತೆ ಸೊಗಸಾದ ಅಲಂಕಾರಗಳು, ಕಸೂತಿ, ಶೈಲಿಗಳು ಮತ್ತು ಬಟ್ಟೆಗಳನ್ನು ಹೊಂದಿರುವ ವರ್ಣರಂಜಿತ ಸೀರೆಗಳನ್ನು ಅಲಂಕರಿಸಿದ ಮಹಿಳೆಯರು, ರಾಷ್ಟ್ರಧ್ವಜವನ್ನು ಬೀಸುತ್ತಾ, ಒಟ್ಟಿಗೆ ನತ್ಯ ಮಾಡುತ್ತಾ, ಚಿತ್ರಗಳನ್ನು ತೆಗೆದುಕೊಂಡು ತಮ ಸೀರೆ, ಸಂಸ್ಕೃತಿ ಮತ್ತು ಪರಂಪರೆಯ ಕಥೆಗಳನ್ನು ಹಂಚಿಕೊಂಡರು.**

# ವೇಮುಲಾ ಆತಹತ್ಯೆಯಲ್ಲಿ ರಾಜಕೀಯ ಮಾಡಿದ ರಾಹುಲ್ ಕ್ಷಮೆಯಾಚಿಸಬೇಕು

**ಪುಣೆ:** ಕಳೆದ 2016ರಲ್ಲಿ ಮತಪಟ್ಟ ಹೈದರಾಬಾದ್ ವಿಶ್ವವಿದ್ಯಾಲಯದ ವಿದ್ಯಾರ್ಥಿ ರೋಹಿತ್ ವೇಮುಲಾ ಅವರ ಆತಹತ್ಯೆಯನ್ನು ರಾಜಕೀಯಗೊಳಿಸಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕ್ಷಮೆಯಾಚಿಸಬೇಕು ಎಂದು ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಆಗ್ರಹಿಸಿದ್ದಾರೆ.

ತೆಲಂಗಾಣ ಪೊಲೀಸರು ವೇಮುಲನ ಸಾವಿನ ತನಿಖೆಯ ನಂತರ ನ್ಯಾಯಾಲಯದ ಮುಂದೆ ತನಿಖಾ ವರದಿಯನ್ನು ಸಲ್ಲಿಸಿದ್ದಾರೆ, ಅವನು ದಲಿತನಲ್ಲ ಮತ್ತು ತನ್ನ ನಿಜವಾದ ಗುರುತು ಪತ್ತೆಯಾಗುತ್ತದೆ ಎಂಬ ಭಯದಿಂದ ಆತಹತ್ಯೆ ಮಾಡಿಕೊಂಡಿದ್ದಾನೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಕಾಂಗ್ರೆಸ್ ಆಡಳಿತದ ರಾಜ್ಯದಲ್ಲಿ ಪೊಲೀಸ್ ವರದಿಯನ್ನು ದಾಖಲಿಸಲಾಗಿದೆ ಎಂದು ಸೂಚಿಸಿದರು. ಪೊಲೀಸರ ವರದಿಯಲ್ಲಿ ಅವರು ಎಸ್‌ಸಿ ಎಂಬ ತಪ್ಪು ಪ್ರಮಾಣಪತ್ರ ವನ್ನು ಹೊಂದಿದ್ದಾರೆ ಮತ್ತು ಅವರು ಎಸ್‌ಸಿ ಅಲ್ಲ ಎಂದು ಹೇಳುತ್ತದೆ. ಆದರೂ ರಾಹುಲ್ ಗಾಂಧಿ ಅವರು ಸಾರ್ವಜನಿಕವಾಗಿ ಈ ವಿಷಯವನ್ನು ರಾಜಕೀಯಗೊಳಿಸಲು ಪ್ರಯತ್ನಿಸಿದರು ಎಂದು ಕೇಂದ್ರ ಸಚಿವರು ಆರೋಪಿಸಿದರು.

ಗಾಂಧಿ ಅವರು ಲೋಕಸಭೆಯಲ್ಲಿ ಮಾಡಿದ ಭಾಷಣಗಳನ್ನು ಆಲಿಸಬೇಕು ಮತ್ತು ದೇಶದ ಕ್ಷಮೆಯಾಚಿಸಬೇಕು ಎಂದು ಸೀತಾರಾಮನ್ ಆಗ್ರಹಿಸಿದರು.

ಎಸ್‌ಸಿ ಸಮುದಾಯವನ್ನು ದುರ್ಬಳಕೆ ಮಾಡಿಕೊಂಡಿದ್ದಕ್ಕಾಗಿ ಅವರು ಕ್ಷಮೆಯಾಚಿಸಬೇಕು. ಇದು ದಲಿತರ ಸಮಸ್ಯೆ ಅಲ್ಲ (ಗಾಂಧಿ) ಇದನ್ನು ದಲಿತರ ಸಮಸ್ಯೆಯಂತೆ ಕಾಣುವಂತೆ ಮಾಡಿದ್ದಾರೆ. ಈಗ ಅವರು ಮೊಹಬ್ಬತ್ ಕಿ ದುಕಾನ್ ನಡೆಸುತ್ತಿದ್ದಾರೆ, ಆದರೆ ಆಗ ಅವರು ನಡೆಸುತ್ತಿದ್ದಾರೆ ವಿಷಕಾರಿ ದುಕಾನ್ ಮತ್ತು ಅದಕ್ಕಾಗಿ ಅವರು ಕ್ಷಮೆಯಾಚಿಸಬೇಕು ಎಂದು ಅವರು ಒತ್ತಾಯಿಸಿದರು.

**ವೇಮುಲಾ ಆತ್ಮಹತ್ಯೆಯಲ್ಲಿ ರಾಜಕೀಯ**



---

## ಮಿನಿ ನ್ಯೂಸ್

### ಶ್ವೇತಭವನದ ಗೇಟ್‌ಗೆ ವಾಹನ ಡಿಕ್ಕಿ, ಚಾಲಕ ಸಾವು

**ವಾಷಿಂಗ್ಟನ್:** ಶ್ವೇತಭವನದಲ್ಲಿ ತಡರಾತ್ರಿ ವಾಹನವನ್ನು ಗೇಟ್‌ಗೆ ಡಿಕ್ಕಿ ಹೊಡೆದು ಚಾಲಕ ಸಾವನ್ನಪ್ಪಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಾತ್ರಿ 10:30 ಕ್ಕೆ ಸ್ವಲ್ಪ ಸಮಯದ ಮೊದಲು ಅಪಘಾತದ ನಂತರ ಚಾಲಕನು ವಾಹನದಲ್ಲಿ ಶವವಾಗಿ ಪತ್ತೆಯಾಗಿದ್ದಾನೆ. ಶ್ವೇತಭವನದ ಸಂಕೀರ್ಣದ ಹೊರ ಪರಿಧಿಯ ಗೇಟ್‌ನಲ್ಲಿ, ಯುಎಸ್ ಸೀಕ್ರೆಟ್ ಸರ್ವಿಸ್ ಹೇಳಿಕೆಯಲ್ಲಿ ತಿಳಿಸಿದೆ.

ಭದ್ರತಾ ಪ್ರೋಟೋಕಾಲ್‌ಗಳನ್ನು ಅಳವಡಿಸಲಾಗಿದೆ ಆದರೆ ಶ್ವೇತಭವನಕ್ಕೆ ಯಾವುದೇ ಬೆದರಿಕೆ ಇಲ್ಲ ಎಂದು ಸಂಸ್ಥೆ ಹೇಳಿದೆ. ಚಾಲಕನನ್ನು ತಕ್ಷಣ ಗುರುತಿಸಲಾಗಿಲ್ಲ.

ವಾಷಿಂಗ್ಟನ್ ಮೆಟ್ರೋಪಾಲಿಟನ್ ಪೊಲೀಸ್ ಇಲಾಖೆಗೆ ತನಿಖೆಯ ಮಾರಣಾಂತಿಕ ಅಪಘಾತದ ಭಾಗವನ್ನು ತಿರುಗಿಸುವ ಸಂದರ್ಭದಲ್ಲಿ ರಹಸ್ಯ ಸೇವೆಯು ಈ ವಿಷಯವನ್ನು ತನಿಖೆ ಮಾಡುವುದನ್ನು ಮುಂದುವರಿಸುತ್ತದೆ ಎಂದು ಸಂಸ್ಥೆ ತಿಳಿಸಿದೆ.

### ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿಯನ್ನು ವಾಂಟೆಡ್ ಲಿಸ್ಟ್‌ಗೆ ಸೇರಿಸಿದ ರಷ್ಯಾ

**ಮಾಸ್ಕೋ:** ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿಯವರ ವಿರುದ್ಧ ರಷ್ಯಾ ಕ್ರಿಮಿನಲ್ ಮೊಕದ್ದಮೆ ದಾಖಲಿಸಿದ್ದು, ಅವರನ್ನು ವಾಂಟೆಡ್ ಪಟ್ಟಿಗೆ ಸೇರಿಸಲಾಗಿದೆ ಎಂದು ವರದಿಯಾಗಿದೆ.



ಫೆಬ್ರವರಿ 2022 ರಲ್ಲಿ ಉಕ್ರೇನ್‌ನೊಂದಿಗೆ ಯುದ್ಧ ಪ್ರಾರಂಭವಾದಾಗಿನಿಂದ ರಷ್ಯಾ, ಉಕ್ರೇನ್ ಮತ್ತು ಇತರ ಯುರೋಪಿಯನ್ ರಾಜಕಾರಣಿಗಳ ಬಂಧನಕ್ಕೆ ವಾರಂಟ್‌ಗಳನ್ನು ಹೊರಡಿಸಿದೆ. ಈಗಾಗಲೇ ಎಸ್ಟೋನಿಯಾದ ಪ್ರಧಾನಿ ಕಾಜಾ ಕಲ್ಲಾಸ್, ಲಿಥುವೇನಿಯಾದ ಸಂಸ್ಕೃತಿ ಮಂತ್ರಿ ಮತ್ತು ಹಿಂದಿನ ಲಟ್ವಿಯನ್ ಸಂಸತ್ತಿನ ಸದಸ್ಯರನ್ನು ವಾಂಟೆಡ್ ಪಟ್ಟಿಗೆ ಸೇರಿಸಿದ್ದಾರೆ. ಕಳೆದ ವರ್ಷ ಯುದ್ಧಾಪರಾಧದ ಆರೋಪದ ಮೇಲೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್‌ಗೆ ಅಂತಾರಾಷ್ಟ್ರೀಯ ಕ್ರಿಮಿನಲ್ ಕೋರ್ಟ್ ಬಂಧನದ ವಾರಂಟ್ ಹೊರಡಿಸಿತ್ತು.

### ಇಸ್ರೇಲ್‌ನಲ್ಲಿನ ಅಲ್-ಜಜೀರಾ ಚಾನಲ್ ಕಚೇರಿ ಮುಚ್ಚಲು ನೇತನ್ಯಾಹು ನಿರ್ಧಾರ

**ಟೆಲ್ ಅವಿವ್:** ಕತಾರ್ ಮಾಲೀಕತ್ವದ ಅಲ್-ಜಜೀರಾ ಸುದ್ದಿವಾಹಿನಿಯ ಸ್ಥಳೀಯ ಕಚೇರಿಗಳನ್ನು ಮುಚ್ಚಲು ಸರ್ಕಾರ ಸರ್ವಾನುಮತದಿಂದ ತೀರ್ಮಾನ ಕೈಗೊಂಡಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಭಾನುವಾರ ತಿಳಿಸಿದ್ದಾರೆ.

ಯಾವಾಗಿನಿಂದ ಈ ನಿರ್ಧಾರ ಜಾರಿಗೆ ಬರಲಿದೆ. ತಾತ್ಕಾಲಿಕವಾಗಿ ಅಥವಾ ಶಾಶ್ವತವಾಗಿ ಮುಚ್ಚಲಾಗುತ್ತದೆಯೋ ಎನ್ನುವುದರ ಬಗ್ಗೆ ತಕ್ಷಣಕ್ಕೆ ಯಾವುದೇ ಮಾಹಿತಿ ಲಭಿಸಿಲ್ಲ. ಈ ಕ್ರಮದಿಂದಾಗಿ ಅಲ್-ಜಜೀರಾ ಮತ್ತು ಇಸ್ರೇಲ್ ನಡುವಿನ ದೀರ್ಘಕಾಲಿನ ಕಲಹ ಮತ್ತೊಂದು ಹಂತ ತಲುಪಿದೆ. ಅಲ್-ಜಜೀರಾ ಪಕ್ಷಪಾತಿಯಾಗಿ ವರ್ತಿಸುತ್ತಿದೆ ಎಂದು ಇಸ್ರೇಲ್ ಪದೇ ಪದೇ ಆರೋಪಿಸುತ್ತಾ ಬಂದಿತ್ತು. ವಿರೋಧದ ನಂತರ ಬಿಡುಗಡೆ ಗಾಜಾ ಯುದ್ಧಭೂಮಿಯಲ್ಲಿ ವರದಿ ಮಾಡುತ್ತಿರುವ ಕೆಲವು ವಾಹಿನಿಗಳ ಪೈಕಿ ಅಲ್-ಜಜೀರಾವೂ ಒಂದು. ಗಾಜಾದಲ್ಲಿ ಇಸ್ರೇಲ್‌ನ ಬಾಂಬ್ ದಾಳಿ, ಜನರಿಂದ ತುಂಬಿ ತುಳುಕುತ್ತಿರುವ ಆಸ್ಪತ್ರೆಗಳ ಬಗ್ಗೆ ವಾಹಿನಿ ವರದಿ ಮಾಡಿತ್ತು. ಹೀಗಾಗಿ ಹಮಾಸ್ ಜೊತೆ ವಾಹಿನಿ ಒಪ್ಪಂದ ಮಾಡಿಕೊಂಡಿದೆ ಎಂದು ಇಸ್ರೇಲ್ ದೂರಿತ್ತು.

### ವೀಸಾ ನಿಷೇಧದಿಂದ ತೊಂದರೆಗೆ ಸಿಲುಕಿದ್ದ ಭಾರತದ ವಿದ್ಯಾರ್ಥಿಗಳ ಜೊತೆ ಸಭೆ

**ಬೀಜಿಂಗ್:** ಕೋವಿಡ್-19 ಪಿಡುಗಿನ ವೇಳೆ ವೀಸಾ ನಿಷೇಧಿಸಿದ್ದ ಚೀನಾದ ಕ್ರಮದಿಂದ ತೊಂದರೆ ಅನುಭವಿಸಿದ್ದ ಭಾರತದ ವಿದ್ಯಾರ್ಥಿಗಳೊಂದಿಗೆ ಇಲ್ಲಿನ ಭಾರತೀಯ ರಾಯಭಾರಿ ಕಚೇರಿ ಮೊದಲ ಬಾರಿಗೆ ಸಂವಾದ ಕಾರ್ಯಕ್ರಮ ಆಯೋಜಿಸಿತ್ತು. ಚೀನಾದ 13ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳ ಹಳೆಯ ಮತ್ತು ಹೊಸಬರು ಸೇರಿದಂತೆ 80 ವಿದ್ಯಾರ್ಥಿಗಳು ಸಂವಾದದಲ್ಲಿ ಪಾಲ್ಗೊಂಡಿದ್ದರು. ಚೀನಾದಲ್ಲಿ ಭಾರತದ ರಾಯಭಾರಿ ಪ್ರದೀಪಕುಮಾರ್ ರಾವತ್, ಕೌನ್ಸೆಲರ್ ನಿತಿನ್‌ಜೀತ್ ಸಿಂಗ್ ಅವರು ವಿದ್ಯಾರ್ಥಿಗಳ ಕುಂದು ಕೊರತೆ, ಅನುಭವಗಳನ್ನು ಆಲಿಸಿದರು. ಭಾರತದ ರಾಯಭಾರಿ ಕಚೇರಿ ಒದಗಿಸುವ ವಿವಿಧ ಸೇವೆಗಳ ಕುರಿತು ರಾಯಭಾರ ಕಚೇರಿಯ ಕಾರ್ಯದರ್ಶಿ (ಶಿಕ್ಷಣ) ಅಮಿತ್ ಶರ್ಮ ವಿವರಿಸಿದರು. ಚೀನಾದಲ್ಲಿ ಸದ್ಯ 10 ಸಾವಿರದಷ್ಟು ಭಾರತೀಯ ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಕೈಗೊಂಡಿದ್ದಾರೆ. ಕೋವಿಡ್ ಪಿಡುಗಿಗೂ ಮುನ್ನ ಭಾರತೀಯ ವಿದ್ಯಾರ್ಥಿಗಳ ಸಂಖ್ಯೆ 23 ಸಾವಿರಕ್ಕೂ ಅಧಿಕವಿತ್ತು. ಬಹುತೇಕ ವಿದ್ಯಾರ್ಥಿಗಳು ವೈದ್ಯಕೀಯ ಕೋರ್ಸ್ ಅಧ್ಯಯನ ಕೈಗೊಂಡಿದ್ದರು.

## ಔಟ್ ಮಾಡಿದ ಬೌಲರ್‌ಗೆ ಗಿಫ್ಟ್ ನೀಡಿದ ವಿರಾಟ್ ಕೊಹ್ಲಿ

ಐಪಿಎಲ್ 2024 ರ 52ನೇ ಪಂದ್ಯದಲ್ಲಿ ಟಾಸ್ ಗೆದ್ದ ಫಾಫ್ ಡುಪ್ಲೆಸಿಸ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಗುಜರಾತ್ ಟೈಟಾನ್ಸ್ 147 ರನ್‌ಗಳಿಸಿ ಆಲೌಟ್ ಆಯಿತು. ಈ ಗುರಿಯನ್ನು ಬೆನ್ನತ್ತಿದ ಆರ್‌ಸಿಬಿ ತಂಡವು 13.4 ಓವರ್‌ಗಳಲ್ಲಿ ಗುರಿ ಮುಟ್ಟುವ ಮೂಲಕ 4 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಐಪಿಎಲ್‌ನಲ್ಲಿ ನಡೆದ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಆರ್‌ಸಿಬಿ ತಂಡ ಜಯ ಸಾಧಿಸಿದೆ. ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಆರ್‌ಸಿಬಿ ಗುಜರಾತ್ ಟೈಟಾನ್ಸ್ ತಂಡವನ್ನು ಬ್ಯಾಟಿಂಗ್‌ಗೆ ಆಹ್ವಾನಿಸಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ಗುಜರಾತ್ ಟೈಟಾನ್ಸ್ ಕಲೆಹಾಕಿದ್ದು ಕೇವಲ 147 ರನ್‌ಗಳು ಮಾತ್ರ. 148 ರನ್‌ಗಳ ಗುರಿ ಪಡೆದ ಆರ್‌ಸಿಬಿ ತಂಡಕ್ಕೆ ಫಾಫ್ ಡುಪ್ಲೆಸಿಸ್ (64) ಹಾಗೂ ವಿರಾಟ್ ಕೊಹ್ಲಿ (42) ಉತ್ತಮ ಆರಂಭ ಒದಗಿಸಿದ್ದರು. ಇದರ ನಡುವೆ ಅರ್ಧಶತಕದತ್ತ ಸಾಗಿದ್ದ ಕೊಹ್ಲಿಯನ್ನು ಔಟ್ ಮಾಡುವಲ್ಲಿ ಸ್ಪಿನ್ನರ್ ನೂರ್ ಅಹ್ಮದ್ ಯಶಸ್ವಿಯಾಗಿದ್ದರು.

ನೂರ್ ಅಹ್ಮದ್ ಎಸೆದ 11ನೇ ಓವರ್‌ನ 4ನೇ ಎಸೆತವನ್ನು ಕೊಹ್ಲಿ ಕವರ್ಸ್‌ನತ್ತ ಬಾರಿಸಲು ಯತ್ನಿಸಿದ್ದರು. ಆದರೆ ಚೆಂಡು ಬ್ಯಾಟ್ ಅನ್ನು ಸವರಿ ವಿಕೆಟ್ ಕೀಪರ್ ಕೈ ಸೇರಿತು. ಇತ್ತ ಕಿಂಗ್ ಕೊಹ್ಲಿಯ ವಿಕೆಟ್ ಸಿಗುತ್ತಿದ್ದಂತೆ ನೂರ್ ಅಹ್ಮದ್ ಕುಣಿದು ಕುಪ್ಪಳಿಸಿದರು. ಏಕೆಂದರೆ ನೂರ್ ಅಹ್ಮದ್ ಅವರ ನೆಚ್ಚಿನ ಕ್ರಿಕೆಟಿಗರಲ್ಲಿ ವಿರಾಟ್ ಕೊಹ್ಲಿ ಕೂಡ ಒಬ್ಬರು. ಇದೇ ಮೊದಲ ಬಾರಿಗೆ ತನ್ನ ಫೇವರೇಟ್ ಕ್ರಿಕೆಟಿಗನ ವಿಕೆಟ್ ಪಡೆದ ನೂರ್ ಅವರ ಸಂತಸಕ್ಕೆ ಪಾರವೇ ಇರಲಿಲ್ಲ. ಇದೀಗ ಈ ಸಂತಸವನ್ನು ವಿರಾಟ್ ಕೊಹ್ಲಿ ಇಮ್ಮಡಿಗೊಳಿಸಿದ್ದಾರೆ.

ಪಂದ್ಯದ ಬಳಿಕ ಕಿಂಗ್ ಕೊಹ್ಲಿ ತಮ್ಮ ಜೆರ್ಸಿಯನ್ನು ನೂರ್ ಅಹ್ಮದ್‌ಗೆ ನೀಡಿದ್ದಾರೆ. ಅದ್ಭುತವಾಗಿ ಬೌಲಿಂಗ್ ಮಾಡಿದ್ದೀಯ, ಒಳ್ಳೆಯದಾಗಲಿ ಎಂದು ಆಟೋಗ್ರಾಫ್‌ನೊಂದಿಗೆ ಕೊಹ್ಲಿ ಅಫ್ಘಾನ್ ಸ್ಪಿನ್ನರ್‌ಗೆ ತಮ್ಮ ಜೆರ್ಸಿಯನ್ನು ಉಡುಗೊರೆಯಾಗಿ ನೀಡಿದ್ದಾರೆ. ಈ ಉಡುಗೊರೆಯ ಫೋಟೋವನ್ನು ಗುಜರಾತ್ ಟೈಟಾನ್ಸ್ ತಂಡದ ಸ್ಪಿನ್ನರ್ ನೂರ್ ಅಹ್ಮದ್ ತಮ್ಮ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದು, ನೀವು ಯಾವತ್ತೂ ನನ್ನ ನೆಚ್ಚಿನವರಲ್ಲಿ ಒಬ್ಬರು ಎಂದು ವಿರಾಟ್ ಕೊಹ್ಲಿಗೆ ಧನ್ಯವಾದ ತಿಳಿಸಿದ್ದಾರೆ.



# ಚೆನ್ನೈ ದಾಳಿಗೆ ತತ್ತರಿಸಿದ ಪಂಜಾಬ್ ಸಿಎಸ್‌ಕೆಗೆ ಭರ್ಜರಿ ಗೆಲುವು

### ಪಂಜಾಬ್ ತಂಡವು ನಿಗದಿತ 20 ಓವರ್‌ಗೆ 9 ವಿಕೆಟ್ ನಷ್ಟಕ್ಕೆ 139 ರನ್ ಗಳಿಸುವ ಮೂಲಕ 28 ರನ್ ಗಳಿಂದ ಸೋಲು

ಚೆನ್ನೈ ತಂಡವು ನಿಗದಿತ 20 ಓವರ್‌ಗೆ 9 ವಿಕೆಟ್ ನಷ್ಟಕ್ಕೆ 167 ರನ್ ಗಳಿಸುವ ಮೂಲಕ ಪಂಜಾಬ್‌ಗೆ 168 ರನ್ ಟಾರ್ಗೆಟ್ ನೀಡಿತು. ಈ ಮೊತ್ತ ಬೆನ್ನಟ್ಟಿದ ಪಂಜಾಬ್ ತಂಡವು ನಿಗದಿತ 20 ಓವರ್‌ಗೆ 9 ವಿಕೆಟ್ ನಷ್ಟಕ್ಕೆ 139 ರನ್ ಗಳಿಸುವ ಮೂಲಕ 28 ರನ್ ಗಳಿಂದ ಸೋಲನ್ನಪ್ಪಿತು.

ಐಪಿಎಲ್ 2024ರ 53ನೇ ಪಂದ್ಯ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಪಂಜಾಬ್ ಕಿಂಗ್ಸ್ ನಡುವೆ ನಡೆಯಿತು. ಈ ಪಂದ್ಯದಲ್ಲಿ ಟಾಸ್ ಗೆದ್ದ ಪಂಜಾಬ್ ತಂಡದ ನಾಯಕ ಸ್ಯಾಮ್ ಕರನ್ ಮೊದಲು ಬೌಲಿಂಗ್ ಆಯ್ಕೆ ಮಾಡಿದರು. ಆದರೆ ಧರ್ಮಶಾಲಾದಲ್ಲಿ ನಡೆಯುತ್ತಿರುವ ಪಂದ್ಯದಲ್ಲಿ ಬ್ಯಾಟಿಂಗ್ ಬದಲು ಬೌಲಿಂಗ್ ವಿಭಾಗವೇ ಹೆಚ್ಚು ಅಬ್ಬರಿಸಿತು ಎಂದರೂ ತಪ್ಪಾಗಲಾರದು. ಚೆನ್ನೈ ಸಹ ಬ್ಯಾಟಿಂಗ್ ವೇಳೆ ಸಾಕಷ್ಟು ಕಷ್ಟಪಡಬೇಕಾಯಿತು. ಅಂತಿಮವಾಗಿ ಚೆನ್ನೈ ತಂಡವು ನಿಗದಿತ 20 ಓವರ್‌ಗೆ 9 ವಿಕೆಟ್ ನಷ್ಟಕ್ಕೆ 167 ರನ್ ಗಳಿಸುವ ಮೂಲಕ ಪಂಜಾಬ್‌ಗೆ 168 ರನ್ ಟಾರ್ಗೆಟ್ ನೀಡಿತು. ಈ ಮೊತ್ತ ಬೆನ್ನಟ್ಟಿದ ಪಂಜಾಬ್ ತಂಡವು ನಿಗದಿತ 20 ಓವರ್‌ಗೆ 9 ವಿಕೆಟ್ ನಷ್ಟಕ್ಕೆ 139 ರನ್ ಗಳಿಸುವ ಮೂಲಕ 28 ರನ್ ಗಳಿಂದ ಸೋಲನ್ನಪ್ಪಿತು.




### ಚೆನ್ನೈ ದಾಳಿಗೆ ತತ್ತರಿಸಿದ ಪಂಜಾಬ್

**ಇನ್ನು, ಚೆನ್ನೈ ನೀಡಿದ ಟಾರ್ಗೆಟ್ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ಸಿಎಸ್‌ಕೆ ಬೌಲಿಂಗ್ ದಾಳಿಗೆ ತತ್ತರಿಸಿತು. ಪಂಜಾಬ್ ಪರ ಪ್ರಭ್‌ಸಿಮ್ರಾನ್ ಸಿಂಗ್ 30 ರನ್, ಜಾನಿ ಬೇರ್‌ಸ್ಟೋ 7 ರನ್, ರಿಲ್ಲೆ ರುಸ್ಸೋ ಶೂನ್ಯ, ಶಶಾಂಕ್ ಸಿಂಗ್ 27 ರನ್, ಜಿತೇಶ್ ಶರ್ಮಾ ಶೂನ್ಯ, ನಾಯಕ ಸ್ಯಾಮ್ ಕರನ್ 7 ರನ್, ಅಶುತೋಷ್ ಶರ್ಮಾ 3 ರನ್, ಹರ್ಷಲ್ ಪಟೇಲ್ 12 ರನ್ ಸಿಡಿಸಿದರೂ ಸಹ ತಂಡವನ್ನು ಗೆಲುವಿನ ದಡ ಸೇರಲಾಗಲಿಲ್ಲ. ಅದೇ ಚೆನ್ನೈ ಸೂಪರ್ ಕಿಂಗ್ಸ್ ಪರ ಮಿಚೆಲ್ ಸ್ಯಾಟ್ನರ್ 1 ವಿಕೆಟ್, ತುಷಾರ್ ದೇಶಪಾಂಡೆ 2 ವಿಕೆಟ್, ಸಿಮ್ರಜಿತ್ ಸಿಂಗ್ 2 ವಿಕೆಟ್, ಶಾರ್ದೂಲ್ ಠಾಕೂರ್ 1 ವಿಕೆಟ್ ಹಾಗೂ ರವೀಂದ್ರ ಜಡೇಜಾ 4 ಓವರ್‌ಗೆ 20 ರನ್ ನೀಡಿ ಪ್ರಮುಖ 3 ವಿಕೆಟ್ ಪಡೆದು ಮಿಂಚಿದರು.**

### ಬ್ಯಾಟಿಂಗ್‌ನಲ್ಲಿ ಅಬ್ಬರಿಸದ ಚೆನ್ನೈ

**ಮೊದಲು ಬ್ಯಾಟ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 167 ರನ್ ಗಳಿಸಿತು. ಹೀಗಾಗಿ ಪಂಜಾಬ್ ಗೆಲುವಿಗೆ 168 ರನ್ ಗಳ ಸವಾಲು ನೀಡಿತು. ಧರ್ಮಶಾಲಾ ಸ್ಟೇಡಿಯಂನಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಪಂಜಾಬ್ ಕಿಂಗ್ಸ್ ನಡುವೆ ಪಂದ್ಯ ನಡೆಯಿತು. ಈ ಪಂದ್ಯದಲ್ಲಿ ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು. ಚೆನ್ನೈಗೆ ಮೊದಲು ಬ್ಯಾಟಿಂಗ್ ಮಾಡುವ ಸವಾಲು ಎದುರಾಯಿತು. ಚೆನ್ನೈ ಸೂಪರ್ ಕಿಂಗ್ಸ್ ಪರ ಬ್ಯಾಟಿಂಗ್ ಮಾಡುವಾಗ ನಾಯಕ ರಿತುರಾಜ್ ಗಾಯಕ್ವಾಡ್ 32 ರನ್, ಮಿಚೆಲ್ 30 ರನ್, ಮೊಯಿನ್ ಅಲಿ 17 ರನ್, ರವೀಂದ್ರ ಜಡೇಜಾ 43 ರನ್, ಮಿಚೆಲ್ ಸ್ಯಾಂಟ್ನರ್ 11 ರನ್, ಶಾರ್ದೂಲ್ ಠಾಕೂರ್ 17 ರನ್ ಗಳಿಸಿದರು. ಶಿವಂ ದುಬೆ, ಎಂಎಸ್ ಧೋನಿಯಂತಹ ಸ್ಟಾರ್ ಬ್ಯಾಟ್ಸ್‌ಮನ್‌ಗಳು ಶೂನ್ಯ ರನ್‌ಗಳೊಂದಿಗೆ ಪೆವಿಲಿಯನ್ ಮರಳಿದರು. ಪಂಜಾಬ್ ಕಿಂಗ್ಸ್ ಬೌಲರ್‌ಗಳು ಚೆನ್ನೈ ಬ್ಯಾಟ್ಸ್‌ಮನ್‌ಗಳ ಬೆವರಿಳಿಸಿದರು. ಪಂಜಾಬ್ ಪರ ಹರ್ಷಲ್ ಪಟೇಲ್ 3 ವಿಕೆಟ್ ಮತ್ತು ರಾಹುಲ್ ಚಹಾರ್ 3 ವಿಕೆಟ್ ಪಡೆದರು. ಅರ್ಷದೀಪ್ ಸಿಂಗ್ 2 ವಿಕೆಟ್ ಮತ್ತು ಸ್ಯಾಮ್ ಕರನ್ 2 ವಿಕೆಟ್ ಪಡೆದರು. ಹರ್ಷಲ್ ಪಟೇಲ್ 19ನೇ ಓವರ್‌ನಲ್ಲಿ ಶಾರ್ದೂಲ್ ಠಾಕೂರ್ ಮತ್ತು ಎಂಎಸ್ ಧೋನಿ ಅವರ ಸತತ ವಿಕೆಟ್ ಪಡೆದರು. ರಾಹುಲ್ ಚಹಾರ್ ಸಿಎಸ್‌ಕೆಯ ಸ್ಟಾರ್ ಬ್ಯಾಟ್ಸ್‌ಮನ್ ಶಿವಂ ದುಬೆ ಅವರನ್ನು ಡಕ್ ಮಾಡಿ ಪೆವಿಲಿಯನ್‌ಗೆ ಕಳಿಸುವ ಮೂಲಕ ಚೆನ್ನೈ ಬಿಗ್ ಸ್ಕೋರ್ ಕಲೆಹಾಕುವ ಕನಸಿಗೆ ತಣ್ಣೀರೆರೆಚಿದರು.**

## ಐಪಿಎಲ್: ಮತ್ತೊಬ್ಬ ಸ್ಟಾರ್ ಪ್ಲೇಯರ್ ರೂಲ್ಡ್ ಔಟ್!

ಸಿಎಸ್‌ಕೆ ತಂಡಕ್ಕೆ ಬಿಗ್ ಶಾಕ್ ಒಂದು ಎದುರಾಗಿದೆ. ಹೌದು, ಚೆನ್ನೈ ಸೂಪರ್ ಕಿಂಗ್ಸ್ ಬೌಲಿಂಗ್ ವಿಭಾಗದಲ್ಲಿ ಈಗಾಗಲೇ ಸಾಕಷ್ಟು ಸಮಸ್ಯೆಯನ್ನು ಎದುರಿಸುತ್ತಿದೆ. ಇದರ ಜೊತೆಗೆ ಮತ್ತೊಂದು ಆಘಾತ ಉಂಟಾಗಿದೆ.

ಐಪಿಎಲ್ 2024ರ 17ನೇ ಸೀಸನ್‌ನ ಲೀಗ್ ಕೊನೆಯ ಹಂತ ತಲುಪುತ್ತಿದೆ. ಇದರ ನಡುವೆ ತಂಡಗಳು ಎಲ್ಲಾ ತಂಡಗಳು ಪ್ಲೇಆಫ್ ಲೆಕ್ಕಾಚಾರದ ಮೇಲೆ ಬಿದ್ದಿದೆ. ಇದರ ನಡುವೆ ಚೆನ್ನೈ ಸೂಪರ್ ಕಿಂಗ್ಸ್ ತಂಡಕ್ಕೆ ದೊಡ್ಡ ಹಿನ್ನೆಯಾಗಿದೆ. ಇಂದು ಸಿಎಸ್‌ಕೆ ತಂಡ ಧರ್ಮಾಶಾಲಾದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಸೆಣಸಾಡುತ್ತಿದೆ. ಇದರ ನಡುವೆ ಸಿಎಸ್‌ಕೆ ತಂಡಕ್ಕೆ ಬಿಗ್ ಶಾಕ್ ಒಂದು ಎದುರಾಗಿದೆ.


ಹೌದು, ಚೆನ್ನೈ ಸೂಪರ್ ಕಿಂಗ್ಸ್ ಬೌಲಿಂಗ್ ವಿಭಾಗದಲ್ಲಿ ಈಗಾಗಲೇ ಸಾಕಷ್ಟು ಸಮಸ್ಯೆಯನ್ನು ಎದುರಿಸುತ್ತಿದೆ. ಇದರ ಜೊತೆಗೆ ಮತ್ತೊಂದು ಆಘಾತ ಉಂಟಾಗಿದೆ. ಏಕೆಂದರೆ ವೇಗಿ ಮಥೀಶ ಪತಿರಾನ ಮಂಡಿರಜ್ಜು ಗಾಯದಿಂದಾಗಿ ಶ್ರೀಲಂಕಾಕ್ಕೆ ವಾಪಸ್ ಹೋಗಿರುವುದಾಗಿ ವರದಿಯಾಗಿದೆ. ಚೆನ್ನೈ ಸೂಪರ್ ಕಿಂಗ್ಸ್ ತಂಡದ ಸ್ಟಾರ್ ಬೌಲರ್ ಆಗಿದ್ದ ಮಥೀಶ ಪತಿರಾನ ಕಳೆದ ಪಂದ್ಯದಿಂದ ಹೊರಗುಳಿದಿದ್ದರು. ಆದರೆ ಅವರು ಟಿ20 ವಿಶ್ವಕಪ್‌ಗಾಗಿ ವೀಸಾಗಾಗಿ ತವರಿಗೆ ಮರಳಿದ್ದರು



ಎಂದು ಹೇಳಲಾಗಿತ್ತು. ಅದರಂತೆ ಮೇ 4ರಂದು ಅವರು ತಂಡವನ್ನು ಸೇರಿದ್ದರು. ಆದರೆ ಇಂದು ಚೆನ್ನೈ ಅಧಿಕೃತವಾಗಿ ಮಥೀಶ ಪತಿರಾನ ಅವರ ಗಾಯದ ಬಗ್ಗೆ ಮಾಹಿತಿ ನೀಡಿದೆ. ಮಥೀಶ ಪತಿರಾನ ಚಿವರು ಮಂಡಿರಜ್ಜು ಗಾಯದ ಚಿಕಿತ್ಸೆಗಾಗಿ ಶ್ರೀಲಂಕಾಗೆ ವಾಪಸ್ಸಾಗಿರುವುದಾಗಿ ಸಿಎಸ್‌ಕೆ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ಈ ಕುರಿತು ಟ್ವೀಟ್ ಮಾಡಿರುವ ಚೆನ್ನೈ, 'ಚೆನ್ನೈ ಸೂಪರ್ ಕಿಂಗ್ಸ್ ವೇಗಿ ಮಥೀಶ ಪತಿರಾನ ಮಂಡಿರಜ್ಜು ಗಾಯದಿಂದ ಬಳಲುತ್ತಿದ್ದು, ಮತ್ತಷ್ಟು ಚೇತರಿಸಿಕೊಳ್ಳಲು ಶ್ರೀಲಂಕಾಕ್ಕೆ ಮರಳಲಿದ್ದಾರೆ ಎಂದು ಚೆನ್ನೈ ಸೂಪರ್ ಕಿಂಗ್ಸ್ ಕಳುಹಿಸಿರುವ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿದೆ.

ಬಲಗೈ ವೇಗಿ ಐಪಿಎಲ್ 2024ರಲ್ಲಿ 6 ಪಂದ್ಯಗಳನ್ನು ಆಡಿದ್ದಾರೆ. ಚೆನ್ನೈ ಸೂಪರ್ ಕಿಂಗ್ಸ್‌ಗಾಗಿ 7.68ರ ಏಕಾನಮಿಯಲ್ಲಿ 13 ವಿಕೆಟ್ಗಳನ್ನು ಪಡೆದಿದ್ದಾರೆ. ಜೊತೆಗೆ 14 ವಿಕೆಟ್ಗಳನ್ನು ಪಡೆದ ಮುಸ್ತಾಫಿಜುರ್ ರೆಹಮಾನ್ ಅವರ ನಂತರ ಈ ಋತುವಿನ ಅವರ ಎರಡನೇ ಅತ್ಯುತ್ತಮ ಬೌಲರ್ ಆಗಿದ್ದರು.

## ಸತ್ಯಂ ಚಿತ್ರಕ್ಕೆ ಸೆನ್ಸಾರ್ ಮೆಚ್ಚುಗೆ!



ಇದುವರೆಗೂ ಭಿನ್ನ ಪಥದ ಮೂಲಕ ತಮ್ಮದೇ ಆದ ಛಾಪು ಮೂಡಿಸಿರುವವರು ಅಶೋಕ್ ಕಡಬ. ಇದೀಗ ಅವರು 'ಸತ್ಯಂ' ಚಿತ್ರದ ಮೂಲಕ ಮತ್ತೊಂದು ಜಾಡಿನತ್ತ ಹೊರಳಿಕೊಂಡಿರುವ ಸ್ಪಷ್ಟ ಸೂಚನೆಯೊಂದು ಸಿಕ್ಕಿಬಿಟ್ಟಿದೆ. ಈ ಹಿಂದೆ ಸತ್ಯಂ ಟೀಸರ್ ಬಿಡುಗಡೆಯಾದಾಗಲೇ ಅದು ಸ್ಪಷ್ಟವಾಗಿತ್ತು. ಆ ಟೀಸರ್‌ಗೆ ಮಿಲಿಯನ್ನುಗಟ್ಟಲೆ ವೀಕ್ಷಣೆಗಳು ಸಿಕ್ಕಿ, ಎಲ್ಲಾ ಕಡೆಗಳಿಂದಲೂ ಮೆಚ್ಚುಗೆಗಳೂ ವ್ಯಕ್ತವಾಗಿತ್ತು.

ಇದೀಗ ಬಿಡುಗಡೆಯ ಹೊಸ್ತಿಲಿನಲ್ಲಿರುವ 'ಸತ್ಯಂ' ಸೆನ್ಸಾರ್ ಸರ್ಟಿಫಿಕೇಟ್ ಪಡೆದುಕೊಂಡಿದೆ. ಈ ವಿಚಾರವನ್ನು ನಿರ್ಮಾಪಕರಾದ ಮಹಾಂತೇಶ್ ವಿ.ಕೆ ಹಂಚಿಕೊಂಡಿದ್ದಾರೆ. ಯುಎ ಸರ್ಟಿಫಿಕೇಟಿನೊಂದಿಗೆ, ಸೆನ್ಸಾರ್ ಅಧಿಕಾರಿಗಳ ತುಂಬು ಮೆಚ್ಚುಗೆಯೂ ಎದುರುಗೊಂಡಿರೋದರಿಂದ ಚಿತ್ರತಂಡ ಖುಷಿಗೊಂಡಿದೆ. ಇದು ಗಣಪ ನಂತರ ಸಂತೋಷ್ ಬಾಲರಾಜ್ ನಾಯಕನಾಗಿ ನಟಿಸಿರುವ ಚಿತ್ರ. 'ಕನ್ನಡತಿ' ಸೀರಿಯಲ್ ಖ್ಯಾತಿಯ ರಂಜನಿ ರಾಘವನ್ ನಾಯಕಿಯಾಗಿ ಜೊತೆಯಾಗಿದ್ದಾರೆ. ಈ ಹಿಂದೆ ರಂಗಿತರಂಗ, ಕಾಂತಾರ ಚಿತ್ರ ಗಳಲ್ಲಿ ತುಳುನಾಡಿನ ದೈವಾರಾಧನೆಯ ಕಥೆಯಿತ್ತು. ಆ ಎರಡು ಸಿನಿಮಾಗಳ ದೊಡ್ಡ ಮಟ್ಟದ ಗೆಲುವಿನ ಶಕ್ತಿಯೂ ಅದೇ.

ಅಂಥಾದ್ದೊಂದು ನೆಲದ ಘಮಲಿನ ಕಥೆಯನ್ನೊಳಗೊಂಡಿರುವ ಚಿತ್ರ ಸತ್ಯಂ. ಹಾಗೆಂದ ಮಾತ್ರಕ್ಕೆ ಇದು ಆ ಎರಡು ಸಿನಿಮಾಗಳ ಗೆಲುವಿನ ಪ್ರಭೆಯಲ್ಲಿ ರೂಪುಗೊಂಡಿರುವ ಚಿತ್ರ ಅಂದುಕೊಳ್ಳುವಂತಿಲ್ಲ.




## ಕೊಳಕು ಕೃತ್ಯ ಸೃಷ್ಟಿಸಿದವರಿಗೆ ಶಿಕ್ಷೆಯಾಗಬೇಕು

ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣದ ಕುರಿತು ಕೊಡಗಿನ ಬೆಡಗಿ ಹರ್ಷಿಕಾ ಪೂಣಚ್ಚ ಧ್ವನಿಯೆತ್ತಿದ್ದಾರೆ. ಸೆಕ್ಸ್ ಸ್ಕ್ಯಾಂಡಲ್ ಬಗ್ಗೆ ನಟಿ ಮಾತನಾಡಿದ್ದಾರೆ. ತಪ್ಪು ಮಾಡಿದ್ರೆ ಕಾನೂನು ಅಡಿಯಲ್ಲಿ ತಕ್ಕ ಶಿಕ್ಷೆಯಾಗಬೇಕು ಎಂದು ಸೋಷಿಯಲ್ ಮೀಡಿಯಾದಲ್ಲಿ ಹರ್ಷಿಕಾ ಬರೆದುಕೊಂಡಿದ್ದಾರೆ.

ದುರದೃಷ್ಟವಶಾತ್ ವೈರಲ್ ಆಗಿರುವ 2976 ವೀಡಿಯೊಗಳಲ್ಲಿ ಒಂದನ್ನು ನಾನು ನೋಡಿದೆ. ಅದನ್ನು ನೋಡುವುದು ನಿಜಕ್ಕೂ ನೋವಿನ ಸಂಗತಿ. ವೀಡಿಯೋಗಳು ಕಾನೂನುಬದ್ಧ ಮತ್ತು ನೈಜವಾಗಿದ್ದರೆ, ಅಂತಹ ಕೊಳಕು ಕೃತ್ಯಗಳನ್ನು ಸೃಷ್ಟಿಸಿದವರು ಖಂಡಿತವಾಗಿಯೂ ದೇಶದ ಕಾನೂನಿನ ಪ್ರಕಾರ ಶಿಕ್ಷೆಗೆ ಗುರಿಯಾಗಬೇಕು ಎಂದು ನಟಿ ಬರೆದುಕೊಂಡಿದ್ದಾರೆ.

ಈ ವೀಡಿಯೊಗಳಲ್ಲಿ ಕಾಣಿಸಿಕೊಂಡಿರುವ ಅಸಂಖ್ಯಾತ ಮಹಿಳೆಯರ ಕುರಿತಾಗಿ ನನ್ನ ನೋವನ್ನು ವ್ಯಕ್ತಪಡಿಸುತ್ತಿದ್ದೇನೆ. ಅವರೆಲ್ಲರೂ ಸಭ್ಯ ಮತ್ತು ಸರಳ ಕುಟುಂಬದ ಸಾಮಾನ್ಯ ಮಹಿಳೆಯರಂತೆ ಕಾಣುತ್ತಾರೆ. ಈ ಸಂತ್ರಸ್ತರ ಮುಖಗಳನ್ನು ವಿವಿಧ ಗುಂಪುಗಳು ರಾಜಕೀಯ ಚರ್ಚೆಗೆ ಬಳಸಿಕೊಳ್ಳುತ್ತಿರುವುದು ಅತ್ಯಂತ ದುರದೃಷ್ಟಕರ ಎಂದು ಅವರು ರಾಜಕಾರಣಿಗಳ ವಿರುದ್ಧ ಕೂಡ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಲ್ಲಿರುವ ಮಹಿಳೆಯರ ಮುಖವನ್ನು ಬ್ಲರ್ ಮಾಡಬಹುದಿತ್ತು. ಭವಿಷ್ಯದಲ್ಲಿ ಅವರು ಸಮಾಜವನ್ನು ಹೇಗೆ ಎದುರಿಸುತ್ತಾರೆ. ಇನ್ನು ಮುಂದೆ ನಮ್ಮ ಜನ ಅವರನ್ನು ಯಾವ ದೃಷ್ಟಿಕೋನದಲ್ಲಿ ನೋಡಬಹುದು ಎಂದು ವಿವರಿಸಿ ಹೇಳಬೇಕಾಗಿಲ್ಲ. ಅವರ ಕುಟುಂಬ ಮತ್ತು ಮಕ್ಕಳ ಬಗ್ಗೆ ಏನಾದರೂ ಯೋಚನೆ ಮಾಡಿದ್ದೀರಾ? ಎಂದು ನಟಿ ಕೇಳಿದ್ದಾರೆ.

## ಆನ್‌ಲೈನ್ ಮೂಲಕ ವೋಟ್ ಮಾಡಿದ್ದೇನೆ ಎಂದ ಜ್ಯೋತಿಕಾ

ತಮಿಳಿನ ನಟಿ ಜ್ಯೋತಿಕಾ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸದ್ಯ ರಾಜ್‌ಕುಮಾರ್ ರಾವ್ ನಿರ್ದೇಶನದ ಹಿಂದಿ 'ಶ್ರೀಕಾಂತ್' ಎಂಬ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಇದೀಗ ಸಂದರ್ಶನವೊಂದರಲ್ಲಿ ಆನ್‌ಲೈನ್ ಮೂಲಕ ಮತದಾನ ಮಾಡಿದ್ದೇನೆ ಎಂದು ಹೇಳಿಕೆ ನೀಡುವ



### ಟ್ರೋಲ್ ಆದ ಸೂರ್ಯ ಪತ್ನಿ

ಮೂಲಕ ಸೂರ್ಯ ಪತ್ನಿ ಜ್ಯೋತಿಕಾ ಫುಲ್ ಟ್ರೋಲ್ ಆಗಿದ್ದಾರೆ.

ಸಂದರ್ಶಕರು, ಈ ಬಾರಿ ಏಕೆ ವೋಟ್ ಮಾಡಲು ಬರಲಿಲ್ಲ? ಎಂದು ಜ್ಯೋತಿಕಾಗೆ ಕೇಳಿದ್ದರು. ಆಗ ನಾನು ಪ್ರತಿ ವರ್ಷ ವೋಟ್ ಮಾಡುತ್ತೇನೆ ಎಂದಿದ್ದಾರೆ. ನಂತರ ಮತದಾನ ಪ್ರತಿ ವರ್ಷ ನಡೆಯಲ್ಲ ಎಂದು ಸಂದರ್ಶಕರು ಹೇಳಿದರು. ಇದನ್ನು ಜ್ಯೋತಿಕಾ ಒಪ್ಪಿಕೊಂಡಿದ್ದಾರೆ.

ಮತದಾನದ ಸಂದರ್ಭದಲ್ಲಿ ನಾವು ನಮ್ಮ ರಾಜ್ಯದಲ್ಲಿ ಇಲ್ಲದೆ ಇರಬಹುದು, ನಮಗೆ ಅನಾರೋಗ್ಯ ಆಗಿರಬಹುದು. ಅದು ನಮ್ಮ ಖಾಸಗಿ ವಿಚಾರ. ಕೆಲವೊಮ್ಮೆ ಖಾಸಗಿಯಾಗಿ ವೋಟ್ ಮಾಡಿ ಬಂದಿರುತ್ತೇವೆ, ಆನ್‌ಲೈನ್‌ನಲ್ಲಿ ವೋಟ್ ಮಾಡಿರಬಹುದು. ಎಲ್ಲಾವೂ ಪಬ್ಲಿಶ್ ಆಗಬೇಕೆಂದಿಲ್ಲ. ಜೀವನಕ್ಕೆ ಒಂದು ಖಾಸಗಿ ಭಾಗವಿದೆ ಮತ್ತು ಅದನ್ನು ನಾವು ಗೌರವಿಸಬೇಕು ಎಂದಿದ್ದಾರೆ ಜ್ಯೋತಿಕಾ. ಇದೀಗ ಆನ್‌ಲೈನ್ ವೋಟ್ ಮಾಡಿರಬಹುದು ಎಂದು ಹೇಳಿದ ಮಾತೇ ಟ್ರೋಲಿಗರ ಬಾಯಿಗೆ ಆಹಾರವಾಗಿದೆ.

## ತಮಿಳಿನ ನಟ ಕಾರ್ತಿ ಜೊತೆ ಶ್ರೀಲೀಲಾ ಡ್ಯುಯೇಟ್

ಕನ್ನಡತಿ ಶ್ರೀಲೀಲಾ 'ಗುಂಟೂರು ಖಾರಂ' ಸಿನಿಮಾದ ನಂತರ ಸೈಲೆಂಟ್ ಆಗಿದ್ದಾರೆ. ಸಾಲು ಸಾಲು ತೆಲುಗಿನ ಎರಡ್ಮೂರು ಸಿನಿಮಾಗಳು ಮಕಾಡೆ ಮಲಗಿದ ಬೆನ್ನಲ್ಲೇ ನಟಿ ಕಾಲಿವುಡ್‌ನತ್ತ ಮುಖ ಮಾಡಿದ್ದಾರೆ. ತಮಿಳು ನಟ ಕಾರ್ತಿ ಮುಂದಿನ ಚಿತ್ರಕ್ಕೆ ಶ್ರೀಲೀಲಾ ಜೋಡಿಯಾಗಲಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಸೂರ್ಯ ಸಹೋದರ ಕಾರ್ತಿ ಕೂಡ ಕಾಲಿವುಡ್ ವಿಭಿನ್ನ ಸಿನಿಮಾಗಳನ್ನು ಆಯ್ಕೆ ಮಾಡಿಕೊಳ್ಳುವ ಮೂಲಕ ಅಭಿಮಾನಿಗಳ ಮನಗೆದ್ದಿದ್ದಾರೆ. ಇದೀಗ ಅವರ ಮುಂಬರುವ ಸಿನಿಮಾಗಾಗಿ ಶ್ರೀಲೀಲಾರನ್ನು ಚಿತ್ರತಂಡ ಸಂಪರ್ಕಿಸಿದೆ ಎನ್ನಲಾಗಿದೆ. ನಾಯಕಿಯಾಗಲು ಶ್ರೀಲೀಲಾ ಸೂಕ್ತ ಎಂದು ಚಿತ್ರತಂಡ ನಿರ್ಧರಿಸಿದೆ. ನಟಿ ಕಥೆ ಕೇಳಿ ಗ್ರೀನ್ ಸಿಗ್ನಲ್ ಕೊಟ್ರಾ ಎಂಬುದು ಇನ್ನೂ ಖಾತ್ರಿ ಆಗಿಲ್ಲ. ಇಬ್ಬರ ಕಾಂಬಿನೇಷನ್‌ನಲ್ಲಿ ರೊಮ್ಯಾಂಟಿಕ್ ಸಿನಿಮಾ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿದೆ.

ನಟನೆಯ 'ಗುಡ್ ಬ್ಯಾಡ್ ಅಗ್ಲಿ', ದಳಪತಿ ವಿಜಯ್ ನಟನೆಯ 'ಗೋಟ್' ಚಿತ್ರದಲ್ಲಿ ಶ್ರೀಲೀಲಾ ಕಾಣಿಸಿಕೊಳ್ಳಲಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿತ್ತು. ಈ ಪ್ರಾಜೆಕ್ಟ್‌ಗಳ ಬಗ್ಗೆ ಇನ್ನೂ ಅಧಿಕೃತ ಘೋಷಣೆ ಆಗಿಲ್ಲ. ಬೆಂಗಳೂರಿನ ಬೆಡಗಿ ಶ್ರೀಲೀಲಾ ಕಿಸ್, ಭರಾಟೆ ಸಿನಿಮಾಗಳ ನಂತರ ಟಾಲಿವುಡ್‌ಗೆ ಎಂಟ್ರಿ ಕೊಟ್ಟರು. ಪೆಳ್ಳಿ ಸಂದಡಿ, ಧಮಾಕ, ಭಗವಂತ ಕೇಸರಿ, ಸ್ಕಂದ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದರು.



## ಮಹಿಳಾ ಪ್ರಧಾನ ಸಿನಿಮಾದಲ್ಲಿ ಅನುಪಮಾ

ಹಸಿಬಿಸಿ ದೃಶ್ಯಗಳಲ್ಲಿ ನಟಿಸಲ್ಲ ಎಂದಿದ್ದ ಅನುಪಮಾ ಪರಮೇಶ್ವರನ್ 'ಟಿಲ್ಲು ಸ್ಕ್ವೇರ್' ಸಿನಿಮಾದಲ್ಲಿ ಹೀರೋ ಜೊತೆ ಲಿಪ್‌ಲಾಕ್ ಮಾಡುವ ಮೂಲಕ ಪಡ್ಡೆಹುಡುಗರ ನಿದ್ದೆಗೆಡಿಸಿದ್ದರು. ಈ ಚಿತ್ರದ ಸಕ್ಸಸ್ ನಂತರ ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಕಡೆಯಿಂದ ಅನುಪಮಾಗೆ ಬಂಪರ್ ಆಫರ್ ಸಿಕ್ಕಿದೆ.

ಲೈಕಾ ಪ್ರೊಡಕ್ಷನ್ಸ್ ನಿರ್ಮಾಣದ ಮಹಿಳಾ ಪ್ರಧಾನ ಸಿನಿಮಾದಲ್ಲಿ ನಟಿಸಲು ಅನುಪಮಾಗೆ ಅವಕಾಶ ಸಿಕ್ಕಿದೆ. ಮೇ 6ರಂದು ಸಂಜೆ 5 ಗಂಟೆಗೆ ಚಿತ್ರದ ಟೈಟಲ್ ಮತ್ತು ಫಸ್ಟ್ ಲುಕ್ ರಿವೀಲ್ ಮಾಡೋದಾಗಿ ಚಿತ್ರತಂಡ ಅಧಿಕೃತ ಮಾಹಿತಿ ನೀಡಿದೆ. ಮಹಿಳಾ ಪ್ರಧಾನ ಕಥೆಯಲ್ಲಿ ಅನುಪಮಾ ನಟಿಸಲಿದ್ದು, ನಟಿಯ ಕೆರಿಯರ್‌ನಲ್ಲಿ ತಿರುವು ಕೊಡಲಿದೆ ಎಂದು ಟಾಲಿವುಡ್‌ನಲ್ಲಿ ಚರ್ಚೆ ಶುರುವಾಗಿದೆ. ಈ ಚಿತ್ರದಲ್ಲಿ ಅನುಪಮಾ ಪಾತ್ರಕ್ಕೆ ತುಂಬಾನೇ ಮಹತ್ವವಿದ್ದು, ಎಂದೂ ನಟಿಸಿರದ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ಚಿತ್ರವನ್ನು ಎ.ಆರ್ ಜೀವ ಎಂಬುವವರು ನಿರ್ದೇಶನ ಮಾಡುತ್ತಿದ್ದಾರೆ.

ಇತ್ತೀಚೆಗೆ ಅನುಪಮಾ ನಟನೆಯ 'ಪರಾಧ' ಎಂಬ ಮಹಿಳಾ ಪ್ರಧಾನ ಸಿನಿಮಾ ಅನೌನ್ಸ್ ಆಗಿತ್ತು. ನಟಿಯ ಫಸ್ಟ್ ಲುಕ್ ಅನ್ನು ಸಮಂತಾ ರಿವೀಲ್ ಮಾಡಿದ್ದರು. ಈ ಬೆನ್ನಲ್ಲೇ ಅನುಪಮಾ ಮತ್ತೊಂದು ಮಹಿಳಾ ಪ್ರಧಾನ ಚಿತ್ರ ಒಪ್ಪಿಕೊಂಡಿದ್ದಾರೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966